ಸಂಪುಟ: 04 ಸಂಚಿಕೆ: 131 ಪುಟಗಳು: 08 ಬುಧವಾರ 24 ಜುಲೈ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

**ಮುಂಜಾನೆ ಮಾತು**

ಅನುಭವವು ಜಗತ್ತಿನ ಸರ್ವಶ್ರೇಷ್ಠ ಶಿಕ್ಷಕ, ಉಸಿರಾಡುವವರೆಗೂ ಕಲಿಕೆ, ಜ್ಞಾನಾರ್ಜನೆಯೇ ಜೀವನದ ಗುರಿಯಾಗಿರಲಿ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಪರಿಷತ್ತಿನ ವಿರೋಧ ಪಕ್ಷದ ನಾಯಕರಾಗಿ ಛಲವಾದಿ ಆಯ್ಕೆ

• **ಉದಯವಾಹಿನಿ, ಬೆಂಗಳೂರು**

ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರಾಗಿ ಛಲವಾದಿ ನಾರಾಯಣಸ್ವಾಮಿ ಆಯ್ಕೆ ಆಗಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಛಲವಾದಿ ನಾರಾಯಣಸ್ವಾಮಿ ಅವರನ್ನು ಅಭಿನಂದಿಸಿದ್ದಾರೆ. ಪರಿಶಿಷ್ಟ ಸಮುದಾಯಗಳ ಹಾಗೂ ಸಾಂವಿಧಾನಿಕ ಹಕ್ಕುಗಳ ಪರ ನಿರಂತರ ದನಿಯಾಗಿ ನಿಂತು ಹೋರಾಟ ನಡೆಸಿಕೊಂಡು ಬಂದ ಹಿನ್ನಲೆಯ ಛಲವಾದಿ ನಾರಾಯಣ ಸ್ವಾಮಿಯವರ ನಾಯಕತ್ವ ಹಾಗೂ ಪಕ್ಷ ಬದ್ಧತೆಯನ್ನು ಗುರುತಿಸಿ ವಿಧಾನ ಪರಿಷತ್ ಪ್ರವೇಶಕ್ಕೆ ಅವಕಾಶ ಕಲ್ಪಿಸಿಕೊಟ್ಟಿದ್ದ ಬಿಜೆಪಿ ವರಿಷ್ಠರು ಇದೀಗ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡುವ ಮೂಲಕ 'ಸಾಮಾಜಿಕ ನ್ಯಾಯ' ನಮ್ಮ ಪಕ್ಷದ ಆದ್ಯತೆ ಎಂಬ ಸಂದೇಶ ರವಾನಿಸಿದ್ದಾರೆ.

## ವೋಟ್ ಬ್ಯಾಂಕ್ ಬಜೆಟ್ ಅಲ್ಲ, ವಿಕಸಿತ ಭಾರತದ ಬಜೆಟ್

• **ಉದಯವಾಹಿನಿ, ನವದೆಹಲಿ**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರಾಜಕೀಯ ಬಜೆಟ್ ಮಂಡಿಸದೆ, ರಾಷ್ಟ್ರೀಯ ಬಜೆಟ್ ಮಂಡಿಸಿದೆ. ವೋಟ್ ಬ್ಯಾಂಕ್ ಬಜೆಟ್ ಮಂಡಿಸದೆ ವಿಕಸಿತ ಭಾರತದ ಬಜೆಟ್ ನೀಡಿದೆ ಎಂದು ಸಂಸದ ಡಾ.ಕೆ.ಸುಧಾಕರ್ ಹೇಳಿದ್ದಾರೆ. ಆರ್ಥಿಕ ಅಭಿವೃದ್ಧಿ ಮತ್ತು ಜನಕಲ್ಯಾಣದ ಸಮತೋಲನ ಸಾಧಿಸಿರುವ ಕೇಂದ್ರ ಬಜೆಟ್, ತನ್ನ ಆಡಳಿತದ ರಾಜ್ಯಗಳನ್ನ ಆರ್ಥಿಕವಾಗಿ ದಿವಾಳಿ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಗಳಿಗೆ ಒಂದು ಒಳ್ಳೆಯ ಪಾಠವಾಗಿದೆ. ಕೇಂದ್ರ ಸರ್ಕಾರದ 2024 ನೇ ಸಾಲಿನ ಬಜೆಟ್ ಕುರಿತು ಪ್ರತಿಕ್ರಿಯಿಸಿದ ಅವರು, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಅಭಿವೃದ್ಧಿ ಗುರಿಯ ಹಾಗೂ ತೆರಿಗೆ ಹೊರೆ ಇಲ್ಲದ, ಸಮತೋಲಿತ ಬಜೆಟ್ ನೀಡಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿಗೆ ಕಡಿಮೆ ಸ್ಥಾನಗಳು ಬಂದಿದ್ದರಿಂದ ಬಜೆಟ್‌ನಲ್ಲೂ ತಾರತಮ್ಯ ಮಾಡಬಹುದು ಎಂಬ ವಿರೋಧ ಪಕ್ಷಗಳ ಸುಳ್ಳಿನ ಊಹೆಗಳಿಗೆ ಈ ಬಜೆಟ್ ತಣ್ಣೀರು ಎರಚಿದೆ. ಈ ಬಜೆಟ್ ಯುವಜನರು, ಮಹಿಳೆಯರು, ರೈತರು ಸೇರಿದಂತೆ ಎಲ್ಲಾ ವರ್ಗದ ಆಶೋತ್ತರಗಳಿಗೆ ಸ್ಪಂದಿಸಿದೆ.

ಇದು ಚುನಾವಣಾ ದೃಷ್ಟಿಯ ಬಜೆಟ್ ಆಗಿರದೆ ದೂರದೃಷ್ಟಿಯಿಂದ ದೇಶದ ಭವಿಷ್ಯವನ್ನು ಊಹಿಸಿ ಮಾಡಿದ ಬಜೆಟ್ ಎಂದು ಅವರು ಹೇಳಿದ್ದಾರೆ.

## ಮಹಿಳೆಯರಿಗೆ ಅತಿಹೆಚ್ಚು ಅನುಕೂಲ ಮಾಡಿಕೊಡುವ ನಾರಿಶಕ್ತಿ ಬಜೆಟ್

• **ಉದಯವಾಹಿನಿ, ಬೆಂಗಳೂರು**

2024-25ರ ಕೇಂದ್ರ ಬಜೆಟ್ ಮಂಡನೆಯಾಗಿದ್ದು, ಇದು ಪ್ರಧಾನಿ ನರೇಂದ್ರ ಮೋದಿ ಅವರ ಕನಸಿನ 'ವಿಕಸಿತ ಭಾರತ' ನಿರ್ಮಾಣಕ್ಕೆ ಶಕ್ತಿ ತುಂಬುವ, ಮಹಿಳೆಯರಿಗೆ ಅತಿಹೆಚ್ಚು ಅನುಕೂಲ ಮಾಡಿಕೊಡುವ ನಾರಿಶಕ್ತಿ ಬಜೆಟ್ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ. ಟ್ವೀಟ್ ಮಾಡಿ, 9 ಆದ್ಯತಾ ವಲಯಗಳನ್ನು ಗುರುತಿಸಲಾಗಿದೆ. ಆ ಪೈಕಿ ಶಿಕ್ಷಣ, ಉದ್ಯೋಗ ಮತ್ತು ಕೌಶಲ್ಯಕ್ಕೆ 1.48 ಲಕ್ಷ ಕೋಟಿ ಅನುದಾನ ನೀಡಿ 4 ಕೋಟಿ ಉದ್ಯೋಗ ಸೃಷ್ಟಿಸುವ ಗುರಿ ಮಾನವ ಸಂಪನ್ಮೂಲ ಸದ್ಬಳಕೆಗೆ ಆದ್ಯತೆ ಕೊಡಲಾಗಿದೆ. ಉದ್ಯೋಗ ಸೃಷ್ಟಿಯಲ್ಲಿ ನಿರ್ಣಾಯಕ ಪಾತ್ರ ವಹಿಸುವ ಸಣ್ಣ, ಮಧ್ಯಮ ಗಾತ್ರದ ಕೈಗಾರಿಗಳಿಗೆ ಆರ್ಥಿಕವಾಗಿ ಶಕ್ತಿ ತುಂಬುವ ಉಪಕ್ರಮ ಈ ಬಜೆಟ್ ನಲ್ಲಿದೆ ಎಂದಿದ್ದಾರೆ. ಇದು ದೂರದೃಷ್ಟಿಯುಳ್ಳ ದೂರಗಾಮಿ ಬಜೆಟ್ ಆಗಿದ್ದು, ಕೃಷಿ, ಕೈಗಾರಿಕೆ, ಮೂಲಸೌಕರ್ಯ, ಉದ್ಯೋಗ ಸೃಷ್ಟಿಗೆ ಒತ್ತು ನೀಡಲಾಗಿದೆ.

## ಬಿಹಾರ-ಆಂಧ್ರಕ್ಕೆ ಖುಷಿ- ಕರ್ನಾಟಕಕ್ಕೆ ನೆರವಿನ ನಿರೀಕ್ಷೆ ಹುಸಿ- ಡಿಕೆಶಿ

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಬಜೆಟ್-2024-25ನೇ ಸಾಲಿನ ಆಯವ್ಯಯ ಮಂಡನೆ ಆಗಿದ್ದು, ಪರ-ವಿರೋಧ ಚರ್ಚೆಗಳು ಶುರುವಾಗಿವೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ 3.0 ಸರ್ಕಾರದ ಮೊದಲ ಬಜೆಟ್ ಅನ್ನು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಸಂಸತ್ ನಲ್ಲಿ ಮಂಡಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬಜೆಟ್ ನಲ್ಲಿ ಬಿಹಾರ, ಆಂಧ್ರ ಪ್ರದೇಶಕ್ಕೆ ಮಾತ್ರ ಗಮನಹರಿಸಲಾಗಿದೆ ಎಂದು ಟೀಕಿಸಿದ್ದಾರೆ. ಇನ್ನು ಮುಂಗಡ ಪತ್ರದಲ್ಲಿ ಕರ್ನಾಟಕವನ್ನು ನಿರ್ಲಕ್ಷಿಸಲಾಗಿದೆ ಎಂದು ಕೇಂದ್ರದ ವಿರುದ್ಧ ಹರಿಹಾಯ್ದಿದ್ದಾರೆ. ಈ ಬಜೆಟ್ ನಲ್ಲಿ ಕರ್ನಾಟಕಕ್ಕೆ ನೆರವಿನ ನಿರೀಕ್ಷೆಯನ್ನು ನಾನು ಮಾಡಿದ್ದೆ. ಆದರೆ, ಕರ್ನಾಟಕದ ವಿಚಾರವಾಗಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಗಮನಹರಿಸಿಲ್ಲ. ಕಾಂಗ್ರೆಸ್ ಆಡಳಿತ ಇರುವ ರಾಜ್ಯಗಳನ್ನು ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ ಎಂದು ಡಿಕೆಶಿ ದೂರಿದ್ದಾರೆ.




**ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಹಿಂದೆಂದಿಗಿಂತಲೂ ಮಲತಾಯಿ ಧೋರಣೆ ಅನುಸರಿಸಲಾಗಿದ್ದು , ಈ ಬಾರಿ ಹೊಸದಾಗಿ ಒಂದೇ ಒಂದು ಯೋಜನೆಗಳನ್ನು ರಾಜ್ಯಕ್ಕೆ ನೀಡಿಲ್ಲ. ಕೇವಲ ಬೆಂಗಳೂರು-ಹೈದರಾಬಾದ್ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಿರುವುದನ್ನು ಹೊರತುಪಡಿಸಿದರೆ ರಾಜ್ಯಕ್ಕೆ ನೆನೆಗುದಿಗೆ ಬಿದ್ದಿರುವ ಯಾವುದೇ ಯೋಜನೆಗಳನ್ನು ಪ್ರಸ್ತಾಪಿಸಿಲ್ಲ. ಈ ಬಾರಿಯ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಹೆಚ್ಚಿನ ಯೋಜನೆಗಳನ್ನು ಪ್ರಧಾನಿ ಮೋದಿ ಸರ್ಕಾರ ನೀಡಲಿದೆ ಎಂದು ನಿರೀಕ್ಷೆ ಮಾಡಲಾಗಿತ್ತು.**

# ಬಜೆಟ್ ಹಿತಾಯ ಜನ ಸುಖಾಯ

**• ಬೊಂಬಾಟ್ ಬಜೆಟ್ • ಏಳನೇ ಸಲ ಬಜೆಟ್ ಮಂಡನೆ • ಹೊಸ ದಾಖಲೆ ಸೃಷ್ಟಿಸಿದ ಸೀತಾರಾಮನ್ • ಬಜೆಟ್‌ನಲ್ಲಿ ಮಿತ್ರಕೂಟಕ್ಕೆ ಜಾಕ್‌ಪಾಟ್ • ಆಂಧ್ರ-ಬಿಹಾರಕ್ಕೆ ಭರಪೂರ ಕೊಡುಗೆ • ಅಭಿವೃದ್ಧಿ ಭಾರತದ ಬಜೆಟ್ 7ನೇ ಬಜೆಟ್ ಮಂಡಿಸಿದ ನಿರ್ಮಲಾ • ಸಿಡಿದೆದ್ದ ಕನ್ನಡಿಗರು, ಆಂಧ್ರ, ಬಿಹಾರಕ್ಕೆ ಮಣೆ ಏಕೆ..?**

• **ಉದಯವಾಹಿನಿ, ನವದೆಹಲಿ**

ಶಿವಮೊಗ್ಗ ಜಿಲ್ಲೆಯ ಭದ್ರಾವತಿಯಲ್ಲಿರುವ ವಿಐಎಸ್‌ಐಎಲ್ ಕಾರ್ಖಾನೆ ಪುನರಾರಂಭಕ್ಕೆ ವಿಶೇಷ ಪ್ಯಾಕೇಜ್, ಭದ್ರ ಮೇಲ್ದಂಡೆ ಯೋಜನೆ ಅನುಷ್ಠಾನ, ಮೇಕೆದಾಟು, ಕಳಸಾ ಬಂಡೂರಿ, ರೈಲ್ವೆ, ನೀರಾವರಿ ಸೇರಿ ಹಲವಾರು ಯೋಜನೆಗಳಿಗೆ ಕೇಂದ್ರ ಸರ್ಕಾರ ಆರ್ಥಿಕ ನೆರವು ನೀಡಲಿದೆ ಎಂಬ ನಿರೀಕ್ಷೆ ಹುಸಿಯಾಗಿದೆ.

ಭಾರತದ ಇತಿಹಾಸದಲ್ಲೇ ಮೊದಲ ಬಾರಿಗೆ ಸತತ ಏಳನೆ ಬಾರಿಗೆ ಮಹಿಳೆ ಒಬ್ಬರು ಬಜೆಟ್ ಮಂಡಿಸಿರುವುದು ದಾಖಲೆ. 2019 ರಿಂದ ಸತತವಾಗಿ ಏಳನೆ ಬಾರಿಗೆ ಭವಿಷ್ಯ ಭಾರತದ ಮುಂಗಡ ಪತ್ರವನ್ನು ಮಂಡಿಸುವ ಮೂಲಕ ನಿರ್ಮಲಾ ಸೀತಾರಾಮನ್ ಅವರು ಹೊಸ ದಾಖಲೆ ಸೃಷ್ಟಿಸಿದ್ದಾರೆ.ಅತಿ ಹೆಚ್ಚು ಬಜೆಟ್ ಮಂಡನೆ ಮಾಡಿದ ಸಾಧನೆ ಪಿ.ಚಿದಂಬರಂ ಅವರ ಹೆಸರಿನಲ್ಲಿದ್ದು, ಅವರ ನಂತರ ಪ್ರಣಬ್ ಮುಖರ್ಜಿ ಮತ್ತು ಮೊರಾರ್ಜಿ ದೇಸಾಯಿ ಅವರಿದ್ದರು. ಈಗ ನಿರ್ಮಲಾ ಸೀತಾರಾಮನ್ ಅವರು ಏಳನೆ ಬಾರಿ ಬಜೆಟ್ ಮಂಡನೆ ಮಾಡುವ ಮೂಲಕ ಮೂರನೆ ಸ್ಥಾನಕ್ಕೆ ಏರಿದಂತಾಗಿದೆ.

ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಈ ಸಾಲಿನ ಬಜೆಟ್‌ನಲ್ಲಿ ಪ್ರಗತಿಯ ಮಂತ್ರವನ್ನು ಜಪಿಸಲಾಗಿದ್ದು, ಬಡವರು, ಮಹಿಳೆಯರು, ಯುವಕರು ಹಾಗೂ ನಾಡಿನ ಅನ್ನದಾತನ ಸಬಲೀಕರಣದ ಜತೆಗೆ ವಿಕಸಿತ ಭಾರತಕ್ಕೆ ಬಜೆಟ್‌ನಲ್ಲಿ ಒತ್ತು ನೀಡಲಾಗಿದೆ. ಈ ಬಜೆಟ್‌ನಲ್ಲಿ ತೆರಿಗೆ ವ್ಯವಸ್ಥೆ ಮತ್ತಷ್ಟು ಸರಳೀಕರಣ ಮಾಡಲಾಗಿದ್ದು, ಸಂಬಳದಾರರು, ತೆರಿಗೆ ಪಾವತಿದಾರರಿಗೆ ಬಜೆಟ್ ಸಿಹಿಯಾಗಿದೆ. ಹಾಗೆಯೇ ಚಿನ್ನ-ಬೆಳ್ಳಿ ಹಾಗೂ ಪ್ಲಾಟಿನಂ ಆಮದು ಶುಲ್ಕ ಇಳಿಕೆಯಿಂದ ಚಿನ್ನಾಭರಣ ಪ್ರಿಯರಿಗೂ ಬಜೆಟ್ ಖುಷಿ ತಂದಿದೆ.ಈ ಬಜೆಟ್‌ನಲ್ಲಿ ತೆರಿಗೆ ಸರಳೀಕರಣ ಮಾಡಲಾಗಿದ್ದು, 3 ಲಕ್ಷ ಆದಾಯಕ್ಕೆ ಯಾವುದೇ ತೆರಿಗೆ ಪಾವತಿಸುವಂತಿಲ್ಲ. ಹೂಡಿಕೆದಾರರಿಗೆ ಇದ್ದ ಏಂಜೆಲ್ ತೆರಿಗೆಯನ್ನು ರದ್ದು ಮಾಡಲಾಗಿದೆ. ಚಿನ್ನ ಮತ್ತು ಬೆಳ್ಳಿ ಮೇಲಿನ ಆಮದು ಶುಲ್ಕವನ್ನು ಇಳಿಕೆ ಮಾಡಲಾಗಿದ್ದು, ಚಿನ್ನ-ಬೆಳ್ಳಿ ಇಳಿಕೆಯಾಗಲಿದೆ. ಹಾಗೆಯೇ ಮೊಬೈಲ್ ಫೋನ್ ಚಾರ್ಜರ್ ಮೇಲಿನ ತೆರಿಗೆ ಇಳಿಕೆಯಿಂದ ಇವುಗಳು ಅಗ್ಗವಾಗಲಿದೆ. ಪ್ಲಾಸ್ಟಿಕ್ ಮೇಲಿನ ಆಮದು ಶುಲ್ಕ ಹೆಚ್ಚಲದಿಂದ ಪ್ಲಾಸ್ಟಿಕ್ ವಸ್ತುಗಳು ತುಟ್ಟಿಯಾಗಲಿವೆ. ತಾಮ್ರದ ಮೇಲೂ ತೆರಿಗೆ ಕಡಿತ ಮಾಡಲಾಗಿದೆ. ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮೂರನೇ ಬಾರಿಗೆ ದೇಶದ ಅಧಿಕಾರದ ಚುಕ್ಕಾಣಿ ಹಿಡಿದ ನಂತರ ಮೋದಿ ಸರ್ಕಾರದ ಮೂರನೇ ಅವಧಿಯ ಮೊದಲ ಬಜೆಟ್‌ನ್ನು ಇಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಮಂಡಿಸಿದ್ದು, ಈ ಬಜೆಟ್‌ನಲ್ಲಿ ದೇಶದ ಸರ್ವಾಂಗೀಣ ಅಭಿವೃದ್ಧಿಯ ಮಂತ್ರವನ್ನು ಜಪಿಸಲಾಗಿದೆ. ವಿಕಸಿತ ಭಾರತದ ಗುರಿಯನ್ನು ಸಾಧಿಸಲು ಪೂರಕವಾದ ಅಂಶಗಳಿಗೆ ಒತ್ತು ನೀಡಲಾಗಿದೆ.

ಈ ಸಾಲಿನ ಬಜೆಟ್‌ನಲ್ಲಿ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, 4 ಕೋಟಿ ಯುವಕರಿಗೆ ಮುಂದಿನ ಐದು ವರ್ಷಗಳಲ್ಲಿ ಉದ್ಯೋಗ ಒದಗಿಸುವ ಭರವಸೆಯನ್ನು ನೀಡಲಾಗಿದೆ.ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು 9 ಅಂಶಗಳಿಗೆ ಬಜೆಟ್‌ನಲ್ಲಿ ಹೆಚ್ಚಿನ ಆದ್ಯತೆ ನೀಡಿದ್ದು, ಕೃಷಿ ಉತ್ಪಾದನೆ ಹೆಚ್ಚಳ, ಉದ್ಯೋಗ ಸೃಷ್ಟಿ, ಮಾನವ ಸಂಪನ್ಮೂಲಗಳ ಅಭಿವೃದ್ಧಿ, ಉತ್ಪಾದನಾ ಕ್ಷೇತ್ರದ ಅಭಿವೃದ್ಧಿ, ಸಾಮಾಜಿಕ ನ್ಯಾಯ, ನಗರಾಭಿವೃದ್ಧಿ, ಇಂಧನ ಭದ್ರತೆ, ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಸುಧಾರಣೆ ಆವಿಷ್ಕಾರ ಸಂಶೋಧನೆ ಅಭಿವೃದ್ಧಿ, ಮುಂದಿನ ಪೀಳಿಗೆಗೆ ಆದ್ಯತೆ, ಎಂಎಸ್‌ಎಂಇಗಳಿಗೆ ಒತ್ತು ಸೇರಿ 9 ವಲಯಗಳ ಅಭಿವೃದ್ಧಿಗೆ ಬಜೆಟ್‌ನಲ್ಲಿ ಯೋಜನೆಗಳನ್ನು ಪ್ರಕಟಿಸಿದ್ದಾರೆ.

ನಾಡಿನ ಬೆನ್ನೆಲುಬಾದ ಅನ್ನದಾತನ ನೆರವಿಗಾಗಿ ಬಜೆಟ್‌ನಲ್ಲಿ ಹಲವು ಕಲ್ಯಾಣ ಯೋಜನೆ ಜಾರಿಯ ಭರವಸೆ ನೀಡಲಾಗಿದ್ದು, ಕೃಷಿ ಕ್ಷೇತ್ರಕ್ಕೆ 1.52 ಲಕ್ಷ ಕೋಟಿ ರೂ.ಗಳನ್ನು ಮೀಸಲಿರಿಸಿ ಕೃಷಿಯ ಸರ್ವಾಂಗೀಣ ಅಭಿವೃದ್ಧಿಯ ಬದ್ಧತೆಯನ್ನು ಬಜೆಟ್‌ನಲ್ಲಿ ವ್ಯಕ್ತಪಡಿಸಲಾಗಿದೆ. ಈ ಬಜೆಟ್‌ನಲ್ಲಿ ಯುವಜನರ ಸಬಲೀಕರಣಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗಿದೆ. ಮುಂದಿನ ಐದು ವರ್ಷಗಳಲ್ಲಿ 4 ಕೋಟಿ ಯುವಕರಿಗೆ ಉದ್ಯೋಗ ಕಲ್ಪಿಸುವ ಭರವಸೆ ಬಜೆಟ್‌ನಲ್ಲಿ ನೀಡಲಾಗಿದೆ. ಉದ್ಯೋಗ ಸೃಷ್ಟಿಗಾಗಿ ಮೂರು ಕೌಶಲ್ಯ ಯೋಜನೆಗಳನ್ನು ಪ್ರಕಟಿಸಲಾಗಿದ್ದು, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೂ ಬಜೆಟ್‌ನಲ್ಲಿ ಹೆಚ್ಚಿನ ಆದ್ಯತೆಯನ್ನು ವಿತ್ತ ಸಚಿವರು ನೀಡಿದ್ದಾರೆ. ವಸತಿ ಕ್ಷೇತ್ರಕ್ಕೂ ಬಜೆಟ್‌ನಲ್ಲಿ ಒತ್ತು ನೀಡಲಾಗಿದ್ದು, ಮುಂದಿನ ಐದು ವರ್ಷಗಳಲ್ಲಿ ಪ್ರಧಾನ ಮಂತ್ರಿ ಅವಾಜ್ ಯೋಜನೆಯಡಿ 3 ಕೋಟಿ ಮನೆ ನಿರ್ಮಾಣದ ಪ್ರಸ್ತಾವ ಬಜೆಟ್‌ನಲ್ಲಿ ಮಾಡಲಾಗಿದೆ. ಕಳೆದ ಮಧ್ಯಂತರ ಬಜೆಟ್‌ನಲ್ಲಿ ಪ್ರಸ್ತಾಪಿಸಿದ್ದು, ಪ್ರಧಾನಮಂತ್ರಿ ಅನ್ನ ಯೋಜನೆಯನ್ನು ಐದು ವರ್ಷಗಳ ಕಾಲ ವಿಸ್ತರಿಸಲಾಗಿದ್ದು, ಇದರಿಂದ ದೇಶದ 83 ಕೋಟಿ ಬಡವರು ಉಚಿತ ಪಡಿತರ ಪಡೆಯಲಿದ್ದಾರೆ. ಉದ್ಯೋಗ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಮೂರು ವಿಶೇಷ ಯೋಜನೆ ಪ್ರಕಟಿಸಲಾಗಿದೆ. ಮಹಿಳೆಯರಿಗೆ ಉದ್ಯೋಗಾವಕಾಶ ಹೆಚ್ಚಿಸಲು ಮಹಿಳಾ ಉದ್ಯೋಗಿಗಳಿಗೆ ವಿಶೇಷ ವಸತಿ ನಿಲಯಗಳನ್ನು ಸ್ಥಾಪಿಸುವ ಘೋಷಣೆ ಬಜೆಟ್‌ನಲ್ಲಿ ಮಾಡಲಾಗಿದೆ.

**1** ಕರ್ನಾಟಕಕ್ಕೆ ಬಜೆಟ್‌ನಲ್ಲಿ ಏನೂ ಸಿಕ್ಕಿಲ್ಲ? ಪ್ರಸ್ತಾಪವೂ ಇಲ್ಲ..?

**2** ಬಿಹಾರ, ಆಂಧ್ರದ ಬಗ್ಗೆ ಮಾತ್ರ ಹಲವು ಬಾರಿ ಪ್ರಸ್ತಾಪ..!

**3** ನಿತೀಶ್, ನಾಯ್ಡುಗೆ ಗಿಫ್ಟ್ ಕೊಟ್ಟ ಮೋದಿ ಎಂದು ನೆಟ್ಟಿಗರ ವಿಶ್ಲೇಷಣೆ



### ಒಕ್ಕೂಟ ವ್ಯವಸ್ಥೆಗೆ ಒತ್ತು

ಕೇಂದ್ರ, ರಾಜ್ಯ ಸರ್ಕಾರದೊಂದಿಗೆ ಕೈಗಾರಿಕೆಗಳ ಅಭಿವೃದ್ಧಿಗೆ ಒತ್ತು ನೀಡುವ ಉದ್ದೇಶ ಹಾಗೂ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸುವ ಘೋಷಣೆಯನ್ನು ಬಜೆಟ್‌ನಲ್ಲಿ ಮಾಡಲಾಗಿದ್ದು, ರಾಜ್ಯಗಳಿಗೆ 50 ವರ್ಷಗಳ ಕಾಲ ಬಡ್ಡಿ ರಹಿತ ಸಾಲ ನೀಡುವ ಯೋಜನೆಯನ್ನು ಪ್ರಕಟಿಸಿದ್ದಾರೆ. ನಗರಾಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿರುವ ಬಜೆಟ್‌ನಲ್ಲಿ ಭೂ ದಾಖಲೆಗಳ ಡಿಜಟಲೀಕರಣ ಘೋಷಣೆ ಮಾಡಲಾಗಿದೆ. ಗ್ರಾಮೀಣಾಭಿವೃದ್ಧಿಗೂ ಬಜೆಟ್‌ನಲ್ಲಿ ಹೆಚ್ಚಿನ ಒತ್ತು ನೀಡಲಾಗಿದ್ದು, ರೈತರ ಸಾಲ ಸೌಲಭ್ಯಕ್ಕೂ ಆದ್ಯತೆ ನೀಡಲಾಗಿದೆ.

### ಮೂಲ ಸೌಕರ್ಯಕ್ಕೆ ಒತ್ತು

ಮೂಲಭೂತ ಸೌಕರ್ಯಗಳಿಗೆ ಬಜೆಟ್‌ನಲ್ಲಿ ಹೆಚ್ಚಿನ ಒತ್ತು ನೀಡಲಾಗದ್ದು, ಹೈದರಾಬಾದ್-ಬೆಂಗಳೂರು ಇಂಡಸ್ಟ್ರೀಯಲ್ ಕಾರಿಡಾರ್ ನಿರ್ಮಾಣದ ಘೋಷಣೆ ಮಾಡಲಾಗಿದ್ದು, ವಿಶಾಖಪಟ್ಟಣ-ಚೆನ್ನೈ ಕಾರಿಡಾರ್ ನಿರ್ಮಾಣವನ್ನು ಬಜೆಟ್‌ನಲ್ಲಿ ಪ್ರಸ್ತಾಪಿಸಿದ್ದಾರೆ. ದೇಶಾದ್ಯಂತ 26 ಸಾವಿರ ಕೋಟಿ ವೆಚ್ಚದ ಹೊಸ ರೈಲ್ವೆ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಘೋಷಣೆ ಮಾಡಿರುವ ನಿರ್ಮಾಲ ಸೀತಾರಾಮನ್ ಅವರು ರೈಲ್ವೆ ಆಧುನೀಕಣಕ್ಕೂ ಒತ್ತು ನೀಡಲಾಗಿದೆ ಎಂದು ಬಜೆಟ್‌ನಲ್ಲಿ ಹೇಳಿದ್ದಾರೆ. ಸತತ ಮೂರನೇ ಬಾರಿಗೆ ಪ್ರಧಾನಿಯಾಗುವ ಮೂಲಕ ಮೋದಿ ಅವರು ಇತಿಹಾಸ ಸೃಷ್ಟಿಸಿದ್ದಾರೆ. ಮೋದಿ ಅವರ ಅಭಿವೃದ್ಧಿ ಕಾರ್ಯಕ್ರಮಗಳಿಂದ ಇದೆಲ್ಲಾ ಸಾಧ್ಯವಾಗಿದೆ ಎಂದು ಅವರು ಬಜೆಟ್ ನಲ್ಲಿ ಹೇಳಿದ್ದಾರೆ.



**ದೇಶದ ಸರ್ವಾಂಗೀಣ ಏಳಿಗೆಗೆ ಈ ಬಜೆಟ್ ಏಣಿಯಾಗಿದ್ದು, ದೇಶದ ಎಲ್ಲಾ ವರ್ಗದವರನ್ನು ದೃಷ್ಟಿಯಲ್ಲಿಟ್ಟುಕೊಂಡು ಬಜೆಟ್ ಮಂಡಿಸಲಾಗಿದೆ. ಯುವಕರಿಗೆ ಉದ್ಯೋಗ, ಬಡವರಿಗೆ ಮನೆ ನಿರ್ಮಾಣ, ಸಣ್ಣ ಉದ್ಯಮಗಳು, ಶಿಕ್ಷಣ ಸೇರಿ ಎಲ್ಲಾ ಕ್ಷೇತ್ರಗಳ ಏಳಿಗೆಯನ್ನು ಗಮನದಲ್ಲಿಟ್ಟುಕೊಂಡು ಮಂಡಿಸಲಾಗಿದೆ.**

**-ನರೇಂದ್ರ ಮೋದಿ ಪ್ರಧಾನಿ**



**''ಕೇಂದ್ರದ ಬಜೆಟ್‌ನಿಂದ ಕರ್ನಾಟಕಕ್ಕೆ ಯಾವುದೇ ರೀತಿಯಿಂದ ಅನುಕೂಲವಾಗಿಲ್ಲ. ಕೈಗಾರಿಕೆ, ರೈಲ್ವೆ ಸೇರಿ ಯಾವುದೇ ಕ್ಷೇತ್ರಗಳಿಗೂ ಹೆಚ್ಚಿನ ಅನುದಾನ ಕೊಟ್ಟಿಲ್ಲ. ರಾಯಚೂರಿನಲ್ಲಿ ಒಂದು ಏಮ್ಸ್ ನಿರ್ಮಿಸಿ ಎಂದು ಬಹಳ ವರ್ಷಗಳಿಂದ ಕೇಳುತ್ತಿದ್ದೇವೆ. ಆದರೆ, ಬಜೆಟ್‌ನಲ್ಲಿ ಕರ್ನಾಟಕಕ್ಕೆ ಏನೂ ಕೊಟ್ಟಿಲ್ಲ. ಒಟ್ಟಿನಲ್ಲಿ ಈ ಬಜೆಟ್ ನಿರಾಶಾದಾಯಕ, ನೀರಸವಾಗಿದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ರೈತರಿಗೆ ಭಾರಿ ಅನ್ಯಾಯವಾಗಿದೆ. ಅವರಿಗೆ ಕೇಂದ್ರ ಸರ್ಕಾರ ಪಂಗನಾಮ ಹಾಕಿದೆ.**

**-ಸಿದ್ದರಾಮಯ್ಯ ಮುಖ್ಯಮಂತ್ರಿ**

### 12 ಹೊಸ ಕೈಗಾರಿಕಾ ಪಾರ್ಕ್

**ದೇಶದಲ್ಲಿ ಕೈಗಾರಿಕೆಗಳ ಅಭಿವೃದ್ಧಿಗೆ ವಿವಿಧೆಡೆ 12 ಹೊಸ ಕೈಗಾರಿಕಾ ಪಾರ್ಕ್‌ಗಳ ಸ್ಥಾಪನೆಯ ಘೋಷಣೆಯನ್ನು ಬಜೆಟ್‌ನಲ್ಲಿ ಮಾಡಲಾಗಿದೆ. ಆಯ್ದ ನಗರಗಳಲ್ಲಿ 100 ಫುಡ್‌ಸ್ಟ್ರೀಟ್ ನಿರ್ಮಾಣದ ಘೋಷಣೆ ಹಾಗೆಯೇ ಸಿಎಂ ಸೂರ್ಯಘರ್ ಯೋಜನೆಯಡಿ 300 ಯುನಿಟ್‌ಗಳ ವಿದ್ಯುತ್ ಉಚಿತ ಬಳಕೆಯ ಘೋಷಣೆಯನ್ನು ಮಾಡಲಾಗಿದೆ. ಎಂಎಸ್‌ಎಂಇಗಳಿಗೆ ಕ್ರೆಡಿಟ್ ಗ್ಯಾರಂಟಿ ಯೋಜನೆ ವಿಸ್ತರಣೆ, 100 ಕೋಟಿಯವರೆಗೂ ಸಾಲ ಸೌಲಭ್ಯ ಒದಗಿಸುವ ಘೋಷಣೆ ಬಜೆಟ್‌ನಲ್ಲಿ ಮಾಡಿದ್ದಾರೆ. ಗ್ರಾಮೀಣಾಭಿವೃದ್ಧಿಗೆ 2.66 ಲಕ್ಷ ಕೋಟಿ ರೂ.ಗಳನ್ನು ಮೀಸಲಿರಿಸಿರುವ ಘೋಷಣೆ ಮಾಡಿರುವ ವಿತ್ತ ಸಚಿವರು, ಮುದ್ರಾಲೋನ್ ಮಿತಿಯನ್ನು 10ರಿಂದ 20 ಲಕ್ಷ ರೂ.ಗಳವರೆಗೆ ಹೆಚ್ಚಳ ಮಾಡುವುದಾಗಿಯೂ ಪ್ರಕಟಿಸಿದ್ದಾರೆ.**

# ರಾಜ್ಯಕ್ಕೆ 'ಚೊಂಬು' ನೀಡಿದ ನಿರ್ಮಲಾ ಸೀತಾರಾಮನ್

## ರಾಜ್ಯದ ಯಾವುದೇ ಬೇಡಿಕೆಗಳಿಗೂ ಮನ್ನಣೆ ನೀಡದೆ ಅತ್ಯಂತ ನಿರಾಶಾದಾಯಕ ಬಜೆಟ್

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಯಾವುದೇ ಬೇಡಿಕೆಗಳಿಗೂ ಮನ್ನಣೆ ನೀಡದೆ ಅತ್ಯಂತ ನಿರಾಶಾದಾಯಕ ಬಜೆಟ್ ಮಂಡಿಸಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.ಅವರು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಹಿತವನ್ನು ಸಂಪೂರ್ಣವಾಗಿ ನಿರ್ಲಕ್ಷಿಸುವ ಮೂಲಕ ರಾಜ್ಯದ ಜನತೆಯ ಕೈಗೆ ಚೊಂಬು ಕೊಟ್ಟಿದ್ದಾರೆ.

ಪ್ರಧಾನ ಮಂತ್ರಿಗಳು ತನ್ನ ಅಧಿಕಾರ ಉಳಿಸಿಕೊಳ್ಳುವ ಉದ್ದೇಶದಿಂದ ಆಂಧ್ರಪ್ರದೇಶ ಮತ್ತು ಬಿಹಾರ ರಾಜ್ಯಗಳಿಗೆ ವಿಶೇಷ ಅನುದಾನ ಒದಗಿಸಿದ್ದು, ಇತರ ರಾಜ್ಯಗಳನ್ನು ಕಡೆಗಣಿಸಿದ್ದಾರೆ ಎಂದರು. ಬಜೆಟ್ ಪೂರ್ವ ಸಭೆಯಲ್ಲಿ ರಾಜ್ಯ ಸರ್ಕಾರ ಹಲವಾರು ಮನವಿಗಳನ್ನು ಮುಂದಿರಿಸಿತ್ತು. ಆದರೆ ಯಾವುದೇ ಬೇಡಿಕೆಗಳಿಗೂ ಕೇಂದ್ರ ಹಣಕಾಸು ಸಚಿವರು ಸ್ಪಂದಿಸಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ರೂ. ಅನುದಾನ ಒದಗಿಸುವುದಾಗಿ ಹಿಂದಿನ ಬಜೆಟ್‌ನಲ್ಲಿ ನಿರ್ಮಲಾ ಸೀತಾರಾಮ್ ಅವರು ಘೋಷಿಸಿದ್ದರು. ಆದರೆ ಈ ಯೋಜನೆಗೆ ನಯಾ ಪೈಸೆ ಒದಗಿಸಿಲ್ಲ. ಈ ಆಯವ್ಯಯದಲ್ಲಿ ಒದಗಿಸುವಂತೆ ಕೋರಲಾಗಿತ್ತು. ಕಲ್ಯಾಣ ಕರ್ನಾಟಕ ಸಮಗ್ರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಈ ವರ್ಷ 5ಸಾವಿರ ಕೋಟಿ ರೂ. ಅನುದಾನ ಒದಗಿಸುತ್ತಿದೆ. ಆದರೆ ಇದಕ್ಕೆ ಪೂರಕವಾಗಿ ಹಿಂದುಳಿದ ತಾಲ್ಲೂಕುಗಳಿಗೆ ಅನುದಾನ ಒದಗಿಸುವಂತೆ ಮನವಿ ಮಾಡಲಾಗಿತ್ತು. ಇದೇ ರೀತಿ ಮಹಾದಾಯಿ ಯೋಜನೆ, ಮೇಕೆದಾಟು ಯೋಜನೆ, ಕೃಷ್ಣಾ ಮೇಲ್ದಂಡೆ ಯೋಜನೆಗಳ ಕುರಿತು ಬಜೆಟ್‌ನಲ್ಲಿ ಯಾವುದೇ ಪ್ರಸ್ತಾಪ ಮಾಡದೆ ರೈತರಿಗೆ ಮೋಸ ಮಾಡಿದ್ದಾರೆ.

15 ನೇ ಹಣಕಾಸು ಆಯೋಗದ ಶಿಫಾರಸಿನಂತೆ ಪೆರಿಫೆರಲ್ ರಸ್ತೆ ನಿರ್ಮಾಣ, ಕೆರೆಗಳ ಅಭಿವೃದ್ಧಿ, ಬೆಂಗಳೂರು ನಗರಾಭಿವೃದ್ಧಿ ಯೋಜನೆಗಳಿಗೆ ಒಟ್ಟು 11,485 ಕೋಟಿ ರೂ. ಅನುದಾನವನ್ನು ನೀಡುವಂತೆ ಕೋರಲಾಗಿತ್ತು. ಜೊತೆಗೆ ಹಲವಾರು ವರ್ಷಗಳಿಂದ ರಾಯಚೂರಿನಲ್ಲಿ ಏಮ್ಸ್ ಸ್ಥಾಪಿಸುವಂತೆ ಬೇಡಿಕೆಯಿದ್ದು, ಬಜೆಟ್ ಪೂರ್ವಭಾವಿ ಸಭೆಯಲ್ಲಿಯೂ ಈ ಕುರಿತು ಬೇಡಿಕೆ ಸಲ್ಲಿಸಲಾಗಿತ್ತು. ಈ ಯಾವ ಮನವಿಗಳಿಗೂ ಕೇಂದ್ರ ಸರ್ಕಾರ ಮನ್ನಣೆ ನೀಡಿಲ್ಲ. ಈ ಹಿಂದಿನ ಬಜೆಟ್‌ನಲ್ಲಿ ರಾಜ್ಯಕ್ಕೆ ಘೋಷಿಸಿದ್ದ ಯೋಜನೆಗಳಿಗೇ ಕೇಂದ್ರ ಸರ್ಕಾರ ಇನ್ನೂ ಯಾವುದೇ ಅನುದಾನ ಒದಗಿಸಿಲ್ಲ. ಹೀಗಾಗಿ ಈ ಬಾರಿ ಕೈಗಾರಿಕಾ ಕಾರಿಡಾರ್ ಬಗ್ಗೆ ಪ್ರಸ್ತಾಪಿಸಿರುವುದು ಕೇವಲ ಘೋಷಣೆಯಾಗಿ ಮಾತ್ರ ಉಳಿಯಲಿದೆ ಎಂದರು.

ಈ ಬಜೆಟ್ ವಿಶೇಷವಾಗಿ ಬಡವರು, ಪರಿಶಿಷ್ಟ ಜಾತಿ, ಪಂಗಡದವರನ್ನು ಸಂಪೂರ್ಣವಾಗಿ ನಿರ್ಲಕ್ಷಿಸಿದೆ. ಈ ಬಜೆಟ್ ನಲ್ಲಿ ರೈತರಿಗೆ ದೊಡ್ಡ ಅನ್ಯಾಯ ಮಾಡಿದ್ದಾರೆ. ರೈತರು 5 ವರ್ಷಗಳಿಂದ ಕನಿಷ್ಠ ಬೆಂಬಲ ಬೆಲೆ ಕಾಯ್ದೆ ರಚಿಸಬೇಕೆಂದು ಒತ್ತಾಯ ಮಾಡುತ್ತಿದ್ದಾರೆ. ಸ್ವಾಮಿನಾಥನ್ ಆಯೋಗದ ಶಿಫಾ ರಸ್ಸುಗಳ ಜಾರಿ ಬಗ್ಗೆಯೂ ಯಾವುದೇ ಮಾತು ಆಡದೆ ರೈತರಿಗೆ ಪಂಗನಾಮ ಹಾಕಿದೆ ಎಂದು ಹೇಳಿದರು.

**ಕೇಂದ್ರದ 16 ನೇ ಹಣಕಾಸು ಆಯೋಗವು ಆಗಸ್ಟ್ 28 ರಂದು ರಾಜ್ಯಕ್ಕೆ ಭೇಟಿ ನೀಡಲಿದ್ದು, ಈ ಸಂದರ್ಭದಲ್ಲಿ ಹಿಂದಿನ ಬಾರಿ ರಾಜ್ಯಕ್ಕೆ ಆಗಿರುವ ಅನ್ಯಾಯ ಸರಿಪಡಿಸುವಂತೆ ಮನವಿ ಮಾಡಲಾಗುವುದು. ಈ ಕುರಿತು ಸಮರ್ಥವಾಗಿ ವಿಷಯ ಮಂಡಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.**

**-ಸಿದ್ದರಾಮಯ್ಯ, ಸಿಎಂ**

**ಸಿಎಂ ಸಿದ್ದರಾಮಯ್ಯ ಆಕ್ರೋಶ**



### ಅಲ್ಪಸಂಖ್ಯಾತ ಅಭಿವೃದ್ಧಿಗೆ ಅನುದಾನದಲ್ಲೂ ಗಣನೀಯವಾಗಿ ಕಡಿತ

**ಕೇಂದ್ರ ಸಂಪುಟದಲ್ಲಿ ರಾಜ್ಯದ ಐದು ಜನ ಸಚಿವರಾಗಿದ್ದರೂ, ರಾಜ್ಯಕ್ಕೆ ಯಾವುದೇ ಪ್ರಯೋಜನವಾಗಿಲ್ಲ, ಈ ಐದೂ ಮಂದಿ ರಾಜ್ಯಕ್ಕೆ ಅನುಕೂಲ ಮಾಡಿಸುವಲ್ಲಿ ವಿಫಲರಾಗಿದ್ದಾರೆ.ಆರೋಗ್ಯ, ರಕ್ಷಣೆ, ಆರೋಗ್ಯ, ಐಟಿ ಮತ್ತು ಸಂವಹನ ಕ್ಷೇತ್ರಗಳಿಗೆ ಕಳೆದ ಫೆಬ್ರವರಿಯಲ್ಲಿ ಮಂಡಿಸಲಾಗಿದ್ದ ಮಧ್ಯಂತರ ಬಜೆಟ್‌ನಲ್ಲಿ ಘೋಷಿಸಿದ್ದ ಅನುದಾನವನ್ನು ಈಗ ಕಡಿತಗೊಳಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ಅಭಿವೃದ್ಧಿಗೆ ಅನುದಾನದಲ್ಲೂ ಗಣನೀಯವಾಗಿ ಕಡಿತಗೊಳಿಸಿರುವುದು ಈ ಸಮುದಾಯಗಳಿಗೆ ಎಸಗಿರುವ ದ್ರೋಹವಾಗಿದೆ ಎಂದರು.**

## ಕೇಂದ್ರದ ತಾಳಕ್ಕೆ ತನಿಖಾ ಸಂಸ್ಥೆಗಳು ಕುಣಿಯುತ್ತಿವೆ ಅನ್ನೋದಕ್ಕೆ ಇದೇ ಸಾಕ್ಷಿ

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ ಸರ್ಕಾರ ಮತ್ತು ಮುಖ್ಯಮಂತ್ರಿಗಳ ಕೈವಾಡ ಇದೆ ಎಂದು ಹೇಳಿ ನಿಮ್ಮನ್ನು ಬಿಟ್ಟುಬಿಡುತ್ತೇವೆ. ಇಲ್ಲದಿದ್ದರೆ ನಿಮ್ಮನ್ನು ಜೈಲಿಗೆ ಕಳಿಸುತ್ತೇವೆ. ಇದು ಇಡಿ ಅಧಿಕಾರಿಗಳು ವಾಲ್ಮೀಕಿ ನಿಗಮ ಹಗರಣದ ತನಿಖೆ ಎದುರಿಸುತ್ತಿರುವ ಅಧಿಕಾರಿಯ ಮೇಲೆ ಹೇರಿರುವ ಒತ್ತಡ ಎಂದು ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನೇರ ಆರೋಪ ಎಸಗಿದ್ದಾರೆ.

ತನಿಖಾ ಸಂಸ್ಥೆಗಳು ಕೇಂದ್ರದ ಬಿಜೆಪಿ ಸರ್ಕಾರದ ತಾಳಕ್ಕೆ ತಕ್ಕಂತೆ ಕುಣಿಯುತ್ತಿವೆ. ಬಿಜೆಪಿ ವಿರುದ್ಧ ಇರುವ ವಿರೋಧ ಪಕ್ಷಗಳ ನಾಯಕರು ಹಾಗೂ ರಾಜ್ಯ ಸರ್ಕಾರಗಳ ವಿರುದ್ಧ ಪಿತೂರಿ ನಡೆಸುತ್ತಿವೆ ಎಂಬುದಕ್ಕೆ ಇದು ಮತ್ತೊಂದು ಉದಾಹರಣೆಯಾಗಿದೆ. ಇದು ವಿರೋಧ ಪಕ್ಷಗಳ ನಾಯಕರನ್ನು ರಾಜಕೀಯವಾಗಿ ಮುಗಿಸುವ ವ್ಯವಸ್ಥಿತ ಷಡ್ಯಂತ್ರ. ಇದನ್ನು ನಾವು ಖಂಡಿಸುತ್ತೇವೆ ಎಂದು ವಾಗ್ದಾಳಿ ನಡೆಸಿದರು. ಇದಕ್ಕೆಲ್ಲ ನಾವು ಮಣಿಯುವುದಿಲ್ಲ. ಇದನ್ನು ಕಾನೂನಾತ್ಮಕವಾಗಿ ಎದುರಿಸುತ್ತೇವೆ. ಈ ಷಡ್ಯಂತ್ರದಲ್ಲಿ ಭಾಗಿಯಾದವರಿಗೆ ತಕ್ಕ ಪಾಠ ಕಲಿಸುತ್ತೇವೆ ಎಂದು ದಿನೇಶ್ ಗುಂಡಾರಾವ್ ಖಡಕ್ ಎಚ್ಚರಿಕೆ ರವಾನಿಸಿದ್ದಾರೆ.



**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,086/Gram24ct ₹6,495/Gram22ct | ಬೆಳ್ಳಿ: ₹88.00/Gram



## ಸಿದ್ದಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

# ಕರ್ಮೇಂದ್ರಿಯಂಗಳ ಧರ್ಮವಾತ್ಮನಿಗುಂಟೇ?

ನಿಜಗುಣರ ಪರಮಾನುಭವ ಬೋಧೆಯ ಮಾತು. ವಿವಿಧಾರ್ಥಕ ರೋಚಕ ಜಗಬೆಳಗಿಪ ಅನಂತಾಕ್ಷರಶಬ್ದಪದವಾಕ್ಯವ ನುಡಿವುದು ವಾಕ್ ಎಂಬ ಕರ್ಮೇಂದ್ರಿಯದ ಧರ್ಮ. ಹೊರತು ಆತ್ಮನದ್ದಲ್ಲ. ಅನಂತ ಪಡಿಪದಾರ್ಥ ಹಿಡಿವುದು ಕೊಡುವುದು ಪಡೆವುದು ಕೈ ಕರ್ಮೇಂದ್ರಿಯದ ಧರ್ಮ. ಹೊರತು ಆತ್ಮನದ್ದಲ್ಲ. ಹಿಂದೆ ಮುಂದೆ ಅಕ್ಕ ಪಕ್ಕ ಮೇಲೆ ಕೆಳಗೆ ಹೋಗುವುದು ಬರುವುದು ನಡೆವುದು ಓಡುವುದು ಒದೆವುದು ಕಾಲಿನ ಧರ್ಮ. ಹೊರತು ಆತ್ಮನದ್ದಲ್ಲ. ಮಲವನ್ನು ಹಿಡಿದಿಡುವುದು ವಿಸರ್ಜಿಸುವುದು ಪಾಯು = ಗುದ ಎಂಬ ಕರ್ಮೇಂದ್ರಿಯದ ಧರ್ಮ. ಹೊರತು ಆತ್ಮನದ್ದಲ್ಲ. ಮೂತ್ರವನ್ನು ವಿಸರ್ಜಿಸುವುದು, ಹೆಣ್ಣು ಗಂಡುಗಳ ಪರಸ್ಪರ ಮಿಲನದಲ್ಲಿ ಸುರತ ಸುಖ ನೀಡುವುದು ಗುಹ್ಯ = ಉಪಸ್ಥ = ಗುಪ್ತಾಂಗದ ಧರ್ಮ. ಹೊರತು ಆತ್ಮನದ್ದಲ್ಲ. ಹೀಗಿದ್ದಾಗ್ಯೂ, ನಾನು ಮಾತನಾಡುತ್ತೇನೆ ಮಾಡುತ್ತೇನೆ ಹೋಗುತ್ತೇನೆ ಓಡುತ್ತೇನೆ ಬರುತ್ತೇನೆ ಎಂಬಿತ್ಯಾದಿಯಾಗಿ ವಾಕ್ ಪಾಣಿ ಪಾದ ಪಾಯು ಉಪಸ್ಥ ಎಂಬ ಪಂಚ ಕರ್ಮೇಂದ್ರಿಯಗಳ ಧರ್ಮಗಳನ್ನು ಆತ್ಮನಲ್ಲಿ ತನ್ನಲ್ಲಿ ಆರೋಪಿಸಿ ವ್ಯವಹರಿಸುವುದು ರೂಢಿ ಅವಾಸ್ತವ.

## ಗಾಯನ - ವ್ಯಾಖ್ಯಾನ



• ಉದಯವಾಹಿನಿ, ಬೆಂಗಳೂರು

ಶೇಷಾದ್ರಿಪುರದ ಪ್ಲಾಟ್ ಫಾರ್ಮ್ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಜಯತೀರ್ಥರ ಆರಾಧನೆ ಪ್ರಯುಕ್ತ ಜುಲೈ 25, ಗುರುವಾರ ಸಂಜೆ 6-30ಕ್ಕೆ ಯುವ ಗಾಯಕ ಶ್ರೀ ವರದೇಂದ್ರ ಗಂಗಾಖೇಡ್ ಇವರಿಂದ ದಾಸರ ಪದಗಳ ಗಾಯನ ಮತ್ತು ಮ॥ಶಾ॥ಸಂ॥ ಡಾ॥ ವೇಣುಗೋಪಾಲಾಚಾರ್ ಅಗ್ನಿಹೋತ್ರಿ ಇವರಿಂದ ವ್ಯಾಖ್ಯಾನ ಏರ್ಪಡಿಸಿದ್ದು, ಈ ಕಾರ್ಯಕ್ರಮಕ್ಕೆ ವಾದ್ಯ ಸಹಕಾರದಲ್ಲಿ ಶ್ರೀ ತೇಜಸ್ ಕಾಟೋಟಿ (ಹಾರ್ಮೋನಿಯಂ) ಶ್ರೀ ಪ್ರಮೋದ್ ಗಬ್ಬೂರ್ (ತಬಲಾ) ಮತ್ತು ಶ್ರೀ ವೆಂಕಟೇಶ್ ಪುರೋಹಿತ್ (ತಾಳ) ಸಹಕರಿಸಲಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪ್ಲಾಟ್ ಫಾರ್ಮ್ ರಸ್ತೆ, ಮಂತ್ರಿ ಮಾಲ್ ಮೆಟ್ರೋ ನಿಲ್ದಾಣದ ಎದುರು, ಶೇಷಾದ್ರಿಪುರಂ, ಬೆಂಗಳೂರು-560020. ಸರ್ವರಿಗೂ ಆತ್ಮೀಯ ಸುಸ್ವಾಗತ

## ಅಧಿಕ ಮಳೆ - ತರಕಾರಿ, ಹೂ ಬೆಲೆ ಏರಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ವರುಣನ ಆರ್ಭಟ ಜೋರಾಗಿದೆ. ಮಳೆಯಿಂದಾಗಿ ರೈತರು ಬೆಳೆದ ಬೆಳೆಗಳಿಗೆ ಹಾನಿಯಾಗುತ್ತಿದ್ದು, ಮಾರುಕಟ್ಟೆಯಲ್ಲಿ ತರಕಾರಿ ಹಾಗೂ ಹೂಗಳ ಬೆಲೆಯಲ್ಲಿ ಏರಿಕೆಯಾಗಿದೆ. ಸೇವಂತಿಗೆ ಹೂವು ಇದೀಗ ಸಗಟು ಮಾರುಕಟ್ಟೆಯಲ್ಲಿಯೇ 250-300 ರೂ.ಗೆ ಮಾರಟವಾಗುತ್ತಿದ್ದರೆ, ಚಿಲ್ಲರೆ ಮಾರಾಟಗಾರರು ಕಾಲು ಕೆ.ಜಿ.ಸೇವಂತಿ ಹೂವಿಗೆ 100 ರೂ.ಗೆ ಮಾರುತ್ತಿದ್ದಾರೆ. ಇನ್ನು ಕೆಜಿಗೆ 400 ರೂ ನಗದಿ ಮಾಡಲಾಗಿದೆ. ಸದ್ಯ ಕಾಕಡ 500, ಮಲ್ಲಿಗೆ 300, ಕನಕಾಂಬರ 800, ಗುಲಾಬಿ 200 ರೂ.ಗೆ ಮಾರಾಟವಾಗುತ್ತಿದೆ. ಜೊತೆಗೆ ತರಕಾರಿಗಳ ಬೆಲೆಯೂ ಏರಿಕೆಯಗಿದ್ದು, ಟೊಮೆಟೊ ದರ ಕೆಜಿಗೆ 100 ರೂ. ಸಮೀಪ ಬಂದು ನಿಂತಿದೆ. ಇನ್ನು ಉಳಿದ ಕ್ಯಾರೆಟ್, ಬಟಾಣಿ, ಈರುಳ್ಳಿ ಬೆಲೆಯು ಜಾಸ್ತಿಯಾಗುತ್ತಿದೆ. ಸದ್ಯ ಹೆಚ್ಚು ಮಳೆಯಾಗುತ್ತಿರುವುದರಿಂದ ತರಕಾರಿಗಳು ಕೊಳೆತು ಹೋಗುತ್ತಿದ್ದು, ಮಾರುಕಟ್ಟೆಗೆ ಹೆಚ್ಚು ತರಕಾರಿಗಳು ಪೂರೈಕೆಯಾಗುತ್ತಿಲ್ಲ. ಮುಂದಿನ ದಿನಗಳಲ್ಲಿ ಮಳೆ ಹೆಚ್ಚಾದ್ರೆ ತರಕಾರಿಗಳ ಬೆಲೆ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ. ತರಕಾರಿ ಬೆಲೆ ಜಾಸ್ತಿಯಾಗುತ್ತಿರುವುದರಿಂದ ತರಕಾರಿ ವ್ಯಾಪರವು ಡಲ್ ಆಗಿದೆ ಅಂತ ತರಕಾರಿ ವ್ಯಾಪಾರಸ್ಥರು ಹೇಳಿದ್ದಾರೆ.

## ಭೂಸ್ವಾಧೀನಕ್ಕೆ ವಿರೋಧಿಸಿ ಸಿಎಂ ಮನೆಗೆ ಮುತ್ತಿಗೆ ಹಾಕಲು ರೈತರು ಯತ್ನ

• ಉದಯವಾಹಿನಿ, ಬೆಂಗಳೂರು

ಕೆಐಎಡಿಬಿಗೆ ಭೂ ಸ್ವಾಧೀನ ವಿರೋಧಿಸಿ ಇಂದು ಬೆಂಗಳೂರಿನ ದೇವನಹಳ್ಳಿಯಲ್ಲಿ ರೈತರು ಜಾಥಾ ನಡೆಸಿದ್ದು, ಸಿಎಂ ಸಿದ್ದರಾಮಯ್ಯ ಮನೆಗೆ ಮುತ್ತಿಗೆ ಹಾಕಲು ಹೊರಟಿದ್ದ ರೈತರನ್ನು ಪೊಲೀಸರು ಇದೆ ವೇಳೆ ವಶಕ್ಕೆ ಪಡೆದುಕೊಂಡ ಘಟನೆ ನಡೆಯಿತು. ಕೆಐಎಡಿಬಿಗೆ ಭೂ ಸ್ವಾಧೀನ ವಿರೋಧಿಸಿ ರೈತರು ಜಾಥಾ ನಡೆಸಿದರು. ಸಿಎಂ ಮನೆಗೆ ಮುತ್ತಿಗೆ ಹಾಕಲು ರೈತರು ಹೊರಟಿದ್ದರು.ಈ ವೇಳೆ ರೈತರು ಮತ್ತು ಪೊಲೀಸರ ನಡುವೆ ಈ ವೇಳೆ ಮಾತಿನ ಚಕಮಕಿ ನಡೆದಿದೆ. ತಕ್ಷಣ ಅನ್ನದಾತರನ್ನು ಪೊಲೀಸರು ವಶಕ್ಕೆ ಪಡೆಯಲು ಮುಂದಾಗಿದ್ದಾರೆ. ಬಿಎಂಟಿಸಿ ಬಸ್‌ಗಳಲ್ಲಿ ಪೊಲೀಸರು ರೈತರನ್ನು ಕರೆದುಕೊಂಡು ಹೋಗಿದ್ದಾರೆ, ಈ ವೇಳೆ ಸ್ಥಳಕ್ಕೆ ಆಗಮಿಸಿದ ಸಿಎಂ ರಾಜಕೀಯ ಕಾರ್ಯದರ್ಶಿ ಬಿ ಆರ್ ಪಾಟೀಲ್ ರೈತರ ಮನವೊಲಿಸಲು ಪ್ರಯತ್ನಿಸಿದ್ದಾರೆ. ಆದರೆ ಬಿ ಆರ್ ಪಾಟೀಲ್ ಮುಂದೆ ಕೂಡ ರೈತರು ಆಕ್ರೋಶವನ್ನು ವ್ಯಕ್ತಪಡಿಸಿದ್ದಾರೆ. ವಶಕ್ಕೆ ಪಡೆದ ರೈತರನ್ನು ಕರೆಸುವಂತೆ ಪೊಲೀಸರಿಗೆ ಸೂಚನೆ ನೀಡಿದ್ದಾರೆ.

## ಅನಧಿಕೃತ ಫ್ಲೆಕ್ಸ್ ಅವಳಡಿಸುವವರ ಮೇಲೆ ಕಾನೂನು ಕ್ರಮ: ಕೇಸ್ ದಾಖಲು

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಅನಧಿಕೃತ ಫ್ಲೆಕ್ಸ್ ಅವಳಡಿಸುವವರ ಮೇಲೆ ಕಾನೂನು ಕ್ರಮ ಜರುಗಿಸಲು ಬಿಬಿಎಂಪಿ ಮುಂದಾಗಿದೆ. ಹೌದು ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಅನಧಿಕೃತ ಬ್ಯಾನೆರ್ ಅವಳಸುಡಿವವರ ಮೇಲೆ ಕಾನೂನು ಕ್ರಮಕ್ಕೆ ಮುಂದಾಗುತ್ತಿದ್ದು ವಿವಿಧ ಠಾಣೆಗಳಿಗಲ್ಲಿ ಇದುವರೆಗೂ ಒಟ್ಟು 142 FIR ಗಳು ದಾಖಲಾಗಿವೆ. ಒಟ್ಟು 267 ದೂರುಗಳು ದಾಖಲಾಗಿದ್ದಾವೆ. ಈ ಪೈಕಿ 142 FIR ದಾಖಲು ಮಾಡಿಕೊಳ್ಳಲಾಗಿದೆ. ಇದುವರೆಗೂ ಒಟ್ಟು 8362 ಫ್ಲೆಕ್ಸ್ ಬ್ಯಾನೆರ್‌ಗಳನ್ನು ಪಾಲಿಕೆ ತೆರವುಗೋಳಿಸಿದೆ ಜುಲೈ 1 ರಿಂದ 8362 ಫ್ಲೆಕ್ಸ್ ಬ್ಯಾನೆರ್ ಅವಳಡಿಕೆ ಮಾಡಲಾಗಿತ್ತು ಇದುವರೆಗೂ ಒಟ್ಟು 1.03.000 ದಂಡ ವಿಧಿಸಲಾಗಿದೆ ಇನ್ನು ಫ್ಲೆಕ್ಸ್ ಬ್ಯಾನೆರ್ ಅವಳಡಿಕೆ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮಕ್ಕೆ ಪಾಲಿಕೆ ಸಜ್ಜಾಗಿದೆ.

## ರಾಜ್ಯದಲ್ಲಿ ಭಾರೀ ಸದ್ದು ಮಾಡಿದ್ದ ಮುಡಾ ಕೇಸ್ ರಾಜ್ಯಪಾಲರ ಅಂಗಳಕ್ಕೆ

• ಉದಯವಾಹಿನಿ, ಬೆಂಗಳೂರು

ನಗರಾಭಿವೃದ್ಧಿ ಪ್ರಾಧಿಕಾರ ಸೈಟ್ ಹಗರಣ ರಾಜ್ಯದಲ್ಲಿ ಭಾರೀ ಸದ್ದು ಮಾಡುತ್ತಿರುವ ಬೆನ್ನಲ್ಲೇ ರಾಜ್ಯಪಾಲರ ಮಧ್ಯಪ್ರವೇಶವಾಗಿದೆ. ಮುಡಾ ಪ್ರಕರಣದ ಬಗ್ಗೆ ಪೂರ್ಣ ವಿವರಣೆ ನೀಡುವಂತೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್ ಅವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಧರ್ಮಪತ್ನಿ ಪಾರ್ವತಿ ಅವರಿಗೆ ಅರ್ಹತೆಗೂ ಮೀರಿ 2 ಕೋಟಿ ರೂ. ಬೆಲೆಬಾಳುವ 14 ನಿವೇಶನಗಳನ್ನು ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ ಹಂಚಿಕೆ ಮಾಡಲಾಗಿದೆ. ಅರ್ಹತೆ ಪ್ರಕಾರ ಪಾರ್ವತಿ ಅವರಿಗೆ ನೀಡಬೇಕಾಗಿದ್ದು ಕೇವಲ ಎರಡು ಜಮೀನು ಮಾತ್ರ. ಆದರೆ 14 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ಎಂದು ಬಿಜೆಪಿ, ಜೆಡಿಎಸ್ ಗಂಭೀರ ಆರೋಪ ಮಾಡುತ್ತಿದೆ.

# ವಾಲ್ಮೀಕಿ ನಿಗಮದ ಹಗರಣ ಹೆಸರು ಹೇಳಲು ಇಡಿ ಒತ್ತಾಯ

**■ ಇಡಿ ಅಧಿಕಾರಿಗಳ ವರ್ತನೆ ಖಂಡಿಸಿ ವಿಧಾನಸೌಧದ ಆವರಣದ ಗಾಂಧಿ ಪ್ರತಿಮೆ ಮುಂಭಾಗ ಧರಣಿ**

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ, ಡಿಸಿಎಂ , ಮಾಜಿ ಸಚಿವ ನಾಗೇಂದ್ರ ಅವರ ಹೆಸರೇಳುವಂತೆ ನಿಗಮದ ಹಿಂದಿನ ಎಂಡಿ ಕಲ್ಲೇಶಪ್ಪ ಅವರಿಗೆ ಇಡಿ ಅಧಿಕಾರಿಗಳು ಕಿರುಕುಳ ನೀಡುತ್ತಿದ್ದಾರೆ ಎಂದು ಕಾಂಗ್ರೆಸ್ ಆಪಾದಿಸಿದ್ದು, ಈ ಬಗ್ಗೆ ಇಡಿ ಅಧಿಕಾರಿಗಳ ಮೇಲೆ ಎಫ್‌ಐಆರ್ ದಾಖಲಾಗಿದೆ. ಇಡಿ ಅಧಿಕಾರಿಗಳ ವರ್ತನೆಯನ್ನು ಖಂಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ನಾಯಕರು ವಿಧಾನಸೌಧದ ಆವರಣದ ಗಾಂಧಿ ಪ್ರತಿಮೆ ಮುಂಭಾಗ ಧರಣಿ ನಡೆಸಿ, ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಈ ವೇಳೆ ಮಾಧ್ಯಮಗಳ ಜೊತೆಗೆ ಮಾತನಾಡಿ, ರಾಜಕೀಯ ಸೇಡು, ದ್ವೇಷದಿಂದ ಕೂಡಿದ ನಡೆಯನ್ನು ನಮ್ಮ ಸರ್ಕಾರ ತೀವ್ರವಾಗಿ ಖಂಡಿಸುತ್ತದೆ. ಇದನ್ನು ನಾವು ಪ್ರತಿಭಟಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪ್ರಜಾಪ್ರಭುತ್ವಕ್ಕೆ ಮಾರಕವಾದ ನಡೆಯಿದು. ಪ್ರಜಾಪ್ರಭುತ್ವದಲ್ಲಿ ಯಾವುದೇ ತನಿಖೆಯನ್ನು ಕಾನೂನುಬಾಹಿರವಾಗಿ ಮಾಡು ವಂತಿಲ್ಲ ಎಂದರು.ಸಂಸತ್ತಿನಲ್ಲಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ವಾಲ್ಮೀಕಿ ನಿಗಮದ ಬಗ್ಗೆ ಪ್ರಸ್ತಾಪಿಸಿರುವ ಬಗ್ಗೆ ಮಾತನಾಡಿ ಈ ಬಗ್ಗೆ ನಮ್ಮ ಪಕ್ಷದ ವರಿಷ್ಠರೊಂದಿಗೆ ಮಾತನಾಡಿದ್ದು ಇಡಿ ದುರೂಪಯೋಗ ಮಾಡಿಕೊಳ್ಳುತ್ತಿರುವ ಬಗ್ಗೆ ಪಕ್ಷದ ವರಿಷ್ಠರು ಕೂಡ ಈ ವಿಷಯವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಿದ್ದಾರೆ ಎಂದರು.

**ಕೇಂದ್ರ ಸರ್ಕಾರದ ವಿರುದ್ಧ ಕಿಡಿ**

ನಾವು ಕೂಡ ಕಾನೂನಿನ ಪ್ರಕಾರ ಹೋರಾಟ ಮಾಡಲು ಸಿದ್ಧರಿದ್ದೇವೆ. ಇಡಿ, ಸಿಬಿಐ ಏನು ಮಾಡುತ್ತಾರೆ ಎಂದು ನಮಗೆ ತಿಳಿದಿಲ್ಲ. ಆದರೆ ಎಸ್. ಐ ಟಿ ತನಿಖೆ ಮುಗಿದಿದೆ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಯಾರೇ ತಪ್ಪು ಮಾಡಿದ್ದರೂ ಮುಲಾಜಿಗೆ ಒಳಗಾಗುವುದಿಲ್ಲ. ಯಾರನ್ನೂ ರಕ್ಷಣ ಮಾಡುವುದಿಲ್ಲ ಎಂದರು. ನಾವು ತಪ್ಪಿತಸ್ಥರಿಗೆ ಶಿಕ್ಷೆ ಕೊಟ್ಟೆ ಕೊಡುತ್ತೇವೆ. ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದರು.



**ನಾವು ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ನಡೆದಿಲ್ಲ ಎಂದು ಹೇಳಿಲ್ಲ. ವಿರೋಧ ಪಕ್ಷದವರು ಪದೇ ಪದೇ 187.33 ಕೋಟಿ ರೂ.ಗಳ ದುರುಪಯೋಗವಾಗಿದೆ ಎಂದು ಆರೋಪಿಸಿದ್ದಾರೆ . ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ, ಎಂ.ಜಿ ರಸ್ತೆ ಶಾಖೆಯಿಂದ ತೆಲಂಗಾಣಕ್ಕೆ ಹೋಗಿರುವುದು 89.63 ಕೋಟಿ ರೂ.ಗಳು. ಎಸ್. ಐ.ಟಿ ರಚನೆಯಾದ ಮೇಲೆ ತ್ವರಿತವಾಗಿ ತನಿಖೆ ಕೈಗೊಂಡಿದ್ದಾರೆ. ಈಗಾಗಲೇ 12 ಜನರನ್ನು ಬಂಧಿಸಿದ್ದು, ಬೇರೆ ಬೇರೆ ಜನರು ಹಂಚಿಕೊಂಡಿದ್ದ ಮೊತ್ತದಲ್ಲಿ 34 ಕೋಟಿ ರೂಪಾಯಿ ನಗದನ್ನು ಹಿಂಪಡೆದಿದ್ದಾರೆ.**

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮದಲ್ಲಿ ಮೂರು ತನಿಖಾ ಸಂಸ್ಥೆಗಳು ವಿಚಾರಣೆ ಮಾಡುತ್ತಿವೆ. ಎಸ್.ಐ.ಟಿ ಯನ್ನು 31-5.2024 ರಂದು ರಚಿಸಲಾಗಿದೆ. 3-6-2024 ರಂದು ಸಿಬಿಐ ಗೆ ಬ್ಯಾಂಕ್ ವತಿಯಿಂದ ದೂರು ನೀಡಲಾಗಿದೆ. ಅದರಲ್ಲಿ ಶುಚಿ ಸ್ಮಿತಾ ರಾವುಲ್, ದೀಪಾ ಹಾಗು ಕೃಷ್ಣಮೂರ್ತಿ ಇವರ ಮೇಲೆ ದೂರು ನೀಡಲಾಗಿದೆ. ಜಾರಿ ನಿರ್ದೇಶನಾಲಯ ಸ್ವಯಂ ಪ್ರೇರಣೆಯಿಂದ ಕೆಲಸ ಮಾಡುತ್ತಿದೆ. ಒಂದೇ ಹಗರಣದಲ್ಲಿ ಮೂರು ತನಿಖಾ ಸಂಸ್ಥೆಗಳು ವಿಚಾರಣೆ ಮಾಡುತ್ತಿರುವುದು ವಿಶೇಷ. ಮೂರು ತನಿಖಾ ಸಂಸ್ಥೆಗಳು ಒಂದೇ ಪ್ರಕರಣದ ಬಗ್ಗೆ ತನಿಖೆ ಮಾಡುವುದು ಈವರೆಗೆ ನನ್ನ ಅನುಭವಕ್ಕೆ ಬಂದಿರಲಿಲ್ಲ ಎಂದರು.

**89.63 ಕೋಟಿ . 46 ಕೋಟಿ ರೂ. ಗಳನ್ನು ಫ್ಸ ಫೈನಾನ್ಸ್ ಕೋ ಆಪರೇಟಿವ್ ಬ್ಯಾಂಕ್, ರತ್ನಾಕರ ಬ್ಯಾಂಕ್ ಲೀ., ನಲ್ಲಿ 46 ಕೋಟಿ ರೂಪಾಯಿ ಗಳನ್ನೂ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.ಒತ್ತು 85.25 ಕೋಟಿ ಹಿಂಪಡೆದು , ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಒಟ್ಟು ಅಕ್ರಮವಾಗಿರುವುದು 85.63 ಕೋಟಿಗಳು. ಎಸ್. ಐ ಟಿ ಅವರು ಶೇ.95% ತನಿಖೆಯನ್ನು ಪೂರ್ಣಗೊಳಿಸಿದ್ದಾರೆ ಎಂದರು.**

**- ಸಿದ್ದರಾಮಯ್ಯ, ಸಿಎಂ**

## ಕೋರ್ಟ್ ಆವರಣದಲ್ಲೇ ವಕೀಲೆಗೆ ಚಾಕು ಇರಿತ, ಓರ್ವ ವಶಕ್ಕೆ

• ಉದಯವಾಹಿನಿ, ಬೆಂಗಳೂರು

ಬೆಳಿಗ್ಗೆ ಬೆಂಗಳೂರಿನ ಮ್ಯಾಜಿಸ್ಟ್ರೇಟ್ ಕೋರ್ಟ್ ಆವರಣದಲ್ಲಿ ಬೆಚ್ಚಿ ಬೀಳಿಸುವಂತಹ ಘಟನೆ ನಡೆದಿದ್ದು, ಆರೋಪಿಯೊಬ್ಬ ವಕೀಲೆಗೆ ಚಾಕು ಇರಿದು ಭೀಕರವಾಗಿ ಕೊಲೆಗೆ ಯತ್ನಿಸಿದ್ದಾನೆ.

ಹೌದು ಬೆಂಗಳೂರಿನ ಮ್ಯಾಜಿಸ್ಟ್ರೇಟ್ ಕೋರ್ಟ್ ಆವರಣದಲ್ಲಿ ಈ ಒಂದು ಘಟನೆ ನಡೆದಿದ್ದು, ಹಲ್ಲೆಗೊಳಗಾದ ವಕೀಲೆ ವಿಮಲಾ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ. ವಿಮಲಾ ಪರಿಸ್ಥಿತಿ ಗಂಭೀರವಾಗಿದೆ. ಜಯರಾಮರೆಡ್ಡಿ ಎಂಬ ಆರೋಪಿಯನ್ನು ಹಲಸೂರು ಗೇಟ್ ಠಾಣೆ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.



ಉದಯವಾಹಿನಿ ಚಿತ್ರ

ವಕೀಲೆ ವಿಮಲಾ ಮತ್ತು ಆರೋಪಿ ಜಯರಾಮ ಸ್ನೇಹಿತರು. ವಕೀಲೆ ವಿಮಲಾ ಜೊತೆ ಕಳೆದ ಖಾಸಗಿ ಕ್ಷಣಗಳನ್ನು ಜಯರಾಮ ವಿಡಿಯೋ ಮಾಡಿಕೊಂಡಿದ್ದಾನೆ. ಅಲ್ಲದೆ ಜಯರಾಮ ಸ್ನೇಹಿತೆ ವಿಮಲಾ ಬಳಿಯಿಂದ ಹಂತಹಂತವಾಗಿ ಒಂದೂವರೆ ಕೋಟಿಗಿಂತಲೂ ಹೆಚ್ಚು ಹಣ ಪಡೆದಿದ್ದಾನೆ. ನಂತರ ಹೆಜ್ಜಾಲ ಬಳಿ ಇರುವ ಜಾಗದ ವಿಚಾರವಾಗಿ ಇಬ್ಬರಲ್ಲಿ ಕಿರಿಕ್ ಆಗಿತ್ತು. ವಕೀಲೆ ವಿಮಲಾ ಶೇಷಾದ್ರಿಪುರಂ ಠಾಣೆಯಲ್ಲಿ ಜಯರಾಮ ವಿರುದ್ಧ ದೌರ್ಜನ್ಯ, ಜಾಗದ ವಿಚಾರವಾಗಿ ಪ್ರಕರಣ ದಾಖಲಿಸಿದ್ದರು. ಈ ಪ್ರಕರಣ ಸಂಬಂಧ ಮಂಗಳವಾರ ಇಬ್ಬರೂ ವಿಚಾರಣೆಗೆ ನ್ಯಾಯಾಲಯದ ವಿಚಾರಣೆಗೆ ಹಾಜರಾಗಿದ್ದರು. ಈ ವೇಳೆ ಆರೋಪಿ ಜಯರಾಮ ಸ್ನೇಹಿತೆ, ವಕೀಲೆ ವಿಮಲಾಗೆ ಕೋರ್ಟ್ ಹಾಲ್ 1ರಲ್ಲಿ ಚಾಕು ಇರಿದಿದ್ದಾನೆ. ಘಟನೆ ಕುರಿತಂತೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಜನಪದ ಗಾಯಕ, ಸಾಹಿತಿ ಆಲೂರು ನಾಗಪ್ಪ ನಿಧನ

• ಉದಯವಾಹಿನಿ, ಬೆಂಗಳೂರು



ಪ್ರಸಿದ್ಧ ಜಾನಪದ ಹಾಡುಗಾರ, ಸಾಹಿತಿ, ಕನ್ನಡ ಪರ ಹೋರಾಟಗಾರ ಆಲೂರು ನಾಗಪ್ಪ(74) ಇನ್ನಿಲ್ಲ. ವಯೋ ಸಹಜ ಖಾಯಿಲೆಯಿಂದ ಬಳಲುತ್ತಿದ್ದ ನಾಗಪ್ಪ ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ. ಹುಟ್ಟೂರು ಬಿಡದಿಯಲ್ಲಿ ಆಲೂರು ನಾಗಪ್ಪ ಅಂತ್ಯಕ್ರಿಯೆ ನಡೆಯಲಿದೆ.

ನಿಂಗವ್ವ ಬೆಂಗಳೂರಿಗೆ ಬಂದು ನೋಡವ್ವ ಹಾಡಿನ ಖ್ಯಾತಿಯ ಆಲೂರು ನಾಗಪ್ಪ ಅವರು ಸಾವಿರಾರು ಲಾವಣಿ, ತತ್ವಪದಗಳ ಹರಿಕಾರಕ.

ಇವರು ರಚಿಸಿ, ಹಾಡಿರುವ ಹಾಡುಗಳು ಇಂದಿಗೂ ಜನಪ್ರಿಯತೆ ಕಳೆದುಕೊಂಡಿಲ್ಲ. ಆಲೂರು ನಾಗಪ್ಪ, ಗಾಯಕರಾಗಿ ಮಾತ್ರವಲ್ಲ, ಕನ್ನಡಪರ ಹೋರಾಟಗಾರರಾಗಿ ಕೂಡಾ ಗುರುತಿಸಿಕೊಂಡಿದ್ದಾರೆ. ಇನ್ನು ಇವರ ಮಗಳು ದಿವ್ಯ ಅಲೂಕು ಕೂಡ ನಿರೂಪಕಿ, ಗಾಯಕಿಯಾಗಿದ್ದಾರೆ. ಆಲೂರು ನಾಗಪ್ಪ ಅವರು ಯುವಜನತೆ, ಮಹಿಳೆಯರು, ನಾಡುನುಡಿಗೆ ಸಂಬಂಧಿಸಿದ ಎಲ್ಲಾ ರೀತಿಯ ಹಾಡುಗಳನ್ನೂ ಬರೆದಿದ್ದಾರೆ. ಭಕ್ತಿ ಗೀತೆಗಳನ್ನೂ ರಚಿಸಿದ್ದಾರೆ. ವಿಶೇಷವೆಂದರೆ ಇವರು ತಾವು ರಚಿಸಿದ, ಹಾಡಿದ ಯಾವ ಹಾಡುಗಳ ಹಕ್ಕನ್ನೂ ಬೇರೆಯವರಿಗೆ ಕೊಟ್ಟಿಲ್ಲ. ಕನ್ನಿಕೇರಿ ಹುಡುಗಿಯೊಬ್ಬಳು, ನೀನು ಮದುಕಿಯಂಗೆ ಮುಸುಕಾಕೊಂಡು, ಬೆಂಗಳೂರ್ ಹುಡ್ಗ ಬಂದವನಂತ ಬಗ್ಗಿ ಬಗ್ಗಿ ನೋಡ್ತೀಯಲ್ಲೇ, ತವರಿಂದ ಕಳಿಸಿ ನನ್ನ ಮರಿಬೇಡ ಅಣ್ಣಯ್ಯ, ಅಳಬ್ಯಾಡ ತಂಗಿ ಅಳಬ್ಯಾಡ, ಹೆತ್ತ ತಾಯಿ ಋಣವ ತೀರಿಸೋ, ಎಚ್ಚರಾಗು ಕನ್ನಡಿಗ ಇವು ಆಲೂರು ನಾಗಪ್ಪ ಅವರ ಪ್ರಸಿದ್ಧ ಹಾಡುಗಳು.

## ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಕೇಂದ್ರ ಬಿಜೆಪಿ ಸರ್ಕಾರದಿಂದ ಷಡ್ಯಂತ್ರ

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಪ್ರಕರಣದಲ್ಲಿ ರಾಜಕೀಯ ದುರುದ್ದೇಶದ ಸ್ವಯಂ ಪ್ರೇರಣೆಯಿಂದ ತನಿಖೆ ಕೈಗೆತ್ತಿಕೊಂಡಿರುವ ಜಾರಿ ನಿರ್ದೇಶನಾಲಯವು, ಪ್ರಕರಣದಲ್ಲಿ ಮಾಜಿ ಸಚಿವರಾದ ನಾಗೇಂದ್ರ ಅವರ ಹೆಸರನ್ನು ಹೇಳುವಂತೆ ನಿಗಮದ ಅಧಿಕಾರಿಗಳಿಗೆ ಇನ್ನಿಲ್ಲದ ಕಿರುಕುಳ ನೀಡುತ್ತಿರುವುದು ಅತ್ಯಂತ ಖಂಡನೀಯ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.



ಉದಯವಾಹಿನಿ ಚಿತ್ರ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೊದಲಿಗೆ ಸರ್ಕಾರದ ವಿರುದ್ಧ ಸುಳ್ಳು ಆರೋಪಗಳನ್ನು ಸೃಷ್ಟಿಸುವುದು, ನಂತರ ತಮ್ಮ ಜೀತದಾಳುಗಳಂತಿರುವ ಸಿಬಿಐ, ಇಡಿ ಮೊದಲಾದ ತನಿಖಾ ಸಂಸ್ಥೆಗಳಿಂದ ತನಿಖೆ ಮಾಡಿಸಿ ನಿರಪರಾಧಿಗಳನ್ನು ಅಪರಾಧಿಗಳೆಂದು ಬಿಂಬಿಸಿ ಜನರಲ್ಲಿ ಕೆಟ್ಟ ಅಭಿಪ್ರಾಯ ಮೂಡಿಸುವುದು, ಈ ಮೂಲಕ ಸುಭದ್ರ ಸರ್ಕಾರವನ್ನು ಅಸ್ಥಿರಗೊಳಿಸುವುದು ಕೇಂದ್ರದ ಬಿಜೆಪಿ ಸರ್ಕಾರ ದೇಶದ ವಿವಿಧ ರಾಜ್ಯಗಳಲ್ಲಿ ಮಾಡಿರುವ ಷಡ್ಯಂತ್ರ. ಅದನ್ನೇ ಇಲ್ಲಿಯೂ ಮಾಡಲು ಹೊರಟಿದೆ ಎಂದು ಕಿಡಿಕಾರಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವರಾದ ಅಮಿತ್ ಶಾ ಅವರೇ, ನೀವು ಇಡಿ, ಐಟಿ, ಸಿಬಿಐ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ನಡೆಸುತ್ತಿರುವ ಸೇಡಿನ ರಾಜಕಾರಣವನ್ನು ನಮ್ಮ ಜನ ಗಮನಿಸುತ್ತಿದ್ದಾರೆ. ಈ ದುಷ್ಕೃತ್ಯಗಳ ಸರಣಿ ಮುಂದುವರಿದರೆ ಜನತೆಯೇ ನಿಮ್ಮ ವಿರುದ್ಧ ಬಂಡೆದ್ದು ಪಾಠ ಕಲಿಸಲು ಸಿದ್ಧರಾಗಬಹುದು. ಬೇರೆ ರಾಜ್ಯಗಳಲ್ಲಿ ಆಡಿದ ಈ ಕಳ್ಳಾಟವನ್ನು ಕರ್ನಾಟಕದಲ್ಲಿ ಆಡಲು ಮುಂದಾಗಬೇಡಿ.

**ನ್ಯಾಯದ ಪರವಾಗಿ ಹೋರಾಟ**

**ಕನ್ನಡಿಗರು ಸಹನೆ, ಸೌಹಾರ್ದತೆಗೆ ಹೆಸರಾದವರಷ್ಟೆ ಅಲ್ಲ, ಅನ್ಯಾಯ, ಮೋಸವನ್ನು ಸಹಿಸದವರು, ಸತ್ಯ ಮತ್ತು ನ್ಯಾಯದ ಪರವಾಗಿ ಹೋರಾಡಬಲ್ಲ ಛಾತಿ ಉಳ್ಳವರು ಕೂಡಾ ಆಗಿದ್ದಾರೆ ಎನ್ನುವುದು ನೆನಪಿರಲಿ ಎಂದು ಹೇಳಿದ್ದಾರೆ.**

## ರೈತರ ಸಾಲಮನ್ನಾ ಪ್ರಸ್ತಾವನೆ ಇಲ್ಲವೆಂದ ಸರ್ಕಾರ, ಸದನದಲ್ಲಿ ಪ್ರತಿಪಕ್ಷ ನಾಯಕರ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ರೈತರ ಸಾಲಮನ್ನ ಮಾಡುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಸ್ಪಷ್ಟನೆ ನೀಡಿದ್ದಾರೆ. ವಿಧಾನಪರಿಷತ್‌ನಲ್ಲಿ ನಡೆದ ಇಂದಿನ ಕಲಾಪದಲ್ಲಿ ಬಿಜೆಪಿ ಸದಸ್ಯ ಸಿ.ಟಿ. ರವಿ ಅವರ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರಸಕ್ತ ಸಾಲಿನಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಗೆ 25 ಸಾವಿರ ಕೋಟಿ ಅಲ್ಪಾವಧಿ , ಮಧ್ಯಮಾವಧಿ ಸಾಲವನ್ನು ರಾಜ್ಯ ಸರ್ಕಾರ ಕಲ್ಪಿಸುತ್ತಿದೆ. ರೈತರ ಆರ್ಥಿಕ ನೆರವು ನೀಡಲು ಸಾಲು ಸಾಲ ನೀಡಲು ಬದ್ಧವಾಗಿದ್ದು, ಸದ್ಯಕ್ಕೆ ಸಾಲ ಮನ್ನಾ ವಿಚಾರ ಸರ್ಕಾರ ಮುಂದಿಲ್ಲ ಎಂದು ಹೇಳಿದ್ದಾರೆ. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಸಿ.ಟಿ.ರವಿ ಅವರು, ಬಜೆಟ್‌ನಲ್ಲಿ ಸಾಲ ಮನ್ನ ಮಾಡಿರುವ ಸರ್ಕಾರವೇ ಘೋಷಣೆ ಮಾಡಿತ್ತು ಅಲ್ವಾ ಹೀಗಿರುವಾ ಮಾತು ಯಾಕೆ ತಪ್ಪುತ್ತಿದ್ದೀರಿ ಎಂದು ಸರ್ಕಾರಕ್ಕೆ ಚಾಟಿ ಬೀಸಿದರು. ಈ ಸಂದರ್ಭದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿಯೇ ನಡೆಯಿತು. ಹಿಂದೊಮ್ಮೆ ಸಮ್ಮಿಶ್ರ ಸರ್ಕಾರವಿದ್ದಾಗ ಕುಮಾರಸ್ವಾಮಿ 1 ಲಕ್ಷ ಸಾಲ ಮನ್ನ ಮಾಡಿದ್ದರು. ಪ್ರಸ್ತುಕ ಕೇಂದ್ರದಲ್ಲಿ ನಿಮ್ಮ ಸರ್ಕಾರವಿದೆ. ಹೀಗಾಗಿ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿರುವ ಸಾಲವನ್ನು ಮನ್ನಾ ಮಾಡಲಿ ಎಂದು ಒತ್ತಾಯ ಮಾಡಿನೋಡಿ ಎಂದು ಆಡಳಿತ ಪಕ್ಷದ ನಾಯಕರು ಸವಾಲು ಹಾಕಿದ ಪ್ರಸಂಗ ನಡೆದಿದೆ.

## ಮಂಡಿಸಿದ ಕೇಂದ್ರ ಬಜೆಟ್‌ಗೆ ಕಾಂಗ್ರೆಸ್ ಪ್ರಣಾಳಿಕೆಯೇ ಸ್ಫೂರ್ತಿ: ಸಚಿವ ಈಶ್ವರ್ ಖಂಡ್ರೆ

• ಉದಯವಾಹಿನಿ, ಬೆಂಗಳೂರು



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾ ರಾಮನ್ ಇಂದು ಸಂಸತ್ತಿನಲ್ಲಿ ಮಂಡಿಸಿರುವ ಕೇಂದ್ರ ಬಜೆಟ್ ಗೆ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆ ಸ್ಫೂರ್ತಿಯಾಗಿದೆ ಎಂದು ಅರಣ್ಯ,ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ. ಕೇಂದ್ರ ಬಜೆಟ್ ಬಗ್ಗೆ ಪ್ರತಿಕ್ರಿಯೆ ನೀಡಿರುವ ಅವರು, ಲೋಕಸಭೆ ಚುನಾವಣೆ ಫಲಿತಾಂಶದಲ್ಲಿ ತೀವ್ರ ಹಿನ್ನಡೆ ಅನುಭವಿಸಿದ ಬಳಿಕ ಬಿಜೆಪಿ ಮತ್ತು ಎನ್.ಡಿ.ಎ.ಗೆ ಬುದ್ಧಿ ಬಂದಿದೆ.

ಕಾಂಗ್ರೆಸ್ ಪಕ್ಷ ತನ್ನ ಲೋಕಸಭಾ ಪ್ರಣಾಳಿಕೆಯಲ್ಲಿ ಪ್ರಕಟಿಸಿದ್ದ ಯುವಕರಿಗೆ ಅಪ್ರೆಂಟಿಷಿಪ್ ನೀಡುವ ಯೋಜನೆ ಸೇರಿದಂತೆ ಹಲವು ಅಂಶಗಳನ್ನು ಅಳವಡಿಸಿಕೊಂಡಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ. ಬಿಜೆಪಿಯ ಕೆಟ್ಟ ನೀತಿಗಳಿಂದಾಗಿ ದೇಶದಲ್ಲಿ 45 ವರ್ಷದಲ್ಲೇ ಕಂಡು ಕೇಳರಿಯದ ನಿರುದ್ಯೋಗ ಸಮಸ್ಯೆ ಉಂಟಾಗಿತ್ತು. ಕಳೆದ 10 ವರ್ಷಗಳ ಕಾಲ ನಿರುದ್ಯೋಗ ಸಮಸ್ಯೆ ಬಗ್ಗೆ ಗಮನವನ್ನೇ ಹರಿಸದಿದ್ದ ಕೇಂದ್ರ ಸರ್ಕಾರ ಈ ಬಜೆಟ್‌ನಲ್ಲಿ ತನ್ನ ತಪ್ಪನ್ನು ಒಪ್ಪಿಕೊಂಡಿದೆ ಎಂದು ತಿಳಿಸಿದ್ದಾರೆ.

**ಒಂದು ಕಣ್ಣಿಗೆ ಸುಣ್ಣ ಮತ್ತೊಂದು ಕಣ್ಣಿಗೆ ಬೆಣ್ಣೆ ಎಂಬ ಗಾದೆಯಂತೆ ಆಂಧ್ರಪ್ರದೇಶ ಮತ್ತು ಬಿಹಾರಕ್ಕೆ ಸಿಂಹಪಾಲು ಹಾಗೂ ಎನ್.ಡಿ.ಎ. ಸರ್ಕಾರ ಇರುವ ರಾಜ್ಯಗಳಿಗೆ ಆದ್ಯತೆ ನೀಡಿ, ಇತರ ರಾಜ್ಯಗಳನ್ನು ಕಡೆಗಣಿಸಲಾಗಿದ್ದು, ಈ ಬಜೆಟ್ ತಾರತಮ್ಯದಿಂದ ಕೂಡಿದೆ. ಇದು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದೂ ಈಶ್ವರ ಖಂಡ್ರೆ ಹೇಳಿದ್ದಾರೆ. ಕರ್ನಾಟಕಕ್ಕೆ ನೀಡಿರುವ ಕೊಡುಗೆ ಏನು ಎಂದೂ ಪ್ರಶ್ನಿಸಿದ್ದಾರೆ.**

## ಕರ್ನಾಟಕಕ್ಕೆ ಬಹುಬೇಡಿಕೆಯ ಯೋಜನೆ ಆಗಲಿ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ಮಂಡಿಸಿದ ಬಜೆಟ್‌ನಲ್ಲಿ ಮಹತ್ವದ ಯೋಜನೆಗಳಿಗೆ , ಸಾಮಾನ್ಯ ವರ್ಗಕ್ಕೆ ಹೆಚ್ಚುನ ಅನುದಾನವನ್ನು ನೀಡಿದೆ. ಕೃಷಿ, ಮಹಿಳಾ, ಕೈಗಾರಿಕೆ, ರೈಲ್ವೆ, ಹೀಗೆ ಅನೇಕ ಕ್ಷೇತ್ರಗಳಿಗೆ ಭರಪೂರ ಅನುದಾನ ಹಾಗೂ ಯೋಜನೆಯಲ್ಲಿ ನೀಡಿದೆ ಆದರೆ ವಿತ್ತ ಸಚಿವೆ ದಾಖಲೆಯ 7ನೇ ಬಾರಿ ಮಂಡಿಸಿದ ಕೇಂದ್ರ ಬಜೆಟ್ ನಲ್ಲಿ ತಾವು ಆಯ್ಕೆಯಾದ ಕರ್ನಾಟಕವನ್ನೇ ನಿರ್ಲಕ್ಷಿಸಿದ್ದಾರೆ ಎಂಬ ಆರೋಪ ಇದೀಗ ಎಲ್ಲೆಡೆ ಕೇಳಿ ಬರುತ್ತಿದೆ. ಹೌದು..ವಿತ್ತ ಸಚಿವೆ ನಿರ್ಮಲಾ ಸೀತರಾಮನ್ ಮಂಡಿಸಿದ ಬಜೆಟ್‌ನಲ್ಲಿ ಹೈದರಾಬಾದ್-ಕರ್ನಾಟಕ ಕಾರಿಡಾರ್ ಯೋಜನೆ ಪ್ರಕಟಿಸಿದ್ದು ಬಿಟ್ಟರೆ ಯಾವುದೇ ಘೋಷಣೆ ಮಾಡಿಲ್ಲ. ಕರ್ನಾಟಕಕ್ಕೆ ಬಹುಬೇಡಿಕೆಯ ರೈಲ್ವೆ ಯೋಜನೆ ಆಗಲಿ, ನೀರಾವರಿ ಯೋಜನೆಗಾಗಲಿ ಯಾವುದೇ ಘೋಷಣೆ ಮಾಡಲಾಗಿಲ್ಲ. ಬದಲಾಗಿ ಕೆರೆ ಹೂಳೆತ್ತುವ ಯೋಜನೆಗೆ ನೆರವು ಮತ್ತು ರಾಜ್ಯಗಳ ಮೂಲಭೂತ ಸೌಕರ್ಯಕ್ಕಾಗಿ 50 ವರ್ಷದವರೆಗೆ 1.5 ಲಕ್ಷ ಕೋಟಿವರೆಗೆ ತೆರಿಗೆ ರಹಿತ ಸಾಲ ನೀಡಲಾಗುವುದು ಎಂದು ಘೋಷಿಸಿದ್ದಾರೆ. ಆದರೆ ಇದು ಇಡೀ ದೇಶಕ್ಕೆ ಅನ್ವಯ ಆಗುವುದರಿಂದ ರಾಜ್ಯಕ್ಕೆ ಎಷ್ಟು ಸಿಗುತ್ತದೆ ಎಂಬದು ಊಹಿಸಲು ಸಾಧ್ಯವೇ ಇಲ್ಲ.



ಉದಯವಾಹಿನಿ ಚಿತ್ರ

# ರೈಲ್ವೇ ಕಾಮಗಾರಿ: 2 ದಿನ ರಾಜ್ಯದ 8 ರೈಲುಗಳು ರದ್ದು!

**■ ನಿಟ್ಟೂರು, ಸಂಪಿಗೆ ರೋಡ್ ಲೆವೆಲ್ ಕ್ರಾಸಿಂಗ್-64ರ ರಸ್ತೆ ಕೆಳಸೇತುವೆಗೆ ತಾತ್ಕಾಲಿಕ ಗರ್ಡರ್‌ಗಳನ್ನು ಅಳವಡಿಸುವ ಅಗತ್ಯ**

• ಉದಯವಾಹಿನಿ, ಬೆಂಗಳೂರು

ರೈಲ್ವೇ ಕಾಮಗಾರಿ ಹಿನ್ನೆಲೆ 2 ದಿನಗಳ ಕಾಲ ರಾಜ್ಯದ 8 ರೈಲುಗಳನ್ನು ರದ್ದು ಮಾಡಲಾಗಿದೆ. ನಿಟ್ಟೂರು ಮತ್ತು ಸಂಪಿಗೆ ರೋಡ್ ನಿಲ್ದಾಣಗಳ ನಡುವಿನ ಲೆವೆಲ್ ಕ್ರಾಸಿಂಗ್-64ರ ರಸ್ತೆ ಕೆಳಸೇತುವೆಗೆ ತಾತ್ಕಾಲಿಕ ಗರ್ಡರ್‌ಗಳನ್ನು ಅಳವಡಿಸುವ ಮತ್ತು ತೆಗೆದುಹಾಕಲು ಅಗತ್ಯ ನಿರ್ವಹಣಾ ಕಾಮಗಾರಿ ಕೈಗೊಳ್ಳುವ ಸಲುವಾಗಿ, ಹಲವು ರೈಲುಗಳನ್ನು ರದ್ದು, ಭಾಗಶಃ ರದ್ದು, ಮಾರ್ಗ ಬದಲಾವಣೆ, ನಿಯಂತ್ರಣ ಮತ್ತು ಸಮಯ ಮರುನಿಗದಿ ಮಾಡಲಾಗಿದೆ

ರೈಲು ಸಂಖ್ಯೆ 06571 ಕೆಎಸ್‌ಆರ್ ಬೆಂಗಳೂರು-ತುಮಕೂರು ಮಮು ವಿಶೇಷ ರೈಲು ಹಿರೇಹಳ್ಳಿ- ಶುಮಕೂರು ನಿಲ್ದಾಣಗಳ ನಡುವೆ ಭಾಗಶಃ ರದ್ದಾಗಲಿವೆ. ಈ ರೈಲು ಹಿರೇಹಳ್ಳಿಯಲ್ಲಿ ಕೊನೆಗೊಳ್ಳುತ್ತದೆ. ರೈಲು ಸಂಖ್ಯೆ 06572 ತುಮಕೂರು-ಕೆಎಸ್‌ಆರ್ ಬೆಂಗಳೂರು ಮಮು ವಿಶೇಷ ರೈಲು ತುಮಕೂರು-ಹಿರೇಹಳ್ಳಿ ನಿಲ್ದಾಣಗಳ ನಡುವೆ ಭಾಗಶಃ ರದ್ದಾಗಲಿದೆ. ಮತ್ತು ಈ ರೈಲು ಹಿರೇಹಳ್ಳಿಯಿಂದ ತನ್ನ ನಿಗದಿತ ಸಮಯದಲ್ಲಿ ಹೊರಡಲಿದೆ.

ರೈಲು ಸಂಖ್ಯೆ 20652 ತಾಳಗುಪ್ಪ-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸಪ್ರೆಸ್ ರೈಲು ಅರಸಿಕೆರೆ-ಕೆಎಸ್‌ಆರ್ ಬೆಂಗಳೂರು ನಿಲ್ದಾಣಗಳ ನಡುವೆ ಭಾಗಶಃ ರದ್ದುಗೊಳ್ಳಲಿದೆ ಮತ್ತು ಈ ರೈಲು ಅರಸಿಕೆರೆಯಲ್ಲಿ ಕೊನೆಗೊಳ್ಳುತ್ತದೆ. ರೈಲು ಸಂಖ್ಯೆ 12726 ಧಾರವಾಡ-ಕೆಎಸ್‌ಆರ್ ಬೆಂಗಳೂರು ಸಿದ್ದಗಂಗಾ ಡೈಲಿ ಎಕ್ಸಪ್ರೆಸ್ ಅರಸೀಕೆರೆ- ಕೆಎಸ್‌ಆರ್ ಬೆಂಗಳೂರು ನಿಲ್ದಾಣಗಳ ನಡುವೆ ಭಾಗಶಃ ರದ್ದುಗೊಳ್ಳಲಿದೆ ಮತ್ತು ಈ ರೈಲು ಅರಸೀಕೆರೆಯಲ್ಲಿ ಕೊನೆಗೊಳ್ಳುತ್ತದೆ. ರೈಲು ಸಂಖ್ಯೆ 12725 ಕೆಎಸ್‌ಆರ್ ಬೆಂಗಳೂರು-ಧಾರವಾಡ ಸಿದ್ದಗಂಗಾ ಡೈಲಿ ಎಕ್ಸ್‌ಪ್ರೆಸ್ ಕೆಎಸ್‌ಆರ್. ಬೆಂಗಳೂರು-ಅರಸಿಕರ ನಿಲ್ದಾಣಗಳ ನಡುವೆ ಭಾಗಶಃ ರದ್ದುಗೊಳ್ಳಲಿದೆ ಮತ್ತು ಈ ರೈಲು ಅರಸೀಕೆರೆಯಿಂದ ತನ್ನ ನಿಗದಿತ ಸಮಯದಲ್ಲಿ ಹೊರಡಲಿದೆ. ಆಗಸ್ಟ್ 7 ಮತ್ತು 14 ರಂದು ವಾಸ್ಕೋ-ಡ-ಗಾಮಾದಿಂದ ಹೊರಡುವ ರೈಲು ಸಂಖ್ಯೆ 17310 ವಾಸ್ಕೋ-ಡ-ಗಾಮಾ-ಯಶವಂತಪುರ ಡೈಲಿ ಎಕ್ಸ್‌ಪ್ರೆಸ್ ರೈಲು ಅರಸೀಕರೆ, ಹಾಸನ ನೆಲಮಂಗಲ್ಸ್ ಯಶವಂತಪುರ ಮಾರ್ಗದ ಮೂಲಕ ಸಂಚರಿಸಲಿದೆ. ಹೀಗಾಗಿ ತಿಪಟೂರು ಮತ್ತು ತುಮಕೂರು ವಿಲ್ದಾಣಗಳಲ್ಲಿ ನಿಗದಿತ ವಿಲುಗಡೆ ಇರುವುದಿಲ್ಲ. ಆಗಸ್ಟ್ 8 ಮತ್ತು 15 ರಂದು ಮೈಸೂರಿನಿಂದ ಹೊರಡುವ ರೈಲು ಸಂಖ್ಯೆ 22687 ಮೈಸೂರು ವಾರಣಾಸಿ ದ್ವಿ-ಸಾಪ್ತಾಹಿಕ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲು ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ ನಿಲ್ದಾಣಗಳ ಮೂಲಕ ಸಂಚರಿಸಲಿದೆ. ತುಮಕೂರಿನಲ್ಲಿ ನಿಗದಿತ ನಿಲುಗಡೆ ಇರುವುದಿಲ್ಲ.

**ಹಲವು ರೈಲುಗಳನ್ನು ರದ್ದು**



ಉದಯವಾಹಿನಿ ಚಿತ್ರ

**ಆಗಸ್ಟ್ 8 ಮತ್ತು 15 ರಂದು ಯಶವಂತಪುರ ನಿಲ್ದಾಣದಿಂದ ಹೊರಡುವ ರೈಲು ಸಂಖ್ಯೆ 82653 ಯಶವಂತಪುರ-ಜೈಪುರ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ ನಿಲ್ದಾಣಗಳ ಮೂಲಕ ಸಂಚರಿಸಲಿದೆ. ತುಮಕೂರಿನಲ್ಲಿ ನಿಗದಿತ ನಿಲುಗಡೆ ಇರುವುದಿಲ್ಲ.**

**ಆಗಸ್ಟ್ 8 ಮತ್ತು 15 ರಂದು ಮೈಸೂರಿನಿಂದ ಹೊರಡುವ ರೈಲು ಸಂಖ್ಯೆ 17326 ಮೈಸೂರು ಬೆಳಗಾವಿ ವಿಶ್ವಮಾನವ ಡೈಲಿ ಎಕ್ಸ್‌ಪ್ರೆಸ್ ರೈಲು ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ ನಿಲ್ದಾಣಗಳ ಮೂಲಕ ಸಂಚರಿಸಲಿದೆ. ತುಮಕೂರು ಮತ್ತು ತಿಪಟೂರು ನಿಲ್ದಾಣಗಳಲ್ಲಿ ನಿಗದಿತ ನಿಲುಗಡೆ ಇರುವುದಿಲ್ಲ.**

**ಆಗಸ್ಟ್ 8 ಮತ್ತು 15 ರಂದು ಮೈಸೂರಿನಿಂದ ಹೊರಡುವ ರೈಲು ಸಂಖ್ಯೆ 19668 ಮೈಸೂರು-ಉದಯಪುರ ಸಿಟಿ ಸಾಪ್ತಾಹಿಕ ಎಕ್ಸ್ ಪ್ರೆಸ್ ರೈಲು ಕೆಎಸ್‌ಆರ್ ಬೆಂಗಳೂರು, ಯಶವಂತಪುರ, ನೆಲಮಂಗಲ, ಹಾಸನ, ಅರಸೀಕೆರೆ, ದಾವಣಗೆರೆ ಮಾರ್ಗವಾಗಿ ಸಂಚರಿಸಲಿದೆ.**

- ■ **ರೈಲು ಸಂಖ್ಯೆ 07346 ತುಮಕೂರು-ಚಾಮರಾಜನಗರ ಡೈಲಿ ಪ್ಯಾಸೆಂಜರ್ ಸ್ಪೆಷಲ್.**
- ■ **ರೈಲು ಸಂಖ್ಯೆ 07328 ಚಾಮರಾಜನಗರ-ಮೈಸೂರು ಡೈಲಿ ಪ್ಯಾಸೆಂಜರ್ ಸ್ಪೆಷಲ್.**
- ■ **ರೈಲು ಸಂಖ್ಯೆ 16239ಚಿಕ್ಕಮಗಳೂರು-ಯಶವಂತಪುರ ಡೈಲಿ ಎಕ್ಸ್‌ಪ್ರೆಸ್.**
- ■ **ರೈಲು ಸಂಖ್ಯೆ 16240 ಯಶವಂತಪುರ-ಚಿಕ್ಕಮಗಳೂರು ಡೈಲಿ ಎಕ್ಸ್‌ಪ್ರೆಸ್.**
- ■ **ರೈಲು ಸಂಖ್ಯೆ, 06576 ತಮಕೂರು-ಕೆಎಸ್‌ಆರ್ ಬೆಂಗಳೂರು ಮೆಮು ಸ್ಪೆಷಲ್.**
- ■ **ರೈಲು ಸಂಖ್ಯೆ 06575 ಕೆಎಸ್‌ಆರ್ ಬೆಂಗಳೂರು-ತುಮಕೂರು ಮೆಮು ಸ್ಪೆಷಲ್**
- ■ **ರೈಲು ಸಂಖ್ಯೆ 16579 ಯಶವಂತಪುರ-ಶಿವಮೊಗ್ಗ ಟೌನ್ ಇಂಟರ್‌ಸಿಟಿ ಡೈಲಿ ಎಕ್ಸ್ಪ್ರೆಸ್.**
- ■ **ರೈಲು ಸಂಖ್ಯೆ 16580 ಶಿವಮೊಗ್ಗ ಟೌನ್ -ಯಶವಂತಪುರ ಇಂಟರ್‌ಸಿಟಿ ಡೈಲಿ ಎಕ್ಸ್‌ಪ್ರೆಸ್.**

# ಸ್ಕಂದಗಿರಿ ಸುತ್ತಿದ ಟಿಕೆಟ್ ಬುಕ್ಕಿಂಗ್ ಹಗರಣ ಬಾಹುಗಳು

## ಹಗರಣದ ಸಂಬಂಧ ಹೊರ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಿಬ್ಬಂದಿಯನ್ನು ಕೆಲಸದಿಂದ ವಜಾ

• ಉದಯವಾಹಿನಿ ಚಿಕ್ಕಬಳ್ಳಾಪುರ

ರಾಜ್ಯದಲ್ಲಿಯೇ ಪ್ರಸಿದ್ಧ ಚಾರಣ ತಾಣಗಳಲ್ಲಿ ಒಂದಾದ ತಾಲ್ಲೂಕಿನ ಸ್ಕಂದಗಿರಿಯ ಸುತ್ತ ಈಗ ಹಗರಣದ ಬಾಹುಗಳು ಚಾಚಿವೆ. ಸ್ಕಂದಗಿರಿಗೆ ಚಾರಣಿಗರು ಪ್ರವೇಶ ಪಡೆಯಲು ಆನ್‌ಲೈನ್‌ನಲ್ಲಿ ಟಿಕೆಟ್‌ಗಳನ್ನು ಕಾಯ್ದಿರಿಸಬೇಕು. ಆದರೆ ಟಿಕೆಟ್ ಕಾಯ್ದಿರಿಸದೆಯೇ ಚಾರಣಿಗರಿಗೆ ಪ್ರವೇಶಗಳನ್ನು ನೀಡಲಾಗಿದೆ. ಹೀಗೆ ಅಕ್ರಮವಾಗಿ ಪ್ರವೇಶ ನೀಡಲು ಹಣ ಪಡೆಯಲಾಗಿದೆ.

ಹಗರಣದ ಸಂಬಂಧ ಹೊರ ಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಿಬ್ಬಂದಿಯನ್ನು ಕೆಲಸದಿಂದ ವಜಾ ಮಾಡಲಾಗಿದೆ. ಮತ್ತೊಬ್ಬ ಸಿಬ್ಬಂದಿಯನ್ನು ಬೇರೆಡೆ ನಿಯೋಜಿಸಲಾಗಿದೆ. ಈ ಮೂಲಕ ಸ್ಕಂದಗಿರಿಯಲ್ಲಿ ನಕಲಿ ಟಿಕೆಟ್ ಹಗರಣ ಬಹಿರಂಗವಾಗಿದೆ. ಸ್ಕಂದಗಿರಿಯಲ್ಲಿ ಟಿಕೆಟ್ ಕಾಯ್ದಿರಿಸುವ ವಿಚಾರದಲ್ಲಿ ಹಗರಣ ನಡೆಯುತ್ತಿದ್ದು ತನಿಖೆ ನಡೆಸುವಂತೆ ಬೆಂಗಳೂರು ಟ್ರಕ್ಕಿಂಗ್ ಕಮ್ಯುನಿಟಿ ಸದಸ್ಯ ಲಿಖಿತ್ ಎಸ್.ನಾರಾಯಣ್ ಅರಣ್ಯ, ಜೀವ ವಿಜ್ಞಾನ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅವರಿಗೆ ದೂರು ನೀಡಿದ್ದರು. ಪರಿಸರ ಪ್ರವಾಸೋದ್ಯಮ ಇಲಾಖೆಯ ಅಕೌಂಟೆಂಟ್ ವಾಣಿಶ್ರೀ, ಹೊರಗುತ್ತಿಗೆ ಆಧಾರದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸ್ಕಂದಗಿರಿಯ ವೆಬ್‌ಸೈಟ್ ನಿರ್ವಾಹಕರಾದ ಸುನೀಲ್, ಶಿವರಾಜ್, ಸ್ವಾಗತಕಾರ ಗುರುನಾಥ್ ಹೆಸರನ್ನು ದೂರಿನಲ್ಲಿ ಉಲ್ಲೇಖಿಸಿದ್ದರು. ದೂರಿನ ನಂತರ ಹೊರಗುತ್ತಿಗೆ ಸಿಬ್ಬಂದಿಯನ್ನು ಕೆಲಸದಿಂದ ಕೈಬಿಡಲಾಗಿದೆ.

> ನಾನು ಈ ಪ್ರಕರಣದಲ್ಲಿ ಭಾಗಿಯಾಗಿಲ್ಲ ಆದರೂ ನಮ್ಮ ಹೆಸರು ಬರುತ್ತಿದೆ. 300 ಜನರ ಮೇಲೆ ಕಳುಹಿಸಬೇಡಿ ಎಂದು ಹೇಳಿದ್ದೆವು. ಒಂದು ವೇಳೆ ಕಳುಹಿಸುವುದಿದ್ದರೆ ಸಾಹೇಬರ ಬಳಿ ಅನುಮತಿ ಪಡೆದು ಅವಕಾಶ ನೀಡುತ್ತಿದ್ದೆವು. ಯಾವುದನ್ನೂ ಅಕ್ರಮವಾಗಿ ಮಾಡಿಲ್ಲ. ನಾನು ಯಾರ ಬಳಿಯೂ ಒಂದು ರೂಪಾಯಿ ಪಡೆದಿಲ್ಲ
> – ಮಹಿಳಾ ಅಧಿಕಾರಿ


ಉದಯವಾಹಿನಿ ಚಿತ್ರ

**ಹಗರಣವು ಹಲವು ತಿಂಗಳಿನಿಂದ ನಡೆಯುತ್ತಿರುವ ಶಂಕೆ**

ಪ್ರಕರಣ ಸಂಬಂಧ ಹೊರ ಗುತ್ತಿಗೆ ಸಿಬ್ಬಂದಿ ಸುನೀಲ್ ಎಂಬುವವರು ಡಿಆರ್‌ಎಫ್‌ಒ ಅವರಿಗೆ ತಪ್ಪೊಪ್ಪಿಗೆ ಸಹ ಬರೆದುಕೊಟ್ಟಿದ್ದಾರೆ. ಈ ರೀತಿಯಲ್ಲಿ ಹಗರಣವು ಹಲವು ತಿಂಗಳಿನಿಂದ ನಡೆಯುತ್ತಿರುವ ಶಂಕೆ ಇದೆ ಎಂದು ಲಿಖಿತ್ ನಾರಾಯಣ್ ಸಚಿವರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ.

ಈ ಬಗ್ಗೆ ಸಿಐಡಿಯಿಂದ ತನಿಖೆ ನಡೆಸುವಂತೆ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗೆ ಅರಣ್ಯ ಸಚಿವರು ನಿರ್ದೇಶನ ನೀಡಿದ್ದಾರೆ.

ಪರಿಸರ ಪ್ರವಾಸೋದ್ಯಮ ಇಲಾಖೆಯು ಸ್ಕಂದಗಿರಿಯನ್ನು ನಿರ್ವಹಿಸುತ್ತಿದೆ. ಸ್ಕಂದಗಿರಿ ಪ್ರವಾಸಕ್ಕೆ ಆನ್‌ಲೈನ್‌ನಲ್ಲಿ ಟಿಕೆಟ್‌ಗಳನ್ನು ಕಾಯ್ದಿರಿಸಬೇಕು. ನಿತ್ಯ 300 ಟಿಕೆಟ್‌ಗಳನ್ನು ಮಾತ್ರ ಮಾರಾಟ ಮಾಡಲಾಗುತ್ತದೆ. ಒಂದು ಟಿಕೆಟ್ ಬೆಲೆ 607. ಬೆಳಿಗ್ಗೆ 4 ಗಂಟೆಗೆ ಮತ್ತು ಬೆಳಿಗ್ಗೆ 8 ಗಂಟೆಗೆ ಹೀಗೆ ಎರಡು ಪಾಳಿಯಲ್ಲಿ ಸ್ಕಂದಗಿರಿಗೆ ಚಾರಣಿಗರು ಚಾರಣ ನಡೆಸಲು ಅವಕಾಶವಿದೆ.

**ಸಂಚಲನ ತಂದ ಆಡಿಯೊ:** ಪ್ರಕರಣದ ಸಂಬಂಧ ಮಹಿಳಾ ಅಧಿಕಾರಿಯೊಬ್ಬರು ಮತ್ತು ಹೊರ ಗುತ್ತಿಗೆ ಸಿಬ್ಬಂದಿ ಸುನೀಲ್ ಎಂಬುವವರ ನಡುವೆ ನಡೆದಿದೆ ಎನ್ನಲಾದ ಮಾತುಕತೆಯ ಆಡಿಯೊ ಈಗ ಚರ್ಚೆಗೆ ಗ್ರಾಸವಾಗಿದೆ.

**ಅಕ್ರಮಗಳ ನಾನಾ ಮಜಲುಗಳು**

ಟಿಕೆಟ್ ಕ್ಲೋಸ್ ಆದ ಮೇಲೆ ಬಂದವರಿಗೆ ಟಿಕೆಟ್ ಮಾಡಿಕೊಡುತ್ತಿದ್ದೆವು. ದಿನಕ್ಕೆ ಎರಡು ಮೂರು ಮಾತ್ರ ಮಾಡುತ್ತಿದ್ದೆವು. ಹಣವನ್ನು ಗೂಗಲ್ ಪೇ ಮಾಡಿಸಿಕೊಳ್ಳುತ್ತಿದ್ದೆವು' ಎಂದು ಹೊರ ಗುತ್ತಿಗೆ ಸಿಬ್ಬಂದಿ ಆಡಿಯೊದಲ್ಲಿ ಹೇಳಿದ್ದಾರೆ.

ಈಗಾಗಲೇ ಚಾರಣಕ್ಕೆ ತೆರಳಿದವರ ಟಿಕೆಟ್‌ಗಳನ್ನು ಟಿಕೆಟ್ ಕಾಯ್ದಿರಿಸದೆಯೇ ಬಂದ ಬೇರೊಬ್ಬ ಚಾರಣಿಗರಿಗೆ ಕೊಡುತ್ತಿದ್ದೆವು.

ನಕಲಿ ಟಿಕೆಟ್ ಕೊಟ್ಟು ಕಳುಹಿಸುತ್ತಿದ್ದೆವು. ನಾನು (ಸುನೀಲ್), ಗುರುನಾಥ್, ಶಿವು ಈ ಪ್ರಕರಣದಲ್ಲಿ ಭಾಗಿಯಾಗಿದ್ದೇವೆ ಎಂದು ಆಡಿಯೊದಲ್ಲಿ ಮಾತುಗಳಿವೆ.

ಹೀಗೆ ಅಧಿಕಾರಿ ಮತ್ತು ಹೊರ ಗುತ್ತಿಗೆ ಸಿಬ್ಬಂದಿ ನಡುವೆ ನಡೆದಿರುವ ಮಾತುಕತೆಯ ಆಡಿಯೊ ಸ್ಕಂದಗಿರಿಯಲ್ಲಿನ ಅಕ್ರಮಗಳ ನಾನಾ ಮಜಲುಗಳನ್ನು ಸಹ ಹೊರಗೆಡವುತ್ತಿದೆ.

---

# ಬಾಲ್ಯ ವಿವಾಹಗಳು ನಡೆಯದಂತೆ ಕಟ್ಟೆಚ್ಚರ ವಹಿಸಲು ಅಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ ತುಮಕೂರು

ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಕಟ್ಟೆಚ್ಚರವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿ ಕಚೇರಿ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಮಹಿಳೆ ಮತ್ತು ಅಪ್ರಾಪ್ತರ ಮೇಲೆ ನಡೆಯುವ ದೌರ್ಜನ್ಯಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ಅನೇಕ ಕಾರ್ಯಕ್ರಮ ಮತ್ತು ಕಟ್ಟು ನಿಟ್ಟಿನ ಕಾಯ್ದೆಗಳನ್ನು ಜಾರಿಗೆ ತಂದಿದ್ದು ಅವುಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ಮೂಲಕ ಜಿಲ್ಲೆಯಲ್ಲಿ ಇಂತಹ ಪ್ರಕರಣಗಳು ನಡೆಯದಂತೆ ಕ್ರಮ ವಹಿಸಬೇಕೆಂದು ನಿರ್ದೇಶನ ನೀಡಿದರು.

ಬಾಲ್ಯ ವಿವಾಹ ನಿಷೇಧ ಕಾಯ್ದೆ ಯೋಜನೆಯಡಿ ಎಲ್ಲಾ ತಾಲ್ಲೂಕು, ಹೋಬಳಿ ಮತ್ತು ಗ್ರಾಮಗಳಲ್ಲಿ ನಡೆಯುವ ಜಾತ್ರೆ, ಉತ್ಸವ, ಬಸವ ಜಯಂತಿ, ಮತ್ತಿತರ ಸಂದರ್ಭಗಳಲ್ಲಿ ವೈಯಕ್ತಿಕ ವಿವಾಹ ಹಾಗೂ ಸಾಮೂಹಿಕ ವಿವಾಹಗಳು ನಡೆಯುವ ಸಾಧ್ಯತೆಯಿರುತ್ತದೆ. ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಜರುಗುವ ಸಾಮೂಹಿಕ ವಿವಾಹ ಅಥವಾ ವೈಯಕ್ತಿಕ ವಿವಾಹಗಳ ಸಂದರ್ಭದಲ್ಲಿ ಯಾವುದೇ ಬಾಲ್ಯವಿವಾಹಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ಎಲ್ಲಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ತಾಕೀತು ಮಾಡಿದರು. ಸಭೆಯಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮರಿಯಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಜಿಲ್ಲಾ ಕಾರ್ಯಕ್ರಮ ನಿರೂಪಣಾಧಿಕಾರಿ ದಿನೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸಣ್ಣ ಮಸಿಯಪ್ಪ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಗುರಿ ಸಾಧಿಸುವಂತೆ ಸೂಚನೆ**

ಗರ್ಭಿಣಿ ಮತ್ತು ಬಾಣಂತಿಯರ ಪೌಷ್ಟಿಕತೆ ಹೆಚ್ಚಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ ಯಡಿ 2024ರ ಏಪ್ರಿಲ್ ಮಾಹೆಯಿಂದ ಜೂನ್ ಅಂತ್ಯದವರೆಗೆ 4767 ಫಲಾನುಭವಿಗಳಿಗೆ ಪೌಷ್ಟಿಕ ಆಹಾರ ನೀಡಿರುವ ಬಗ್ಗೆ ಮಾಹಿತಿ ಪಡೆದ ಅವರು ಗುರಿ ಸಾಧನೆಯಲ್ಲಿ ಹಿಂದುಳಿದ ಶಿರಾ ಹಾಗೂ ತುಮಕೂರು ತಾಲ್ಲೂಕು ಅಧಿಕಾರಿಗಳಿಗೆ ಒಂದು ವಾರದೊಳಗೆ ಗುರಿ ಸಾಧಿಸುವಂತೆ ಸೂಚನೆ ನೀಡಿದರು.

---

# ತಾಲ್ಲೂಕಿನ ಹಳ್ಳಿಮಾಳ ಸಂಘ ಜೆಡಿಎಸ್ ತೆಕ್ಕೆಗೆ

• ಉದಯವಾಹಿನಿ, ರಾಮನಗರ

ರಾಜಕೀಯ ಮೇಲಾಟಕ್ಕೆ ಸಾಕ್ಷಿಯಾಗಿದ್ದ ತಾಲ್ಲೂಕಿನ ಹಳ್ಳಿಮಾಳ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಸ್ಥಾನ ಕಡೆಗೂ ಜೆಡಿಎಸ್ ಪಾಲಾಗಿದೆ. ಸೋಮವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಕೃಷ್ಣೇಗೌಡ ಅವರು ಅವಿರೋಧವಾಗಿ ಆಯ್ಕೆಯಾದರು.

ಇದರೊಂದಿಗೆ ಸಂಘದ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಮತ್ತು ಜೆಡಿಎಸ್ ನಡುವೆ ನಡೆಯುತ್ತಿದ್ದ ಹಗ್ಗಜಗ್ಗಾಟ ಅಂತ್ಯಗೊಂಡಿದೆ. ಸಂಘದ ಹಿಂದಿನ ಅಧ್ಯಕ್ಷ ಸುರೇಶ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನಡೆಯಬೇಕಿದ್ದ ಚುನಾವಣೆಯು, ಎರಡೂ ಪಕ್ಷದವರ ನಡುವಣ ಪೈಪೋಟಿಯಿಂದಾಗಿ ಎರಡು ಸಲ ಮುಂದೂಡಿಕೆಯಾಗಿತ್ತು. ಇದೇ ವಿಷಯಕ್ಕೆ ಸಂಬಂಧಿಸಿದಂತೆ, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್ ಬೆಂಬಲಿಗರು ಕಂದಾಯ ಭವನದ ಎದುರು ಪ್ರತಿಭಟಿಸಿದ್ದರು. ಸಹಕಾರ ಇಲಾಖೆ ಉಪ ನಿರ್ದೇಶಕರ ಕಚೇರಿಗೆ ಮುತ್ತಿಗೆ ಹಾಕಲು ಪ್ರಯತ್ನಿಸಿದ್ದರು. ಈ ವೇಳೆ, ಪೊಲೀಸರು ಮತ್ತು ನಿಖಿಲ್ ನಡುವೆ ಜಟಾಪಟಿ ನಡೆದಿತ್ತು. ಪ್ರತಿಭಟನೆಗೆ ಮಣಿದಿದ್ದ ಅಧಿಕಾರಿಗಳು ಜುಲೈ 22ಕ್ಕೆ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಿಗದಿಪಡಿಸಿದ್ದರು. ಬಳಿಕ ಪ್ರತಿಭಟನೆ ನಿಂತಿತ್ತು. ಅದರಂತೆ, ನಡೆದ ಚುನಾವಣೆಗೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಚುನಾವಣೆ ಪ್ರಕ್ರಿಯೆ ಆರಂಭಗೊಂಡಾಗ ಜೆಡಿಎಸ್ ಬೆಂಬಲಿತ ನಿರ್ದೇಶಕ ಕೃಷ್ಣೇಗೌಡ ಅವರನ್ನು ಬಿಟ್ಟರೆ, ಬೇರಾರು ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಲಿಲ್ಲ. ಅಂತಿಮವಾಗಿ ಚುನಾವಣಾಧಿಕಾರಿ ಮಂಜುನಾಥ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ ಸಂಘದ 11 ನಿರ್ದೇಶಕರ ಪೈಕಿ ಜೆಡಿಎಸ್ ಬೆಂಬಲಿತ 8 ನಿರ್ದೇಶಕರು ಪಾಲ್ಗೊಂಡಿದ್ದಾರೆ. ಕಾಂಗ್ರೆಸ್ ಬೆಂಬಲಿತ ಮೂವರು ಗೈರಾಗಿದ್ದರು.


ಉದಯವಾಹಿನಿ ಚಿತ್ರ

---

# ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಶುದ್ಧಗಂಗಾ ಘಟಕ ಉದ್ಘಾಟನೆ

• ಉದಯವಾಹಿನಿ ತುಮಕೂರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ತುಮಕೂರು ಗ್ರಾಮಾಂತರ ವ್ಯಾಪ್ತಿಯ ಶಿರಾ ಗೇಟ್ ಹೌಸಿಂಗ್ ಬೋರ್ಡ್ ನಲ್ಲಿ ಶಾಸಕರ ಸ್ಥಳೀಯಾಭಿವೃದ್ಧಿ ಯೋಜನೆ ಅನುದಾನ ಮತ್ತು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಹಯೋಗದೊಂದಿಗೆ ನೂತನ ಶುದ್ಧ ಗಂಗಾ ಕುಡಿಯುವ ನೀರಿನ ಘಟಕವನ್ನು ಮಾನ್ಯ ಶಾಸಕರಾದ ಜಿ.ಬಿ.ಜ್ಯೋತಿಗಣೇಶ್ ರವರು ಉದ್ಘಾಟನೆ ಮಾಡಿ ಪೂಜ್ಯ, ವೀರೇಂದ್ರ ಹೆಗ್ಗಡೆಯವರು ಸಮಾಜಕ್ಕೆ ನೀಡಿದ ಕೊಡುಗೆ ಅಪಾರವಾಗಿದೆ.

ಯೋಜನೆಯಿಂದ ಈಗಾಗಲೇ ಸಮುದಾಯಕ್ಕೆ ಪೂರಕವಾದ ಉತ್ತಮವಾದ ವಿವಿಧ ಕಾರ್ಯಕ್ರಮಗಳನ್ನು ಮಾಡುತ್ತಿದ್ದು ಕರ್ನಾಟಕ ರಾಜ್ಯದಾದ್ಯಂತ ಸುಮಾರು 500 ಕ್ಕೂ ಮಿಕ್ಕಿ ಶುದ್ಧಗಂಗಾ ಘಟಕಗಳು ಇದ್ದು ಉತ್ತಮವಾದ ನೀರಿನ ಪೂರೈಕೆ ಆಗುತ್ತಿದೆ ಎಂದರು.

ಪ್ರಾಸ್ತವಿಕ ಮಾತುಗಳನ್ನಾಡಿದ ಜಿಲ್ಲಾ ನಿರ್ದೇಶಕರಾದ ಸತೀಶ್ ಸುವಣ ರವರು ಯೋಜನೆಯು ಪರ್ಯಾಯ ಸರ್ಕಾರವಲ್ಲ ಬದಲಾಗಿ ಸರ್ಕಾರದ ಕಾರ್ಯಕ್ರಮಗಳನ್ನು ಜನರ ಬಳಿಗೆ ತಲುಪಿಸುವ ಕೆಲಸವನ್ನು ಯೋಜನೆಯ ಮುಖಾಂತರ ಮಾಡುತ್ತಿದೆ ಎಂದರು.

ತಾಲ್ಲೂಕಿನ ಯೋಜನಾಧಿಕಾರಿಗಳಾದ ಸಂದೇಶ್. ಪಿ.ಬಿ, ಮಾಜಿ ಪಾಲಿಕೆ ಸದಸ್ಯರಾದ ನರಸಿಂಹಮೂರ್ತಿ, ಊರಿನ ಗಣ್ಯರು ಜನಪ್ರತಿನಿಧಿಗಳು ಹಾಗೂ ಯೋಜನೆಯ ಸಿಬ್ಬಂದಿಗಳು ಸಂಘದ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

---

# ಸರ್ಕಾರಿ ಪ್ರೌಢಶಾಲೆಯಲ್ಲಿ ರೈತರ ಹುತಾತ್ಮ ದಿನಾಚರಣೆ

• ಉದಯವಾಹಿನಿ, ಶಿಡ್ಲಘಟ್ಟ

ತಾಲ್ಲೂಕಿನ ಚೀಮಂಗಲ ಸರ್ಕಾರಿ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಶಾಖೆಯಿಂದ 44ನೇ ವರ್ಷದ ರೈತಹುತಾತ್ಮ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಕ್ತರಹಳ್ಳಿ ಪ್ರತೀಶ್ ಮಾತನಾಡಿ,ನವಲಗುಂದ ಹಾಗೂ ನರಗುಂದದ ಘಟನೆಯನ್ನು ಮುಂದಿನ ಪೀಳಿಗೆಯೂ ಮರೆಯಬಾರದು ಎಂದು ಮಕ್ಕಳಲ್ಲಿ ಆಗ್ಗಿಂದ್ದಾಗ್ಗೆ ಮಾಹಿತಿ ನೀಡುವ ಕೆಲಸ ಆಗಬೇಕು. ಇನ್ನು ಗಿಡ ನೆಡುವುದರಿಂದ ಪ್ರಕೃತಿಯಲ್ಲಿನ ತಾಪಮಾನವನ್ನು ಕಡಿಮೆಗೊಳಿಸಬಹುದಾಗಿದೆ.

ಹೀಗಾಗಿ ಎಲ್ಲರೂ ಸಸಿ ನೆಡುವ ಮೂಲಕ ಪ್ರಕೃತಿಯ ಸೇವೆ ಮಾಡಬೇಕು. 1980ರಲ್ಲಿ ನವಲಗುಂದ ಮತ್ತು ನರಗುಂದದಲ್ಲಿ ಐದು ಜನ ರೈತರನ್ನು ಪೋಲಿಸರು ಗುಂಡಿಕ್ಕಿ ಕೊಂದ ಘಟನೆಯನ್ನು ನೆನಪಿನಲ್ಲಿದೆ. ಇಂದಿಗೂ ಸಹ ತಾಲ್ಲೂಕಿನ ಎಲ್ಲಾ ರೈತ ಮುಖಂಡರು ಪುಷ್ಪ ನಮನ ಸಲ್ಲಿಸುತ್ತಾ ಬಂದಿದ್ದಾರೆ.

ಇನ್ನು ಮುಂದೆಯೂ ಸಹ ಹುತಾತ್ಮ ದಿನಾಚರಣೆಯನ್ನು ಅರ್ಥಗರ್ಭಿತವಾಗಿ ಎಲ್ಲರೂ ಆಚರಿಸಬೇಕು ಎಂದರು.

ನವಲಗುಂದ ಮತ್ತು ನರಗುಂದದಲ್ಲಿ ಹುತಾತ್ಮರಾದ ರೈತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಕೆಲ ಕಾಲ ಮೌನ ಆಚರಿಸುವ ಮೂಲಕ ಶ್ರದ್ಧಾಂಜಲಿ ಅರ್ಪಿಸಲಾಯಿತು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಬಿ.ಎನ್.ಸ್ವಾಮಿ ವಿದ್ಯಾರ್ಥಿಗಳಿಗೆ ಪ್ರಚಲಿತ ಘಟನೆಗಳ ಬಗ್ಗೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುವುದನ್ನು ತಿಳಿಸಿದರು. ಸರ್ಕಲ್ ಇನ್ಸ್‌ಪೆಕ್ಟರ್ ಎಂ. ಶ್ರೀನಿವಾಸ್ ರವರು ಶಾಲಾ ಮಕ್ಕಳಿಗೆ ಪೋಕೋ ಕಾಯ್ದೆ, ಸಂಚಾರಿ ನಿಯಮಗಳು, ಮಾದಕ ವಸ್ತುಗಳು ಮತ್ತು ದುಶ್ಚಟಗಳ ಬಗ್ಗೆ ಅರಿವು ಮೂಡಿಸಿದರು.

ಹೆಚ್ಚಿನ ಅಂಕ ಪಡೆದ ಶಾಲಾ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಪುರಸ್ಕರಿಸಲಾಯಿತು. ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎ ನರೇಂದ್ರ ಕುಮಾರ್, ಸಾಮೂಹಿಕ ನಾಯಕತ್ವದ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಎ. ಎನ್. ಮುನೇಗೌಡ, ಕಾರ್ಯದರ್ಶಿ ನವೀನಾಚಾರಿ, ಚಿಂತಾಮಣಿ ತಾಲ್ಲೂಕು ಅಧ್ಯಕ್ಷ ಕದಿರೇಗೌಡ, ಕಾರ್ಯದರ್ಶಿ ಆಂಜಿನಪ್ಪ, ಬೈರಗಾನಹಳ್ಳಿ ಬಿ.ವಿ.ಮಂಜುನಾಥ್, ಬಳುವನಹಳ್ಳಿ ಪ್ರಕಾಶ್, ಯಣ್ಣೂರು ದೇವಪ್ಪ, ಸುಂಡ್ರಹಳ್ಳಿ ಪಾಪಣ್ಣ, ಅರಿಕೆರೆ ಮುನಿರಾಜ್ ಮತ್ತಿತರರು ಇದ್ದರು.


ಉದಯವಾಹಿನಿ ಚಿತ್ರ

**ಸಸಿ ನೆಡುವ ಮೂಲಕ ಪ್ರಕೃತಿಯ ಸೇವೆ**

---

# ಪತ್ರಕರ್ತರ ಸಂಘದ ಸದಸ್ಯರ ಹೆಸರಿನಲ್ಲಿ ಮಾಜಿ ಸೈನಿಕನಿಗೆ ಲಕ್ಷಾಂತರ ರೂಪಾಯಿ ವಂಚನೆ

• ಉದಯವಾಹಿನಿ ಕೋಲಾರ

ಸೈನ್ಯದಲ್ಲಿ ಕೆಲಸ ಮಾಡಿ ನಿವೃತ್ತಿ ಹೊಂದಿದ ಮೇಲೆ ಹೊಟ್ಟೆ ಪಾಡಿಗಾಗಿ ಕಬ್ಬಿಣ ಮತ್ತು ಸಿಮೆಂಟ್ ಅಂಗಡಿ ಹಾಕಿಕೊಂಡು ವ್ಯಾಪಾರ ಮಾಡಿಕೊಳ್ಳುತ್ತಿದ್ದ ನಿವೃತ್ತ ಸೈನಿಕನಿಗೆ ಪತ್ರಕರ್ತರ ಸಂಘದ ಸದಸ್ಯ ಹಾಗು ದಲಿತ ಮುಖಂಡ ಎಂದು ಹೇಳಿಕೊಂಡು ಲಕ್ಷಾಂತರ ರೂ.ಗಳು ವಂಚನೆ ಮಾಡಿದ್ದಾನೆ, ನಿವೃತ್ತ ಸೈನಿಕ ನ್ಯಾಯಕ್ಕಾಗಿ ಪೊಲೀಸ್ ಠಾಣೆಗೆ ಹೋದರೆ ಪೊಲೀಸರು ಆತನು ದಲಿತ ಆತ ಅಟ್ರಾಸಿಟಿ ಕೊಡುತ್ತಾನೆ, ಸುಮ್ಮನೆ ಹೋಗು ಎಂದು ಪೊಲೀಸರೇ ನೊಂದ ವ್ಯಕ್ತಿಯನ್ನು ಬೆದರಿಸಿರುವ ಘಟನೆ ನಡೆದಿದೆ.

ಶ್ರೀನಿವಾಸಪುರ ಪಟ್ಟಣದಲ್ಲಿ ಸಿಮೆಂಟ್ ಅಂಗಡಿ ತಾಲ್ಲೂಕಿನ ಎ ಒನ್ ಗುತ್ತಿಗೆದಾರ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯ ಎಂದು ಹೇಳಿಕೊಳ್ಳುತ್ತಿರುವ ಗೊರಮಾಕಲಹಳ್ಳಿ ಶ್ರೀನಿವಾಸ್ ಎಂಬ ವ್ಯಕ್ತಿ ತಾನು ಮನೆ ಕಟ್ಟಿಕೊಳ್ಳಲು ಸುಮಾರು 3 ಲಕ್ಷ ಬೆಲೆ ಬಾಳುವ ಸಿಮೆಂಟ್ ಹಾಗೂ ಇನ್ನಿತರ ವಸ್ತುಗಳನ್ನು ಪಡೆದುಕೊಂಡು ವರ್ಷಗಳೇ ಕಳೆದರು ಹಣ ಹಿಂತಿರುಗಿಸಿ ಕೊಟ್ಟಿಲ್ಲ, ಅಂಗಡಿ ಮಾಲೀಕ ಹಣ ವಾಪಸ್ ಕೇಳಿದ್ದಾನೆಂಬ ಕಾರಣಕ್ಕೆ ಶ್ರೀನಿವಾಸ್ ಎಂಬಾತ ಅಂಗಡಿ ಬಳಿ ಅವಾಚ್ಯ ಶಬ್ದಗಳಿಂದ ನಿಂದಿಸಿ ವಾಕಿಂಗ್ ಹೋಗುವ ವೇಳೆ ಟ್ರ್ಯಾಕ್ಟರ್ ನಿಂದ ಗುದ್ದಿಸಿ ಸಾಯಿಸುವ ಬೆದರಿಕೆಯೂ ಹಾಕಿದ್ದಾನೆ ಎಂದು ವಂಚನೆಗೊಳಗಾದ ಮಾಜಿ ಸೈನಿಕ ಕೃಷ್ಣಮೂರ್ತಿ ರವರು ಆರೋಪಿಸಿದ್ದಾರೆ.

ಇನ್ನೂ ಈ ಎಲ್ಲಾ ವಿಚಾರಗಳ ಬಗ್ಗೆ ಶ್ರೀನಿವಾಸಪುರ ಪೊಲೀಸ್ ಠಾಣೆಯಲ್ಲಿ ದೂರು ನೀಡಲು ಹೋದ ವೇಳೆ ಪೊಲೀಸರು ನೀವು ಈ ದೂರು ನೀಡಿದರೆ ಶ್ರೀನಿವಾಸ್ ಅಟ್ರಾಸಿಟಿ ಪ್ರಕರಣ ದಾಖಲಿಸುವ ಬೆದರಿಕೆ ಹೊಡ್ಡಿದ್ದಾರೆ ಎಂದು ನೊಂದ ಅಂಗಡಿ ಮಾಲೀಕ ತನ್ನ ಅಳಲು ತೋಡಿಕೊಂಡು ಮಾಧ್ಯಮದ ಮೂಲಕ ನ್ಯಾಯ ಕೇಳುತ್ತಿದ್ದಾರೆ.

ಇನ್ನು ಪೊಲೀಸ್ ಠಾಣೆಯಲ್ಲಿ ನಡೆದ ಅಟ್ರಾಸಿಟಿ ಮೀಟಿಂಗ್ ನಲ್ಲಿ ವಿಷಯ ಪ್ರಸ್ತಾಪಿಸಿದಾಗ ದಲಿತ ಮುಖಂಡರು ಇಂತಹ ವ್ಯಕ್ತಿಗಳಿಂದ ನಮ್ಮ ದಲಿತ ಸಮುದಾಯಕ್ಕೆ ನ್ಯಾಯ ಸಿಗುವ ಅಟ್ರಾಸಿಟಿ ದೂರುಗಳಿಗೆ ಬೆಲೆ ಇಲ್ಲದಾಗುತ್ತಿದೆ ಆದ್ದರಿಂದ ಈ ಕೂಡಲೇ ಗೊರಮಾಕನಹಳ್ಳಿ ಶ್ರೀನಿವಾಸ್ ನನ್ನು ಬಂಧಿಸುವಂತೆ ದಲಿತ ಮುಖಂಡರು ಪೊಲೀಸರಿಗೆ ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

**ನೊಂದ ವ್ಯಕ್ತಿಯನ್ನು ಬೆದರಿಸಿರುವ ಘಟನೆ**

---

# ಮಕ್ಕಳಿಗೆ ಅಂಕಗಳಿಗಿಂತ ಸಂಸ್ಕಾರ ಮುಖ್ಯ: ನ್ಯಾ.ನೂರುನ್ನೀಸ

• ಉದಯವಾಹಿನಿ ತುಮಕೂರು

ಆಂಗ್ಲಭಾಷೆಯಲ್ಲಿ ಎಷ್ಟು ಹಿಡಿತಹೊಂದಿದ್ದರೂ ಸಹ ಕನ್ನಡದಲ್ಲಿ ಹಿಡಿತ ಹೊಂದಿರಬೇಕು, ಎಲ್ಲರೂ ಕನ್ನಡದ ಮೇಲೆ ಭಾಷಾಭಿಮಾನ ಬೆಳೆಸಿಕೊಳ್ಳಬೇಕು,ಮಕ್ಕಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದಿನ ಮೇಲೆ ನಿಗಾ ಇಡಬೇಕು, ಕನ್ನಡದಲ್ಲಿ ಬರೆಯುವುದು ಓದುವುದು ಮಾಡಿದಾಗ ಭಾಷೆಯ ಮೇಲೆ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ, ಮಕ್ಕಳಿಗೆ ಅಂಕಗಳಿಗಿಂತ ಸಂಸ್ಕಾರ ಮುಖ್ಯ, ಉತ್ತಮ ಸಂಸ್ಕಾರವಂತರಾದಾಗ ತಂದೆ-ತಾಯಿಗಳಿಗೂ ಹೆಸರು ಬರುತ್ತದೆ ಎಂದು ತುಮಕೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ನೂರುನ್ನೀಸರವರು ತಿಳಿಸಿದರು.

ನಗರದ ಕನ್ನಡಭವನದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತು, ತುಮಕೂರು ನಗರ ಘಟಕ ಆಯೋಜಿಸಿದ್ದ ಕವಿಗೋಷ್ಠಿ ಮತ್ತು ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ನೆರವೇರಿಸಿ ಮಾತನಾಡಿದರು. ಸ್ಪರ್ಧಾತ್ಮಕ ಪರೀಕ್ಷೆಗಳಾದ ಐಎಎಸ್, ಕೆಎಎಸ್ ಇತರೆ ಎಲ್ಲವನ್ನೂ ಕನ್ನಡದಲ್ಲಿ ಬರೆಯಬಹುದು,ಕನ್ನಡದ ಮೇಲೆ ಪ್ರೀತಿ ಗೌರವ ಹೊಂದಿರಬೇಕು,ಪೋಷಕರು ಮಕ್ಕಳಿಗೆ ನಾಡು ನುಡಿಯ ಬಗ್ಗೆ ಸದಾ ತಿಳಿಸಿಕೊಡಬೇಕು,ಉತ್ತಮ ವ್ಯಕ್ತಿತ್ವ ಹೊಂದಿದಾಗ ಮನುಷ್ಯನಿಗೆ ಗೌರವ ಹೆಚ್ಚಾಗುತ್ತದೆ, ಪೋಷಕರು ಸಹ ಮೊಬೈಲ್ ಗೀಳಿನಿಂದ ಹೊರಬರಬೇಕು, ಇಂದು ಎಲ್ಲರೂ ಮೊಬೈಲ್ ಗೆ ದಾಸರಾಗಿದ್ದಾರೆ ಇದೊಂದು ದುರಂತ,ಚಿಕ್ಕ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಹೆಚ್ಚಾಗುತ್ತಿದೆ ಪೋಷಕರು ತಮ್ಮ ಮಕ್ಕಳ ಮೇಲೆ ಸದಾ ಜಾಗ್ರತೆ ವಹಿಸಬೇಕೆಂದು ತಿಳಿಸಿದರು.

ಶಶಿಹುಲಿಕುಂಟೆಮಠ್ ಮಾತನಾಡಿ ನಮ್ಮ ರಾಜ್ಯದಲ್ಲಿ ಕನ್ನಡಕ್ಕೆ ಪ್ರಥಮ ಆದ್ಯತೆ ನೀಡಬೇಕು,ಕನ್ನಡವೇ ವ್ಯವಹಾರ ಭಾಷೆಯಾಗಬೇಕು,ಯಾರಿಗೆ ಎಷ್ಟು ಭಾಷೆ ಬಂದರೂ ಕನ್ನಡದಲ್ಲಿಯೇ ಮಾತನಾಡಬೇಕು, ಇಂಗ್ಲೀಷ್ ವ್ಯಾಮೋಹ ಬಿಡಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವೇದಿಕೆಯಲ್ಲಿ ಪ್ರೊ.ಕೆ.ಎಸ್.ಸಿದ್ಧಲಿಂಗಪ್ಪ,ಸಾ.ಚಿ.ರಾಜಕುಮಾರ್,ಚಿಕ್ಕಬೆಳ್ಳಾವಿಶಿವಕುಮಾರ್,ಶ್ರೀಮತಿ ನಂದಿನಿ, ಶ್ರೀಮತಿಜ್ಯೋತಿ, ಇತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

---

# ತಗ್ಗಿದ ಮುಂಗಾರು ಮಳೆ ಅಬ್ಬರ, ಮಾಹಿತಿ ನೀಡಿದ ಜಿಲ್ಲಾಡಳಿತ

## • ಆಗಸ್ಟ್ ತಿಂಗಳಿನಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆಯ ತೀವ್ರತೆ ಹೆಚ್ಚಾಗಲಿದೆ ಎಂದು ಮುನ್ಸೂಚನೆ ನೀಡಲಾಗಿದೆ

• ಉದಯವಾಹಿನಿ ಮಡಿಕೇರಿ

ಕೊಡಗು ಜಿಲ್ಲೆಯಲ್ಲಿ ಮುಂಗಾರು ಮಳೆಯ ಅಬ್ಬರ ಕಡಿಮೆ ಆಗಿದೆ. ಜನವರಿಯಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಸುರಿದ ಮಳೆ 1,632.63 ಮಿ. ಮೀ.. ಆದರೆ ಕಳೆದ ವರ್ಷ ಇದೇ ಅವಧಿಯಲ್ಲಿ 769.11 ಮಿ. ಮೀ. ಮಳೆಯಾಗಿತ್ತು. ಜಿಲ್ಲಾಡಳಿತ ನೀಡಿದ ಮಾಹಿತಿ ಪ್ರಕಾರ ಜಿಲ್ಲೆಯಲ್ಲಿ ಸೋಮವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ಕಳೆದ 24 ಗಂಟೆ ಅವಧಿಯಲ್ಲಿ ಸರಾಸರಿ ಕೇವಲ 19.88 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 51.28 ಮಿ. ಮೀ. ಮಳೆ ಸುರಿದಿತ್ತು.

ಮಡಿಕೇರಿ ತಾಲೂಕಿನಲ್ಲಿ ಸರಾಸರಿ ಮಳೆ 10.78 ಮಿ. ಮೀ. ಆಗಿದೆ. ಕಳೆದ ವರ್ಷ ಇದೇ ದಿನ 52.40 ಮಿ. ಮೀ. ಮಳೆಯಾಗಿತ್ತು. ಜನವರಿಯಿಂದ ಇಲ್ಲಿಯವರೆಗೆ ತಾಲ್ಲೂಕಿನಲ್ಲಿ ಸುರಿದ ಮಳೆ ಮಳೆ 2,296.20 ಮಿ. ಮೀ ಆಗಿದೆ. ವಿರಾಜಪೇಟೆ ತಾಲೂಕಿನಲ್ಲಿ ಸರಾಸರಿ 1.10 ಮಿ. ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 43.95 ಮಿ. ಮೀ. ಮಳೆಯಾಗಿತ್ತು. ತಾಲ್ಲೂಕಿನಲ್ಲಿ ಜನವರಿಯಿಂದ ಇಲ್ಲಿಯವರೆಗಿನ ಮಳೆ 1,567.05 ಮಿ. ಮೀ. ಆಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 600.56 ಮಿ. ಮೀ. ಮಳೆಯಾಗಿತ್ತು.

ಪೊನ್ನಂಪೇಟೆ ತಾಲ್ಲೂಕಿನಲ್ಲಿ ಸರಾಸರಿ 20.93 ಮಿ. ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 60.73 ಮಿ. ಮೀ. ಮಳೆಯಾಗಿತ್ತು. ಜನವರಿಯಿಂದ ಇಲ್ಲಿಯವರೆಗಿನ ಮಳೆ 1,550.96 ಮಿ. ಮೀ. ಆಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 644.84 ಮಿ. ಮೀ. ಮಳೆಯಾಗಿತ್ತು.

ಸೋಮವಾರಪೇಟೆ ತಾಲ್ಲೂಕಿನಲ್ಲಿ ಸರಾಸರಿ ಮಳೆ 60.80 ಮಿ.ಮೀ. ಆಗಿದೆ. ಕಳೆದ ವರ್ಷ ಇದೇ ದಿನ 76.40 ಮಿ. ಮೀ. ಮಳೆಯಾಗಿತ್ತು. ಜನವರಿಯಿಂದ ಇಲ್ಲಿಯವರೆಗಿನ ಮಳೆ 1710.96 ಮಿ. ಮೀ. ಆಗಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ 788.81 ಮಿ. ಮೀ. ಮಳೆಯಾಗಿತ್ತು. ಕುಶಾಲನಗರ ತಾಲ್ಲೂಕಿನಲ್ಲಿ ಸರಾಸರಿ 5.80 ಮಿ. ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 22.90 ಮಿ. ಮೀ. ಮಳೆಯಾಗಿತ್ತು. ಜನವರಿಯಿಂದ ಇಲ್ಲಿಯವರೆಗಿನ ಮಳೆ 1038 ಮಿ. ಮೀ.. ಕಳೆದ ವರ್ಷ ಇದೇ ಅವಧಿಯಲ್ಲಿ 502.55 ಮಿ. ಮೀ. ಮಳೆಯಾಗಿತ್ತು. ಕೊಡಗು ಜಿಲ್ಲೆಯಲ್ಲಿ ಹೋಬಳಿವಾರು ದಾಖಲಾಗಿರುವ ಮಳೆ ವಿವರ ಹೀಗಿದೆ. ಮಡಿಕೇರಿ ಕಸಬಾ 8.60, ನಾಪೋಕ್ಲು 5.80, ಸಂಪಾಜೆ 8.50, ಭಾಗಮಂಡಲ 20.20, ವಿರಾಜಪೇಟೆ 2.20, ಹುದಿಕೇರಿ 14.50, ಶ್ರೀಮಂಗಲ 32.20, ಪೊನ್ನಂಪೇಟೆ 21.01, ಬಾಳೆಲೆ 16.02, ಸೋಮವಾರಪೇಟೆ ಕಸಬಾ 55, ಶನಿವಾರಸಂತೆ 40, ಶಾಂತಳ್ಳಿ 100, ಕೊಡ್ಲಿಪೇಟೆ 48.20, ಕುಶಾಲನಗರ 2.60, ಸುಂಟಿಕೊಪ್ಪ 9 ಮಿ.ಮೀ.ಮಳೆಯಾಗಿದೆ. ಹಾರಂಗಿ ಡ್ಯಾಂ ನೀರಿನ ಮಟ್ಟ: ಕೊಡಗು ಜಿಲ್ಲೆಯಲ್ಲಿ ಕಾವೇರಿ ಜಲಾನಯನ ಪ್ರದೇಶದ ಡ್ಯಾಂ ಹಾರಂಗಿ ಇದೆ.

22/7/2024ರ ವರದಿಯಂತೆ ಡ್ಯಾಂ ಸಂಪೂರ್ಣ ಭರ್ತಿಯಾಗಿದ್ದು, ನದಿಗೆ ನೀರು ಹರಿಸಲಾಗುತ್ತಿದೆ. ಹಾರಂಗಿ ಜಲಾಶಯದ ಗರಿಷ್ಠ ಮಟ್ಟ 2,859 ಅಡಿಗಳು. ಇಂದಿನ ನೀರಿನ ಮಟ್ಟ 2855.25 ಅಡಿಗಳು. ಕಳೆದ ವರ್ಷ ಇದೇ ದಿನ 2853.11 ಅಡಿಗಳ ನೀರಿನ ಸಂಗ್ರಹವಿತ್ತು. ಹಾರಂಗಿಯಲ್ಲಿ ಬಿದ್ದ ಮಳೆ 6.20 ಮಿ.ಮೀ. ಆಗಿದೆ. ಡ್ಯಾಂಗೆ ಒಳ ಹರಿವು 7281 ಕ್ಯುಸೆಕ್. ಕಳೆದ ವರ್ಷ ಇದೇ ದಿನ 4460 ಕ್ಯುಸೆಕ್ ಒಳಹರಿವು ಇತ್ತು. ಹೊರ ಹರಿವು ನದಿಗೆ 4000 ಕ್ಯುಸೆಕ್ ಆಗಿದೆ.

**ನಗರಸಭೆಯ ಸಿಬ್ಬಂದಿಗಳು ಜನರ ಜೊತೆ ಮುಖಾಮುಖಿ ಮಾತು**


ಉದಯವಾಹಿನಿ ಚಿತ್ರ

> ಆಗಸ್ಟ್ ತಿಂಗಳಿನಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆಯ ತೀವ್ರತೆ ಹೆಚ್ಚಾಗಲಿದೆ ಎಂದು ಮುನ್ಸೂಚನೆ ನೀಡಲಾಗಿದೆ. ಅಪಾಯ ಸ್ಥಳಗಳಲ್ಲಿ ವಾಸಿಸುತ್ತಿರುವವರಿಗೆ ಈಗಾಗಲೇ ಮಡಿಕೇರಿ ನಗರಸಭೆಯಿಂದ ಖುದ್ದಾಗಿ ನೋಟೀಸ್ ಜಾರಿ ಮಾಡಿರುವುದಲ್ಲದೇ, ನಗರಸಭೆಯ ಸಿಬ್ಬಂದಿಗಳು ಜನರ ಜೊತೆ ಮುಖಾಮುಖಿ ಮಾತನಾಡಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಗೊಳ್ಳಲು ತಿಳಿಸಿದ್ದಾರೆ.

**ನಗರಸಭೆ ಜವಾಬ್ದಾರರಲ್ಲ**

ಇದನ್ನು ಮೀರಿ ಅಲ್ಲೇ ವಾಸವಿದ್ದು, ಯಾವುದೇ ರೀತಿಯಲ್ಲಿ ಅನಾಹುತ ಅವಘಡ ಸಂಭವಿಸಿದಲ್ಲಿ, ಮುಂದಿನ ಆಗುಹೋಗುಗಳಿಗೆ ನಗರಸಭೆ ಜವಾಬ್ದಾರರಲ್ಲ ಎಂದು ನಗರಸಭೆ ತಿಳಿಸಿದೆ. ತುರ್ತು ಸಂದರ್ಭದಲ್ಲಿ ನಗರಸಭೆ ಸಹಾಯವಾಣಿ ದೂರವಾಣಿ ಸಂಖ್ಯೆ 08272-220111 ಅನ್ನು ಸಂಪರ್ಕಿಸಬಹುದು.

---

# ಮಿನಿ ನ್ಯೂಸ್

## ಜೂ. ಕಾಲೇಜು ಉಪನ್ಯಾಸಕರ ನಡುವೆ ಹೊಡೆದಾಟ: ಆಸ್ಪತ್ರೆಗೆ ದಾಖಲು

• ಉದಯವಾಹಿನಿ ಕೋಲಾರ


ಉದಯವಾಹಿನಿ ಚಿತ್ರ

ನಗರದ ಸರ್ಕಾರಿ ಜೂನಿಯರ್ ಕಾಲೇಜು ಉಪನ್ಯಾಸಕರು ಮಂಗಳವಾರ ಬೆಳಿಗ್ಗೆ ಕಾಲೇಜಿನಲ್ಲಿ ಹೊಡೆದಾಡಿಕೊಂಡಿದ್ದಾರೆ. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷರೂ ಆಗಿರುವ ನಾಗಾನಂದ ಕೆಂಪರಾಜು ಹಾಗೂ ಜೆ.ಜಿ.ನಾಗರಾಜ್ ನಡುವೆ ಜಗಳ ನಡೆದಿದೆ.

ಕನ್ನಡ ಉಪನ್ಯಾಸಕ ನಾಗರಾಜ್ ಅವರ ಮುಖ ಊದಿಕೊಂಡಿದ್ದು, ಎಸ್ ಎನ್ ಆರ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ರಾಜ್ಯಶಾಸ್ತ್ರ ಉಪನ್ಯಾಸಕ ನಾಗಾನಂದ ಕೆಂಪರಾಜು ಹಲ್ಲೆ ನಡೆಸಿದರು ಎಂದು ನಾಗರಾಜ್ ಆರೋಪಿಸಿದರು. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ನಾಗಾನಂದ ಕೂಡ ಆಸ್ಪತ್ರೆಗೆ ದಾಖಲು. ಜಿಲ್ಲಾ ಕಸಾಪ ಅಧ್ಯಕ್ಷ ಸ್ಥಾನ ಚುನಾವಣೆಯಲ್ಲಿ ಸೋತಿದ್ದ ನಾಗಾನಂದ ನಿತ್ಯ ಹಿಂಸೆ ಕೊಡುತ್ತಿದ್ದರು. ವಾಟ್ಸ್ ಆಯಪ್ ನಲ್ಲಿ ನಿತ್ಯ ಕೆಟ್ಟದಾಗಿ ಸಂದೇಶ ಕಳುಹಿಸುತ್ತಿದ್ದರು. ಅದನ್ನು ಪ್ರಶ್ನಿಸಿದ್ದಕ್ಕೆ ಹಲ್ಲೆ ನಡೆಸಿದ್ದಾರೆ, ಬಲವಾಗಿ ಕೆನ್ನೆಗೆ ಬಾರಿಸಿದರು' ಎಂದರು. ನಗರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸದಾನಂದ ಆಸ್ಪತ್ರೆಗೆ ಭೇಟಿ ನೀಡಿ ಮಾಹಿತಿ ಪಡೆದರು. ಕಸಾಪ ಪದಾಧಿಕಾರಿಗಳು, ಕನ್ನಡ ಹಾಗೂ ಇತರ ಸಂಘಟನೆಗಳ ಹೋರಾಟಗಾರರ ಆಸ್ಪತ್ರೆಗೆ ಭೇಟಿ ನೀಡಿದರು. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ನಾಗಾನಂದ ಕೂಡ ಆಸ್ಪತ್ರೆಗೆ ದಾಖಲಾಗಿದ್ದಾರೆ. ನನ್ನ ಮೇಲೆ ಮೊದಲು ಹಲ್ಲೆ ನಡೆಸಿದ್ದು ಜೆ.ಜಿ.ನಾಗರಾಜ್ ಎಂದು ಆರೋಪ ಮಾಡಿದ್ದಾರೆ.

## ಸವಿತಾ ಸಮಾಜಕ್ಕೆ ಮನ್ನಣೆ ಸಿಗಲಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕನಕಪುರ

ಬಸವಣ್ಣನವರ ಅನುಯಾಯಿಯಾಗಿ ಸಾಮಾಜಿಕ ಕ್ರಾಂತಿಗೆ ಮುನ್ನುಡಿ ಬರೆದ ಹಡಪದ ಅಪ್ಪಣ್ಣನವರ ಸಮುದಾಯದ ಸವಿತಾ ಸಮಾಜಕ್ಕೆ ಸಾಮಾಜಿಕ ಸ್ಥಾನಮಾನಗಳು ಸಿಗಬೇಕು' ಎಂದು ತಹಶೀಲ್ದಾರ್ ಶಿವಕುಮಾರ್ ತಿಳಿಸಿದರು. ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿಯಿಂದ ನಡೆದ ಹಡಪದ ಅಪ್ಪಣ್ಣ ಜಯಂತಿಯಲ್ಲಿ ಮಾತನಾಡಿದರು. ಧಮ್ಮ ದೀವಿಗೆ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ ಮಾತನಾಡಿ, 'ಅಪ್ಪಣ್ಣನವರು ಸಮಾಜದ ಶೋಷಿತ ವರ್ಗಗಳನ್ನು ಮುಖ್ಯ ವಾಹಿನಿಗೆ ತರಲು ವಚನಗಳ ಮೂಲಕ ಕ್ರಾಂತಿಕಾರಿ ಹೋರಾಟ ನಡೆಸಿದರು. ಇಂದು ಅವರದೇ ಸಮಾಜಕ್ಕೆ ಮನ್ನಣೆ ಇಲ್ಲದಾಗಿದೆ' ಎಂದರು.

ಪ್ರಗತಿಪರ ಸಂಘಟನೆಯ ಕುಮಾರಸ್ವಾಮಿ, ಮುಖಂಡ ನೀಲಿ ರಮೇಶ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಯು.ಸಿ.ಕುಮಾರ್, ನಗರಸಭಾ ಸದಸ್ಯ ಸ್ಟುಡಿಯೋ ಚಂದ್ರು, ಯುವಶಕ್ತಿ ವೇದಿಕೆ ಶ್ರೀನಿವಾಸ್, ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ವಿವಿಧ ಸಂಘಟನೆ ಮುಖಂಡರು ಉಪಸ್ಥಿತರಿದ್ದರು.

## ಗೃಹಲಕ್ಷ್ಮಿ ಶೇ. 98.98, ಅನ್ನಭಾಗ್ಯ ಶೇ. 98 ಸಾಧನೆ

• ಉದಯವಾಹಿನಿ ಮಡಿಕೇರಿ

ಗೃಹಲಕ್ಷ್ಮಿ' ಯೋಜನೆಯಡಿ ಶೇ 98.98, ಅನ್ನಭಾಗ್ಯ ಯೋಜನೆಯಡಿ ಶೇ 98ರಷ್ಟು ಪ್ರಗತಿ ಸಾಧಿಸಲಾಗಿದೆ ಎಂಬ ವಿಷಯ ಇಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಸ್ತಾಪವಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಗ್ಯಾರಂಟಿ ಯೋಜನೆಗಳ ಪ್ರಗತಿ ಸಂಬಂಧಿಸಿದಂತೆ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಜ ಉತ್ತಪ್ಪ ಮಾತನಾಡಿ, ಸರ್ಕಾರ ಶಕ್ತಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ ಹಾಗೂ ಅನ್ನಭಾಗ್ಯ ಯೋಜನೆಯನ್ನು ಜಾರಿಗೊಳಿ ಸಿದ್ದು, ಈ ಯೋಜನೆಗಳನ್ನು ಅರ್ಹರಿಗೆ ತಲುಪಿಸಬೇಕು' ಎಂದು ನಿರ್ದೇಶನ ನೀಡಿದರು.

ಗ್ಯಾರಂಟಿ ಯೋಜನೆಗಳಿಂದ ಅರ್ಹರು ವಂಚಿತರಾಗದಂತೆ ಗಮನ ಹರಿಸುವುದು ಅಧಿಕಾರಿಗಳ ಜವಾಬ್ದಾರಿ. ಆ ನಿಟ್ಟಿನಲ್ಲಿ ಸರ್ಕಾ ರದ ಉದ್ದೇಶ ಮತ್ತು ಆಶಯದಂತೆ ಗ್ಯಾರಂಟಿ ಯೋಜನೆಗಳನ್ನು ತಲುಪಿಸಬೇಕು ಎಂದು ಸೂಚಿಸಿದರು. ಶಕ್ತಿ, ಗೃಹಲಕ್ಷ್ಮಿ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಹೀಗೆ ಪಂಚ ಯೋಜನೆಗಳು ತಲುಪಿದಾಗ ಸರ್ಕಾರಕ್ಕೆ ಹೆಸರು ಬರಲಿದೆ. ಆ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದರು. ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಸಮಸ್ಯೆಗಳು ಇದ್ದಲ್ಲಿ ಮಾಹಿತಿ ನೀಡಬೇಕು ಎಂದೂ ಅವರು ಹೇಳಿದರು.

## ಪಟ್ಟಣದಲ್ಲಿ ಕಸ ವಿಲೇವಾರಿಗೆ ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿದ್ದಾಪುರ

ಸಾಂಕ್ರಾಮಿಕ ರೋಗ ಹರಡುವ ಮುನ್ನವೇ ಕಸವಿಲೇವಾರಿ ಮಾಡಬೇಕೆಂದು ಸಿ.ಪಿ.ಐ.ಎಂ ಪಕ್ಷದ ಮುಖಂಡರಾದ ಡಾ.ಐ.ಆರ್ ದುರ್ಗಾಪ್ರಸಾದ್ ಒತ್ತಾಯಿಸಿದರು. ಸಿ.ಪಿ.ಐ(ಎಂ) ಪಕ್ಷದಿಂದ ವಿವಿಧ ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿ ಸಿದ್ದಾಪುರ ಪಂಚಾಯಿತಿ ಮುಂಭಾಗ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದರು. ಸಿದ್ದಾಪುರದಲ್ಲಿ ಸೂಕ್ತ ಕಸವಿಲೇವಾರಿಯಾಗದೇ ಗ್ರಾಮಕ್ಕೆ ಬರುವವರನ್ನು ಕಸದ ರಾಶಿ ಗಳು ಸ್ವಾಗತಿಸುತ್ತಿವೆ. ಪಟ್ಟಣದ ವಿವಿಧ ಭಾಗಗಳಲ್ಲಿ ಕಸದ ರಾಶಿ ತುಂಬಿದ್ದು, ದುರ್ನಾತ ಬೀರುತ್ತಿದೆ. ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳ ಭೀತಿ ಇದೆ. ಗ್ರಾಮ ಪಂಚಾಯಿತಿ ನಿರ್ಲಕ್ಷ್ಯ ವಹಿಸುತ್ತಿದೆ. ಗ್ರಾ.ಪಂ ಸಮರ್ಪಕವಾಗಿ ಕಸ ವಿಲೇವಾರಿ ಮಾಡಬೇಕು. ಕೆಲ ಸದಸ್ಯರು ತಮ್ಮ ಸ್ವಾರ್ಥಕ್ಕೆ ಕೆಲಸ ಮಾಡುತ್ತಿದ್ದು, ಪಂಚಾಯಿತಿ ಜನತೆಗೆ ಮೂಲ ಸೌಲಭ್ಯ ಒದಗಿಸುವಲ್ಲಿ ವಿಫಲವಾಗಿದೆ' ಎಂದು ಆರೋಪಿಸಿದರು.

ಪಕ್ಷದ ಜಿಲ್ಲಾ ಕಾರ್ಯದರ್ಶಿ ಹೆಚ್.ಬಿ ರಮೇಶ್ ಮಾತನಾಡಿ, ಗ್ರಾ.ಪಂ. ನಿರ್ಲಕ್ಷ್ಯದಿಂದ ಪಟ್ಟಣದಲ್ಲಿ ಕಸದ ರಾಶಿ ದಿನದಿಂದ ದಿನಕ್ಕೆ ಬೆಳೆಯುತ್ತಿದೆ. ಈ ಭಾಗದಲ್ಲಿ ಡೆಂಗಿ ಪ್ರಕರಣಗಳು ಹೆಚ್ಚಾಗುತ್ತಿದ್ದು, ಜನತೆ ಸಂಕಷ್ಟದಲ್ಲಿದ್ದಾರೆ. ಶುಚಿತ್ವ ಕಾಪಾಡುವ ನಿಟ್ಟಿನಲ್ಲಿ ಕಾರ್ಯಪ್ರವೃತರಾಗಬೇಕು. 2019ರ ಪ್ರವಾಹದಲ್ಲಿ ಮನೆ ಕಳೆದುಕೊಂಡ ಸಂತ್ರಸ್ತರಿಗೆ ಈವರೆಗೂ ನಿವೇಶನ ನೀಡಿಲ್ಲ. ನಿವೇಶನ ರಹಿತರಿಗೆ ನಿವೇಶನ ಕಲ್ಪಿಸಬೇಕೆಂದು ಒತ್ತಾಯಿಸಿದರು.

ಅಂತರಾಳದಿಂದ...
EDITORIAL

# ಇದು ಅವೈಜ್ಞಾನಿಕ ಅಭಿವೃದ್ಧಿ

## ಯೋಜನೆಗಳ ದುಷ್ಪರಿಣಾಮ

ಕಳೆದ ಒಂದೆರಡು ವಾರಗಳ ಕಾಲಾವಧಿಯಲ್ಲಿ ವರ್ಷಧಾರೆಯಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಈಗ ಮಳೆಯ ಆರ್ಭಟ ಕೊಂಚ ಕಡಿಮೆಯಾಗಿದೆ. ಆದರೆ ಬಹುತೇಕ ಅಣೆಕಟ್ಟುಗಳು ತುಂಬಿ ತುಳುಕುವ ಹಂತಕ್ಕೆ ತಲುಪಿರುವುದರಿಂದ ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಹೊರಗೆ ಬಿಡುತ್ತಿರುವುದರಿಂದ ನದಿ ಪಾತ್ರದ ಪ್ರದೇಶಗಳಲ್ಲಿ ಪ್ರವಾಹದ ಆತಂಕ ಉಂಟಾಗಿದೆ. ವಿಜಯಪುರ ಜಿಲ್ಲೆಯ ಆಲಮಟ್ಟಿ ಹಾಗೂ ಮಂಡ್ಯ ಜಿಲ್ಲೆಯ ಕೃಷ್ಣ ರಾಜ ಸಾಗರ ಜಲಾಶಯಗಳಿಂದ ಮುಂಜಾಗ್ರತಾ ಕ್ರಮವಾಗಿ ಶನಿವಾರ ನೀರನ್ನು ಬಿಡಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಣೆಕಟ್ಟಿಗೆ ನೀರಿನ ಹರಿವು ಹೆಚ್ಚಾಗುತ್ತಲೇ ಇದೆ. ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಅಲ್ಲಲ್ಲಿ ಮನೆಗಳು ಮತ್ತು ಗುಡ್ಡಗಳು ಕುಸಿದು ಸಾವುನೋವುಗಳು ಸಂಭವಿಸಿದ ವರದಿಗಳು ಬರುತ್ತಲೇ ಇವೆ. ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಶಿರೂರಿನಲ್ಲಿ ಗುಡ್ಡ ಕುಸಿದ ಸಂದರ್ಭದಲ್ಲಿ ಕಣ್ಮರೆಯಾದ 11 ಜನರಲ್ಲಿ ಏಳು ಮಂದಿಯ ಕಳೇಬರಗಳು ಸಿಕ್ಕಿವೆ. ಇದಲ್ಲದೆ ಅಲ್ಲಲ್ಲಿ ಇನ್ನಿತರ ಅವಘಡಗಳು ಸಂಭವಿಸಿವೆ. ಮಳೆಗಾಲದಲ್ಲಿ ಭೂ ಕುಸಿತ ಕರ್ನಾಟಕಕ್ಕೆ ಹೊಸದಲ್ಲ. 2018ರಲ್ಲೂ ಕೊಡಗು ಜಿಲ್ಲೆಯಲ್ಲಿ ವ್ಯಾಪಕ ಭೂ ಕುಸಿತದ ಪರಿಣಾಮವಾಗಿ 20 ಮಂದಿ ಅಸುನೀಗಿದ್ದರು. 4,000 ಮನೆಗಳು ಕುಸಿದಿದ್ದವು. ನೂರಾರು ಎಕರೆ ಕಾಫಿ ಬೆಳೆ ನಾಶವಾಗಿತ್ತು ಹಿಂದಿನ ಅನುಭವದ ಹಿನ್ನೆಲೆಯಲ್ಲಿ ಸರಕಾರ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬಹುದಿತ್ತು. ಇಂತಹ ಸಂದರ್ಭದಲ್ಲಿ ಪ್ರತಿಪಕ್ಷಗಳು ಸರಕಾರದ ಗಮನ ಸೆಳೆಯಬಹುದಿತ್ತು. ಆದರೆ ಅದಾಗುತ್ತಿಲ್ಲ. ಹೀಗಾಗಿ ಮಳೆ, ಪ್ರವಾಹ ಹಾಗೂ ಭೂಕುಸಿತದಿಂದ ತತ್ತರಿಸಿದ ಜನರನ್ನು ಕೇಳುವವರೇ ಇಲ್ಲದಂತಾಗಿದೆ.ಎರಡು ವಿಪರೀತ ಹವಾಮಾನ ಪರಿಸ್ಥಿತಿಯನ್ನು ಎದುರಿಸಿದ ಕರ್ನಾಟಕ ಇಂತಹ ಸಂದರ್ಭದಲ್ಲಿ ವಿಶೇಷ ಎಚ್ಚರ ವಹಿಸಬೇಕಾಗುತ್ತದೆ.

**ಗುಡ್ಡ ಕುಸಿದ ಶಿರೂರು ಗ್ರಾಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಾನುವಾರ ಭೇಟಿ ನೀಡಿ ಪರಿಹಾರ ಕಾರ್ಯಗಳ ಪರಿಶೀಲನೆ ನಡೆಸಿದ್ದಾರೆ. ಪರಿಹಾರ ಕಾರ್ಯ ಮುಗಿದ ನಂತರ ಕಳಪೆ ಕಾಮಗಾರಿಗೆ ಕಾರಣರಾದ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಮುಖ್ಯಮಂತ್ರಿಗಳು ಹೇಳಿದ್ದಾರೆ.**

ಐದಾರು ತಿಂಗಳ ಹಿಂದೆ ಮಳೆಯ ಅಭಾವದಿಂದ ರಾಜ್ಯದ 123 ತಾಲ್ಲೂಕುಗಳಲ್ಲಿ ಬರಗಾಲದ ಪರಿಸ್ಥಿತಿ ಉಂಟಾಗಿತ್ತು ಈಗ ವಿಪರೀತ ಮಳೆ ಬೀಳುತ್ತಿದೆ. ಇಂತಹ ಸಂದರ್ಭದಲ್ಲಿ ನೀರನ್ನು ಸಂಗ್ರಹಿಸಿ ಬೇಸಿಗೆಯಲ್ಲಿ ಬಳಸಿಕೊಳ್ಳಲು ಸಣ್ಣಪುಟ್ಟ ಅಣೆಕಟ್ಟು ಕೆರೆಗಳನ್ನು ನಿರ್ಮಿಸಿ ಮಳೆಯ ನೀರನ್ನು ಸದುಪಯೋಗ ಮಾಡಿಕೊಳ್ಳುವ ಯೋಜನೆ ರೂಪಿಸಬೇಕಾಗಿತ್ತು ಆದರೆ ಮಳೆ ನೀರು ನಿರ್ವಹಣೆಯಲ್ಲಿ ಇನ್ನೂ ಯಶಸ್ಸು ಸಾಧಿಸಲು ಸಾಧ್ಯವಾಗಿಲ್ಲ. ವಿಪರೀತ ಮಳೆಯಿಂದಾಗಿ ಸಂಭವಿಸುವ ದುರಂತಗಳಿಗೆ ನೈಸರ್ಗಿಕ ಪ್ರಕೋಪದ ಕಾರಣ ಮಾತ್ರವಲ್ಲ ಅಭಿವೃದ್ಧಿಯ ಹೆಸರಿನಲ್ಲಿ ನಡೆದಿರುವ ದುಸ್ಸಾಹಸಗಳೂ ಕಾರಣ. ಅದರಲ್ಲೂ ಪಶ್ಚಿಮ ಘಟ್ಟ ಪ್ರದೇಶ ಸೇರಿದಂತೆ ಕರಾವಳಿ ಹಾಗೂ ಮಲೆನಾಡಿನಲ್ಲಿ ಕಳೆದ ಇಪ್ಪತ್ತು ವರ್ಷಗಳಲ್ಲಿ ಕಡಲ ತೀರಕ್ಕೆ ಸಮಾನಾಂತರವಾಗಿ ಹೆದ್ದಾರಿ, ರೈಲು ಮಾರ್ಗ ಸುರಂಗ ಸೇತುವೆಗಳ ನಿರ್ಮಾಣ ಗಣಿಗಾರಿಕೆ, ಅಕ್ರಮ ಸಾಗುವಳಿ ಮತ್ತು ರೆಸಾರ್ಟ್‌ಗಳ ಹಾವಳಿ ಜೊತೆಗೆ ಹವಾಮಾನ ವೈಪರೀತ್ಯಗಳಿಂದಾಗಿ ಇಂತಹ ದುರಂತಗಳು ಪದೇ ಪದೇ ಸಂಭವಿಸುತ್ತಿವೆ. ವಿಭಿನ್ನ ಶಿಲಾ ರಚನೆಯಿಂದ ಕೂಡಿರುವ ಪಶ್ಚಿಮ ಘಟ್ಟದ ಪ್ರದೇಶಗಳಲ್ಲಿ ಗಿಡ ಮರಗಳ ಸಾಂದ್ರತೆ ಹಾಗೂ ನೀರನ್ನು ಹಿಡಿದಿಡುವ ಸ್ವರೂಪವೂ ಏಕರೂಪವಾಗಿಲ್ಲ.ಇಂಥ ಸೂಕ್ಷ್ಮ ಪ್ರದೇಶದಲ್ಲಿ ರಸ್ತೆ ಸೇತುವೆಯಂತಹ ನಿರ್ಮಾಣ ಕಾರ್ಯವನ್ನು ಹಮ್ಮಿಕೊಳ್ಳುವಾಗ ಸಾಕಷ್ಟು ಮುಂಜಾಗ್ರತೆಯನ್ನು ವಹಿಸಬೇಕಾಗುತ್ತದೆ. ತರಾತುರಿಯಲ್ಲಿ ಭಾರೀ ಯಂತ್ರೋಪಕರಣಗಳನ್ನು ಉಪಯೋಗಿಸಿ ಹೆದ್ದಾರಿಗಳನ್ನು ನಿರ್ಮಿಸುವಾಗ ಗುತ್ತಿಗೆದಾರರ ಲೋಪಗಳಿಂದ ಅನಾಹುತಗಳನ್ನು ತಪ್ಪಿಸಲು ಸರಕಾರ ಮುನ್ನೆಚ್ಚರಿಕೆ ವಹಿಸಬೇಕು. ಅಭಿವೃದ್ಧಿ ಯೋಜನೆಗಳು ಜನರ ಹಿತಾಸಕ್ತಿಯನ್ನು ಕಾಪಾಡುವಂತಿರಬೇಕು. ಆದರೆ ದುಡ್ಡಿನ ದಾಹದ ಇಂದಿನ ಅಭಿವೃದ್ಧಿ ಯೋಜನೆಗಳಿಂದ ಮತ್ತೆ ಮತ್ತೆ ಅನಾಹುತಗಳು ಸಂಭವಿಸುತ್ತಲೇ ಇವೆ. ಐದು ವರ್ಷಗಳ ಹಿಂದೆ ಸಕಲೇಶಪುರ ಮತ್ತು ಸುಬ್ರಹ್ಮಣ್ಯದ ರೈಲು ಹಳಿಯ ಮಾರ್ಗದಲ್ಲಿ 35ಕ್ಕೂ ಹೆಚ್ಚು ಕಡೆ ಭೂ ಕುಸಿತ ಸಂಭವಿಸಿತ್ತು. ಕೇರಳ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಗುಡ್ಡ ಕುಸಿತದ ದುರಂತಗಳು ಆಗಾಗ ಸಂಭವಿಸುತ್ತಲೇ ಇವೆ. ನಮ್ಮ ಸರಕಾರಗಳು ಇದನ್ನು ತಡೆಯುವ ಯಾವುದೇ ಶಾಶ್ವತ ಯೋಜನೆಯನ್ನು ರೂಪಿಸಲು ಈವರೆಗೆ ಸಾಧ್ಯವಾಗಿಲ್ಲ. ಮಳೆ ಬರುವುದು ಸಹಜ ಪ್ರಕ್ರಿಯೆ ಜೀವ ಜಗತ್ತಿಗೆ ಮಳೆ ಬೇಕೇ ಬೇಕು. ಮಳೆ ಹನಿ ಕಾಣಿಸಿಕೊಳ್ಳುತ್ತಿದ್ದಂತೆ ರೈತರು ಹುರುಪಿನಿಂದ ಕಾರ್ಯೋನ್ಮುಖರಾಗುತ್ತಾರೆ.ಕೃಷಿ ಚಟುವಟಿಕೆಗಳಿಗೆ ಜೀವ ಬರುತ್ತದೆ. ಆದರೆ ಬೆಳೆ ಕೈಗೆ ಬರುತ್ತದೆ ಎಂಬ ನಿರೀಕ್ಷೆಯಲ್ಲಿರುವಾಗಲೇ ಅನಿರೀಕ್ಷಿತವಾಗಿ ಅರ್ಭಟಿಸಿ ಸುರಿಯುವ ಮಳೆಯಿಂದಾಗಿ ಬೆಳೆಗಳು ನಾಶವಾಗುತ್ತವೆ. ಸರಕಾರ ನೀಡುವ ಬೆಳೆ ನಷ್ಟ ಪರಿಹಾರದ ಮೊತ್ತ ಯಾತಕ್ಕೂ ಸಾಲುವುದಿಲ್ಲ. ಹೀಗಾಗಿ ಮಣ್ಣಿನ ಮಕ್ಕಳ ಬದುಕು ಡೋಲಾಯಮಾನವಾಗುತ್ತದೆ. ಇದು ತಪ್ಪಬೇಕೆಂದರೆ ಇದಕ್ಕೆ ಶಾಶ್ವತ ವೈಜ್ಞಾನಿಕ ಪರಿಹಾರ ಕಂಡು ಹಿಡಿಯಬೇಕು. ಮಳೆಗಾಲದಲ್ಲಿ ರೈತರು ಬೆಳೆಯಬಹುದಾದ ಬೆಳೆಗಳು ಅವುಗಳ ರಕ್ಷಣಾ ಕಾರ್ಯದ ಬಗ್ಗೆ ಕೃಷಿ ಇಲಾಖೆ ರೈತರಿಗೆ ಸೂಕ್ತ ತರಬೇತಿಯನ್ನು ನೀಡಬೇಕು. ಈ ಬಗ್ಗೆ ಸರಕಾರ ಕ್ರಮ ಕೈಗೊಳ್ಳಬೇಕು. ಸಾಮಾನ್ಯವಾಗಿ ಬೇಸಿಗೆ ಕೊನೆಯಾಗುತ್ತಿದ್ದಂತೆ ಮುಂಗಾರು ಕಾಣಿಸಿಕೊಳ್ಳುವ ಸೂಚನೆಗಳು ಸಿಗುತ್ತವೆ. ಆಗ ಸರಕಾರ ನದಿ ತೀರದ ಹಳ್ಳಿಗಳ ಜನರಿಗೆ ಮುನ್ನೆಚ್ಚರಿಕೆಯನ್ನು ನೀಡಬೇಕು. ಆದರೆ ಜಲಾಶಯಗಳಿಂದ ಹೊರ ಹರಿವು ತೀವ್ರ ಸ್ವರೂಪ ತಾಳಿ ಅಪಾಯದ ಹಂತಕ್ಕೆ ತಲುಪಿದ ಕೊನೆಯ ಘಟ್ಟದಲ್ಲಿ ಸ್ಥಳೀಯ ಆಡಳಿತಗಳು ನಿದ್ರೆಯಿಂದ ಎಚ್ಚೆತ್ತು ಜನರ ರಕ್ಷಣೆಗೆ ಮುಂದಾಗುತ್ತವೆ. ಆಗ ಕೈ ಪರಿಸ್ಥಿತಿ ಮೀರಿರುತ್ತದೆ. ಮುಂದೆ ಹೀಗಾಗಬಾರದು. ವಿಪರೀತ ಮಳೆಯಿಂದ ಉಂಟಾಗುವ ಇನ್ನೊಂದು ಅನಾಹುತವೆಂದರೆ ಈಗಾಗಲೇ ದುರ್ಬಲವಾಗಿರುವ ದುರಸ್ತಿ ಕಾಣದ ಸರಕಾರಿ ಶಾಲೆಗಳು ಶಿಥಿಲವಾಗಿ ಕುಸಿದು ಬೀಳುವ ಘಟನೆಗಳು ಹೀಗಾಗಿ ಪೋಷಕರು ಮಕ್ಕಳನ್ನು ಸರಕಾರಿ ಶಾಲೆಗೆ ಸೇರಿಸಲು ಹಿಂಜರಿಯುತ್ತಾರೆ. ಈಗಾಗಲೇ ಖಾಸಗಿ ಶಾಲೆಗಳ ಪೈಪೋಟಿ ಎದುರಿಸುತ್ತಿರುವ ಸರಕಾರಿ ಶಾಲೆಗಳಿಗೆ ಸುರಕ್ಷಿತ ಕಟ್ಟಡ ಒದಗಿಸುವುದು ಅಗತ್ಯವಾಗಿದೆ.




• ಹಿಂದಿನ ಸಂಚಿಕೆಯಿಂದ

ನನ್ನ ಹಿರಿಯರು ನಡೆದು ಬಂದ ದಾರಿಯಲ್ಲೇ ನಾನು ನಡೆಯುವಂತೆ ಮಾಡಿ ಅನುಗ್ರಹಿಸಿರಿ'' ಎನ್ನಲು, ವ್ಯಾಸನು ಸಂತೋಷದಿಂದ ನಗುತ್ತ, ''ನಿನಗೆ ರಾಜ್ಯಾಡಳಿತದ ಬಗ್ಗೆ ಅಷ್ಟೊಂದು ಕುತೂಹಲವಿರುವುದಾದರೆ ನೀನು ಭೀಷ್ಮನನ್ನು ಕೇಳಿ ತಿಳಿದುಕೊಳ್ಳಬೇಕು. ಅವನು ಇದರಲ್ಲೆಲ್ಲ ಪ್ರಕಾಂಡ ಪಂಡಿತ. ಅವನನ್ನು ಚಂದ್ರವಂಶದ ದೊರೆಯನ್ನಾಗಿ ಮಾಡಲು ಅವನ ತಾಯಿ ಗಂಗೆಯು ಸ್ವರ್ಗಕ್ಕೆ ಕರೆದೊಯ್ದು ಬೃಹಸ್ಪತಿಯಿಂದ ರಾಜ್ಯಶಾಸ್ತ್ರವನ್ನೂ ಶುಕ್ರಾಚಾರ್ಯರಿಂದ ನೀತಿಶಾಸ್ತ್ರವನ್ನೂ ವಿಧಿವತ್ತಾಗಿ ಕಲಿಸಿರುವಳು. ಶಂತನುವಿನ ನಂತರ ಅವನೇ ರಾಜನಾಗಬೇಕಾಗಿದ್ದಿತು. ಈ ವಿಚಾರಗಳಲ್ಲಿ ದೇವವ್ರತನಿಗೆ ಸಮಾನರಾದವರು ಯಾರು ಇಲ್ಲ. ಅಷ್ಟವಸುಗಳಲ್ಲಿ ಒಬ್ಬನಾದ ಅವನು ಯಾವಾಗಲೂ ದೇವತೆಗಳ ಸಹವಾಸದಲ್ಲಿದ್ದವನು. ಭಾರ್ಗವನು ಅವನಿಗೆ ಧನುರ್ವಿದ್ಯಾಗುರು. ವಸಿಷ್ಠನಿಂದ ಅವನು ವೇದವೇದಾಂಗಗಳನ್ನೂ, ಮಾರ್ಕಂಡೇಯನಿಂದ ತ್ಯಾಗವನ್ನೂ ಕಲಿತಿರುವನು. ಅವನು ಮೃತ್ಯುರಹಸ್ಯವನ್ನೂ ಸಹ ಬಲ್ಲವನು. ಇವುಗಳೆಲ್ಲವನ್ನೂ ಕುರಿತು ಅವನು ನಿನಗೆ ಹೇಳಿದರೆ, ಅದು ನಿನ್ನ ಅದೃಷ್ಟವೆಂದೇ ತಿಳಿ. ವಿನೀತನಾಗಿ, ಇಚ್ಛಾಪೂರ್ವಕವಾಗಿ ಬಳಿಸಾರಿದರೆ, ಆ ಮಹಾತ್ಮನು ಸಂತೋಷದಿಂದ ತನಗೆ ತಿಳಿದುದನ್ನೆಲ್ಲಾ ಹೇಳುವನು. ಭೀಷ್ಮನ ಬಳಿಗೆ ಈಗಲೇ ಹೋಗಿ ಕೇಳು. ಶರಶಯ್ಯೆಯಲ್ಲಿ ಮಲಗಿ ಅವನು ತನ್ನ ಮೃತ್ಯುವನ್ನು ನಿರೀಕ್ಷಿಸುತ್ತಿರುವನು ಎಂದನು. ಯುಧಿಷ್ಠಿರನು, ಓ ಮಹರ್ಷಿ ಆ ಮಹಾತ್ಮನ ಸನ್ನಿಧಿಯಲ್ಲಿ ಹೋಗಿ ನಾನು ಹೇಗೆತಾನೆ ನಿಲ್ಲಲಿ ದಾಯಾದಿಗಳೆಲ್ಲರ ನಾಶಕ್ಕೆ ಕಾರಣನು ನಾನು. ಇಂತಹ ಪಾಪವನ್ನು ಮಾಡಿರುವ ನನಗೆ ಅವನಲ್ಲಿಗೆ ಹೋಗಿ ನಿಲ್ಲುವ ಧೈರ್ಯವೆಲ್ಲಿ'' ಎನ್ನಲು, ಕೃಷ್ಣನು, ಕಳೆದುಹೋದುದರ ಬಗ್ಗೆ ಅಷ್ಟೊಂದು ಸೂಕ್ಷ್ಮನಾಗಬೇಡ ಯುಧಿಷ್ಠಿರ. ಇದಕ್ಕೆಲ್ಲ ವಿಧಿಯೇ ಕಾರಣ, ನೀನಲ್ಲ ಎಂಬುದು ಎಲ್ಲರಿಗೂ ಗೊತ್ತು. ವ್ಯಾಸನ ಮಾತನ್ನು ಕೇಳು; ಭೀಷ್ಮನ ಬಳಿಗೆ ಹೋಗು. ಇನ್ನೂ ಎಷ್ಟೋ ವರ್ಷಗಳವರೆಗೆ ನೀನು ಆಳಬೇಕಾದ ರಾಜ್ಯದ ಹಿತದೃಷ್ಟಿಯಿಂದಲೂ ಅದು ಒಳ್ಳೆಯದು. ಮಹಾತ್ಮನಾದ ಭೀಷ್ಮನಿಗೆ ಕೌರವರ ಭವಿಷ್ಯವು ಗೊತ್ತಿತ್ತು. ಅದರ ಬಗ್ಗೆ ಸಂದೇಹ ಬೇಡ. ವ್ಯಾಸನು ಹೇಳಿದಂತೆ ಮಾಡು ಎಂದನು. ಅವರೆಲ್ಲರ ಸಲಹೆಯಂತೆ, ಯುಧಿಷ್ಠಿರನು ಭೀಷ್ಮನ ಬಳಿಗೆ ಹೋಗಿ ರಾಜ್ಯವಾಳುವುದು ಹೇಗೆಂಬ ಬಗ್ಗೆ ತಿಳಿಯಬೇಕು ಎಂದು ತೀರ್ಮಾನಿಸಿದನು.

★ ★ ★ ★

ತಿಂಗಳ ಸೂತಕ ಮುಗಿಯಿತು. ಈಗ ಅವರು ಹಸ್ತಿನಾಪುರಕ್ಕೆ ಹೋಗಬಹುದಾಗಿತ್ತು. ಯುಧಿಷ್ಠಿರನ ಮನಸ್ಸು ಶಾಂತವಾಗಿತ್ತು. ಹಗಲು ರಾತ್ರಿ ಋಷಿಗಳ ಜೊತೆಗೆ ಕಾಲ ಕಳೆದುದರಿಂದ ಇಷ್ಟು ವರ್ಷಗಳೂ ಗಗನಕುಸುಮವಾಗಿದ್ದ ಮನಶ್ಶಾಂತಿ ಯುಧಿಷ್ಠಿರನಿಗೆ ನಿಜವಾಗಿ ದೊರಕಿತ್ತು. ಈಗ ಪ್ರತಿಯೊಂದರ ಮೌಲ್ಯವನ್ನೂ ಅವನು ಅರಿತುಕೊಂಡನು.

**ಮುಂದುವರಿಯುವುದು...**

# ಶಾಹು ಮಹಾರಾಜರ ಜನ್ಮ ದಿನಾಂಕ ಬೆನ್ನತ್ತಿ ಹೋದಾಗ...



ಅಶ್ವಜೀತ ದಂಡಿನ
• ಉದಯವಾಹಿನಿ, ವಿಶೇಷ

**ಮಹಾರಾಷ್ಟ್ರ ಸರ್ಕಾರ ಆಚರಣೆ**



ಒಂದು ಸುಳ್ಳನ್ನು ಸಾವಿರ ಬಾರಿ ಹೇಳಿದರೆ ಸತ್ಯವಾಗುತ್ತದೆ ಎನ್ನುವ ಮಾತಿನಂತೆ ಇತಿಹಾಸದುದ್ದಕ್ಕೂ ಪಟ್ಟಬದ್ರ ಹಿತಾಸಕ್ತಿಗಳು ಕೆಲವೊಂದಿಷ್ಟು ಸುಳ್ಳುಗಳನ್ನೆ ಸತ್ಯವೆಂದು ಹೇಳುತ್ತಾ ಅಮಾಯಕ ಮುಗ್ಧ ಜನರ ತಲೆ ತುಂಬುತ್ತಾ ಬಂದಿದ್ದಾರೆ. ಪ್ರಸ್ತುತ ದಿನಗಳಲ್ಲಿಯೂ ಇದು ಮುಂದುವರೆಯುತ್ತಿರುವುದು ನಾವು ಕಣ್ಣಾರೆ ಕಾಣುತ್ತಿದ್ದೇವೆ.

ಇತಿಹಾಸದಲ್ಲಿ ಸೇರ್ಪಡೆಯಾಗುವ ಒಂದು ತಪ್ಪು ಮಾಹಿತಿ ಮುಂದಿನ ಪೀಳಿಗೆಗಳಲ್ಲಿ ಗೊಂದಲಗಳನ್ನು ಸೃಷ್ಟಿಸಿ ಸತ್ಯ ಯಾವುದು, ಸುಳ್ಳು ಸುಳ್ಯಾವುದೆಂದು ತಿಳಿಯದಂತೆ ಮಾಡಿಬಿಡುತ್ತದೆ. ಕೊನೆಗೆ ಆ ಇತಿಹಾಸವು ಕಥೆಯಾಗಿ ಮಾರ್ಪಟ್ಟು ತನ್ನ ಮಹತ್ವವನ್ನು ಕಳೆದುಕೊಳ್ಳುತ್ತದೆ. ನಮ್ಮ ಬಹುಜನ ನಾಯಕರ ಚರಿತ್ರೆಯು ಹೀಗಾಗದಂತೆ ಪ್ರಜ್ಞಾವಂತರು ಇಂದೆ ಎಚ್ಚೆತ್ತುಕೊಳ್ಳಬೇಕು.

ಪ್ರಸ್ತುತ ದಿನಗಳಲ್ಲಿ ಸಾಮಾಜಿಕ ಜಾಣತನಗಳಾದ ಗೂಗಲ್ ವಾಟ್ಸಾಪ್ ಫೇಸ್ಬುಕ್ ಟ್ವಿಟ್ಟರ್ ಇತ್ಯಾದಿ app ಗಳಲ್ಲಿ ಯಾರಾದರೊಬ್ಬರು ತಮ್ಮ ಅಭಿರುಚಿಗೆ ತಕ್ಕಂತೆ ತನ್ನಗಿಷ್ಟವಾದಂತ ವಿಷಯ ಹಂಚಿಕೊಂಡಾಗ ಅದು ಅವರ ಸ್ನೇಹ ಸಂಪರ್ಕದಲ್ಲಿ ಇರುವವರಿಗೆ ಇಷ್ಟವಾದರೆ ಅದನ್ನು ಹಂಚಿಕೊಳ್ಳುವುದು ಅಥವಾ ನಕಲು ಮಾಡಿ(copy paste) ತಮ್ಮ ಹೆಸರಿನ ಮುಖ ಪುಟದಲ್ಲಿ ಬರೆದುಕೊಳ್ಳುವುದು ಸಾಮಾನ್ಯವಾದ ವಿಷಯ. ಆದರೆ, ಈ ರೀತಿ ಹಂಚಿಕೊಳ್ಳುವಾಗ ಶೇ.90% ರಷ್ಟು ಜನರು ಅದು ಸತ್ಯವೂ ಅಥವಾ ಸುಳ್ಳೋ ಎಂಬ ನಿಜಾಂಶ ತಿಳಿಯುವ ಪ್ರಯತ್ನ ಮಾಡುವುದಿಲ್ಲ. ಅವರು ಪೋಸ್ಟ್ ಹಾಕಿದ ಮೇಲೆ ಇದು ಸತ್ಯವೇ ಇರಬಹುದು ಎಂದು ಕುರುಡಾಗಿ ನಂಬಿ ಹಲವು ಜನರು ಹಂಚಿಕೊಳ್ಳುತ್ತಿರುವುದು ಬಹು ದೊಡ್ಡ ದುರಂತ. ಹೀಗೆ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವ ವಿಷಯವು ಒಬ್ಬರಿಂದ ಒಬ್ಬರಿಗೆ ಹರಡಿ ಕೊನೆಗೆ ಸಾವಿರ, ಸಾವಿರದಿಂದ ಲಕ್ಷ ಜನರಿಗೆ ತಲುಪಿ ಕೆಲವೇ ಸಮಯದಲ್ಲಿ ಬಹು ದೊಡ್ಡ ಸುದ್ದಿಯಾಗಿ ಪ್ರಸಾರವಾಗುತ್ತಿದೆ.

ಈ ಸುಳ್ಳಿನ ದುರಂತದ ಕಥೆ ಇಲ್ಲಿಗೆ ನಿಲ್ಲುವುದಿಲ್ಲ. ಸರಿಯಾಗಿ ವರ್ಷ ಕಳೆದರೆ ಸಾಕು ಈ ಫೇಸ್ಬುಕ್ 'ನಿಮ್ಮ ಇಂದಿನ ಸ್ಮರಣೆ' ಅಂತ ಮತ್ತೆ ನೆನಪಿಸುತ್ತದೆ. ಹೀಗೆ ಪ್ರತಿ ವರ್ಷ ಅ ಸುಳ್ಳಿನಿಂದ ಕೂಡಿದ ವಿಷಯವು ಮತ್ತೆ ಮತ್ತೆ ಮರುಕಳಿಸುವುದರಿಂದ ಕೆಲವೇ ವರ್ಷಗಳಲ್ಲಿ ಜನ ಅ ಸುಳ್ಳನೆ ಸತ್ಯವೆಂದು ಬಲವಾಗಿ ನಂಬಿ ಬಿಡುತ್ತಾರೆ. ಹೀಗೆ ಸುಳ್ಳಿನ ಸುರುಳಿಯ ಸುಳಿಗೆ ಸಿಕ್ಕು ಬಲಿಯಾಗುತ್ತಿರುವುದು ಮೀಸಲಾತಿಯ ಜನಕ, ಲೋಕಮಾನ್ಯ, ಛತ್ರಪತಿ ಶಾಹು ಮಹಾರಾಜರ ಜನ್ಮ ದಿನಾಂಕವು ಒಂದು. ಇತ್ತೀಚೆಗೆ ಕಳೆದ ಆರು ವರ್ಷಗಳಿಂದ ಜುಲೈ 26 ರಂದಿದ ಛತ್ರಪತಿ ಶಾಹು ಮಹಾರಾಜರ ಜಯಂತಿಯು ಕೆಲವೊಂದಿಷ್ಟು ಸಂಘಟನೆಯವರು ಜೂನ್ 26 ರಂದು ಆಚರಿಸುತ್ತಾ ಬರುತ್ತಿದ್ದಾರೆ. ಅಷ್ಟೇ ಅಲ್ಲ ಸಾರ್ವಜನಿಕರು ಸಹ ಈ ಸಂಘಟಕರು ಆಚರಿಸುತ್ತಿರುವುದು ನೋಡಿ ತಾವು ಕೂಡ ಜೂನ್ 26 ರಂದೆ ಆಚರಿಸುತ್ತಿದ್ದಾರೆ. ಇದರಲ್ಲಿ ಸಾಹಿತಿಗಳು ಮತ್ತು ವಿದ್ಯಾವಂತ ನಾಗರಿಕರು ಸೇರಿರುವುದು ಬಹು ದೊಡ್ಡ ದುರಂತವೇ ಸರಿ. ಈ ದುರಂತಕ್ಕೆ ದೇವೇಂದ್ರ ಫಡ್ನವಿಸ್ ನೇತೃತ್ವದ ಮಹಾರಾಷ್ಟ್ರದ ಬಿಜೆಪಿ ಮತ್ತು ಶಿವಸೇನ ಮೈತ್ರಿ ಸರ್ಕಾರವೇ ಕಾರಣ ಎಂದು ಹೇಳಿದರೆ ತಪ್ಪಾಗಲಾರದು. ಅ ವೇಳೆಗೆ ಮಹಾರಾಷ್ಟ್ರದ ಪಾಲ್ಘರ್ ಕ್ಷೇತ್ರದಲ್ಲಿ ಮರು ಚುನಾವಣೆ ಇದಿತ್ತು. ಜನರ ಗಮನ ತನ್ನ ಕಡೆಗೆ ಸೆಳೆಯಲು ಅವರಿಗೆ ಒಂದು ವೇದಿಕೆ ಬೇಕಾಗಿತ್ತು ಅಷ್ಟೇ, ಈ ವೇಳೆಗೆ ಅವರ ಗಮನಕ್ಕೆ ಬಂದಿದ್ದು ಶಾಹು ಮಹಾರಾಜರ ಜಯಂತಿ, ಆಗ ಶಾಹು ಮಹಾರಾಜರ ಜಯಂತಿ ಕಾರ್ಯಕ್ರಮವೇ ರಾಜಕೀಯ ವೇದಿಕೆಯಾಗಿ ಪರಿವರ್ತಿಸಿ ಕೊಂಡು ಜೂನ್ 26 ರಂದು ಅತ್ಯಂತ ವೈಭವದಿಂದ ಆಚರಿಸಿ ತನ್ನ ಸ್ವಾರ್ಥಕ್ಕಾಗಿ ದುರುಪಯೋಗ ಪಡಿಸಿಕೊಂಡು ಶಾಹು ಮಹಾರಾಜರ ಜನ್ಮ ದಿನಾಂಕದ ತಪ್ಪು ಮಾಹಿತಿಯ ಬಿಜ ಈ ಸಮಾಜದಲ್ಲಿ ಬಿತ್ತಿ ಗೊಂದಲಗಳನ್ನು ಸೃಷ್ಟಿಸಿ ಬಿಟ್ಟರು. ಇವರ ಈ ಕುತಂತ್ರ ಬುದ್ಧಿ ಅರಿಯದ ಕೆಲವು ಬಹುಜನರು ಇಂದಿಗೂ ಅದೇ ಗೊಂದಲದ ಚಕ್ರಮೊಹದಲ್ಲಿ ಸಿಲುಕಿ ಕೆಸರಲ್ಲಿ ಬಿದ್ದು ಒದ್ದಾಡುತ್ತಿದ್ದಾರೆ. ಮಹಾರಾಷ್ಟ್ರ ಸರ್ಕಾರ ಆಚರಿಸಿದ ಶಾಹು ಮಹಾರಾಜರ ಈ ತಪ್ಪಾದ ಜನ್ಮ ದಿನಾಂಕವೆ ಆಧಾರವಾಗಿಟ್ಟುಕೊಂಡು Google ಬಳಕೆದಾರರು Google ನಲ್ಲಿ ತಪ್ಪು ಮಾಹಿತಿ ಸೇರಿಸಿದ್ದಾರೆ. ಈ ಎರಡನ್ನು ಆಧಾರವಾಗಿಟ್ಟುಕೊಂಡು ಕೆಲವೊಂದಿಷ್ಟು ಯುವ ಸಾಹಿತಿಗಳು ಶಾಹು ಮಹಾರಾಜರ ಕುರಿತು ಲೇಖನಗಳು ಬರೆದು ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದಾರೆ. ಸಾಮಾಜಿಕ ಜಾಲತಾಣದಲ್ಲಿ ದೊರೆಯುವ ಬಹುತೇಕ ಲೇಖನಗಳು ಇಂತಹವೆ ಆಗಿವೆ. ಈ ಬರಹಗಳ ಕುರಿತು ನಾನು ನಿಖರವಾಗಿ ಹೇಳಬಲ್ಲೆ ಇವೆಲ್ಲವೂ ಇತ್ತಿಚಿನ ಆರು ಏಳು ವರ್ಷಗಳ ಬರಹಗಳಷ್ಟೇ ಅದಕ್ಕಿಂತ ಹಳೆಯವನ್ನು ಅಲ್ಲ.! ಬೇಕಾದರೆ, ತಾವು ಚೆಕ್ ಮಾಡಿ ನೋಡಬಹುದು. ಇತ್ತೀಚಿನ ದಿನಗಳಲ್ಲಿ ಕೆಲವೊಂದಿಷ್ಟು ಬರಹಗಾರರು ಯಾವುದಾದರೊಂದು ವಿಷಯಕ್ಕೆ ಮಾಹಿತಿ ಕಲೆಹಾಕಬೇಕಾದರೆ Google ವಿಕಿಪೀಡಿ ಇತ್ಯಾದಿ ಜಾಲತಾಣಗಳ ಮೊರೆ ಹೋಗುತ್ತಿದ್ದಾರೆ. ಈ Google ಕ್ಷಣ ಮಾತ್ರದಲ್ಲಿ ಮಾಹಿತಿ ಒದಗಿಸುವಬಲದು. ಆದರೆ, ಈ ಜಾಲತಾಣಗಳಲ್ಲಿ ಇರುವುದೆಲ್ಲವೂ ಸತ್ಯವಲ್ಲ! ಇಲ್ಲಿ ಕೆಲವೊಂದಿಷ್ಟು ಮಾಹಿತಿಗಳು ಶೇ.40% ಸುಳ್ಳುಗಳಿಂದ ಕೂಡಿವೆ. ಯಾವ ಮಟ್ಟಕೆಂದರೆ ಸತ್ಯ ಯಾವುದು ಸುಳ್ಳು ಯಾವುದೆಂದು ತಿಳಿಯದ ಮಟ್ಟಿಗೆ.!ಹೀಗೆ Google ವಿಕಿಪೀಡಿ ಆಧಾರವಾಗಿಟ್ಟುಕೊಂಡು ಬರೆಯುವ ಬರಹಗಾರರಿಗೆ ವಾಟ್ಸಾಪ್ ಯುನಿವರ್ಸಿಟಿಯ ಬರಹಗಾರರು ಅಂತ ವ್ಯಂಗ್ಯವಾಗಿ ಕರೆಯಲಾಗುತ್ತದೆ. ಈ Google ನಲ್ಲಿ ಇರುವುದೆಲ್ಲವು ಸತ್ಯ , ನಿಖರವಲ್ಲದ ಕಾರಣ ಇವರ ಬರಹಗಳಲ್ಲಿ ಸಾಮಾನ್ಯವಾಗಿ ತಪ್ಪುಗಳು ಹಾಗೂ ಗೊಂದಲಗಳು ಕಂಡುಬರುತ್ತವೆ.

ಖ್ಯಾತ ವಿಚಾರವಾದಿಗಳಾದ ಡಾ. ಎಚ್. ಎಸ್. ಅನುಪಮಾ ಅವರು ಹೇಳು ವಂತೆ 'Social Mediaವನ್ನ ಎಷ್ಟು ಬೇಕೋ ಅಷ್ಟೇ ತಗೋಬೇಕು ಅತಿಯಾದರೆ ಅದು ವಿಷ್ಯವಾಗುದು ಸಹಜ.! ಹಾಗಾಗಿ ಬರಹಗಾರರು ಈ Social Mediaದ ಬಳಕೆ ಕಡಿಮೆ ಮಾಡಿ ಪುಸ್ತಕ ಓದುವ ಹವ್ಯಾಸ ಬೆಳೆಸಿಕೊಂಡು ಆಳವಾದ ಅಧ್ಯಯನ ಮಾಡುವುದರ ಮೂಲಕ ತಪ್ಪಿಲ್ಲದ ನಿಖರವಾದ ಗಟ್ಟಿಯೂತ್ತ ಬರಹಗಳು ಈ ಸಮಾಜಕ್ಕೆ ನೀಡಬೇಕು. ಛತ್ರಪತಿ ಶಾಹು ಮಹಾರಾಜರ ಜನ್ಮ ದಿನಾಂಕದ ಕುರಿತು ಇತಿಹಾಸ ತಜ್ಞರು ಪ್ರಗತಿಪರ ಚಿಂತಕರು ಏನೆನ್ನುತ್ತಾರೆ ಎಂದು ನೋಡೋಣ ಬನ್ನಿ.

1. ಬಾಬಾಸಾಹೇಬರ ಅಂಶದಂತೆ ಡಾ.ಧನಂಜಯ ಕೀರ್ ಅವರು ಶಾಹು ಮಹಾರಾಜರ ಜೀವನ ಚರಿತ್ರೆಯ ಕುರಿತು ಮೊಟ್ಟ ಮೊದಲ ಬಾರಿಗೆ (ಮರಾಠಿಯಲ್ಲಿ) ಎಂಬ ಕೃತಿಯು ಹೊರ ತಂದಿದ್ದಾರೆ ಇದರಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.

2. ನಾಡಿನ ಹಿರಿಯ ದಲಿತ ಸಾಹಿತಿಗಳು ಚಿಂತಕರಾದ ಚಂದ್ರಪ್ಪ ಹೆಬ್ಬಾಳಕರ ಮತ್ತು ಮರಿಯಪ್ಪ ಹೊಸಮನಿ ಅವರು ತಮ್ಮ ದಲಿತೋದ್ಧಾರಕರು ಎನ್ನುವ ಕೃತಿಯಲ್ಲಿ ಶಾಹು ಮಹಾರಾಜರ ಕುರಿತು ಸಹ ವಿಸ್ತಾರವಾಗಿ ಬರೆದಿದ್ದಾರೆ. ಇದಕ್ಕೆ ಖ್ಯಾತ ಹಿರಿಯ ಸಾಹಿತಿಗಳಾದ ಡಾ. ಜಯದೇವಿ ಗಾಯಕವಾಡ ಅಮ್ಮ ಅವರು ಮುನ್ನುಡಿ ಬರೆದು ಆ ಕೃತಿ ಮನಸ್ಸಪೂರ್ವಾಕವಾಗಿ ಒಪ್ಪಿಕೊಂಡಿದ್ದಾರೆ. ಶ್ರೀ ಶಂಭುಲಿಂಗ ವಾಲದೊಡ್ಡಿ ಸರ್ ಅವರಿಂದ ಈ ಕೃತಿ ಪ್ರಕಟಣೆಗೊಂಡು ಬೆಳಕು ಕಂಡಿದೆ. ಇಂದಿಗೂ ಬಹು ಬೇಡಿಕೆಯ ಪುಸ್ತಕ ಇದು. ಇದರಲ್ಲಿ ಪುಟ್ಟ ಸಂಖ್ಯೆ 44 ಮತ್ತು 46 ರಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.

- **3. ಬಿ.ಗೋಪಾಲ ಅವರ ಬಹುಜನರ ಕೈಪಿಡಿ ಎಂಬ ಪುಸ್ತಕದಲ್ಲಿ ಪುಟ್ಟ ಸಂಖ್ಯೆ 25 ರಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.**
- **4. ಖ್ಯಾತ ಸಾಹಿತಿಗಳಾದ ವಿಜಯ ಮಹೇಶ್ ಅವರ 'ಮೂಲ ನಿವಾಸಿ ಬಹುಜನರ ಇತಿಹಾಸ' ಎಂಬ ಪುಸ್ತಕದಲ್ಲಿಯು ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.**
- **5. 'ಮೂಲನಿವಾಸಿ ಶೂದ್ರಾತಿಶೂದ್ರ ಅಧ್ಯಯನ ಕೇಂದ್ರ'ದ ವತಿಯಿಂದ ಪ್ರಕಟಣೆಗೊಂಡ ಹೆಣ್ಣೂರು ಲಕ್ಷ್ಮೀನಾರಾಯಣ ಅವರ 'ಭಾರತದ ಭಾವಿ ಪ್ರಧಾನಿ ಅಕ್ಕ ಮಾಯಾವತಿ' ಎಂಬ ಕೃತಿಯಲ್ಲಿ ಶಾಹು ಮಹಾರಾಜರ ಕುರಿತು ಸುದೀರ್ಘವಾಗಿ ಬರೆಯುತ್ತ ಪುಟ್ಟ ಸಂಖ್ಯೆ 20 ರಲ್ಲಿ ಅವರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.**
- **6. ಲಡಾಯಿ ಪ್ರಕಾಶನದ ವತಿಯಿಂದ ಪ್ರಕಟಣೆಗೊಂಡ ಡಾ. ಎಚ್. ಎಸ್. ಅನುಪಮಾ ಅವರ ಛತ್ರಪತಿ ಶಾಹು ಜನರ ನೋವಿಗೆ ಮಿಡಿದ ಪ್ರಾಣ ಮಿತ್ರ ಎಂಬ ಪುಸ್ತಕದಲ್ಲಿಯು ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಉಲ್ಲೇಖಿಸಿದ್ದಾರೆ.**
- **7. ಖ್ಯಾತ ವಿಚಾರವಾದಿ ಪ್ರೊ. ವಿಲಾಸ್ ಖಾರತ್ ಅವರು ಸಹ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಹೇಳಿದ್ದಾರೆ.**
- **8. ಡಾ. ಶ್ರೀನಿವಾಸ ಜಿ ಅವರು ಸಹ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ಹೇಳಿದ್ದಾರೆ.**
- **9. ನಾಡಿನ ಖ್ಯಾತ ಬಹುಜನ ಚಿಂತಕರಾದ ಡಾ. ಹ ರಾ ಮಹೇಶ್ ಬೌದ್ಧ ಅವರು ಸಹ ತಮ್ಮ ಬರಹಗಳಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜೂಲೈ 26 ಎಂದೇ ದಾಖಲಿಸಿದ್ದಾರೆ.**

10. ಶಶಿಕುಮಾರ್,ಕೆ ಅವರು ಕಳೆದ ವರ್ಷ ಜೂನ್ 26 ರಂದು ಜನಶಕ್ತಿ Janashakthಮೀಡಿಯಾದಲ್ಲಿ ಛತ್ರಪತಿ ಶಾಹು ಮಹಾರಾಜರು ಹುಟ್ಟಿದ್ದು 1874 ಜುಲೈ 26ರಂದು. ಅಂತ ಹೇಳಿದ್ದಾರೆ. (ಆಸಕ್ತರು ಮೀಡಿಯಾ ಚೆಕ್ ಮಾಡಬಹುದು) 11. ಹವ್ಯಾಸಿ ಬರಹಗಾರ್ತಿ ಆಶಾ.ಎಸ್ ಅವರು 2021 ಮೇ 24 ರಂದು ಸಂಗಾತಿಯಲ್ಲಿ ಪ್ರಕಟಿಸಿದ ಬರಹದಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜುಲೈ 26 ಎಂದೇ ಹೇಳಿದ್ದಾರೆ.

12. 26 ಜುಲೈ 2017 ರಂದು ಬಹುಜನ ವಿದ್ಯಾರ್ಥಿ ಸಂಘಟನೆಯ ವತಿಯಿಂದ ಗಂಗಾವತಿಯಲ್ಲಿ ಛತ್ರಪತಿ ಶಾಹು ಮಹಾರಾಜರ ಜಯಂತಿ ಆಚರಿಸಲಾಯಿತು. ಇದರಲ್ಲಿ ಹುಲ್ಲೇಶ ಹೂಸಪೇಟೆ ಅವರು ಮಾತನಾಡುತ್ತಾ ಶಾಹು ಮಹಾರಾಜರ ಜನ್ಮ ದಿನಾಂಕ ಜುಲೈ 26 ಎಂದೇ ಹೇಳಿದ್ದಾರೆ.

13. 2013 ರಲ್ಲಿ ದೊಡ್ಡಬಳ್ಳಾಪುರದ ಆನೇಕಲ್ಲಿನ ನಗರದ ಪುರಭವನದಲ್ಲಿ ಜುಲೈ 26 ರಂದು ಪ್ರಜಾ ವಿಮೋಚನಾ ಚಳವಳಿ (ಮಾನವತಾವಾದ) ವತಿಯಿಂದ ನಡೆದ ಛತ್ರಪತಿ ಶಾಹು ಮಹಾರಾಜರ 139ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಆನೇಕಲ್ ಕೃಷ್ಣಪ್ಪ ಮತ್ತು ಛಲವಾದಿ ನಾಗರಾಜ್ ಶಾಹು ಮಹಾರಾಜರ ಜನ್ಮ ದಿನಾಂಕ ( ಜುಲೈ 26) ಎಂದೇ ಹೇಳಿದ್ದರು.

14. ಭೂತರಾಜು ಕರಿರಾಮನಹಳ್ಳಿ ಅವರು ಸಹ ತಮ್ಮ ಸಂಗ್ರಹ ಬರಹಗಳಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಜುಲೈ 26 ಎಂದೇ ದಾಖಲಿಸಿದ್ದಾರೆ.

ನಿಮ್ಮಲ್ಲಿದ ಪುಸ್ತಕಗಳಲ್ಲಿ ಶಾಹು ಮಹಾರಾಜರ ಜನ್ಮ ದಿನಾಂಕ ಎಷ್ಟಿದೆ ಅಂತ ತಾವು ಒಮ್ಮೆ ಚೆಕ್ ಮಾಡಿ ನೋಡಿ.

# ಇನ್ಮುಂದೆ ಪೊಲೀಸರು ರೀಲ್ಸ್ ಮಾಡುವಂತಿಲ್ಲ

• ಉದಯವಾಹಿನಿ, ಬೆಂಗಳೂರು

**ಸಾಮಾಜಿಕ ಜಾಲತಾಣಗಳಲ್ಲಿ ಇಲಾಖೆ ಹಾಗೂ ಪೊಲೀಸ್ ಕರ್ತವ್ಯಗಳಿಗೆ ಸಂಬಂಧಿಸದ ಯಾವುದೇ ವಿಷಯಗಳ ಕುರಿತು ಸಮವಸ್ತ್ರದಲ್ಲಿರುವ ಫೋಟೋ, ವಿಡಿಯೋ, ರೀಲ್ಸ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವಂತಿಲ್ಲ. ಕರ್ನಾಟಕ ರಾಜ್ಯ ನಾಗರಿಕ ಸೇವಾ ನಿಯಮ (ನಡತೆ) ಪ್ರಕಾರ ಯಾವುದೇ ಸರ್ಕಾರಿ ನೌಕರನು ಅಧಿಕೃತವಾದ ಯಾವುದೇ ದಾಖಲೆ ಅಥವಾ ಮಾಹಿತಿಯನ್ನು ಮಾಧ್ಯಮಗಳು ಅಥವಾ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವಂತಿಲ್ಲ. ಪೊಲೀಸ್ ವೃತ್ತಿಗೆ ಸಂಬಂಧ ಪಡದ ವಿಷಯಗಳ ಕುರಿತು ಪೊಲೀಸ್ ಸಮವಸ್ತ್ರದಲ್ಲಿ ಫೋಟೊಗಳು, ವಿಡಿಯೊ, ರೀಲ್ಸ್ ಇತ್ಯಾದಿಗಳನ್ನು ಹರಿಬಿಡದಂತೆ ಜಾಗೃತಗೊಳಿಸುವಂತೆ ಹಾಗೂ ಯಾವುದೆ ಲೋಪ ಕಂಡುಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಎಲ್ಲಾ ವಿಭಾಗಗಳ ಡಿಸಿಪಿಗಳಿಗೆ ಸೂಚಿಸಿದ್ದಾರೆ.**


ಉದಯವಾಹಿನಿ ಚಿತ್ರ

ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ನಲ್ಲಿ ನೀವು ಏನನ್ನು ನೋಡಬಹುದು ಎಂದು ಹೇಳಲು ಸಾಧ್ಯವಿಲ್ಲ. ಬೆಳಗ್ಗಿನಿಂದ ಸಂಜೆಯವರೆಗೂ ವಿವಿಧ ರೀತಿಯ ವಿಡಿಯೋಗಳು ವೈರಲ್ ಆಗಿದ್ದು, ಇದರಲ್ಲಿ ಫೈಟಿಂಗ್, ಡ್ಯಾನ್ಸ್ ಮತ್ತು ವಿಚಿತ್ರ ಕೃತ್ಯಗಳನ್ನು ಮಾಡುವ ವೀಡಿಯೊಗಳು ಸೇರಿವೆ. ರೀಲ್ಸ್ ಮಾಡಬೇಕು ಹೆಚ್ಚಿನ ಜನರು ವೀಕ್ಷಣೆ ಮಾಡಬೇಕು ಬೇಗನೆ ಜನಪ್ರಿಯತೆ ಪಡೆಯಬೇಕು ಎಂದು ಹಕವರು ಹಂಬಲಿಸುತ್ತಿರುತ್ತಾರೆ. ಸಮವಸ್ತ್ರದಲ್ಲಿ ರೀಲ್ಸ್ ಮಾಡುವ ಪೊಲೀಸರಿಗೆ ಬೆಂಗಳೂರು ನಗರ ಕಮಿಷನರ್ ಬಿ.ದಯಾನಂದ ಅವರು ಬಿಸಿ ಮುಟ್ಟಿಸಿದ್ದಾರೆ. ಸಮವಸ್ತ್ರದಲ್ಲಿ ರೀಲ್ಸ್ ಮಾಡುವ ಪೊಲೀಸರಿಗೆ ಶಿಸ್ತು ಕ್ರಮದ ಎಚ್ಚರಿಕೆ ನೀಡಿರುವ ಅವರು, ಇಲಾಖೆಗೆ ಸಂಬಂಧಪಡದೇ ಇರುವ ವಿಷಯಗಳು ಇಲಾಖೆಯ ಘನತೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತವೆ. ಪೊಲೀಸ್ ಸಮವಸ್ತ್ರವು ಪೊಲೀಸರ ಬದ್ಧತೆ, ಸಮರ್ಪಣೆ ಮತ್ತು ಹೊಣೆಗಾರಿಕೆಯ ಸಂಕೇತವಾಗಿದೆ. ಡಿಜಿಟಲ್ ಫೋರಮ್‌ನಲ್ಲಿ ಇದರ ಬಳಕೆಯು ಈ ಮೌಲ್ಯಗಳನ್ನು ಪ್ರತಿಬಿಂಬಿ ಸುವಂತಿರಬೇಕಾಗುತ್ತದೆ. ಹಾಗಾಗಿ ಸಮವಸ್ತ್ರದಲ್ಲಿ ರೀಲ್ಸ್ ಮಾಡುವವರಿಗೆ ಶಿಸ್ತು ಕ್ರಮದ ಎಚ್ಚರಿಕೆ ನೀಡಲಾಗಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಪೊಲೀಸ್ ಆಯುಕ್ತ ಬಿ. ದಯಾನಂದ್ ಅವರು, ಇತ್ತೀಚಿನ ದಿನಗಳಲ್ಲಿ ಪೊಲೀಸ್ ಸಿಬ್ಬಂದಿ ರೀಲ್ಸ್‌ಗಳನ್ನು ಮಾಡುತ್ತಿದ್ದಾರೆ. ಇದು ಹವ್ಯಾಸ, ಚಟವೋ ಗೊತ್ತಿಲ್ಲ, ಇಂತಹವುಗಳು ಇಲಾಖೆಗೆ ಶೋಭೆ ತರುವಂತದಲ್ಲ. ಸಮವಸ್ತ್ರಕ್ಕೆ ಸಮಾಜದಲ್ಲಿ ಅದರ ದ್ದೇ ಆದಂತಹ ಗೌರವ ಇದೆ. ಕೆಲವರು ತಮ್ಮ ಅಪಾರವಾದ ಪ್ರತಿಭೆಯನ್ನು ತೋರಿಸುತ್ತಿದ್ದಾರೆ.

ಹೀಗಾಗಿ ಸಮವಸ್ತ್ರಗಳನ್ನ ಧರಿಸಿ ಆ ರೀಲ್ಸ್ ಗಳನ್ನ ಮಾಡೋದು ಇಲಾಖೆಗೆ ಸರಿಯಾಗೋದಿಲ್ಲ. ಹೀಗಾಗಿ ಸಾಮಾಜಿಕ ಮಾಧ್ಯಮಗಳಲ್ಲಿ ವಿಡಿಯೋ, ರೀಲ್ಸ್‌ಗಳನ್ನ ಹಾಕುವಂತಿಲ್ಲ ಎಂದು ಸೂಚಿಸಲಾಗಿದೆ ಎಂದು ತಿಳಿಸಿದರು.

# ಪರಪ್ಪನ ಅಗ್ರಹಾರ ಜೈಲಿನಿಂದ MLC ಸೂರಜ್ ರೇವಣ್ಣ ಬಿಡುಗಡೆ

• ಉದಯವಾಹಿನಿ, ಬೆಂಗಳೂರು



ನಿನ್ನೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣಗೆ ಜಾಮೀನು ನೀಡಿತ್ತು. ಬೆನ್ನಲ್ಲೇ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬಿಡುಗಡೆಯಾಗಿದ್ದಾರೆ. ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಅವರು ಅಸಹಜ ಲೈಂಗಿಕ ದೌರ್ಜನ್ಯ ಪ್ರಕರಣ ಸಂಬಂಧ ಜಾಮೀನಿಗಾಗಿ ಅರ್ಜಿ ಸಲ್ಲಿಸಿದ್ದರು. ನಿನ್ನೆ ಈ ಅರ್ಜಿಯ ವಿಚಾರಣೆ ನಡೆಸಿದ್ದಂತ ಕೋರ್ಟ್, ಕೆಲ ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರು ಮಾಡಿತ್ತು. ಹಿನ್ನಲೆಯಲ್ಲಿ ಪರಪ್ಪನ ಅಗ್ರಹಾರ ಜೈಲಿನಿಂದ ಸೂರಜ್ ರೇವಣ್ಣ ಅವರು ಬಿಡುಗಡೆಯಾಗಿದ್ದಾರೆ. ಕುಟುಂಬದ ವಿರುದ್ಧ ಷಡ್ಯಂತ್ರ ಮಾಡಿ ತೇಜೋವಧೆ ಮಾಡಿದ್ದಾರೆ. ಜೈಲಿನಿಂದ ಬಿಡುಗಡೆ ಬಳಿಕ ಎಂಎಲ್ಸಿ ಸೂರಜ್ ರೇವಣ್ಣ ಹೇಳಿಕೆ ನೀಡಿದ್ದು, ತೇಜೋವಧೆ ಮಾಡುವ ದುರುದ್ದೇಶದಿಂದ ಕೇಸ್ ದಾಖಲಿಸಿದ್ದಾರೆ. ನಾವು ಯಾವುದಕ್ಕೂ ಹೆದರಿಕೊಂಡು ಎಲ್ಲಿಗೂ ಓಡಿ ಹೋಗಲ್ಲ.ಎರಡು ಮೂರು ದಿನದಲ್ಲಿ ಎಲ್ಲದಕ್ಕೂ ಸ್ಪಷ್ಟನೆ ಕೊಡುತ್ತೇನೆ. ತನಿಖಾಧಿಕಾರಿಗಳಿಗೆ ಸಹಕಾರ ನೀಡಿದ್ದೇನೆ. ಕಾನೂನು ನ್ಯಾಯಾಂಗದ ಮೇಲೆ ಸಂಪೂರ್ಣ ವಿಶ್ವಾಸವಿದೆ ಎಂದರು. ಕೇಸ್ ಅಲ್ಲ ಷಡ್ಯಂತರ, ಕುತಂತ್ರ. ಶಿವಕುಮಾರ್ ಆಪ್ತ ಸಹಾಯಕನಲ್ಲ ಕಾರು ಚಾಲಕನು ಅಲ್ಲ. ನಮಗೆ ಲೋಕೇಶ್ ಅಂತ ಒಬ್ಬನೇ ಕಾರು ಚಾಲಕ ಇದ್ದಾನೆ. ಹಾಸನದಲ್ಲಿ ರೇವಣ್ಣರಿಗಾಗಲಿ ನಮಗಾಗಲಿ ಕಪ್ಪು ಚುಕ್ಕೆ ಇಲ್ಲ. ರಾಜಕೀಯವಾಗಿ ನಮ್ಮನ್ನು ಕುಗ್ಗಿಸುವ ಷಡ್ಯಂತರ ಎಂದು ಪರಪ್ಪನ ಅಗ್ರಹಾರ ಜೈಲಿನ ಬಳಿ ಸೂರಜ್ ರೇವಣ್ಣ ಹೇಳಿಕೆ ನೀಡಿದರು.

# ಭಾರತದ ಶ್ರೇಷ್ಠ ಬಾಹ್ಯಾಕಾಶ ವಿಜ್ಞಾನಿ, ಪದ್ಮಭೂಷಣ ಪುರಸ್ಕೃತರು

## ಪ್ರೊ:ಯು.ಆರ್.ರಾವ್ ರವರ 7ನೇ ವರ್ಷದ ಪುಣ್ಯಸ್ಮರಣೆ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ


ಉದಯವಾಹಿನಿ ಚಿತ್ರ

**ವಿಜ್ಞಾನಿಯಾಗಿ ಹಲವಾರು ಸಂಶೋಧನೆ**

ಪ್ರೊ: ಯು.ಆರ್.ರಾವ್ ರವರು ಉಡುಪಿ ಹತ್ತಿರದ ಅದಮಾರು ಎಂಬ ಸಣ್ಣ ಗ್ರಾಮದಲ್ಲಿ ಜನಿಸಿದರು. ಹುಟ್ಟೂರಿನಲ್ಲಿ ಪ್ರಾಥಮಿಕ ಶಿಕ್ಷಣ ಮುಗಿಸಿ, ಮದ್ರಾಸ್ ವಿಶ್ವವಿದ್ಯಾಲಯದಿಂದ ಬಿಎಸ್ಸಿ ಪದವಿ ಪಡೆದು, ನಂತರ ಬನಾರಸ್ ಹಿಂದೂ ವಿಶ್ವವಿದ್ಯಾಲಯದಿಂದ ಎಂಎಸ್ಸಿ ಹಾಗೂ 1960 ರಲ್ಲಿ ಗುಜರಾತ್ ವಿಶ್ವವಿದ್ಯಾನಿಲಯದಿಂದ ಪಿಎಚ್ ಡಿ ಪದವಿಗಳಿಸಿದರು. ಪ್ರೊ:ಯು ಆರ್ ರಾವ್ ಅವರು ಅಮೆರಿಕಾಕ್ಕೆ ತೆರಳಿ ಅಲ್ಲಿ ಟೆಕ್ಸಾಸ್ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರಾದರು. ಅಲ್ಲಿಯ ಬಾಹ್ಯಾಕಾಶ ಕ್ಷೇತ್ರದಲ್ಲಿ ಸಂಶೋಧನೆಗಳನ್ನು ನಡೆಸಿದರು. 1966 ರಲ್ಲಿ ಭಾರತಕ್ಕೆ ಹಿಂದಿರುಗಿದ ಇವರು ಅಹ್ಮದಾಬಾದಿನಲ್ಲಿ ಇರುವ ಭೌತಶಾಸ್ತ್ರ ಸಂಶೋಧನಾ ಪ್ರಯೋಗಾಲಯದಲ್ಲಿ ಪ್ರಾಧ್ಯಾಪಕರಾಗಿ ನೇಮಕಗೊಂಡರು. ಡಾ:ವಿಕ್ರಮ್ ಸಾರಾಭಾಯ್ ರವರ ಮಾರ್ಗದರ್ಶನದಲ್ಲಿ ಕಾಸ್ಮಿಕ್ ಕಿರಣಗಳ ವಿಜ್ಞಾನಿಯಾಗಿ ಹಲವಾರು ಸಂಶೋಧನೆಗಳನ್ನು ನಡೆಸಿದರು. ಅವರ ಸಂಶೋಧನೆಗಳ ಫಲವಾಗಿ ಸೌರಕಾಸ್ಮಿಕ್ ಕಿರಣಗಳ ಸಿದ್ಧಾಂತ ರೂಪಗೊಂಡಿತು. ಅಂತರಿಕ್ಷದಲ್ಲಿ ಗ್ರಹಗಳ ನಡುವೆ ಇರುವ ವಿದ್ಯುತ್ ಗುರುತ್ವಾಕರ್ಷಣೆಯ ಸ್ಥಿತಿಯನ್ನು ಅರ್ಥಮಾಡಿಕೊಳ್ಳಲು ಇವರ ಸಂಶೋಧನೆಗಳಿಂದ ಸಾಧ್ಯವಾಯಿತು. 1975ರಲ್ಲಿ ರಾವ್ ರವರ ನೇತೃತ್ವ ಮಾರ್ಗದರ್ಶನದಲ್ಲಿ ಭಾರತದ ಮೊದಲ ಉಪಗ್ರಹ ಆರ್ಯಭಟದ ನಿರ್ಮಾಣದ ಸಿದ್ಧತೆಗಳು ಪ್ರಾರಂಭವಾದವು.

ಭಾಸ್ಕರ ,ಆಪಲ್, ರೋಹಿಣಿ, ಇನ್ಸಾಟ್, ಇನ್ಸಾಟ್ 2 ಸರಣಿ ಉಪಗ್ರಹಗಳ ವಿನ್ಯಾಸ ರೂಪಗೊಂಡಿತು. 1985 ರಲ್ಲಿ ಪ್ರೊ: ಯು ಆರ್ ರಾವ್ ರವರು ಬಾಹ್ಯಾಕಾಶ ಆಯೋಗದ ಅಧ್ಯಕ್ಷರಾಗಿ ಮತ್ತು ಕಾರ್ಯದರ್ಶಿಯಾಗಿ ಅಧಿಕಾರ ಸ್ವೀಕರಿಸಿದರು. ರಾಕೆಟ್ ತಂತ್ರಜ್ಞಾನದ ಅಭಿವೃದ್ಧಿ ತ್ವರಿತಗತಿಯಲ್ಲಿ ಮುಂದುವರೆಯಿತು. 1992ರಲ್ಲಿ ಭಾರತ ಎಎಸ್ಎಲ್‌ವಿ ರಾಕೆಟ್ ಅನ್ನು ಯಶಸ್ವಿಯಾಗಿ ಹಾರಿಸಿತು.

1995ರಲ್ಲಿ 850 ಕೆಜಿ ತೂಕದ ಉಪಗ್ರಹವನ್ನು ಬಾಹ್ಯಾಕಾಶದ ಕಕ್ಷೆಗೆ ಸೇರಿಸಿತು. ದೇಶದ ಪ್ರತಿಭಾವಂತ ವಿಜ್ಞಾನಿಯಾಗಿ ಅವರು ಹಲವಾರು ಪ್ರಮುಖ ಜವಾಬ್ದಾರಿಯುತ ಸ್ಥಾನಗಳನ್ನು ಪಡೆದು ಅವುಗಳನ್ನು ಸಮರ್ಪಕವಾಗಿ ನಿರ್ವಹಿಸಿದರು. ಪ್ರೊ :ರಾವ್ ರವರು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಧ್ಯಕ್ಷರು, ಕೋಲ್ಕತ್ತಾದ ಸೆಂಟರ್ ಫಾರ್ ಸ್ಪೇಸ್ ಫಿಸಿಕ್ಸ್‌ನ ಅಧ್ಯಕ್ಷರು, ಲಕಸಾದ ಡಾ:ಅಂಬೇಡ್ಕರ್ ವಿಶ್ವವಿದ್ಯಾಲಯದ ಕುಲಪತಿಗಳು, ಕೇಂದ್ರ ಸರ್ಕಾರದ ಬಾಹ್ಯಾಕಾಶ ಇಲಾಖೆ ಕಾರ್ಯದರ್ಶಿ, ಇಸ್ರೋದ ಅಧ್ಯಕ್ಷರು, ರಾಷ್ಟ್ರೀಯ ಭದ್ರತಾ ಸಲಹಾ ಮಂಡಳಿಯ ಸದಸ್ಯರು, ಬಾಹ್ಯಾಕಾಶದ ಶಾಂತಿಯುತ ಬಳಕೆಗಾಗಿ ಇರುವ ವಿಶ್ವಸಂಸ್ಥೆಯ ಸಮಿತಿಯ ಅಧ್ಯಕ್ಷರು, ಭಾರತೀಯ ವೈಜ್ಞಾನಿಕ ಉಪಗ್ರಹ ಯೋಜನೆಯ ಯೋಜನಾ ನಿರ್ದೇಶಕರು ಆಗಿದ್ದರು. ಪ್ರೊ: ಯು ಆರ್ ರಾವ್ ರವರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ವಿಜ್ಞಾನ ವಿಷಯಗಳ ಕುರಿತು ಪತ್ರಿಕೆಗಳಲ್ಲಿ ಮುನ್ನೂರಕ್ಕೂ ಹೆಚ್ಚಿನ ವಿಜ್ಞಾನ ತಾಂತ್ರಿಕ ವಿಷಯಗಳನ್ನು ಕುರಿತು ಲೇಖನಗಳನ್ನು ಮತ್ತು ಪುಸ್ತಕಗಳನ್ನು ಬರೆದಿದ್ದಾರೆ. ಪ್ರೊ : ಯು ಆರ್ ರಾವ್ ರವರ ಪ್ರತಿಭೆ ಸಾಧನೆಗಳನ್ನು ಗುರುತಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಾಗೂ ಹಲವಾರು ಸಂಘ-ಸಂಸ್ಥೆಗಳು ಈ ಕೆಳಕಂಡಂತೆ ಪ್ರಶಸ್ತಿಗಳನ್ನು ನೀಡಿ ಗೌರವಿಸಿವೆ.

ಪದ್ಮಭೂಷಣ ಪ್ರಶಸ್ತಿ, ವಿಕ್ರಮ್ ಸಾರಾಭಾಯ್ ಪ್ರಶಸ್ತಿ, ಶಾಂತಿ ಸ್ವರೂಪ್ ಭಟ್ನಾಗರ್ ಪ್ರಶಸ್ತಿ, ರಾಷ್ಟ್ರೀಯ ವಿನ್ಯಾಸ ಪ್ರಶಸ್ತಿ, ಮೇಘನಾದ್ ಸಾಹ ಮೆಡಲ್, ಆರ್ಯಭಟ ಪ್ರಶಸ್ತಿ, ನೆಹರು ಪ್ರಶಸ್ತಿ, ಟಾಗೋರ್ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ,ವಿಶ್ವೇಶ್ವರಯ್ಯ ಸ್ಮಾರಕ ಪ್ರಶಸ್ತಿ, ನಾಡೋಜ ಪ್ರಶಸ್ತಿ, ಜೀವಮಾನದ ಸಾಧನೆಯ ಪ್ರಶಸ್ತಿ ಇನ್ನೂ ಹಲವಾರು ಪ್ರಶಸ್ತಿ ಪುರಸ್ಕಾರಗಳು ದೊರೆತಿವೆ. ಹಂಪಿ ವಿಶ್ವವಿದ್ಯಾಲಯ, ಮೈಸೂರ್, ಮಂಗಳೂರು, ಬನಾರಸ್, ತಿರುಪತಿ, ಹೈದರಾಬಾದ್, ಮದ್ರಾಸ್, ಪಂಜಾಬ್ ವಿಶ್ವವಿದ್ಯಾಲಯಗಳು ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಸನ್ಮಾನಿಸಿವೆ. ದೇಶದ ಸರ್ವತೋಮುಖ ಏಳಿಗೆಗೆ ಪೂರಕವಾಗಬಲ್ಲ ಬಾಹ್ಯಾಕಾಶ ತಂತ್ರಜ್ಞಾನಕ್ಕೆ ಬಹಳ ಮಹತ್ವ ನೀಡಿ ಆ ಕ್ಷೇತ್ರದಲ್ಲಿ ಅದ್ಭುತ ಪ್ರಗತಿಯನ್ನು ಸಾಧಿಸಿದ ಅಗ್ರಗಣ್ಯ ವಿಜ್ಞಾನಿ ಪ್ರೊ: ಯು ಆರ್ ರಾವ್.

ಪ್ರೊ: ಯು ಆರ್ ರಾವ್ ರವರು ವಿಜ್ಞಾನ ಕ್ಷೇತ್ರದಲ್ಲಿ ಗಣನೀಯವಾಗಿ ಮಹತ್ಸಾಧನೆಯನ್ನು ಮಾಡಿ ರಾಷ್ಟ್ರ ಮತ್ತು ಜಗತ್ತು ಗುರುತಿಸುವ ರೀತಿ ಬೆಳಕು ಚೆಲ್ಲಿ 2017 ಜುಲೈ 24 ರಂದು ತನ್ನ 85ನೇ ವಯಸ್ಸಿನಲ್ಲಿ ವಿಜ್ಞಾನ ಲೋಕದಿಂದ ಬಾರದ ಲೋಕಕ್ಕೆ ತೆರಳಿದ್ದಾರೆ.

ಅವರ 7ನೇ ವರ್ಷದ ಪುಣ್ಯಸ್ಮರಣೆಯ ದಿನವಾದ ಅವರನ್ನು ಸ್ಮರಿಸಿ ನೆನೆಯುತ್ತಾ ಸನ್ಮಾನ್ಯರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿಯು ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಹೊಸ ಕುಟುಂಬದ ಸದಸ್ಯರ ಆಗಮನದ ಸುದ್ದಿ ನಿಮ್ಮನ್ನು ರೋಮಾಂಚನಗೊಳಿಸಬಹುದು. ನಿರೀಕ್ಷೆಯಲ್ಲಿ ಒಂದು ಪಾರ್ಟಿ ನೀಡುವ ಮೂಲಕ ನಿಮ್ಮ ಸಂತೋಷವನ್ನು ಆಚರಿಸಿ.

**ವೃಷಭ** ಪ್ರಣಯ ಮತ್ತು ಸಾಮಾಜಿಕವಾಗಿ ಬೆರೆಯುವುದು ಬಾಕಿಯಿರುವ ಕೆಲಸಗಳ ಹೊರತಾಗಿಯೂ ನಿಮ್ಮ ಮನಸ್ಸಿನ ಮೇಲೆ ಪ್ರಭಾವ ಬೀರುತ್ತವೆ. ಚಿಲ್ಲರೆ ಮತ್ತು ಸಗಟು ವ್ಯಾಪಾರಿಗಳಿಗೆ ಒಳ್ಳೆಯ ದಿನ.

**ಮಿಥುನ** ದಿನ ನಿಕಟ ಸಂಬಂಧಿಗಳು, ಸ್ನೇಹಿತರಿಂದ ಉತ್ತಮ ಸುದ್ದಿಯೊಡನೆ ಆರಂಭವಾಗುತ್ತದೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ನೀವು ಒಂದು ದಿನದ ತಜೆಯ ಮೇಲೆ ಹೋಗುತ್ತಿದ್ದಲ್ಲಿ ಚಿಂತಿಸಬೇಡಿ.

**ಕರ್ಕಾಟಕ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ತಮ್ಮ ವ್ಯಾಪರಕ್ಕಾಗಿ ಮನೆಯಿಂದ ಹೊರಗೆ ಹೋಗಿರುವ ವ್ಯಾಪಾರಿಗಳು, ಹಣವನ್ನು ಜಾಗರೂಕವಾಗಿಡಿ, ಹಣದ ಕಳ್ಳತನವಾಗುವ ಸಾಧ್ಯತೆ ಇದೆ.

**ಸಿಂಹ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ.

**ಕನ್ಯಾ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ತುಲಾ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ವೃಶ್ಚಿಕ** ಬಲವಾದ ಧೃಢತೆ, ನಿರ್ಭಯತೆ ನಿಮ್ಮ ಮಾನಸಿಕ ಶಕ್ತಿ ವರ್ಧಿಸುವಲ್ಲಿ ಮಹತ್ತರ ಪಾತ್ರ ವಹಿಸುತ್ತವೆ. ಇದು ನಿಮಗೆ ಯಾವುದೇ ಪರಿಸ್ಥಿತಿಯನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಉತ್ತೇಜಿಸುವುದರಿಂದ ಇದನ್ನು ಕಾಯ್ದುಕೊಳ್ಳಿ.

**ಧನಸ್ಸು** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ಅಹಂಭಾವ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ.

**ಮಕರ** ನಿಮ್ಮ ಬಗ್ಗೆ ಕೆಟ್ಟ ಭಾವನೆ ಹೊಂದಿದ್ದ ಯಾರಾದರೂ ವಿಷಯವನ್ನು ಸ್ಪಷ್ಟಗೊಳಿಸಲು ಹಾಗೂ ನಿಮ್ಮ ಜೊತೆ ರಾಜಿ ಮಾಡಿಕೊಳ್ಳಲು ಪ್ರಯತ್ನಿಸುವ ಒಂದು ದಿನ. ಧಾರ್ಮಿಕ ಮತ್ತು ಶುದ್ಧ ಪ್ರೀತಿಯನ್ನು ಅನುಭವಿಸಿ.

**ಕುಂಭ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಮೀನ** ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

## ಅರ್ಚಕನ ಕೊಲೆ ಪ್ರಕರಣ: ಆರೋಪಿ ಬಂಧನ

• ಉದಯವಾಹಿನಿ ಹುಬ್ಬಳ್ಳಿ

ಪೂಜಾರಿ ದೇವೇಂದ್ರಪ್ಪ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ಆರೋಪಿಯನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಬಂಧಿತ ಆರೋಪಿಯನ್ನು ಕಮರಿಪೇಟೆ ನಿವಾಸಿ ಸಂತೋಷ್ ಭೋಜಗಾರ ಎಂದು ಗುರುತಿಸಲಾಗಿದೆ. ಆರೋಪಿಯ ಬಂಧನಕ್ಕೆ ಪೊಲೀಸ್ ಕಮಿಷನರ್ ರಚಿಸಲಾಗಿದ್ದ ತಂಡ, ಚನ್ನಮ್ಮ ವೃತ್ತದಲ್ಲಿ ಆರೋಪಿಯನ್ನು ಬಂಧಿಸಿದೆ. ಮೃತ ದೇವೇಂದ್ರಪ್ಪ ಅವರ ಪೂಜೆಯಿಂದ ಸಂತೋಷ್ ಕುಟುಂಬಕ್ಕೆ ತೊಂದರೆಯಾಗಿದೆ ಎಂದು ಆರೋಪಿಸಲಾಗಿದ್ದು, ಸಂಬಂಧಿಕರ ಆರೋಗ್ಯದಲ್ಲಿ ಏರುಪೇರಾಗಿತ್ತು ಎನ್ನಲಾಗಿದೆ. ಅದೇ ಕಾರಣದಿಂದ ಕೆಲವರು ಮೃತಪಟ್ಟಿದ್ದರು ಅಂತ ನಂಬಿದ್ದ. 2022 ರಲ್ಲಿಯೂ ದೇವೇಂದ್ರಪ್ಪನ ಮೇಲೆ ದಾಳಿ ಮಾಡಿದ್ದ ಆರೋಪಿ ಸಂತೋಷ್, ಈಗ ಮತ್ತೊಮ್ಮೆ ದಾಳಿ ಮಾಡಿ ಕೊಲೆ ಮಾಡಿದ್ದಾನೆ ಎಂದು ಪೊಲೀಸ್ ಆಯುಕ್ತ ಶಶಿಕುಮಾರ್ ಹೇಳಿದ್ದಾರೆ.


ಉದಯವಾಹಿನಿ ಚಿತ್ರ

## ಜಮೀನು ವಿವಾದ: ಸಹೋದರರ ಸಾವಿನಲ್ಲಿ ಅಂತ್ಯ

• ಉದಯವಾಹಿನಿ ಬೆಳಗಾವಿ

ಜಮೀನು ವಿವಾದಕ್ಕೆ ಸಂಬಂಧಿಸಿ ಇಬ್ಬರು ಸಹೋದರರು ಮಾರಕಾಸ್ತ್ರಗಳಿಂದ ಬಡಿದಾಡಿಕೊಂಡು ಮೃತಪಟ್ಟಿರುವ ಆಘಾತಕಾರಿ ಘಟನೆ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಖೋತವಾಡಿಯಲ್ಲಿ ನಡೆದಿದೆ. ಹನುಮಂತ ಖೋತ (34) ಹಾಗೂ ಖಂಡೋಬಾ ಖೋತ (32) ಮೃತಪಟ್ಟ ದುರ್ದೈವಿಗಳು.

ಕಳೆದ ಹಲವಾರು ವರ್ಷಗಳಿಂದ ಈ ಇಬ್ಬರು ಸಹೋದರರ ನಡುವೆ ಜಮೀನು ವಿವಾದ ಇತ್ತು ಎನ್ನಲಾಗಿದೆ ಅಲ್ಲದೆ ವಿವಾದ ಬಗೆಹರಿಸಲು ರಾಜಿ ಸಂಧಾನ ಮಾಡಿದ್ದರೂ ಯಾವುದೇ ಪ್ರಯೋಜನ ವಾಗಿರಲಿಲ್ಲ. ಈ ನಡುವೆ ಮತ್ತೆ ಇಬ್ಬರು ಸಹೋದರರ ಮಧ್ಯೆ ಜಗಳ ನಡೆದು ಮಾರಕಾಸ್ತ್ರಗಳಿಂದ ಬಡಿದಾಡಿಕೊಂಡು ಗಂಭೀರ ಗಾಯಗೊಂಡಿದ್ದರು, ಗಾಯಗೊಂಡಿದ್ದ ಇಬ್ಬರನ್ನೂ ಆಸ್ಪತ್ರೆಗೆ ಸೇರಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಇಬ್ಬರೂ ಸಹೋದರರು ಸಾವನ್ನಪ್ಪಿದ್ದಾರೆ. ಘಟನೆ ಸಂಬಂಧ ಅಥಣಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪರವಾನಿಗೆ ಇಲ್ಲದ ಸ್ವಾಗತ ಕಟೌಟ್ ನೆಲಕ್ಕುರಳಿ ಮೂವರಿಗೆ ಗಂಭೀರ ಗಾಯ

### ಬ್ಯಾನರ್ ಹಾಕುವುದಕ್ಕೆ ನಗರಸಭೆ ವತಿಯಿಂದ ಯಾವುದೇ ಪರವಾನಿಗೆ ತೆಗೆದುಕೊಂಡಿಲ್ಲ: ಮಂಜುನಾಥ್

• ಉದಯವಾಹಿನಿ ಸಿಂಧನೂರು

ಮೊನ್ನೆ ತಾನೆ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅವರು ಸ್ವಾಗತ ಮಾಡಿಕೊಳ್ಳುವುದಕ್ಕೆ ಗಾಂಧಿ ಸರ್ಕಲ್ ನಲ್ಲಿ ನಗರ ಸಭೆಯಿಂದ ಯಾವುದೆ ಪರವಾನಿಗೆ ಇಲ್ಲದೇ ಮತ್ತು ಇಂತಹಾ ದೊಡ್ಡ ಗಾತ್ರ ದ ಕಟ್ಟಣದ ಕಟೌಟ್‌ಗಳನ್ನು ಸಿಗ್ನಲ್ ಕಂಬಕ್ಕೆ ಯಾವುದೇ ಸುರಕ್ಷಿತ ಇಲ್ಲದೆ ಹಾಕಿದ್ದಕ್ಕೆ ಗಾಳಿಯಲ್ಲಿ ತೂಗಾಡಿ ಬೃಹತ್ ಕಟ್ಟ ಮೂಲಕ ನೆಲಕ್ಕೆ ಬಿದ್ದಿದ್ದ, ಸ್ಥಳದಲ್ಲಿ ಚಿಟ್ಟಿ ಬಾಬು ಬುದಿವಾಳ್ ಕ್ಯಾಂಪ್ ಅವರಿಗೆ ಕಾಲು ಮುರಿದಿದ್ದು ಮತ್ತು ಅಂಬಮ್ಮ ಗಂಡ ಯಮನಪ್ಪ ಕಾಲು ಎಲುಬು ಕ್ರಾಕ್ ಬಿಟ್ಟಿದ್ದ ಹಾಗೂ ಯಮನಪ್ಪ ತಂದೆ ಮರಿಯಪ್ಪ ವೀರಾಪುರ ಅವರಿಗೆ ಸೊಂಟಕ್ಕೆ ಬಲವಾದ ಪೆಟ್ಟು ಬಡಿದು ಗಂಭೀರವಾದ ಗಾಯ ಗಳು ಆಗಿದ್ದು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದರು.

ನಂತರ ಹೆಚ್ಚಿನ ಚಿಕಿತ್ಸೆಗಾಗಿ ನಗರದ ಶಾಂತಿ ಆಸ್ಪತ್ರೆಗೆ ಕರೆದೊಯ್ದು ಅಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದರು. ನಂತರ ಸುದ್ದಿ ಗಾರರೊಂದಿಗೆ ಮಾತನಾಡಿದ ಬಾಲ ಸ್ವಾಮಿ ವಕೀಲರು ಅವರು ನಗರದ ಗಾಂಧಿ ವೃತ್ತದಲ್ಲಿ ದೊಡ್ಡ ಮಟ್ಟದಲ್ಲಿ ಸೌಂಡ್ ಬಂದಿದ್ದರಿಂದ ಅಲ್ಲಿ ಪಕ್ಕದಲ್ಲಿ ಕೋರ್ಟ್ ಇದ್ದಿದ್ದರಿಂದ ಅಲ್ಲಿ ಹೊರಗಿರುವ ವಕೀಲರು ಗಾಬರಿಯಿಂದ ಏನು ಸೌಂಡ್ ಬಂತು ಎಂದು ಓಡೋಡಿ ಬಂದು ನೋಡಿದಾಗ ವಿಧಾನ ಪರಿಷತ್ ಸದಸ್ಯ ಬಸನ ಗೌಡ ಬಾದರ್ಲಿ ಅವರ ಸ್ವಾಗತ ಕಟ್ಟಿದ ಕಟೌಟ್ ನೆಲಕ್ಕುರು ಳಿದ್ದು ಸ್ಥಳದಲ್ಲಿ ಇರುವ ಮೂರು ನಾಲ್ಕು ಜನರಿಗೆ ಗಾಯಗಳಾಗಿ ದ್ದು, ನಂತರ ನೋಡಿದಾಗ ನಮ್ಮ ಆತ್ಮೀಯ ಗೆಳೆಯನಾದ ಚಿಟ್ಟಿ ಬಾಬು ಅವರಿಗೆ ಕಾಲು ಮುರಿದಿತ್ತು. ಅವರನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದು. ನಂತರ ಎಂಎಲ್ಸಿ ಆದ್ಮೇಲೆ ಹೆಚ್ಚಿನ ಚಿಕಿತ್ಸೆಗಾಗಿ ನಗರದ ಗಂಗಾವತಿ ರಸ್ತೆ ಬರುವ ಶಾಂತಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದರು. ಬಸನಗೌಡ ಬಾದರ್ಲಿ ಅವರು ಏನು ಪರವಾನಿಗೆ ಇಲ್ಲದೇ ಯಾವುದೇ ಸುರಕ್ಷಿತ ಇಲ್ಲದೆ ಸ್ವಾಗತ ಕಟ್ಟಣದ ಕಟೌಟ್ ಹಾಕಿದ್ದು (ಸುಮಾರು ಒಂದು ನೂರು ಮೀಟರ್ ಎತ್ತರದ ಕಟೌಟ್ ಯಾಗಿದ್ದು) ಇಂತಹಾ ಅನಾಹುತಕ್ಕೆ ಕಾರಣವಾಗಿದ್ದು, ಶಾಂತಿ ಆಸ್ಪತ್ರೆಗೆ ಕರೆದುಕೊಂಡು ಬಂದಾಗ ಎಂಎಲ್ಸಿ ಯಾಗಿದ್ದ ಮಾಹಿತಿ ತಿಳಿದು ಕೊಳ್ಳುವುದಕ್ಕೆ ಪೋಲೀಸರು ಬಂದಿದ್ದರು ಅವರು ಮೇಲೆ ಬಸನಗೌಡ ಬಾದರ್ಲಿ ಅವರ ಸೋದರ ಸೋಮನಾಗೌಡ ಬಾದರ್ಲಿ ಅವರು ಏಕಾಏಕಿ ಆಸ್ಪತ್ರೆಗೆ ಬಂದು ಸಿಟ್ಟಿನಿಂದ ನಿಮ್ಮನ್ನು ಯಾರೂ ಬಾ ಅಂತ ಹೇಳಿದ್ದು. ಯಾರು ಕರೆದದ್ದು ಪೋಲೀಸರು ಮೇಲೆ ಅಲ್ಲಿರುವ ಚಿಟ್ಟಿ ಬಾಬು ಗೆಳೆಯರು ಮೇಲೆ ಸಾರ್ವಜನಿಕರು ಇರು ವಂತಹ ಸ್ಥಳದಲ್ಲಿ ದೌರ್ಜನ್ಯ ನಡೆಸುತ್ತಿರುವುದು ಅತ್ಯಂತ ಖಂಡನಿಯ ಎಂದು ಆಗ್ರಹಿಸಿದರು. ರಮೇಶ್ ಪಾಟೀಲ್ ಬೇರಿಗೆ. ವಕೀಲರು ಮಲ್ಲೇಶ್ ಬೂತ್ಲ ದಿನ್ನಿ ಬಿ. ಎನ್ ಯರದಿಹಾಳ ಹಾಗೂ ಚಿಟ್ಟಿಬಾಬು ಅವರು ಸಂಬಂಧಿಕರು ಮತ್ತು ಅಂಬಮ್ಮ ಗಂಡ ಯಮನಪ್ಪ ವೀರಾಪುರ ಅವರು ಸಂಬಂಧಿಕರು ಇದ್ದರು.

**ನೂರು ಮೀಟರ್ ಎತ್ತರದ ಕಟೌಟ್**


ಉದಯವಾಹಿನಿ ಚಿತ್ರ

> ಬಸನಗೌಡ ಬಾದರ್ಲಿ ಅವರ ಸ್ವಾಗತ ಕಟ್ಟಿಣದ ಕಟೌಟ್‌ಗಳು ಹಾಗೂ ಬ್ಯಾನರ್ ಹಾಕುವುದಕ್ಕೆ ನಮ್ಮ ನಗರಸಭೆ ವತಿಯಿಂದ ಯಾವುದೇ ಪರವಾನಿಗೆ ತೆಗೆದುಕೊಂಡಿಲ್ಲ. ಈ ಅನಾಹುತಕ್ಕೆ ಅವರೇ ಕಾರಣ ಅವರಿಗೆ ನೋಟೀಸ್ ಜಾರಿಗೆ ಮಾಡಿ ಕಾನೂನು ಚೌಕಟ್ಟಿನಲ್ಲಿ ಅವರೇ ಮೇಲೆ ಕ್ರಮ ತೆಗೆದುಕೊಳ್ಳುತ್ತೇನೆ. ಇನ್ನುಮುಂದೆ ಯಾರೇ ಬ್ಯಾನರ್ ಮತ್ತು ಕಟೌಟ್‌ಗಳು ಹಾಕುವುದಕ್ಕೆ ಕಂಪಲ್ಸರಿ ಪರವಾನಿಗೆ ಪಡೆಯಬೇಕು ಒಂದು ವೇಳೆ ಪರವಾನಿಗೆ ಪಡೆಯದೆ ಅನಧಿಕೃತವಾಗಿ ಹಾಕಿದ್ದೆ ಕರವಾದರೆ ಇದಕ್ಕೆ ಯಾರು ಸಂಬಂಧಪಟ್ಟ ಅಂಗಡಿಗಳು ಲೈಸೆನ್ಸ್ ಕ್ಯಾನ್ಸಲ್ ಮಾಡಲಾಗುತ್ತದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದರು. -ಮಂಜುನಾಥ್, ನಗರ ಸಭೆ ಪೌರಾಯುಕ್ತರು

**ಸುರಕ್ಷಿತ ಇಲ್ಲದೆ ಕಟೌಟ್**

ನಗರದಲ್ಲಿ ಫುಲ್ ಟ್ರಾಫಿಕ್ ಜಾಮ್ ಆಗಿದ್ದ ವಿಷಯ ತಿಳಿದ ಸ್ಥಳಕ್ಕೆ ಆಗಮಿಸಿ ಡಿವೈಎಸ್ಪಿ ತಳವಾರ್ ಪಿಎಸ್ಐ ಸುದೀರ್ ಬೆಂಕಿ ಅವರು ಮತ್ತು ಪೊಲೀಸ್ ಸಿಬ್ಬಂದಿ ವರ್ಗ ಟ್ರಾಫಿಕ್ ಜಾಮ್ ಆಗಿದ್ದ ಕ್ಲಿಯರ್ ಮಾಡಿ ನಮ್ಮ ಸಾರ್ವಜನಿಕ ಸ್ಥಳಗಳಲ್ಲಿ ಸಿಗ್ನಲ್ ಕಂಬಕ್ಕೆ ದೊಡ್ಡ ಮಟ್ಟದ ಯಾವುದೇ ಸುರಕ್ಷಿತ ಇಲ್ಲದ ಕಟೌಟ್‌ಗಳು ಹಾಕಿದ್ದು ಆಕ್ರೋಶ ಮೂಲಕ ಇಂತಹಾ ಘಟನೆ ನಡೆದಿದ್ದು. ಇದಕ್ಕೆ ಯಾರು ಹೊಣೆಗಾರರು ಅವರು ಮೇಲೆ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

## ಬ್ಯಾಕ್ ಲಾಗ್ ಹುದ್ದೆ ಕೂಡಲೇ ಭರ್ತಿ ಮಾಡುವಂತೆ ಎಸ್‌ಸಿ, ಎಸ್‌ಟಿ ನಿರುದ್ಯೋಗಿಗಳಿಂದ ಮನವಿ

• ಉದಯವಾಹಿನಿ ಕಂಪ್ಲಿ

ಕರ್ನಾಟಕ ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡುವಂತೆ ಬಳ್ಳಾರಿ ಜಿಲ್ಲಾ ಎಸ್ ಸಿ ಎಸ್ ಟಿ ನಿರುದ್ಯೋಗಿಗಳ ಸಂಘದಿಂದ ಕರ್ನಾಟಕ ರಾಜ್ಯ ಪೊಲೀಸ್ ದೂರುಗಳ ಪ್ರಾಧಿಕಾರದ ಸದಸ್ಯರಾದ ಮೋಹನ್ ಕುಮಾರ್ ದಾನಪ್ಪನವರ ಮುಖಾಂತರ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ನಂತರ ಮಾತನಾಡಿದ ಬಳ್ಳಾರಿ ಜಿಲ್ಲಾ ಎಸ್ ಸಿ ಎಸ್ ಟಿ ನಿರುದ್ಯೋಗಿಗಳ ಸಂಘದ ಜಿಲ್ಲಾಧ್ಯಕ್ಷರಾದ ಬಾಪಯ್ಯನವರ ವೆಂಕಟೇಶ್‌ರವರು ರಾಜ್ಯದಲ್ಲಿ ಹಲವಾರು ವರ್ಷಗಳಿಂದ ಬ್ಯಾಕ್ ಲಾಗ್ ಹುದ್ದೆಗಳನ್ನು ತುಂಬದೇ ಇರುವುದರಿಂದ ದಲಿತ ಸಮುದಾಯದ ಅಭ್ಯರ್ಥಿಗಳು ಜಾತಕ ಪಕ್ಷಿಯಂತೆ ಕಾಯುತ್ತಿದ್ದು ನಿಗದಿತ ವಯಸ್ಸು ಮೀರುತ್ತಿರುವ ಆತಂಕದಲ್ಲಿದ್ದು ಸರ್ಕಾರ ಕೂಡಲೇ ನಾನಾ ಇಲಾಖೆ ಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ಮನವಿ ಸ್ವೀಕರಿಸಿದ ಕೆ ಎಸ್ ಪಿ ಸಿ ಎ ಸದಸ್ಯರಾದ ಮೋಹನ್ ಕುಮಾರ್ ದಾನಪ್ಪನವರು ತಮ್ಮ ಮನವಿ ಪತ್ರಗಳನ್ನು ಸರ್ಕಾರಕ್ಕೆ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸರ್ಕಾರದ ಗಮನ ಸೆಳೆಯುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಸುಗಾಲಿ ಶ್ರೀನಿವಾಸ ನಾಯ್ಕ, ಎಸ್. ಗಿರಿಮಲ್ಲಪ್ಪ, ತಿಮ್ಮಯ್ಯ, ಬಿ ಮಂಜುನಾಥ್, ಪಿಟಿ ವೀರಮಲ್ಲಪ್ಪ, ಎನ್ ದೇವಣ್ಣ, ಕೆ. ತಿಪ್ಪಣ್ಣ, ಸಿ, ಲಿಂಗಪ್ಪ, ರಾಮಂಜಿನಿ,ರಾಮಚಂದ್ರ ಛಲವಾದಿ ಉಪಸ್ಥಿತಿಯಲ್ಲಿದ್ದರು

## ಅಕ್ಷರ ದಾಸೋಹ ನೌಕರರ ಸಂಘದಿಂದ ಸಂತಸ

• ಉದಯವಾಹಿನಿ ಸಿರುಗುಪ್ಪ

ಸರ್ಕಾರದಿಂದ ಇಡಿಗಂಟು ಜಾರಿಯಾಗಿರುವ ಆದೇಶವನ್ನು ತಾಲ್ಲೂಕು ಅಕ್ಷರ ದಾಸೋಹ ನೌಕರರ ಸಂಘ(ಸಿಐಟಿಯು) ವತಿಯಿಂದ ನಗರದ ಮಹಾತ್ಮಗಾಂಧೀಜಿ ವೃತ್ತದಲ್ಲಿನ ಗಾಂಧೀಜಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಸಿಹಿ ಹಂಚಿ ವಿಜಯೋತ್ಸವ ಆಚರಿಸಲಾಯಿತು.

ತಾಲ್ಲೂಕಾಧ್ಯಕ್ಷೆ ದುರುಗಮ್ಮ ಮಾತನಾಡಿ 2022 ರ ಸಾಲಿನಲ್ಲಿ ಅಕ್ಷರ ದಾಸೋಹದಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಬಿಸಿಯೂಟ ನೌಕರರಿಗೆ ಇಡಿಗಂಟು ನೀಡಬೇಕೆಂದು ನಮ್ಮ ಸಂಘಟನೆ ನಿರಂತರ ಹೋರಾಟ ಮಾಡುತ್ತಲೇ ಬಂದಿತ್ತು.

ಒಂದು ಲಕ್ಷ ರೂಪಾಯಿಗಳ ಇಡಿಗಂಟು ನೀಡಬೇಕೆಂದು ಸರ್ಕಾರಕ್ಕೆ ಮತ್ತು ಶಿಕ್ಷಣ ಇಲಾಖೆಗೆ ಮನವಿ ಮಾಡಿಕೊಂಡು ಹಲವಾರು ಬಾರಿ ಹೋರಾಟ ನಡೆಸಿದಾಗ ನಮ್ಮ ಬಗ್ಗೆ ಮುತುವರ್ಜಿ ವಹಿಸಿರಲಿಲ್ಲ.


ಉದಯವಾಹಿನಿ ಚಿತ್ರ

**ಇಡಿಗಂಟು ಆದೇಶ ಜಾರಿ**

ಆದ್ದರಿಂದ ರಾಜ್ಯ ಅಕ್ಷರ ದಾಸೋಹ ನೌಕರರ ಸಂಘದ ನೇತೃತ್ವದಲ್ಲಿ ಇಂಡಿಗಂಟು ಜಾರಿ, ವೇತನ ಹೆಚ್ಚಳ, ಸಾದಿಲ್ವಾರು ಜಂಟಿಖಾತೆ ಬದಲಾವಣೆ ಸೇರಿದಂತೆ ಇನ್ನಿತರ ಬೇಡಿಕೆಗಳಿಗಾಗಿ ಜುಲೈ 15, 2024 ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ಧಿಷ್ಟವಾಗಿ ಹೋರಾಟವನ್ನು ಹಮ್ಮಿಕೊಳ್ಳಲಾಗಿತ್ತು.

ನಮ್ಮ ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರದ ಆರ್ಥಿಕ ಇಲಾಖೆಯ ಮುಖ್ಯ ಕಾರ್ಯದರ್ಶಿಗಳು ಸಂಘಟನೆಯ ಮುಖಂಡರೊಂದಿಗೆ ಮಾತನಾಡಿ 15 ವರ್ಷಕ್ಕಿಂತಲೂ ಅಧಿಕ ವರ್ಷ ಸೇವೆ ಸಲ್ಲಿಸಿ 60 ವರ್ಷ ಪೂರ್ಣಗೊಂಡ ಅಡುಗೆ ಸಿಬ್ಬಂದಿಯವರಿಗೆ 40 ಸಾವಿರ. 15 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿ 60 ವರ್ಷ ಪೂರ್ಣಗೊಂಡು ಕರ್ತವ್ಯದಿಂದ ಬಿಡುಗಡೆಗೊಂಡ ಸಿಬ್ಬಂದಿಗಳಿಗೆ 30 ಸಾವಿರ ಇಡಿಗಂಟು ನೀಡಲು ಒಪ್ಪಿಗೆ ನೀಡಿ ಅದಿಸೂಚನೆ ಹೊರಡಿಸಿದೆ.

ಇಡಿಗಂಟು ನೀಡಲು ಮುಂದಾದ ಸರ್ಕಾರದ ನಡೆಯು ನಮ್ಮ ಸಂಘಟನೆಗೆ ಸಿಕ್ಕ ಜಯವಾಗಿದ್ದು, ನಮ್ಮ ಇನ್ನಿತರ ಬೇಡಿಕೆಗಳನ್ನು ಮುಂದಿನ ದಿನಗಳಲ್ಲಿ ಸರ್ಕಾರ ಈಡೇರಿಸಬೇಕೆಂದು ತಿಳಿಸಿದರು.

ಇದೇ ವೇಳೆ ಉಪಾಧ್ಯಕ್ಷೆ ನಾಗಲಕ್ಷ್ಮಿ, ಸದಸ್ಯರಾದ ಹುಲಿಗೆಮ್ಮ, ಭಾರತಿ, ಗಂಗಮ್ಮ, ಗೀತಾ, ಪುಷ್ಪಲತಾ, ಯಲ್ಲಮ್ಮ, ಲತೀಪ್‌ಖಾಜಾ ಇನ್ನಿತರ ಮುಖಂಡರಿದ್ದರು.

## ಬೆಳಗಾವಿ-ಖಾನಾಪೂರ: ಭಾರಿ ವಾಹನಗಳಿಗೆ ನಿಷೇಧ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬೆಳಗಾವಿ

ಬಿಡುವು ನೀಡದೇ ಮಳೆ ಸುರಿಯುತ್ತಿರುವ ಹಿನ್ನೆಲೆ ರಸ್ತೆ ಹಾಗೂ ಗುಡ್ಡ ಕುಸಿಯುವ ಭೀತಿ ಎದುರಾಗಿದೆ. ಆದ್ದರಿಂದ ಮುಂಜಾಗ್ರತಾ ಕ್ರಮವಾಗಿ, ಬೆಳಗಾವಿ-ಖಾನಾಪೂರ ನಡುವೆ ಭಾರಿ ವಾಹನಗಳಿಗೆ ನಿಷೇಧಿಸಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಆದೇಶ ಹೊರಡಿಸಿದ್ದಾರೆ.

ಬೆಳಗಾವಿ ನಗರಕ್ಕೆ ಹೊಂದಿಕೊಂಡ – ಪೀರಣವಾಡಿಯಿಂದ ಭಾರಿ ವಾಹನ ನಿಷೇಧ ಹಾಗೂ ಜಾಂಬೋಟಿ-ಖಾನಾಪುರ ಸಂಪರ್ಕಿಸುವ ಹೆದ್ದಾರಿ ರಸ್ತೆಯಲ್ಲಿ ಭಾರಿ ವಾಹನಗಳ ಸಂಚಾರಕ್ಕೆ ಸಮಯ ನಿಗದಿಪಡಿಸಿ ಆದೇಶ ಹೊರಡಿಸಲಾಗಿದೆ. ಖಾನಾಪುದಿಂದ ಜಾಂಬೋಟಿಗೆ ಭಾರಿ ವಾಹನಗಳು ಏಕಮುಖವಾಗಿ ಸಂಚರಿಸಲು ಬೆಳಗ್ಗೆ 6ರಿಂದ ಮಧ್ಯಾಹ್ನ 1ಕ್ಕೆ ಹಾಗೂ ಜಾಂಬೋಟಿಯಿಂದ ಖಾನಾಪುರ ಏಕಮುಖ ಸಂಚರಿಸಲು ಮಧ್ಯಾಹ್ನ 1ರಿಂದ ರಾತ್ರಿ 8ರವರೆಗೆ ಸಮಯ ನಿಗದಿ ಮಾಡಲಾಗಿದೆ.

ಉಕ್ಕಿ ಹರಿಯುತ್ತಿರುವ ಕೃಷ್ಣಾ ನದಿಯಲ್ಲಿ ನೈವೇದ್ಯ ಬಿಡಲು ಹೋಗಿದ್ದ ಯುವಕನೊಬ್ಬ ಕೊಚ್ಚಿ ಹೋದ ಘಟನೆ ಚಿಕ್ಕೋಡಿ ತಾಲೂಕಿನ ಇಂಗಳಿ ಬಳಿ ನಡೆದಿದೆ. ಮೃತ ಯುವಕನನ್ನು ಸ್ಥಳೀಯ ರೋಹಣ ಪಾಟೀಲ (31) ಎಂದು ಗುರುತಿಸಲಾಗಿದೆ. ಸ್ನೇಹಿತನೋರ್ವನ ಜೊತೆಗೆ ನದಿ ಬಳಿ ಹೋದಾಗ ಕಾಲು ಜಾರಿ ನೀರಿನ ಸೆಳೆತಕ್ಕೆ ಸಿಲುಕಿ ಯುವಕ ಕೊನೆಯುಸಿರೆಳೆದಿದ್ದಾನೆ. ಸೋಮವಾರ ಇಳಿಸಂಜೆ ಶವ ಹೊರತೆಗೆದಿದ್ದು, ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು. ಇನ್ನು ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಆಯುಕ್ತರ ವಜಾಕ್ಕೆ ಒತ್ತಾಯಿಸಿ ಪಾಲಿಕೆಗೆ ಮುತ್ತಿಗೆ ಯತ್ನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಂಗಳೂರು

ಇಲ್ಲಿನ ಮಹಾನಗರ ಪಾಲಿಕೆಯ ಆಯುಕ್ತ ಆನಂದ ಸಿ.ಎಲ್ ಅವರ ಮನೆ, ಕಚೇರಿ ಮೇಲೆ ಇತ್ತೀಚೆಗೆ ಲೋಕಾಯುಕ್ತ ದಾಳಿ ನಡೆಸಲಾಗಿತ್ತು.

ಈ ಹಿನ್ನೆಲೆ ಅವರನ್ನು ಸೇವೆಯಿಂದ ವಜಾಗೊಳಿಸಬೇಕೆಂದು ಒತ್ತಾಯಿಸಿ ಜು.23ರ ಮಂಗಳವಾರ ಸಿಪಿಐಎಂ, ಡಿವೈಎಫ್ಐ ಕಾರ್ಯಕರ್ತರು ಪಾಲಿಕೆ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ಸಂದರ್ಭದಲ್ಲಿ ಪೊಲೀಸರು ಪ್ರತಿಭಟನಾಕಾರರನ್ನು ವಶಕ್ಕೆ ಪಡೆದುಕೊಂಡರು.

## ಮಾದಕ ವಸ್ತು ಮಾರಾಟ: ಐವರ ಬಂಧನ

• ಉದಯವಾಹಿನಿ ಹುಬ್ಬಳ್ಳಿ

ಅಫೀಮು ಮತ್ತು ಅಫೀಮು ಗಿಡದ ಪಾವಡರ್ ಪೊಪೆಸ್ಟ್ರಾ ಹೆಸರಿನ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದ ರಾಜಸ್ಥಾನ ಮೂಲದ ಐವರನ್ನು ಕಸಬಾಪೇಟೆ ಪೊಲೀಸರು ಬಂಧಿಸಿ, ಅವರಿಂದ 150 ಗ್ರಾಂ ಅಫೀಮು ಮತ್ತು 3ಕೆಜಿ ಅಫೀಮು ಗಿಡದ ಪೌಡರ್ ಪೊಪೆಸ್ಟ್ರಾ ವಶಪಡಿಸಿಕೊಂಡಿದ್ದಾರೆ.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್, ರಾಜಸ್ಥಾನ ಮೂಲದವರಾದ ಶಿವಮೊಗ್ಗದ ಜುಗತ ರಾಮ ಪಟೇಲ್ , ಹೀಮಾ ಬಿಷ್ಣೋಯ್, ದನರಾಮ ಪಟೇಲ್, ಶ್ರವಣಕುಮಾರ ಬಿಷ್ಣೋಯ್, ಓಂಪ್ರಕಾಶ ಬಿಷ್ಣೋಯ್ ಬಂಧಿತರು ಎಂದು ತಿಳಿಸಿದರು.

ಖಚಿತ ಮಾಹಿತಿ ಮೇರೆಗೆ ನಗರದ ಗಬ್ಬೂರ ವೃತ್ತ ಬಳಿ ಮಾದಕವಸ್ತು ಮಾರಾಟ ಮಾಡುತ್ತಿದ್ದ ಐವರಿಂದ 1.15ಲಕ್ಷ ರೂ. ಮೌಲ್ಯದ ಅಫೀಮು ಮತ್ತು ಅಫೀಮು ಗಿಡದ ಪೌಡರ್ ಪೊಪೆಸ್ಟ್ರಾ, ಐದು ಮೊಬೈಲ್ ಫೋನ್ಸ್, 1,250ರೂ. ನಗದನ್ನು ವಶಕ್ಕೆ ಪಡೆಯಲಾಗಿದೆ ಎಂದರು.



ಉದಯವಾಹಿನಿ ಚಿತ್ರ

ಈ ಜಾಲವು ರಾಜಸ್ಥಾನ ಮೂಲದ ವಿದ್ಯಾರ್ಥಿಗಳು ಹಾಗೂ ವರ್ತಕರು, ಜನರನ್ನು ಕೇಂದ್ರೀಕೃತವಾಗಿಸಿ ಮಾರಾಟ ಮಾಡುತ್ತಿದ್ದರು. ಇವರು ಹುಬ್ಬಳ್ಳಿ, ಶಿವಮೊಗ್ಗ, ಶಿರಸಿ ಹಾಗೂ ಕುಮಟಾದಲ್ಲಿ ವಿವಿಧ ತರಹದ ಅಂಗಡಿಗಳಲ್ಲಿ ಕೆಲಸ ಮಾಡಿಕೊಂಡಿದ್ದರು.

ರಾಜಸ್ಥಾನದವರೊಂದಿಗೆ ನಿರಂತರ ಸಂಪರ್ಕ ಹೊಂದಿದ್ದ ಇವರು, ಅಲ್ಲಿಂದಲೇ ಮಾದಕವಸ್ತು ತೆಗೆದುಕೊಂಡು ಬಂದು ಇಲ್ಲಿ ಮಾರಾಟ ಮಾಡುತ್ತಿದ್ದರು. ಬೆಳಗ್ಗೆ ಅದನ್ನು ನೀರಿನಲ್ಲಿ ಹಾಕಿಕೊಂಡು ಕುಡಿದರೆ ಶಕ್ತಿ ಬರುತ್ತದೆ. ಇದು ಡ್ರಗ್ ರೀತಿಯಲ್ಲಿ ಕೆಲಸ ಮಾಡುತ್ತದೆ ಎಂದು ತಿಳಿಸಿದರು. ಕಸಬಾಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸ್ಥಳೀಯ ಟಿಪ್ಪರ್‌ಗಳನ್ನು ಬಳಸಿಕೊಳ್ಳಲು ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಭರಮಸಾಗರ

ಮೆದಕೇಪುರ ಸಮೀಪದ ಜಾನ್ ಮೈನ್ಸ್ ನವರು ಸ್ಥಳೀಯ ಟಿಪ್ಪರ್ ಲಾರಿಗಳನ್ನು ಕೆಲಸಕ್ಕೆ ತೆಗೆದುಕೊಳ್ಳದೆ ನಿರ್ಲಕ್ಷಿಸುತ್ತಿರುವ ಮೈನ್ಸ್ ಆಡಳಿತ ವೈಖರಿಯನ್ನು ಖಂಡಿಸಿ ಸುತ್ತಮುತ್ತಲ ಗ್ರಾಮಸ್ಥರು ಮೆದಕೇಪುರ ಬಳಿಯ ಜಾನ್ ಮೈನ್ಸ್ ಮುಖ್ಯ ದ್ವಾರದಲ್ಲಿ ಪ್ರತಿಭಟನೆ ನಡೆಸಿದರು.

ಸ್ಥಳೀಯವಾಗಿರುವ ಮೈನ್ಸ್ ನಲ್ಲಿ ಕೆಲಸಕ್ಕೆಂದು ಟಿಪ್ಪರ್ ಲಾರಿಗಳನ್ನು ಸಾಲಸೂಲ ಮಾಡಿ ತಂದು ಲಾರಿಗಳನ್ನು ಲೋಡ್ ಮಾಡಲು ಅವಕಾಶ ನೀಡುವಂತೆ ಕೋರಿದರೆ ಮೈನ್ಸ್ ವರು ಲಾರಿಗಳನ್ನು ತೆಗೆದುಕೊಳ್ಳದೆ ಉದ್ಧಟತನ ಪ್ರದರ್ಶಿಸುತ್ತಿದ್ದಾರೆ.

ಈಗಾಗಲೇ 340 ಕ್ಕೂ ಹೆಚ್ಚು ಲಾರಿಗಳ ಮಾಲೀಕರು ಅದಿರು ಗಣಿ ಕೆಲಸಕ್ಕೆಂದೆ ಜನರು ಖರೀದಿಸಿದ್ದಾರೆ. ಹೊಸದಾಗಿ 120 ಲಾರಿಗಳನ್ನು ಹಳ್ಳಿಗರು ಖರೀದಿಸಿ ತಂದಿದ್ದಾರೆ. ಕೆಲಸಕ್ಕೆ ಲಾರಿಗಳನ್ನು ಬಳಕೆ ಮಾಡಿಕೊಳ್ಳದೆ ಜನರಿಗೆ ತೊಂದರೆ ಮಾಡಲಾಗುತ್ತಿದೆ. ಸ್ಥಳೀಯ ಲಾರಿಗಳನ್ನು ಕಳೆದ 50 ದಿನಗಳಿಂದ ಕೆಲಸಕ್ಕೆ ತೆಗೆದುಕೊಳ್ಳದೆ ಇರುವ ಕಾರಣ ಮೈನ್ಸ್ ಬಂದ್ ಮಾಡಿ ಪ್ರತಿಭಟನೆ ನಡೆಸಲಾಗುತ್ತಿದೆ.


ಉದಯವಾಹಿನಿ ಚಿತ್ರ

ಗಣಿ ಪ್ರದೇಶದ ಸುತ್ತಮುತ್ತಲಿನ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸಬೇಕಾದ ಗಣಿ ಮಾಲೀಕರು ಕಿಂಚಿತ್ತು ಅಭಿವೃದ್ಧಿ ಚಟುವಟಿಕೆಗಳನ್ನು ನಡೆಸುತ್ತಿಲ್ಲ. ಸ್ಥಳೀಯ ಜನರಿಗೆ ಹೆಚ್ಚು ಉದ್ಯೋಗ ಅವಕಾಶಗಳನ್ನು ನೀಡದೆ ಹಲವು ಗುರುತರ ತಪ್ಪುಗಳನ್ನು ಎಸಗುತ್ತಿದ್ದಾರೆ ಎಂದು ಪ್ರತಿಭಟನಾ ನಿರತರು ಆರೋಪಿಸಿದರು.

**ಗ್ರಾಮಸ್ಥರ ಎಚ್ಚರಿಕೆ**

ಶೀಘ್ರವಾಗಿ ಲಾರಿಗಳನ್ನು ಗಣಿ ಕೆಲಸಕ್ಕೆ ಬಳಕೆ ಮಾಡಿಕೊಳ್ಳದೆ ಹೋದರೆ ಮೆದಕೇಪುರ ದಿಂದ ಚಿತ್ರದುರ್ಗ ಡಿಸಿ ಕಚೇರಿ ವರೆಗೆ ಕಾಲ್ನಡಿಗೆ ಜಾಥ ನಡೆಸಿ ಗಣಿ ಅದಿರು ಮಾಲಕರ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತದೆ ಎಂದು ನಾನಾ ಸಂಘಟನೆಗಳ ಮುಖಂಡರು ಮತ್ತು ಕಾಗಳಗೆರೆ, ಮುತ್ತುಗದೂರು, ಮೆದಕೇಪುರ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

## ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಹೆಚ್ಚಿದ ಪ್ರಯಾಣಿಕರ ಸಂಖ್ಯೆ

• ಉದಯವಾಹಿನಿ ಮಂಗಳೂರು

ಅದಾನಿ ಏರ್‌ಪೋರ್ಟ್ ಹೋಲ್ಡಿಂಗ್ಸ್ ಲಿಮಿಟೆಡ್ ನಿರ್ವಹಣೆಯಲ್ಲಿರುವ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು 2024-2025ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಗಮನಾರ್ಹ ಮೈಲಿಗಲ್ಲನ್ನು ತಲುಪಿದೆ ಎಂದು ಅಧಿಕಾರಿಗಳು ಸೋಮವಾರ ತಿಳಿಸಿದ್ದಾರೆ.

2023-24ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ 4,57,859 ಪ್ರಯಾಣಿಕರಿಗೆ ಹೋಲಿಸಿದರೆ 2024-2025ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ 5,52,689 ಪ್ರಯಾಣಿಕರು ದಾಖಲಾಗಿದ್ದಾರೆ. ವಿಮಾನ ನಿಲ್ದಾಣದ ಟರ್ಮಿನಲ್‌ಗಳ ಮೂಲಕ ಹೋಗುವ ಪ್ರಯಾಣಿಕರ ದಟ್ಟಣೆಯಲ್ಲಿ ಗಣನೀಯ ಪ್ರಮಾಣದಲ್ಲಿ 21 ಪ್ರತಿಶತದಷ್ಟು ಹೆಚ್ಚಳವನ್ನು ವರದಿ ಮಾಡಿದೆ. ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಹೇಳಿಕೆಯ ಪ್ರಕಾರ, ಪ್ರಯಾಣಿಕರ ದಟ್ಟಣೆಯನ್ನು ನೋಡುವುದಾದರೆ 3,93,598 ದೇಶೀಯ ಪ್ರಯಾಣಿಕರು ಮತ್ತು 1,59,091 ಅಂತರಾಷ್ಟ್ರೀಯ ಪ್ರಯಾಣಿಕರು ಸೇರಿದ್ದಾರೆ. ವಿದೇಶ ಪ್ರಯಾಣಕ್ಕೆ ದುಬೈ ಪ್ರಮುಖ ಅಂತಾರಾಷ್ಟ್ರೀಯ ತಾಣವಾಗಿದ್ದು, ಬೆಂಗಳೂರು ಮತ್ತು ಮುಂಬೈ ದೇಶೀಯ ಪ್ರಯಾಣಕ್ಕೆ ಪ್ರಮುಖ ಆಯ್ಕೆಗಳಾಗಿವೆ.

ವಿಮಾನ ನಿಲ್ದಾಣವು ಈಗ ಪ್ರತಿ ತಿಂಗಳು 1,80,000 ಪ್ರಯಾಣಿಕರನ್ನು ನೋಡುತ್ತಿದೆ.

# ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ಗುರುಪೂರ್ಣಿಮೆ ಆಚರಣೆ

### • ಭಜನಗಾಯಕಿ ಶ್ರೀಮತಿ ಅಂಬುಜಾಕ್ಷಿಗೆ ರಾಜ್ಯಮಟ್ಟದ 'ಭಜನ ಶಿರೋಮಣಿ' ಪ್ರಶಸ್ತಿ ಪ್ರದಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಗುರುಪೂರ್ಣಿಮೆ ಅಂಗವಾಗಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ವತಿಯಿಂದ ದಿನಾಂಕ 22-7-2024ರ ಸೋಮವಾರ ನಗರದ ಬ್ಯಾಂಕ್ ಕಾಲೋನಿ ಯೋಗ ಕೇಂದ್ರದಲ್ಲಿ ಸಂಜೆ ಹಮ್ಮಿಕೊಂಡಿದ್ದ 'ಗುರುವಂದನಾ' ಕಾರ್ಯಕ್ರಮದಲ್ಲಿ ಯೋಗ ಶಿಕ್ಷಕರಾದ ಶ್ರೀಮತಿ ಲಲಿತ ಬೇದ್ರೆ, ಸರ್ವದಾ, ಸುಭದ್ರಮ್ಮ, ಕವಿತಾಕವಾಡಿಗರಹಟ್ಟಿ, ಸಮಾಜಸೇವಕರಾದ ಚಿತ್ರದುರ್ಗ ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್ ಸತ್ಯಣ್ಣ ಅವರನ್ನು ಸನ್ಮಾನಿಸಲಾಯಿತು.

> ಗುರುವೆಂದರೆ ಕೇವಲ ವಿದ್ಯೆಯನ್ನು ನೀಡಿದ ಶಿಕ್ಷಕರಷ್ಟೇ ಅಲ್ಲ ಬದುಕಿನಲ್ಲಿ ಸರಿಯಾದ ದಾರಿಯನ್ನು ತೋರುವ ಪ್ರತಿಯೊಬ್ಬರೂ ಗುರುಗಳೇ ಇಂತಹ ಗುರು ವೃಂದಕ್ಕೆ ಗುರುಪೂರ್ಣಿಮೆಯಂದು ಗೌರವ ಸೂಚಿಸುವುದು ಎಲ್ಲರ ಕರ್ತವ್ಯವಾಗಿದೆ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಕೇವಲ ಯೋಗ ಕ್ಷೇತ್ರದ ಸೇವೆಗೆ ಮೀಸಲಾಗದೆ ಕಲೆ ಮತ್ತು ಕಲಾವಿದರನ್ನು, ಸಾಧಕರನ್ನು ಪ್ರೋತ್ಸಾಹಿಸುತ್ತಿರುವುದು ಸಂತೋಷದ ವಿಷಯವಾಗಿದೆ ಎಂದು ಹೇಳಿದರು.
> -ಆರ್ ಸತ್ಯಣ್ಣ , ಸಂಸ್ಥೆಯ ಗೌರವಾಧ್ಯಕ್ಷ

ಇದೇ ಸಂಧರ್ಭದಲ್ಲಿ ಹಲವಾರು ವರ್ಷಗಳಿಂದ ಚಿತ್ರದುರ್ಗ ಭದ್ರಾವತಿ ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಭಜನೆಗಳನ್ನು ಹಾಡುವುದು ಮತ್ತು ಇತರರಿಗೆ ಉಚಿತವಾಗಿ ಕಲಿಸುತ್ತಾ ಸನಾತನ ಭಜನಾ ಕಲೆಯನ್ನು ಬೆಳೆಸಿಕೊಂಡು ಬಂದಿರುವ ಚಿತ್ರದುರ್ಗದ ಭಜನಾ ಗಾಯಕಿ ಶ್ರೀಮತಿ ಎಲ್ ಹೆಚ್ ಅಂಬುಜಾಕ್ಷಿ ಅವರಿಗೆ ರಾಜ್ಯಮಟ್ಟದ ' ಭಜನಾ ಶಿರೋಮಣಿ' ಪ್ರಶಸ್ತಿ ಪ್ರಧಾನ ಮಾಡಲಾಯಿತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಅಧ್ಯಕ್ಷ ಹಾಗೂ ಯೋಗಗುರು ರವಿ ಕೆ.ಅಂಬೇಕರ್ ಮಾತನಾಡಿ ಹಿಂದೂ ಧರ್ಮದ ಸನಾತನ ಕಲೆಗಳಾಗಿರುವ ಯೋಗ ಮತ್ತು ಭಜನೆ ಆರೋಗ್ಯ ದೃಷ್ಟಿಯಿಂದ ಒಂದೇ ಮುಖದ ಎರಡು ಮುಖಗಳಾಗಿದ್ದು ಭಜನೆ ಹಾಡುತ್ತಾ ಚಪ್ಪಾಳೆ ತಟ್ಟುವುದರಿಂದ ಆರೋಗ್ಯ ಸುಧಾರಿಸುವುದರ ಜೊತೆಗೆ ಅನೇಕ ಕಾಯಿಲೆಗಳನ್ನು ಶಮನ ಮಾಡಬಲ್ಲ ಪರಿಣಾಮಕಾರಿ ವ್ಯಾಯಾಮ ಎನಿಸಿದೆ.

ಹೃದಯ ರೋಗ ಮತ್ತು ಅಸ್ತಮಾ ಶ್ವಾಸಕೋಶದ ಸಂಬಂಧಿಸಿದ ಸಮಸ್ಯೆಗಳಿಂದ ಪರಿಹಾರ ನೀಡುತ್ತದೆ.

ಇಂತಹ ಅಮೂಲ್ಯ ಕಲೆಯನ್ನು ಉಳಿಸಿ ಬೆಳೆಸುತ್ತಿರುವ ಶ್ರೀಮತಿ ಅಂಬುಜಾಕ್ಷಿಯವರಿಗೆ ನಮ್ಮ ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ರಾಜ್ಯಮಟ್ಟದ 'ಭಜನ ಶಿರೋಮಣಿ ಪ್ರಶಸ್ತಿ' ನೀಡಿ ಗೌರವಿಸಲಾಗುತ್ತಿದೆ ಭಾರತೀಯ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಹಿಸುವುದು ಸಂಸ್ಥೆಯ ಉದ್ದೇಶವಾಗಿದೆ ಎಂದು ಹೇಳಿದರು.

**ಭಜನಾ ಶಿರೋಮಣಿ ಪ್ರಶಸ್ತಿ ಪ್ರದಾನ**

ಇದಕ್ಕೂ ಮುನ್ನ ಸಂಸ್ಥೆಯ ಯೋಗ ಸಾಧಕಿಯರು ವೇದ ಋಷಿ ವ್ಯಾಸಮುನಿಗಳು, ಶಂಕರಾಚಾರ್ಯ ಹಾಗೂ ಯೋಗ ಗುರು ಪರಮಪೂಜ್ಯ ಶ್ರೀ ಬಾಬರಾಮದೇವರವರ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿ ಭಜನೆ ಕೀರ್ತನೆಗಳನ್ನು ಹಾಡಿದರು.

ಕಾರ್ಯಕ್ರಮದಲ್ಲಿ ಯೋಗ ಶಿಕ್ಷಕರಾದ ಎಲ್.ಎಸ್. ಬಸವರಾಜ್, ಹಿರಿಯ ಯೋಗ ಸಾಧಕಿ ವನಜಾಕ್ಷಮ್ಮ ಹಲವಾರು ಯೋಗ ಪ್ರಶಿಕ್ಷಣಾರ್ಥಿಗಳು ಬ್ಯಾಂಕ್ ಕಾಲೋನಿ ನಾಗರೀಕರು ಭಾಗವಹಿಸಿದ್ದರು.

## ಸಾಧುಕೋಕಿಲ ಭೇಟಿಯನ್ನು ನಿರಾಕರಿಸಿದ ನಟ ದರ್ಶನ್

• ಉದಯವಾಹಿನಿ ಚಿತ್ರದುರ್ಗ

ರೇಣುಕಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜೈಲು ಸೇರಿರುವ ನಟ ದರ್ಶನ್ ರನ್ನು ನೋಡಲು ಹಲವಾರು ನಟರು ಆಗಮಿಸುತ್ತಿದ್ದು, ಇದೀಗ ಹಾಸ್ಯ ನಟ ಸಾಧುಕೋಕಿಲ ಅವರು ಆಗಮಿಸಿದ್ದರು. ಆದರೆ ಸಾಧು ಕೋಕಿಲ ಭೇಟಿಯನ್ನು ದರ್ಶನ್ ಅವರು ನಿರಾಕರಣೆ ಮಾಡಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲಿನಲ್ಲಿರುವ ದರ್ಶನ್ ಅವರನ್ನು ಭೇಟಿ ಮಾಡಲು ನಟ ಸಾಧು ಕೋಕಿಲ ವಕೀಲರ ಜೊತೆ ಪರಪ್ಪನ ಅಗ್ರಹಾರ ಜೈಲಿಗೆ ಆಗಮಿಸಿದ್ದರು. ಆದರೆ ಸಾಧು ಅವರ ಭೇಟಿ ದರ್ಶನ್ ನಿರಾಕರಣೆ ಮಾಡಿದ್ದಾರೆ.


ಉದಯವಾಹಿನಿ ಚಿತ್ರ

ಈ ಬಗ್ಗೆ ಮಾತನಾಡಿದ ಅವರು, ದರ್ಶನ್ ರನ್ನು ವಾರದಲ್ಲಿ 2 ಬಾರಿ ಮಾತ್ರ ಭೇಟಿ ಮಾಡುವ ಅವಕಾಶವಿದೆ. ಹೀಗಾಗಿ ತಮ್ಮ ಕುಟುಂಬಸ್ಥರ ಹೊರತಾಗಿ ಯಾರನ್ನೂ ಪ್ರತ್ಯೇಕವಾಗಿ ಭೇಟಿಯಾಗಲು ದರ್ಶನ್ ಇಚ್ಚಿಸುತ್ತಿಲ್ಲ. ಗುರುವಾರ ದರ್ಶನ್ ಕುಟುಂಬ ಆಗಮಿಸುತ್ತೆ, ಆವಾಗ ಅವರೊಂದಿಗೆ ಬಂದು ದರ್ಶನ್ ರನ್ನು ಭೇಟಿಯಾಗುತ್ತೇನೆ. ವಾರಕ್ಕೆ ಒಂದೋ, ಎರಡೋ ಎಂಟ್ರಿ ಅಷ್ಟೇ ಇರೋದು. ನಾನು ಈಗ ಮೀಟ್ ಮಾಡಿದ್ರೆ, ದರ್ಶನ್ ಕುಟುಂಬಕ್ಕೆ ಅವಕಾಶ ಸಿಗೋದಿಲ್ಲ. ಹಾಗಾಗಿ ಗುರುವಾರ ಬಂದು ಅವರನ್ನು ನೋಡಿಕೊಂಡು ಹೋಗುತ್ತೇನೆ ಎಂದು ಸಾಧುಕೋಕಿಲ ಹೇಳಿದರು.

# ಡೆಮಾಕ್ರೆಟಿಕ್ ಅಭ್ಯರ್ಥಿ ಕಮಲಾಗೆ 1.5 ಮಿಲಿಯನ್ ಡಾಲರ್ ದೇಣಿಗೆ

## ಚುನಾವಣಾ ಅಭ್ಯರ್ಥಿಯಾಗಿ ಆಯ್ಕೆಯಾದ ಕಮಲಾ ಹ್ಯಾರಿಸ್, ಗೆಲುವು ಸಾಧಿಸಿದ ಬಳಿಕ ಝೂಮ್ ಕಾಲ್ ಮೂಲಕ ಆನ್‌ಲೈನ್ ಮೀಟಿಂಗ್

ಅಮೆರಿಕ ಅಧ್ಯಕ್ಷೀಯ ಚುನಾವಣೆ

**ಅಮೆರಿಕ:** 2024ರ ಅಮೆರಿಕ ಅಧ್ಯಕ್ಷೀಯ ಚುನಾವಣೆ ರೋಚಕ ಘಟ್ಟ ತಲುಪಿದೆ. ಹಾಲಿ ಅಧ್ಯಕ್ಷ ಜೋ ಬೈಡನ್ ಅವರು ಅಧ್ಯಕ್ಷೀಯ ಚುನಾವಣಾ ರೇಸ್‌ನಿಂದ ಹೊರ ಬಿದ್ದ ಮೇಲೆ ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ಸರ್ವಾನುಮನತದಿಂದ ಆಯ್ಕೆಯಾದ ಕಮಲಾ ಹ್ಯಾರಿಸ್ ಅವರಿಗೆ ಭಾರೀ ಜನ ಬೆಂಬಲ ವ್ಯಕ್ತವಾಗಿದೆ. ಡೆಮಾಕ್ರೆಟಿಕ್ ಪಕ್ಷದ ಅಧ್ಯಕ್ಷೀಯ ಚುನಾವಣಾ ಅಭ್ಯರ್ಥಿ ಆಯ್ಕೆ ವೇಳೆ ನಡೆದ ಮತದಾನದಲ್ಲಿ ಅಮೆರಿಕ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರು ಗೆಲುವು ಸಾಧಿಸಿದ ಬಳಿಕ ಝೂಮ್ ಕಾಲ್ ಮೂಲಕ ಆನ್‌ಲೈನ್ ಮೀಟಿಂಗ್ ನಡೆಸಿದರು. ಈ ಆನ್‌ಲೈನ್ ವರ್ಚುವಲ್ ಸಭೆಯಲ್ಲಿ ಬರೋಬ್ಬರಿ 44 ಸಾವಿರ ಮಂದಿ ಭಾಗಿಯಾಗಿದ್ದರು.



ತಮ್ಮ ಮೊದಲ ಸಭೆಯಲ್ಲೇ ಕಮಲಾ ಹ್ಯಾರಿಸ್ ಅವರು 1.5 ಮಿಲಿಯನ್ ಅಮೆರಿಕನ್ ಡಾಲರ್ ಹಣವನ್ನು ದೇಣಿಗೆ ರೂಪದಲ್ಲಿ ಸಂಗ್ರಹಿಸಿದ್ದಾರೆ.

ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಡೆಮಾಕ್ರೆಟಿಕ್ ಅಭ್ಯರ್ಥಿಯಾಗಿ ಕಮಲಾ ಹ್ಯಾರಿಸ್ ಅವರು ಆಯ್ಕೆಯಾದ ಮೂರೇ ಗಂಟೆ ಗಳಲ್ಲಿ ಇಷ್ಟು ಬೃಹತ್ ಮೊತ್ತದ ದೇಣಿಗೆಯನ್ನು ಅವರು ಸಂಗ್ರಹ ಮಾಡಿದ್ದಾರೆ. ಒಂದು ವೇಳೆ ನವೆಂಬರ್ 5 ರಂದು ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಕಮಲಾ ಹ್ಯಾರಿಸ್ ಅವರು ಗೆಲುವು ದಾಖಲಿಸಿದರೆ ಅಮೆರಿಕದ ಮೊದಲ ಮಹಿಳಾ ಅಧ್ಯಕ್ಷೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಲಿದ್ದಾರೆ.

ತಾವು ಕರೆದ ಸಭೆಗೆ ಭಾಗಿಯಾದ ಸಾವಿರಾರು ಸದಸ್ಯರು ಹಾಗೂ ಮಿಲಿಯನ್ ಡಾಲರ್‌ಗಟ್ಟಲೆ ಹಣವನ್ನು ದೇಣಿಗೆಯಾಗಿ ನೀಡಿದ ಬೆಂಬಲಿಗರಿಗೆ ಕಮಲಾ ಹ್ಯಾರಿಸ್ ಅವರು ಧನ್ಯವಾದ ಅರ್ಪಿಸಿದರು. ಇನ್ನು ತಮ್ಮ ತವರು ರಾಜ್ಯವಾದ ಕ್ಯಾಲಿಫೋರ್ನಿಯಾ ಜನರು ಭಾರೀ ಬೆಂಬಲ ನೀಡುತ್ತಿದ್ದಾರೆ ಎಂದು ಹೇಳಿದ ಕಮಲಾ ಹ್ಯಾರಿಸ್, ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿಯಾಗಿ ನಾಮಕರಣವಾಗಿರುವ ತಾವು ಇದೀಗ ವ್ಯಕ್ತವಾಗಿರುವ ಜನ ಬೆಂಬಲವನ್ನ ಗಮನಿಸಿ ಈ ಬಾರಿ ಸ್ಪರ್ಧಿಸಲು ಮುಂದಾಗುವೆ ಎಂದು ಹೇಳಿದ್ದಾರೆ. ಅಮೆರಿಕದಲ್ಲಿ ಸಾಂಪ್ರದಾಯಿಕವಾಗಿ ಕಪ್ಪು ವರ್ಣೀಯ ಮಹಿಳೆಯರನ್ನು ಡೆಮಾಕ್ರೆಟಿಕ್ ಪಕ್ಷದ ವೋಟ್ ಬ್ಯಾಂಕ್ ಎಂದು ಬಣ್ಣಿಸಲಾದೆ. ಇನ್ನು ಕಮಲಾ ಹ್ಯಾರಿಸ್ ಅವರು ಕರೆದಿದ್ದ ಝೂಮ್ ಕಾಲ್ ನಲ್ಲಿ ಭಾಗಿಯಾಗಿದ್ದ ಸದಸ್ಯರು ಅತ್ಯುತ್ತಮವಾಗಿ ಸ್ಪಂದಿಸಿದ್ದು, ಕಮಲಾ ಹ್ಯಾರಿಸ್ ಅವರ ಉತ್ಸಾಹ ಇಮ್ಮಡಿಸಿದೆ.

**ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಚಿತ್ರಣವೇ ಬದಲಾಗಿದೆ. ಡೆಮಾಕ್ರೆಟಿಕ್ ಪಕ್ಷದ ಅಭ್ಯರ್ಥಿ ಸ್ಥಾನದಿಂದ ಹಾಲಿ ಅಧ್ಯಕ್ಷ ಜೋ ಬೈಡನ್ ಹೊರ ಬಿದ್ದ ಬಳಿಕ ನೂತನ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರಿಗೆ ಭಾರೀ ಜನ ಬೆಂಬಲ ವ್ಯಕ್ತವಾಗುತ್ತಿದೆ. ರಿಪಬ್ಲಿಕನ್ ಅಭ್ಯರ್ಥಿ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಕಮಲಾ ಹ್ಯಾರಿಸ್ ಪ್ರಬಲ ಪ್ರತಿಸ್ಪರ್ಧೆ ಒಡ್ಡೋದು ಖಚಿತವಾಗುತ್ತಿದ್ದು, ಭಾರೀ ಪ್ರಮಾಣದ ದೇಣಿಗೆ ಕೂಡಾ ಸಂಗ್ರಹ ಆಗುತ್ತಿದೆ.**

### ಟ್ರಂಪ್‌ಗೆ ಹೊಸ ಸವಾಲು ರಂಗೇರಿದೆ ಅಖಾಡ

ಡೆಮಾಕ್ರೆಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರು ತಮ್ಮ ಮೊದಲ ಪ್ರಚಾರ ಸಭೆಯಲ್ಲೇ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿ ಡೊನಾಲ್ಡ್ ಟ್ರಂಪ್ ವಿರುದ್ಧ ಆರ್ಭಟಿಸಿದರು. ನಾವು ಇಡೀ ಪಕ್ಷ ಒಂದಾಗಬೇಕು, ಇಡೀ ದೇಶವೇ ಒಂದಾಗಿ ಡೊನಾಲ್ಡ್ ಟ್ರಂಪ್ ಅವರನ್ನು ಮಣಿಸಬೇಕು ಎಂದು ಕಮಲಾ ಹ್ಯಾರಿಸ್ ಅವರು ಕರೆ ನೀಡಿದ್ದಾರೆ. ನವೆಂಬರ್‌ನಲ್ಲಿ ನಡೆಯಲಿರುವ ಚುನಾವಣೆಯು ಎರಡು ವಿಭಿನ್ನ ದೃಷ್ಟಿಕೋನ ಹೊಂದಿರುವ ಅಭ್ಯರ್ಥಿಗಳ ನಡುವಣ ಸಮರ ಎಂದು ಕಮಲಾ ಹ್ಯಾರಿಸ್ ಅವರು ಬಣ್ಣಿಸಿದ್ದಾರೆ.

### ಕೃಷ್ಣ ವರ್ಣೀಯ ಮಹಿಳೆ ಪರ ಅಭಿಯಾನ

**ಇನ್ನೊಂದೆಡೆ ಚರ್ಮದ ಬಣ್ಣವನ್ನು ಆಧರಿಸಿಯೂ ರಾಜಕೀಯ ಅಭಿಯಾನಗಳು ಶುರುವಾಗಿವೆ. ಕಪ್ಪು ಬಣ್ಣದ ಚರ್ಮ ಹೊಂದಿರುವ ಹಾಗೂ ಕಂದು ಬಣ್ಣದ ಚರ್ಮ ಹೊಂದಿರುವ ಮಹಿಳಾ ರಾಜಕಾರಣಿಗಳ ಪರ ನಿಲ್ಲುವ ಸಂಘಟನೆಗಳು ಈ ಬಾರಿ ಡೆಮಾಕ್ರೆಟಿಕ್ ಅಭ್ಯರ್ಥಿ ಕಮಲಾ ಹ್ಯಾರಿಸ್ ಅವರು ಗೆಲ್ಲಬೇಕು ಎಂದು ಕರೆ ನೀಡಿದ್ದಾರೆ. 'ಕಪ್ಪು ಮಹಿಳೆಯೊಂದಿಗೆ ಗೆಲುವು ಸಾಧಿಸಿ' ಎಂಬ ಘೋಷವಾಕ್ಯದೊಂದಿಗೆ ಸಂಸ್ಥೆ ಸ್ಥಾಪಿಸಿರುವ ಜೋತಕಾ ಎಡ್ಡಿ ಎಂಬುವರು, ಕಪ್ಪು ವರ್ಣೀಯ ಮಹಿಳಾ ನಾಯಕಿ ಗೆಲ್ಲಬೇಕು ಎಂದು ಕಮಲಾ ಹ್ಯಾರಿಸ್ ಪರ ನಿಂತಿದ್ದಾರೆ.**

# ಐಎನ್‌ಎಸ್ ಬ್ರಹ್ಮಪುತ್ರದಲ್ಲಿ ಭೀಕರ ಅಗ್ನಿ ದುರಂತ

**ನವದೆಹಲಿ:** ಭಾರತೀಯ ನೌಕಾಪಡೆಯ ಪ್ರಮುಖ ಯುದ್ಧ ನೌಕೆಯಾದ ಐಎನ್‌ಎಸ್ ಬ್ರಹ್ಮಪುತ್ರದಲ್ಲಿ ಭೀಕರ ಅಗ್ನಿ ದುರಂತ ಸಂಭವಿಸಿದೆ. ನೌಕೆಯ ಪ್ರಮುಖ ಭಾಗಗಳು ಸುಟ್ಟು ಕರಕಲಾಗಿದ್ದು, ನೌಕೆಯಲ್ಲಿದ್ದವರ ಪೈಕಿ ಒಬ್ಬ ನಾವಿಕ ನಾಪತ್ತೆಯಾಗಿದ್ದಾರೆ. ಒಬ್ಬ ಕಿರಿಯ ನಾವಿಕ ನಾಪತ್ತೆಯಾಗಿದ್ದು, ರಕ್ಷಣೆಗೆ ಕಾರ್ಯಾಚರಣೆ ನಡೆಸಲಾಗುತ್ತಿದೆ. ಆದಾಗ್ಯೂ, ನೌಕೆಯಲ್ಲಿದ್ದ ಎಲ್ಲ ಸಿಬ್ಬಂದಿಯೂ ಸುರಕ್ಷಿತರಾಗಿದ್ದಾರೆ ಎಂಬುದಾಗಿ ನೌಕಾಪಡೆಯು ಪ್ರಕಟಣೆ ತಿಳಿಸಿದೆ.

ಮುಂಬೈನಲ್ಲಿರುವ ನೌಕಾಪಡೆಯ ನೌಕಾನೆಲೆ ಯಲ್ಲಿ ಕ್ಷಿಪಣಿಗಳನ್ನು ಉಡಾಯಿಸಬಹುದಾದ ಸಾಮರ್ಥ್ಯ ಇರುವ ಯುದ್ಧನೌಕೆಯ ನಿರ್ವಹಣೆ ಮಾಡಲಾಗುತ್ತಿತ್ತು. ಸಿಬ್ಬಂದಿಯು ಯುದ್ಧ ನೌಕೆಯ ತಪಾಸಣೆ, ಸಣ್ಣ-ಪುಟ್ಟ ದುರಸ್ತಿಯಲ್ಲಿ ತೊಡಗಿದ್ದರು.

ಇದೇ ವೇಳೆ ಅಗ್ನಿ ದುರಂತ ಸಂಭವಿಸಿದೆ. ಅಗ್ನಿಯ ಕೆನ್ನಾಲಗೆಗೆ ನೌಕೆಯ ಪ್ರಮುಖ ಭಾಗಗಳು



ಸುಟ್ಟಿವೆ. ಇದೇ ವೇಳೆ ಒಬ್ಬ ನಾವಿಕ ನಾಪತ್ತೆಯಾಗಿದ್ದಾನೆ. ಆತನಿಗಾಗಿ ತೀವ್ರ ಪ್ರಮಾಣದಲ್ಲಿ ಶೋಧ ನಡೆದಿದೆ ಎಂದು ನೌಕಾಪಡೆಯು ಮಾಹಿತಿ ನೀಡಿದೆ. ಮುಂಬೈನ ನೌಕಾನೆಲೆಯಲ್ಲಿ ನಿನ್ನೆ ಬೆಳಗ್ಗೆ ಅಗ್ನಿ ಅವಘಡ ಸಂಭವಿಸಿದೆ.

ಕೂಡಲೇ ಅಗ್ನಿಶಾಮಕ ದಳದ ಸಿಬ್ಬಂದಿಯು ಬೆಂಕಿಯ ಕೆನ್ನಾಲಗೆಯು ಬಂದರಿನ ಬೇರೆ ಹಡಗುಗಳಿಗೂ ವ್ಯಾಪಿಸದಂತೆ ನೋಡಿಕೊಂಡರು. ಸಿಬ್ಬಂದಿಯು ಯುದ್ಧನೌಕೆಯನ್ನು ತಪಾಸಣೆ ಮಾಡುವಾಗ ಅವಘಡ ಸಂಭವಿಸಿದೆ. ದುರಂತಕ್ಕೆ ನಿಖರ ಕಾರಣ ಏನು ಎಂಬುದು ಗೊತ್ತಾಗಿಲ್ಲ. ಪ್ರಕರಣದ ಕುರಿತು ತನಿಖೆ ನಡೆಸಲಾಗುತ್ತದೆ ಎಂದು ನೌಕಾಪಡೆ ತಿಳಿಸಿದೆ. ಅಗ್ನಿ ದುರಂತದಲ್ಲಿ ಯುದ್ಧನೌಕೆಗೆ ಭಾರಿ ಹಾನಿಯಾಗಿದೆ ಎಂದು ಮೂಲಗಳು ತಿಳಿಸಿವೆ.

### 3,600 ಟನ್ ತೂಕ

**ಐಎನ್‌ಎಸ್ ಬ್ರಹ್ಮಪುತ್ರ ಯುದ್ಧ ನೌಕೆಯನ್ನು ದೇಶೀಯವಾಗಿಯೇ, ಕೋಲ್ಕೊತಾದಲ್ಲಿ ನಿರ್ಮಿಸಲಾಗಿದೆ. 2000ನೇ ಇಸವಿಯಲ್ಲಿ ಇದನ್ನು ಭಾರತೀಯ ನೌಕಾಪಡೆಗೆ ಅಳವಡಿಸಿಕೊಳ್ಳಲಾಗಿದೆ. ಸುಮಾರು 3,600 ಟನ್ ತೂಕ ಇರುವ ಇದು, 410 ಅಡಿ ಉದ್ದ ಇದೆ. ಗಂಟೆಗೆ 56 ಕಿಲೋಮೀಟರ್ ವೇಗದಲ್ಲಿ ಚಲಿಸುವ ಸಾಮರ್ಥ್ಯ ಹೊಂದಿದ್ದು, ಕ್ಷಿಪಣಿಗಳನ್ನು ಉಡಾಯಿಸಿ, ವೈರಿಗಳನ್ನು ನಿರ್ನಾಮ ಮಾಡಬಹುದಾಗಿದೆ. ತುರ್ತು ಸಂದರ್ಭಗಳಲ್ಲಿ ಕಾರ್ಯಾಚರಣೆ, ರಕ್ಷಣಾ ಕಾರ್ಯಾಚರಣೆಗೆ ಇದನ್ನು ಬಳಸಲಾಗಿದೆ.**

# ರಾಷ್ಟ್ರಪತಿ ಭೇಟಿಯಾದ ನಿರ್ಮಲಾ ಸೀತಾರಾಮನ್

**ನವದೆಹಲಿ:** ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ತಮ್ಮ 2024-25ರ ಪೂರ್ಣ ಬಜೆಟ್ ಮಂಡಿಸುವ ಮೊದಲು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ಚರ್ಚಿಸಿದರು.

ಸ್ಥಾಪಿತ ಸಂಪ್ರದಾಯದ ಪ್ರಕಾರ, ಹಣಕಾಸು ಸಚಿವರು ಸಂಸತ್ತಿಗೆ ತೆರಳುವ ಮೊದಲು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿಗಳನ್ನು ಭೇಟಿ ಮಾಡಿದರು.

ಮುರ್ಮು ಅವರು ಕೇಂದ್ರ ಬಜೆಟ್ ಮಂಡಿಸಲು ಸಂಸತ್ತಿಗೆ ತೆರಳುವ ಮುನ್ನ ಸೀತಾರಾಮನ್ ಅವರಿಗೆ ಮಂಗಳಕರವೆಂದು ಪರಿಗಣಿಸಲಾದ ಮೊಸರು-ಸಕ್ಕರೆ ನೀಡಿದರು. ಸಂಸತ್ತಿನಲ್ಲಿ ಬಜೆಟ್ ಮಂಡನೆಗೆ ಮೊದಲು, ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದ ಕ್ಯಾಬಿನೆಟ್ 2024-25 ರ ಹಣಕಾಸು ವರ್ಷಕ್ಕೆ (ಏಪ್ರಿಲ್ 2024 ರಿಂದ ಮಾರ್ಚ್ 2025 ರವರೆಗೆ) ಬಜೆಟ್ ಅನ್ನು ಅನುಮೋದಿಸುತ್ತದೆ. ಸೀತಾರಾಮನ್ ಅವರು ಮಂಗಳವಾರ ಲೋಕಸಭೆಯಲ್ಲಿ ಏಳನೇ ಬಜೆಟ್ ಮಂಡಿಸುತ್ತಿದ್ದಂತೆ ನಿರೀಕ್ಷೆಗಳು ಹೆಚ್ಚುತ್ತಿವೆ.

ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಮಾರ್ಗಸೂಚಿಯನ್ನು ವಿವರಿಸುವಾಗ ಕಳೆದ



10 ವರ್ಷಗಳಲ್ಲಿ ಮೋದಿ ಸರ್ಕಾರದ ಸಾಧನೆಯ ಒಂದು ನೋಟವನ್ನು ಬಜೆಟ್ ನೀಡುತ್ತದೆ.

ಸೀತಾರಾಮನ್ ಅವರು 2019 ರಲ್ಲಿ ಸ್ಥಾಪಿಸಿದ ಸಂಪ್ರದಾಯವನ್ನು ಮುಂದುವರೆಸಿದರು, ಬಿಫ್ಕೇಸ್ ಸಂಪ್ರದಾಯವನ್ನು ಕೈಬಿಟ್ಟ ನಂತರ ಅವರು ಬಳಸಿದ ಬಹಿ-ಖಾತಾದಲ್ಲಿ ಬಜೆಟ್ ಭಾಷಣವನ್ನು ಹೊತ್ತಿದ್ದರು. ಅವರು ಕೆಂಪು ಬಣ್ಣದ ಬಹಿ ಖಾತಾ ಶೈಲಿಯ ಪೌಚ್‌ನಲ್ಲಿ ಡಿಜಿಟಲ್ ಟ್ಯಾಬ್ಲೆಟ್ ಅನ್ನು ಇಟ್ಟುಕೊಂಡಿದ್ದರು.

ಸಂಸತ್ತಿನಲ್ಲಿ ಮಂಡಿಸಲಾದ ಆರ್ಥಿಕ ಸಮೀಕ್ಷೆಯ ಪ್ರಕಾರ ಪ್ರಸಕ್ತ ಹಣಕಾಸು ವರ್ಷದಲ್ಲಿ ಆರ್ಥಿಕತೆಯು ಶೇ.6.5-7 ರಷ್ಟು ವಿಸ್ತರಿಸುವ ನಿರೀಕ್ಷೆಯಿದೆ.

# ಶ್ರೀಮಂತ ರಾಷ್ಟ್ರಗಳ ಡಬಲ್ ಸ್ಟ್ಯಾಂಡರ್ಡ್‌ಗೆ ನಾಗೇಶ್ವರನ್ ಟೀಕೆ

**ನವದೆಹಲಿ:** ಭಾರತದ ಮುಖ್ಯ ಆರ್ಥಿಕ ಸಲಹೆಗಾರ ವಿ ಅನಂತ ನಾಗೇಶ್ವರನ್ ಅವರು ಅಭಿವೃದ್ಧಿ ಹೊಂದಿದ ದೇಶಗಳು ಹವಾಮಾನ ಕ್ರಿಯೆಯಲ್ಲಿ ತಮ್ಮ ಡಬಲ್ ಸ್ಟ್ಯಾಂಡರ್ಡ್ ಧೋರಣೆಯನ್ನು ಟೀಕಿಸಿದ್ದಾರೆ, 2030 ರ ಮೊದಲಾರ್ಧದಲ್ಲಿ ಮಾತ್ರ ತಡೆರಹಿತ ಕಲ್ಲಿದ್ದಲು ವಿದ್ಯುತ್ ಸ್ಥಾವರಗಳ ಬಳಕೆಯನ್ನು ಕೊನೆಗೊಳಿಸುವ ಜಿ7 ನ ಬದ್ಧತೆಯನ್ನು ಎತ್ತಿ ತೋರಿಸಿದ್ದಾರೆ. ವಾರ್ಷಿಕ ಆರ್ಥಿಕ ಸಮೀಕ್ಷೆಯಲ್ಲಿ, ಅಭಿವೃದ್ಧಿಶೀಲ ರಾಷ್ಟ್ರಗಳು ತಮ್ಮ ಜೀವನಶೈಲಿಯನ್ನು ಸ್ವಚ್ಛ ಪರಿಸರದಲ್ಲಿ, ತಂಪಾದ ವಾತಾವರಣದಲ್ಲಿ ನಿರ್ವಹಿಸಲು ಅನುವು ಮಾಡಿಕೊಡಲು ಅಭಿವೃದ್ಧಿಶೀಲ ರಾಷ್ಟ್ರಗಳು ಉತ್ತಮ ಜೀವನಮಟ್ಟಕ್ಕಾಗಿ ತಮ್ಮ ಆಕಾಂಕ್ಷೆಗಳನ್ನು ತ್ಯಜಿಸುವಂತೆ ಕೇಳುವುದು ನೈತಿಕವಾಗಿ ತಪ್ಪು ಎಂದು ನಾಗೇಶ್ವರನ್ ಹೇಳಿದ್ದಾರೆ.



ಆರ್ಥಿಕ ಬೆಳವಣಿಗೆಯು ಹವಾಮಾನ ಬದಲಾವಣೆಯನ್ನು ಉತ್ತಮವಾಗಿ ಪರಿಹರಿಸಲು ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಅಧಿಕಾರ ನೀಡುತ್ತದೆ ಎಂದು ಅವರು ವಾದಿಸಿದರು. ಹವಾಮಾನ ಬದಲಾವಣೆ ಕುರಿತ ವಿಶ್ವಸಂಸ್ಥೆ ಸಮಾವೇಶ, ಅದರ ಪ್ಯಾರಿಸ್ ಒಪ್ಪಂದದ ಆದೇಶದಂತೆ ಅಭಿವೃದ್ಧಿ ಹೊಂದಿದ ದೇಶಗಳು ಸಂಪನ್ಮೂಲಗಳನ್ನು ಒದಗಿಸುತ್ತವೆ, ಜಾಗತಿಕ ಸಮಸ್ಯೆಯನ್ನು ನಿಭಾಯಿಸಲು ಹಣಕಾಸು ಸಜ್ಜುಗೊಳಿಸುವಲ್ಲಿ ಮುಂದಾಳತ್ವ ವಹಿಸುತ್ತವೆ ಎಂದು ನಾಗೇಶ್ವರನ್ ಹೇಳಿದರು.

ಆದಾಗ್ಯೂ, ಅಭಿವೃದ್ಧಿಶೀಲ ರಾಷ್ಟ್ರಗಳ ಹೆಚ್ಚಿನ ಹವಾಮಾನ ಕ್ರಮವನ್ನು ದೇಶೀಯ ಸಂಪನ್ಮೂಲಗಳ ಮೂಲಕ ಮಾಡಲಾಗಿದೆ, ಅಭಿವೃದ್ಧಿ ಹೊಂದಿದ ದೇಶಗಳ ಒತ್ತು ಮುಖ್ಯವಾಗಿ ಹವಾಮಾನ ಕ್ರಮಕ್ಕೆ ಹಣಕಾಸು ಒದಗಿಸುವಲ್ಲಿ ಖಾಸಗಿ ಹಣಕಾಸು ಮುನ್ನಡೆ ಸಾಧಿಸುತ್ತಿದೆ ಎಂದು ಅವರು ಹೇಳಿದರು. ಶ್ರೀಮಂತ ರಾಷ್ಟ್ರಗಳ ಡಬಲ್ ಸ್ಟ್ಯಾಂಡರ್ಡ್ ಗಳನ್ನು ಟೀಕಿಸುತ್ತಾ, ಪೆಟ್ರೋಲ್, ಡೀಸೆಲ್ ವಾಹನಗಳ ಮಾರಾಟವನ್ನು 2030 ರಿಂದ 2035 ರವರೆಗೆ ನಿಷೇಧಿಸುವ ತನ್ನ ನಿರ್ಧಾರವನ್ನು ಮುಂದೂಡಿದೆ ಮತ್ತು ಜರ್ಮನಿಯು ಪಳೆಯುಳಿಕೆ ಇಂಧನ ಬಾಯ್ಲರ್‌ಗಳನ್ನು ನಿಷೇಧಿಸುವ ನಿಯಮಗಳನ್ನು ದುರ್ಬಲಗೊಳಿಸಿದೆ.

ಶ್ರೀಮಂತ ರಾಷ್ಟ್ರಗಳು ತಮ್ಮ ಸ್ವಂತ ಬೆಳವಣಿಗೆಗೆ ಉತ್ತೇಜನ ನೀಡಿದ ಕಾರ್ಬನ್-ಹೊರಸೂಸುವ ತಂತ್ರಗಳಿಂದ ಗಣನೀಯವಾಗಿ ವಿಪಥಗೊಳ್ಳುವ ನೀತಿ ಕ್ರಮಗಳು, ಉಪಕರಣಗಳು, ಉತ್ಪಾದನೆ, ಇಂಧನ ವ್ಯವಸ್ಥೆಗಳನ್ನು ಅಳವಡಿಸಿಕೊಳ್ಳಲು ಅಭಿವೃದ್ಧಿಶೀಲ ರಾಷ್ಟ್ರಗಳನ್ನು ಕೇಳುತ್ತಿವೆ ಎಂದು ಅರ್ಥಶಾಸಜ್ಞರು ಹೇಳಿದರು. ಈ ನವೀನ ಮಾರ್ಗಗಳು ಪರೀಕ್ಷಿತ ಅಥವಾ ವಿಶ್ವಾಸಾರ್ಹವಲ್ಲ ಎಂಬುದು ಜಿ7 ದೇಶಗಳ ಇತ್ತೀಚಿನ ಚರ್ಚೆಗಳಿಂದ 2030 ರ ಮೊದಲಾರ್ಧದಲ್ಲಿ ಮಾತ್ರ ಅಡೆತಡೆಯಿಲ್ಲದ ಕಲ್ಲಿದ್ದಲು ವಿದ್ಯುತ್ ಸ್ಥಾವರಗಳ ಬಳಕೆಯನ್ನು ಕೊನೆಗೊಳಿಸುವುದರಿಂದ ಸ್ಪಷ್ಟವಾಗಿದೆ, ಅವುಗಳ ಇಂಗಾಲದ ಹೊರಸೂಸುವಿಕೆಯು ಹಲವಾರು ದಶಕಗಳ ಹಿಂದೆ ಉತ್ತುಂಗಕ್ಕೇರಿತು.

ಜಪಾನ್, ಜರ್ಮನಿ ಇದನ್ನು ಒಪ್ಪಲಿಲ್ಲ. ಇದಕ್ಕೆ ವ್ಯತಿರಿಕ್ತವಾಗಿ, ಜರ್ಮನಿಯು 2038 ರೊಳಗೆ ಕಲ್ಲಿದ್ದಲು ಸ್ಥಾವರಗಳನ್ನು ಮುಚ್ಚುವ ಅಂತಿಮ ಗುರಿಯನ್ನು ತನ್ನ ಶಾಸನದಲ್ಲಿ ಬರೆದಿದೆ, ಆದರೆ ಜಪಾನ್ ಇನ್ನೂ ದಿನಾಂಕವನ್ನು ನಿಗದಿಪಡಿಸಿಲ್ಲ. ಇದು ಆಂತರಿಕ ಮತ್ತು ಅಂತರರಾಷ್ಟ್ರೀಯ ಸಂಘರ್ಷಗಳಿಗೆ ಒಂದು ಪಾಕವಿಧಾನವಾಗಿದೆ ಎಂದು ಅವರು ಹೇಳಿದರು.

> **ಕಳೆದ ಎರಡು ಶತಮಾನಗಳಿಂದ ಪಳೆಯುಳಿಕೆ ಇಂಧನ ಆಧಾರಿತ ಬೆಳವಣಿಗೆಯ ಕಾರ್ಯತಂತ್ರಗಳ ಮೇಲೆ ಅವಲಂಬಿತವಾಗಿರುವ ಅಭಿವೃದ್ಧಿ ಹೊಂದಿದ ದೇಶಗಳು ಈಗ ಅಭಿವೃದ್ಧಿಶೀಲ ರಾಷ್ಟ್ರಗಳಿಂದ ಮಹತ್ವಾಕಾಂಕ್ಷೆಯ ಹೊರಸೂಸುವಿಕೆ ಕಡಿತಕ್ಕೆ ಒತ್ತಾಯಿಸುತ್ತಿವೆ**
> -ವಿ. ಅನಂತ ನಾಗೇಶ್ವರನ್

# ವರದಕ್ಷಿಣೆಗಾಗಿ ಗರ್ಭಿಣಿ ಮಹಿಳೆಯ ಕೈ ಕಾಲು ಕತ್ತರಿಸಿ ಕೊಲೆ

**ಭೋಪಾಲ್:** ವರದಕ್ಷಿಣೆಗಾಗಿ 23 ವರ್ಷದ ಗರ್ಭಿಣಿ ಮಹಿಳೆಯನ್ನು ಕೊಲೆ ಮಾಡಿ, ಆಕೆಯ ಕೈಕಾಲುಗಳನ್ನು ಕತ್ತರಿಸಿ, ವಿರೂಪಗೊಂಡ ದೇಹಕ್ಕೆ ಬೆಂಕಿ ಹಚ್ಚಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಮಧ್ಯಪ್ರದೇಶದ ರಾಜ್‌ಗಢ ಜಿಲ್ಲೆಯಲ್ಲಿ ನಡೆದಿದೆ. ವರದಕ್ಷಿಣೆ ಕಿರುಕುಳಕ್ಕೆ ಬಲಿಯಾದ ದುರ್ದೈವಿ ಮಹಿಳೆಯನ್ನು ರೀನಾ ತನ್ವಾರ್ ಎಂದು ಗುರುತಿಸಲಾಗಿದೆ. ಪತಿ ಮಿಥುನ್ ಮತ್ತು ಅತ್ತೆಯಂದಿರು ವರದಕ್ಷಿಣೆಗಾಗಿ ಪೀಡಿಸುತ್ತಿದ್ದರು ಎಂದು ರೀನಾ ತನ್ವಾರ್ ಕುಟುಂಬದವರು ಆರೋಪಿಸಿದ್ದಾರೆ. ಕಾಳಿಪೀಠ ಪೊಲೀಸ್ ಠಾಣೆ ವ್ಯಾಪ್ತಿಯ ತಂಡಿ ಖುರ್ದ್ ಗ್ರಾಮದಲ್ಲಿ ಈ ಘಟನೆ ನಡೆದಿದೆ. ರೀನಾಳನ್ನು ಕೊಲೆ ಮಾಡಲಾಗಿದೆ ಎಂದು ಗ್ರಾಮಸ್ಥರು ನಿನ್ನೆ ಮಾಹಿತಿ ನೀಡಿದ್ದಾರೆ ಎಂದು ರೀನಾ ಕುಟುಂಬ ತಿಳಿಸಿದ್ದಾರೆ.

ಆಕೆಯ ತಂದೆ ರಾಮಪ್ರಸಾದ್ ತನ್ವಾರ್ ಪೊಲೀಸರೊಂದಿಗೆ ತಂಡಿ ಖುರ್ದ್ ಅನ್ನು ತಲುಪಿದಾಗ, ಆಕೆಯ ಅತ್ತೆಯಂದಿರು ಆಕೆಯ ಉರಿಯುತ್ತಿರುವ ಚಿತೆಯನ್ನು ಬಿಟ್ಟು ಓಡಿಹೋಗಿರುವುದನ್ನು ಅವರು ಕಂಡುಕೊಂಡರು. ಮನೆಯವರು ಬೆಂಕಿಯನ್ನು ನಂದಿಸಿ ಅರ್ಧ ಸುಟ್ಟ ಆಕೆಯ ದೇಹವನ್ನು ಹೊರತೆಗೆದು ನಂತರ ಬಟ್ಟೆಯಲ್ಲಿ ಸುತ್ತಿ ಶವಪರೀಕ್ಷೆಗೆ ಕಳುಹಿಸಿದರು. ರೀನಾ ತನ್ವರ್ ಐದು ವರ್ಷಗಳ ಹಿಂದೆ ಮಿಥುನ್ ತನ್ವರ್ ಅವರನ್ನು ಮದುವೆಯಾಗಿದ್ದರು. ಆಕೆಗೆ ಒಂದೂವರೆ ವರ್ಷದ ಮಗಳಿದ್ದು, ಎರಡನೇ ಮಗು ವಿಗೆ ನಾಲ್ಕು ತಿಂಗಳ ಗರ್ಭಿಣಿಯಾಗಿದ್ದಳು. ಆಕೆಯ ಅತ್ತೆಯಂದಿರು ನನ್ನ ಮಗಳಿಗೆ ಹಣದ ಬೇಡಿಕೆಯನ್ನಿಟ್ಟು ಚಿತ್ರಹಿಂಸೆ ನೀಡುತ್ತಿದ್ದರು ಎಂದು ರಾಮಪ್ರಸಾದ್ ತನ್ವಾರ್ ಆರೋಪಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ಕಾಳಿಪೀಠ ಪೊಲೀಸ್ ಠಾಣೆಯ ಉಸ್ತುವಾರಿ ರಜನೀಶ್ ಸಿರೋಥಿಯಾ ತಿಳಿಸಿದ್ದಾರೆ. ತನಿಖೆಯಲ್ಲಿ ಹೊರಬರುವ ಅಂಶಗಳ ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

ರೀನಾ ತನ್ವಾರ್ ಅವರ ಕುಟುಂಬದವರು ಆಕೆಯ ಅತ್ತೆಯ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿದ್ದಾರೆ. ವಿವಾದ ಬಗೆಹರಿಸಲು ಹಣ ಕಳುಹಿಸುತ್ತಿದ್ದಾವು, ಈ ಬಾರಿ ಅವರು ದೂರ ಹೋಗಿದ್ದಾರೆ ಎಂದು ಸಂಬಂಧಿಕರಾದ ವಿಷ್ಣು ತನ್ವರ್ ಹೇಳಿದರು. ನಮಗೆ ಹಳ್ಳಿಯಲ್ಲಿ ಯಾರೋ ಕರೆ ಮಾಡಿದರು, ಅವರು ಅವಳನ್ನು ಕೊಂದು ಸುಡುತ್ತಿದ್ದಾರೆಂದು ಹೇಳಿದರು, ನಾವು ಬಂದಾಗ, ಚಿತೆ ಉರಿಯುತ್ತಿತ್ತು ಎಂದು ಅವರು ಮಾಹಿತಿ ನೀಡಿದ್ದಾರೆ.

# ಇಥಿಯೋಪಿಯಾದಲ್ಲಿ ಮಣ್ಣು ಕುಸಿತ: 157 ಸಾವು

**ಅಡಿಸ್ ಅಬಾಬಾ:** ಇಥಿಯೋಪಿಯಾದಲ್ಲಿ ಭಾರಿ ವರ್ಷಧಾರೆಯಿಂದ ಉಂಟಾದ ಮಣ್ಣು ಕುಸಿತದಲ್ಲಿ ಕನಿಷ್ಠ 157 ಜನರು ಮೃತಪಟ್ಟಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ದಕ್ಷಿಣ ಇಥಿಯೋಪಿಯಾದ ಕೆಂಚೊ ಶಾಚಾ ಗೊಜ್ಜಿ ಜಿಲ್ಲೆಯಲ್ಲಿ ಸಂಭವಿಸಿದ ಮಣ್ಣು ಕುಸಿತದಲ್ಲಿ ಮಕ್ಕಳು, ಗರ್ಭಿಣಿಯರು ಮೃತಪಟ್ಟಿದ್ದಾರೆ ಎಂದು ಸ್ಥಳೀಯ ಆಡಳಿತಾಧಿಕಾರಿ ಡಗಾವಿ ಅಯೆಲೆ ಹೇಳಿದ್ದಾರೆ. ಈ ಪ್ರದೇಶದಲ್ಲಿ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಸೋಮವಾರ ಮೃತರ ಸಂಖ್ಯೆ 55 ಇದ್ದರೆ, ಮಂಗಳವಾರ 157ಕ್ಕೇರಿದೆ ಎಂದು ಗೋಫಾ ವಲಯ ಸಂವಹನ ಕಚೇರಿಯ ಮುಖ್ಯಸ್ಥ ಕಸ್ಸಾಹುನ್ ಅಬಯ್ನೆ ತಿಳಿಸಿದ್ದಾರೆ. ಮಣ್ಣಿನಡಿ ಸಿಲುಕಿದವರ ರಕ್ಷಣೆಗಾಗಿ ಕಾರ್ಯಾಚರಣೆ ನಡೆದಿದ್ದು, ಐವರನ್ನು ರಕ್ಷಿಸಲಾಗಿದೆ ಎಂದು ಅಯೆಲೆ ಹೇಳಿದರು. 'ಜನರು ಮಣ್ಣಿನಡಿ ಸಿಲುಕಿರುವುದು ರಕ್ಷಣಾ ಕಾರ್ಯಾಚರಣೆಯ ವೇಳೆ ಗೋಚರಿಸುತ್ತಿದೆ. ನಾಪತ್ತೆಯಾದವರಿಗಾಗಿ ಶೋಧ ನಡೆದಿದೆ' ಎಂದು ಗೋಫಾದ ವಿಪತ್ತು ನಿರ್ವಹಣೆ ಸಂಸ್ಥೆಯ ನಿರ್ದೇಶಕ ಮಾರ್ಕೊಸ್ ಮೆಲೆಸ್ ತಿಳಿಸಿದ್ದಾರೆ.

# ಹಿಂದೂ ದೇಗುಲಕ್ಕೆ ಹಾನಿ, ಭಾರತ ವಿರೋಧಿ ಬರಹ

**ಒಟ್ಟಾವ:** ಕೆನಡಾದಲ್ಲಿರುವ ಬಿಎಪಿಎಸ್ ಸ್ವಾಮಿನಾರಾಯಣ ಮಂದಿರಕ್ಕೆ ಹಾನಿಯನ್ನುಂಟು ಮಾಡಿದ್ದು, ದುಷ್ಕರ್ಮಿಗಳು ಗೋಡೆಗಳ ಮೇಲೆ ದ್ವೇಷಪೂರಿತ ಮತ್ತು ಭಾರತ ವಿರೋಧಿ ಬರಹಗಳನ್ನು ಬರೆದಿದ್ದಾರೆ.' ಎಡ್ಮಂಟನ್ ನಗರದಲ್ಲಿರುವ ಸ್ವಾಮಿನಾರಾಯಣ ಮಂದಿರವನ್ನು ಸೋಮವಾರ ಮುಂಜಾನೆ ಹಾನಿಗೊಳಿಸಿದ್ದು, ಇದನ್ನು ನಾವು ಖಂಡಿಸುತ್ತೇವೆ.

ಕೆನಡಾ ಅಧಿಕಾರಿಗಳು ಈ ಬಗ್ಗೆ ತನಿಖೆ ನಡೆಸಿ, ದುಷ್ಕರ್ಮಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ಕೆನಡಾದ ವ್ಯಾಂಕೋವರ್‌ನಲ್ಲಿರುವ ಭಾರತದ ಕಾನ್ಸುಲೇಟ್ ಜನರಲ್ 'ಎಕ್ಸ್'ನಲ್ಲಿ ತಿಳಿಸಿದ್ದಾರೆ.

ದೇಗುಲದ ಆಡಳಿತ ನಡೆಸುತ್ತಿರುವ ಬಿಎಪಿಎಸ್- ಬೋಚಾಸನವಾಸಿ ಅಕ್ಷರ ಪುರುಷೋತ್ತಮಸ್ವಾಮಿ ನಾರಾಯಣ ಸಂಸ್ಥೆಯು ಈ ಬಗ್ಗೆ ಯಾವುದೇ ಪ್ರತಿಕ್ರಿಯೆಯನ್ನು ನೀಡಿಲ್ಲ. ಆರೋಪಿಗಳ ವಿರುದ್ಧ ಕ್ರಮಕ್ಕೆಗೊಂಡಿರುವ ಬಗ್ಗೆಯೂ ಯಾವುದೇ ವರದಿಯಾಗಿಲ್ಲ.

ಈ ಘಟನೆಯು ಕೇವಲ ದೇಗುಲದ ಮೇಲಿನ ದಾಳಿಯಲ್ಲ, ಹಿಂದೂ ಸಮುದಾಯದ ನಂಬಿಕೆ ಮತ್ತು ಭಾವನೆಗಳ ಮೇಲಿನ ದಾಳಿ. ಕೆನಡಾದಲ್ಲಿನ ಹಿಂದೂ ವಿರೋಧಿ ಮನಸ್ಥಿತಿಯನ್ನು ಖಂಡಿಸುತ್ತೇವೆ ಎಂದು ಕೆನಡಾದ ಹಿಂದೂ ಚೇಂಬರ್ ಆಫ್ ಕಾಮರ್ಸ್ ತಿಳಿಸಿದೆ. ದೇಗುಲದ ಗೋಡೆಯ ಮೇಲೆ ಬಣ್ಣಗಳಿಂದ ದ್ವೇಷಪೂರಿತ ಬರಹಗಳನ್ನು ಬರೆಯಲಾಗಿದೆ. ಕೆನಡಾದಲ್ಲಿ ಭಯದ ವಾತಾವರಣವಿಲ್ಲ.

ಈ ಘಟನೆಯು ನಗರದ ಮೌಲ್ಯಗಳಿಗೆ ವಿರುದ್ಧವಾಗಿದೆ' ಎಂದು ಸಂಸದ ರಂಡಿ ಬಾಯೋನಾಲ್ಡ್ ಅವರು ತಿಳಿಸಿದ್ದಾರೆ. ಕೆನಡಾದ ಹಲವು ಸಂಸದರು ಈ ಕೃತ್ಯವನ್ನು ಖಂಡಿಸಿದ್ದಾರೆ. ಕೆನಡಾದಲ್ಲಿ ಕಳೆದ ವರ್ಷ ಮೂರು ದೇಗುಲಗಳನ್ನು ದುಷ್ಕರ್ಮಿಗಳು ಧ್ವಂಸಗೊಳಿಸಿದ್ದರು. ಇದರಿಂದಾಗಿ ಕೆನಡಾದಲ್ಲಿನ ಹಿಂದೂಗಳಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ.

# ಮನೆಗೆ ಯಾರೋ ನುಗ್ಗಿದ್ದಾರೆ ಅಂತ ಆಕೆ ಅಮೆರಿಕ ಪೊಲೀಸರಿಗೆ ಕರೆ

## ಮನೆಗೆ ಬಂದ ಅಧಿಕಾರಿಗಳು ಆಕೆಯನ್ನೇ ಕೊಂದರು, ಒಂಟಿಯಿದ್ದ ಮಹಿಳೆಯನ್ನು ಪೊಲೀಸರೇ ಹತ್ಯೆ ಮಾಡಿದ ಘಟನೆ

**ವಾಷಿಂಗ್ಟನ್:** ಅದು ಮಧ್ಯರಾತ್ರಿಯ ಸಮಯ. ಆಕೆ ಮನೆಯಲ್ಲಿ ಒಬ್ಬಳೇ ಇದ್ದಳು. ಮಧ್ಯರಾತ್ರಿಯ ಸಮಯದಲ್ಲಿ ಆಕೆ ಮನೆಯಲ್ಲಿ ಯಾರೋ ಓಡಾಡಿದ ಸದ್ದು?. ಕೂಡಲೇ ಎಚ್ಚೆತ್ತುಕೊಂಡ ಆಕೆ, ಪೊಲೀಸರಿಗೆ ಕರೆ ಮಾಡಿ, ಯಾರೋ ನಮ್ಮ ಮನೆಗೆ ನುಗ್ಗಿದ್ದಾರೆ.. ಪ್ಲೀಸ್ ಬನ್ನಿ ಅಂತ ತನ್ನ ಮನೆಯ ವಿಳಾಸ ನೀಡಿದರು.



ಪೊಲೀಸರು ಕೂಡ ತಕ್ಷಣವೇ ಬಂದರು? ಆದರೆ, ಆಗಿದ್ದೇನು..? ಮನೆಯಲ್ಲಿದ್ದ ಅಜ್ಞಾತ ವ್ಯಕ್ತಿಯನ್ನು ಹಿಡಿಯುವ ಬದಲು, ನೇರವಾಗಿ ಮನೆಯೊಡತಿಗೇ ಗುಂಡಿಕ್ಕಿ ಕೊಂದಿದ್ದಾರೆ! ಹೌದು? ಇಂಥದ್ದೊಂದು ಅಚ್ಚರಿಯ ಹಾಗೂ ಗಾಬರಿಗೊಳಿಸುವ ವಿಚಾರ ನಡೆದಿರುವುದು ಅಮೆರಿಕದ ರಾಜ್ಯದಲ್ಲಿ.

ಇಲ್ಲಿನೊಯ್ಸ್ ರಾಜ್ಯವು ಅಮೆರಿಕದ ಮಧ್ಯ ಭಾಗದಿಂದ ಸ್ವಲ್ಪ ಪಶ್ಚಿಮದ ಕಡೆಗೆ ಸಾಗುವ ಹಾದಿಯಲ್ಲಿ ಈ ರಾಜ್ಯ ಇದೆ. ಅಲ್ಲಿನ ಸ್ಥಳೀಯ ಪೊಲೀಸ್ ಇಲಾಖೆಯನ್ನು ಇಲ್ಲೀಸ್ ಪೊಲೀಸ್ ಎಂದು ಕರೆಯಲಾಗುತ್ತದೆ. ಈ ಘಟನೆ ನಡೆದಿರುವುದು ಈ ರಾಜ್ಯದ ಸ್ಪ್ರಿಂಗ್ ಫೀಲ್ಡ್ ಎಂಬಲ್ಲಿ. ಗುಂಡೇಟು ತಿಂದು ಅಸುನೀಗಿದವಳ ಹೆಸರು ಸೊನ್ಯಾ ಮೈಸಿ ಎಂಬ 36 ವರ್ಷದ ಮಹಿಳೆ. ಆಕೆ ಆಫ್ರಿಕಾ ಮೂಲದ ಅಮೆರಿಕನ್. ಮನೆಗೆ ನುಗ್ಗಿದ ವ್ಯಕ್ತಿಯನ್ನು ಹುಡುಕಲು ಬಂದಾಗ ಮನೆಯೊಳಗೆ ಪ್ರವೇಶಿಸಿದ ಪೊಲೀಸರಿಗೆ ಈಕೆಯೇ ಕಂಡಿದ್ದಾಳೆ. ಅಷ್ಟರಲ್ಲಿ ಈಕೆ, ಒಲೆಯ ಮೇಲೆ ಒಂದು ಪಾತ್ರೆಯಲ್ಲಿ ನೀರು ಕುದಿಸಿ ಕೈಯ್ಯಲ್ಲಿ ಹಿಡಿದಿದ್ದಳು ಅದನ್ನು ಆಕೆ, ಮನೆಗೆ ನುಗ್ಗಿದ ಅಪರಿಚಿತನ ಮೇಲೆ ಎರಚಲು ಕಾಯಿಸಿದ್ದಳೋ, ಅಥವಾ ಅಪರಿಚಿನೇನಾದರೂ ಅಡುಗೆ ಮನೆಯಲ್ಲಿ ನೀರು ಕಾಯಿಸಿಕೊಂಡನೋ ಗೊತ್ತಿಲ್ಲ. ಪೊಲೀಸರು ಬರುವಷ್ಟರಲ್ಲಿ, ಆಕೆ ಹಾಲ್‌ನಲ್ಲಿ ಬಿಸಿನೀರಿನ ಪಾತ್ರೆ ಹಿಡಿದು ಬಂದಿದ್ದಾಳೆ. ಅಷ್ಟರಲ್ಲಿ ಮನೆಯೊಳಕ್ಕೆ ಬಂದ ಪೊಲೀಸರು ಆಕೆಯೇ ಕಳ್ಳಿ ಎಂದು ತಪ್ಪು ತಿಳಿದಿದ್ದಾರೆ. ಆಕೆಯ ಕಡೆಗೆ ಪಿಸ್ತೂಲು ಹಿಡಿದು ಆಕೆಯ ಕೈಯಲ್ಲಿದ್ದ ಕುದಿಯುವ ನೀರಿನ ಪಾತ್ರೆಯನ್ನು ಕೆಳಗಿಳಿಸುವಂತೆ ಸೂಚಿಸಿದ್ದಾರೆ. ಆಕೆ, ತಾನು ಕಳ್ಳಿ ಅಲ್ಲ ಎಂದೂ, ತಾನೇ ಈ ಮನೆಯಾಕೆ ಎಂದು ಹೇಳಿದರೂ ಪೊಲೀಸರು ಆಕೆಯ ಕಡೆಗೆ ಗಮನ ಕೊಟ್ಟಿಲ್ಲ. ಜೊತೆಗೆ ನೀನೇ ಮನೆಯೊಡತಿ ಎಂದು ಸಾಬೀತುಪಡಿಸಲು ಐಡಿ ಕಾರ್ಡ್ ತೋರಿಸು ಎಂದಿದ್ದಾರೆ. ಆದರೆ, ಅಷ್ಟರಲ್ಲಿ ರೊಚ್ಚಿಗೆದ್ದಿದ್ದ ಪೊಲೀಸ್ ಅಧಿಕಾರಿ ಸೀನ್ ಗ್ರೇಸನ್ ಎಂಬಾತ ತುಂಬಾ ಕೊಂಚ ಅತಿಯಾಗಿ ವರ್ತಿಸಿದ್ದಾನೆ. ಆಕೆಯ ಮೇಲೆ ಎಳ್ಳಷ್ಟೂ ಭರವಸೆಯಿಡದ ಆತ, ಕೂಡಲೇ ಕುದಿಯುವ ನೀರಿನ ಪಾತ್ರೆಯನ್ನು ಕೆಳಗಿಳಿಸಿ, ಮೊಣಕಾಲೂರಿ ಕೈಯ್ಯನ್ನು ಮೇಲೆತ್ತು. ಇಲ್ಲವಾದರೆ ನಿನಗೆ ಗುಂಡು ಹಾರಿಸುತ್ತೇನೆ ಎಂದು ಎಚ್ಚರಿಕೆ ನೀಡಿದ್ದಾನೆ.

ಆತನ ಎಚ್ಚರಿಕೆಯಂತೆ ಆಕೆ, ಕುದಿಯುವ ನೀರಿನ ಪಾತ್ರೆಯನ್ನು ಕೆಳಗಿಳಿಸಿ ಮಂಡಿಯೂರಿ ಕೈಯ್ಯನ್ನು ಮೇಲೆತ್ತುವಷ್ಟರಲ್ಲಿ, ಆತನಿಗೆ ಮತ್ತೇನು ಅನ್ನಿಸಿತೋ ಏನೋ ತನ್ನ ಕೈಯ್ಯಲ್ಲಿದ್ದ ಪಿಸ್ತೂಲಿನ ಟ್ರಿಗರ್ ಒತ್ತಿಯೇ ಬಿಟ್ಟಿದ್ದಾನೆ. ಪಿಸ್ತೂಲಿನಿಂದ ಹಾರಿದ ಗುಂಡು ಸೀದಾ ಮಹಿಳೆಯ ಮುಖಕ್ಕೆ ತಗುಲಿ ಆಕೆ ಅಲ್ಲೇ ಅಸುನೀಗಿದ್ದಾಳೆ. ಇದೆಲ್ಲವೂ ಪೊಲೀಸರ ಜ್ಯಾಕೆಟ್‌ಗೆ ಜೋಡಿಸಲಾಗಿರುವ ಬಾಡಿ ಕ್ಯಾಮರಾದಲ್ಲಿ ಸೆರೆಯಾಗಿದೆ.

### ಮಧ್ಯಪ್ರವೇಶಿಸಿದ ಜೊ ಬೈಡನ್

**ಈಗ ಆ ಪೊಲೀಸ್ ಅಧಿಕಾರಿಯ ವಿರುದ್ಧ ಕೊಲೆ ಹಾಗೂ ಸರ್ಕಾರಿ ಅಧಿಕಾರಿಯಾಗಿದ್ದು ಸಾರ್ವಜನಿಕರ ಜೊತೆಯಲ್ಲಿ ದುರ್ವರ್ತನೆ ತೋರಿದ ಆರೋಪದ ಮೇರೆಗೆ ಕೇಸ್ ಜಡಿಯಲಾಗಿದೆ. ಇದು ಅಮೆರಿಕದಲ್ಲಿ ಭಾರೀ ಕೋಲಾಹಲ ಉಂಟು ಮಾಡಿದೆ. ಅಮೆರಿಕದಲ್ಲಿ ಕಪ್ಪುವರ್ಣೀಯ ಜನಾಂಗಕ್ಕೆ ಯಾವುದೇ ರಕ್ಷಣೆಯಿಲ್ಲ ಎಂಬ ಆತಂಕಗಳಿಗೆ ಮತ್ತಷ್ಟು ಪುಷ್ಠಿ ನೀಡಿದೆ. 2022ರಲ್ಲಿ ಮಿಯಾನ್ನೀಸ್ ಪೊಲೀಸರಿಂದ ನಡೆದಿದ್ದ ಅಮೀರ್ ಎಂಬಾತನ ಮೇಲೆ ಪೊಲೀಸರ ಗುಂಡಿನ ದಾಳಿ ಸೇರಿದಂತೆ ಅನೇಕ ವಿಚಾರಗಳು ಈಗ ಮತ್ತೆ ಮುನ್ನಲೆಗೆ ಬಂದಿವೆ. ಇದು ಆಂತರಿಕ ಸಂಘರ್ಷವನ್ನು ಭುಗಿಲೆಬ್ಬಿಸುವ ಆತಂಕ ಸೃಷ್ಟಿಸಿದೆ. ಪರಿಸ್ಥಿತಿಯ ಗಾಂಭೀರ್ಯತೆಯನ್ನು ಅರಿತ ಅಮೆರಿಕದ ಅಧ್ಯಕ್ಷ ಜೊ ಬೈಡನ್, ಕೂಡಲೇ ಮೃತರ ಆತ್ಮಕ್ಕೆ ಶಾಂತಿ ಕೋರಿ ಸಂತಾಪ ಸಂದೇಶ ರವಾನಿಸಿದ್ದಾರೆ.**

**ಮನೆಯಲ್ಲಿ ಒಂಟಿಯಿದ್ದ ಮಹಿಳೆಯು, ಮನೆಯಲ್ಲಿ ಯಾರೋ ಓಡಾಡಿದ ಹಾಗೆ ಅನ್ನಿಸುತ್ತಿದೆ ಎಂದು ಪೊಲೀಸರಿಗೆ ಕರೆ ಮಾಡಿದಳು. ಆದರೆ, ಮನೆಗೆ ಬಂದ ಪೊಲೀಸರು ಆಕೆಗೆ ರಕ್ಷಣೆ ಕೊಡುವ ಬದಲು ಆಕೆಯನ್ನೇ ಕಳ್ಳಿ ಎಂದು ಭಾವಿಸಿ ಶೂಟೌಟ್ ಮಾಡಿದ್ದಾರೆ. ಈ ಘಟನೆ ನಡೆದಿರುವುದು ಅಮೆರಿಕದ ಇಲ್ಲಿನೊಯಿಸ್ ನಲ್ಲಿ. ಮೃತಪಟ್ಟಾಕೆ ಕಪ್ಪು ವರ್ಣೀಯ ಮಹಿಳೆ. ಕರ್ತವ್ಯಲೋಪದ ಆರೋಪದ ಮೇರೆಗೆ ಶೂಟೌಟ್ ಮಾಡಿದ ಪೊಲೀಸ್ ಅಧಿಕಾರಿಯನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ. ಜೊತೆಗೆ, ಆತನನ್ನು ಇಲಾಖೆಯಿಂದ ವಜಾಗೊಳಿಸಲಾಗಿದೆ.**

- **ಅಮೆರಿಕದ ಇಲ್ಲಿನೊಯ್ಸ್ ನಲ್ಲಿ ನಡೆದ ಘಟನೆ.**
- **ಕಳ್ಳರು ನುಗ್ಗಿದ್ದಾರೆ ಎಂದು ಪೊಲೀಸರಿಗೆ ಫೋನ್ ಮಾಡಿದ್ದ ಮಹಿಳೆ.**
- **ಮನೆಗೆ ಬಂದಾಗ ಈಕೆಯೇ ಕಳ್ಳಿ ಎಂದು ತಪ್ಪು ತಿಳಿದ ಪೊಲೀಸರು.**
- **ಹೆಚ್ಚು ವಿಚಾರಣೆಗೊಳಪಡಿಸದೇ ಶೂಟೌಟ್.**
- **ಅತಿರೇಕದ ವರ್ತನೆ ಆಧಾರದಲ್ಲಿ ಶೂಟೌಟ್ ಮಾಡಿದ ಪೊಲೀಸ್ ಬಂಧನ, ಕೆಲಸದಿಂದ ವಜಾ.**

# ಮಿನಿ ನ್ಯೂಸ್

## ಆಜಾದ್, ತಿಲಕ್‌ಗೆ ಮೋದಿ ಶ್ರದ್ಧಾಂಜಲಿ

**ನವದೆಹಲಿ:** ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿಕಾರಿ ಚಂದ್ರಶೇಖರ್ ಆಜಾದ್, ಸ್ವರಾಜ್ಯವನ್ನು ಪ್ರತಿಪಾದಿಸಿದ ರಾಷ್ಟ್ರೀಯವಾದಿ ಬಾಲ ಗಂಗಾಧರ ತಿಲಕ್ ಅವರ ಜನ್ಮದಿನದಂದು ಪ್ರಧಾನಿ ನರೇಂದ್ರ ಮೋದಿ ಮಹನಿಯರುಗಳಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಚಂದ್ರಶೇಖರ್ ಆಜಾದ್ ಅವರಿಗೆ ನಾನು ಅವರ ಜನ್ಮದಿನದಂದು ಗೌರವ ಸಲ್ಲಿಸುತ್ತೇನೆ. ಅವರು ನಿರ್ಭೀತ ವೀರರಾಗಿದ್ದರು, ಅಚಲ ಧೈರ್ಯ, ಭಾರತದ ಸ್ವಾತಂತ್ರ್ಯಕ್ಕಾಗಿ ಬದ್ಧತೆಯಿಂದ ಆಶೀರ್ವದಿಸಿದರು. ಅವರ ಆದರ್ಶಗಳು ಆಲೋಚನೆಗಳು ಹೃದಯ, ಮನಸ್ಸಿನಲ್ಲಿ ಅನುರಣಿಸುತ್ತಲೇ ಇವೆ. ಲಕ್ಷಾಂತರ ಜನರು, ವಿಶೇಷವಾಗಿ ಯುವಕ ರಲ್ಲಿ ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ತಿಲಕ್ ಅವರು ಸದಾ ಸ್ಮರಣೀಯರು ಎಂದು ಮೋದಿ ಹೇಳಿದರು. ಅವರು ರಾಷ್ಟ್ರೀಯತೆಯ ಉತ್ಸಾಹವನ್ನು ಬೆಳಗಿಸಲು ಅವಿರತವಾಗಿ ಶ್ರಮಿಸಿದ ದಾರ್ಶನಿಕರಾಗಿದ್ದರು ಮತ್ತು ಅದೇ ಸಮಯದಲ್ಲಿ ಶಿಕ್ಷಣ ಮತ್ತು ಸೇವೆಗೆ ಒತ್ತು ನೀಡಿದರು ಎಂದು ಅವರು ಲೋಕಮಾನ್ಯ ತಿಲಕ್ ರಾಷ್ಟ್ರೀಯ ಪ್ರಶಸ್ತಿಯನ್ನು ನೀಡಿದ ಕಾರ್ಯಕ್ರಮದಲ್ಲಿ ತಮ್ಮ ಭಾಷಣದ ಲಿಂಕ್ ಅನ್ನು ಹಂಚಿಕೊಂಡಿದ್ದಾರೆ. 24 ನೇ ವಯಸ್ಸಿನಲ್ಲಿ ನಿಧನರಾದ ಆಜಾದ್ ಅವರು ಮಹಾತ್ಮಾ ಗಾಂಯವರು ಪ್ರತಿಪಾದಿಸಿದ ಅಹಿಂಸೆಯನ್ನು ಸಂಪೂರ್ಣವಾಗಿ ನಂಬದ ಕ್ರಾಂತಿಕಾರಿ ಸಂಘಟನೆಗಳನ್ನು ಸಂಘಟಿಸಿದರು, ಮುನ್ನಡೆಸಿದರು. ಬ್ರಿಟಿಷ್ ಪಡೆಗಳೊಂದಿಗೆ ಗುಂಡಿನ ಚಕಮಕಿಯ ಸಮಯದಲ್ಲಿ ಕೇವಲ ಒಂದು ಗುಂಡು ಮಾತ್ರ ಉಳಿದುಕೊಂಡಾಗ ಅವರು ತಮ್ಮ ಪ್ರಾಣವನ್ನು ತೆಗೆದುಕೊಂಡರು.

ಅವರು ಭಗತ್ ಸಿಂಗ್ ಅವರಂತಹ ವಸಾಹತುಶಾಹಿ ಶಕ್ತಿಗಳ ವಿರುದ್ಧದ ಸಶಸ ಚಳುವಳಿಯ ಅಪ್ರತಿಮ ವ್ಯಕ್ತಿಯಾಗಿ ಉಳಿದಿದ್ದಾರೆ ಎಂದು ಬಣ್ಣಿಸಿದ್ದಾರೆ. ತಿಲಕ್ ಅವರು ಗೌರವಾನ್ವಿತ ಸ್ವಾತಂತ್ರ್ಯ ಹೋರಾಟಗಾರರೂ ಆಗಿದ್ದು, ಸ್ವಾತಂತ್ರ್ಯ ಚಳವಳಿಗೆ ಬೆಂಬಲವನ್ನು ನಿರ್ಮಿಸಲು ಸಾಂಸ್ಕೃತಿಕ, ರಾಜಕೀಯ ಕಾರಣಗಳ ಸುತ್ತಲೂ ಜನರನ್ನು ಸಜ್ಜುಗೊಳಿಸಿದರು.

## ನಕಲಿ ದಾಖಲೆಗಳನ್ನು ಪಡೆದು ಪಾಕಿಸ್ತಾನಕ್ಕೆ ಪ್ರಯಾಣಿಸಿದ ಮಹಿಳೆ

**ಥಾಣೆ:** ನಕಲಿ ದಾಖಲೆಗಳ ಆಧಾರದ ಮೇಲೆ ನಕಲಿ ಪಾಸ್‌ಪೋರ್ಟ್, ವೀಸಾ ಪಡೆದು ಪಾಕಿಸ್ತಾನಕ್ಕೆ ಪ್ರಯಾಣಿಸುತ್ತಿದ್ದ ಆರೋಪದ ಮೇಲೆ ಮಹಾರಾಷ್ಟ್ರದ ಥಾಣೆ ನಗರದಲ್ಲಿ 23 ವರ್ಷದ ಮಹಿಳೆಯ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಮಹಿಳೆಯಲ್ಲದೆ, ಆಕೆಗೆ ನಕಲಿ ದಾಖಲೆಗಳನ್ನು ಒದಗಿಸಿದ ಅಪರಿಚಿತ ಪುರುಷನ ವಿರುದ್ಧವೂ ಪ್ರಕರಣ ದಾಖಲಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಇಲ್ಲಿ ತಿಳಿಸಿದ್ದಾರೆ. ಆರೋಪಿ ಮಹಿಳೆಯನ್ನು ನಗ್ಮಾ ನೂರ್ ಮಕ್ಸೂದ್ ಅಲಿ ಅಲಿಯಾಸ್ ಸನಮ್ ಖಾನ್ ಎಂದು ಗುರುತಿಸಲಾಗಿದ್ದು, ತನ್ನ ಹೆಸರನ್ನು ಬದಲಾಯಿಸಿ ಆಧಾರ್ ಕಾರ್ಡ್, ಪ್ಯಾನ್ ಕಾರ್ಡ್ ಮತ್ತು ಮಗಳ ಜನನ ಪ್ರಮಾಣಪತ್ರವನ್ನು ಲೋಕಮಾನ್ಯ ನಗರದ ಕೇಂದ್ರದಿಂದ ಪಡೆದುಕೊಂಡು ನಂತರ ಈ ದಾಖಲೆಗಳನ್ನು ಪಾಸ್‌ಪೋರ್ಟ್ ಅರ್ಜಿಗೆ ಲಗತ್ತಿಸಿದ್ದಾರೆ ಎಂದು ವರ್ತಕ್ ನಗರ ಪೊಲೀಸ್ ಠಾಣೆ ಅಧಿಕಾರಿ ತಿಳಿಸಿದ್ದಾರೆ.

ಈ ದಾಖಲೆಗಳ ಆಧಾರದ ಮೇಲೆ ಆಕೆ ಪಾಕಿಸ್ತಾನಕ್ಕೆ ಪಾಸ್‌ಪೋರ್ಟ್ ಮತ್ತು ವೀಸಾ ಪಡೆದು ನೆರೆಯ ದೇಶಕ್ಕೆ ಪ್ರಯಾಣ ಬೆಳೆಸಿದ್ದಾಳೆ. ಆರೋಪಿ ಇಬ್ಬರ ವಿರುದ್ಧ ಭಾರತೀಯ ಪಾಸ್‌ಪೋರ್ಟ್ ಕಾಯ್ದೆ, ಇತರರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು. ಈ ಅಪರಾಧವು ಮೇ 2023, 2024 ರ ನಡುವೆ ನಡೆದಿದ್ದು, ಅಪರಾಧದ ತನಿಖೆ ನಡೆಯುತ್ತಿದೆ ಎಂದು ಅಧಿಕಾರಿ ತಿಳಿಸಿದ್ದಾರೆ.

## ನೀಟ್-ಯುಜಿ ಪರೀಕ್ಷೆ ರದ್ದು ಮರು ಪರೀಕ್ಷೆ ತಳ್ಳಿ ಹಾಕಿದ ಸುಪ್ರೀಂ

**ನವದೆಹಲಿ:** ನೀಟ್-ಯುಜಿ ಪರೀಕ್ಷೆಯನ್ನು ರದ್ದುಪಡಿಸುವುದಿಲ್ಲ. ಹಾಗೆ ಯೇ ಮರು ಪರೀಕ್ಷೆಯನ್ನು ನಡೆಸುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಮಂಗಳವಾರ ಆದೇಶ ಹೊರಡಿಸಿದೆ. ನೀಟ್-ಯುಜಿ' ಪರೀಕ್ಷೆಯನ್ನು ರದ್ದುಪಡಿಸಬೇಕು, ಮರು ಪರೀಕ್ಷೆ ನಡೆಸಬೇಕು, ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ತನಿಖೆ ನಡೆಸಬೇಕು ಎಂದು ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸಿತು. ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿ.ವೈ. ಚಂದ್ರಚೂಡ್ ಸೇರಿದಂತೆ ನ್ಯಾಯಮೂರ್ತಿಗಳಾದ ಜೆ. ಬಿ. ಪಾರ್ದಿವಾಲಾ, ಮನೋಜ್ ಮಿಶ್ರಾ ನೇತೃತ್ವದ ಪೀಠವು ವಿಚಾರಣೆ ನಡೆಸಿತು. ಪ್ರಶ್ನೆಪತ್ರಿಕೆ ಸೋರಿಕೆಯು ವ್ಯಾಪಕವಾಗಿದೆ ಎಂಬುದನ್ನು ತೋರಿಸಲು ಅಧಿಕೃತವಾಗಿ ಯಾವುದೇ ಆಧಾರ ಇದುವರೆಗೆ ಇಲ್ಲ. ಪಟ್ನಾ ಮತ್ತು ಹಜಾರಿಬಾಗ್‌ನಲ್ಲಿ ಒಂದಿಷ್ಟು ಲೋಪಗಳು ಆಗಿವೆ. ಆದರೆ, ವ್ಯವಸ್ಥೆಯ ಲೋಪವನ್ನು ತೋರಿಸಲು ಅವಷ್ಟೇ ಸಾಕಾಗುವುದಿಲ್ಲ ಎಂದು ಪೀಠವು ಪುನರುಚ್ಚರಿಸಿದೆ.

ನೀಟ್-ಯುಜಿ ಪರೀಕ್ಷೆಯ ಫಲಿತಾಂಶವು ದುರ್ಬಲವಾಗಿದೆ ಅಥವಾ ವ್ಯವಸ್ಥಿತ ಉಲ್ಲಂಘನೆಯಾಗಿದೆ ಎಂದು ತೀರ್ಮಾನಿಸಲು ಸಾಕ್ಷ್ಯಗಳ ಕೊರತೆಯಿಂದ ಸಾಧ್ಯವಾಗುವುದಿಲ್ಲ. ಜತೆಗೆ ದಾಖಲೆಯಲ್ಲಿರುವ ಡೇಟಾವು ಪ್ರಶ್ನೆ ಪತ್ರಿಕೆಯ ವ್ಯವಸ್ಥಿತ ಸೋರಿಕೆಯನ್ನು ಸೂಚಿಸುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

## ಬಿಹಾರವನ್ನು ಆತ್ಮನಿರ್ಭರ ರಾಜ್ಯವನ್ನಾಗಿಸಲು ಬಜೆಟ್ ಸಹಕಾರಿ: ಜೆಡಿಯು

**ನವದೆಹಲಿ:** ಕೇಂದ್ರ ಬಜೆಟ್‌ನಲ್ಲಿ ಬಿಹಾರಕ್ಕೆ ವಿಶೇಷ ಯೋಜನೆಗಳನ್ನು ಘೋಷಿಸಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತಿಸಿರುವ ಜೆಡಿಯು, ಈ ಅಭಿವೃದ್ಧಿ ಕ್ರಮಗಳು ಬಿಹಾರವನ್ನು ಆತ್ಮನಿರ್ಭರ ರಾಜ್ಯವನ್ನಾಗಿ ಮಾಡುವಲ್ಲಿ ಒಂದು ದೊಡ್ಡ ಹೆಜ್ಜೆಯಾಗಿದೆ ಎಂದಿದೆ.



2024-25ನೇ ಆರ್ಥಿಕ ವರ್ಷದ ಪೂರ್ಣಾವಧಿ ಬಜೆಟ್ ಅನ್ನು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ಮಂಡಿಸಿದರು. ಈ ವೇಳೆ ಬಿಹಾರದ ವಿವಿಧ ರಸ್ತೆ ಕಾಮಗಾರಿಗಳಿಗೆ 26 ಸಾವಿರ ಕೋಟಿ ಮತ್ತು ಪ್ರವಾಹ ತಗ್ಗಿಸುವ ಕ್ರಮಗಳಿಗೆ 11,500 ಕೋಟಿ ಅನುದಾನ ಘೋಷಿಸಿದರು. 'ರಾಜ್ಯದಲ್ಲಿ ಹೊಸ ವಿಮಾನ ನಿಲ್ದಾಣ ಮತ್ತು ವೈದ್ಯಕೀಯ ಕಾಲೇಜು ಜೊತೆಗೆ ಗಂಗಾ ನದಿಗೆ ಎರಡು ಹೊಸ ಸೇತುವೆಗಳನ್ನು ಘೋಷಿಸಲಾಗಿದೆ. ನಳಂದಾ ವಿಶ್ವವಿದ್ಯಾನಿಲಯವನ್ನು ಅಭಿವೃದ್ಧಿಪಡಿಸಲು ನಳಂದ-ರಾಜಗೀರ್ ಕಾರಿಡಾರ್ ಸೇರಿದಂತೆ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ' ಎಂದು ಜೆಡಿಯು ವಕ್ತಾರ ಕೆ.ಸಿ. ತ್ಯಾಗಿ ತಿಳಿಸಿದರು. 'ಬಿಹಾರಕ್ಕೆ ಮೂರು ಹೊಸ ಎಕ್ಸ್ ಪ್ರೆಸ್ ವೇಗಳನ್ನು ಬಜೆಟ್‌ನಲ್ಲಿ ಘೋಷಿಸಲಾಗಿದೆ. ಬಿಹಾರದ ಸಂಪೂರ್ಣ ಅಭಿವೃದ್ಧಿಗೆ ಬಜೆಟ್‌ನಲ್ಲಿ ಒತ್ತು ನೀಡಲಾಗಿದೆ' ಎಂದು ಅವರು ಹೇಳಿದರು.



# ಯಶ್ ಹೊಸ ಹೇರ್ ಸ್ಟೈಲ್ ಯಾವ ಚಿತ್ರಕ್ಕಾಗಿ?

ನ್ಯಾಷನಲ್ ಸ್ಟಾರ್ ಯಶ್ ಇತ್ತೀಚೆಗೆ ಅಂಬಾನಿ ಮಗನ ಮದುವೆಯಲ್ಲಿ ಹೊಸ ಲುಕ್‌ನಲ್ಲಿ ಕಾಣಿಸಿಕೊಂಡಿದ್ದರು. ಇದಾದ ಬಳಿಕ ಯಾವ ಚಿತ್ರಕ್ಕಾಗಿ ಯಶ್ ಲುಕ್ ಬದಲಾಯಿಸಿಕೊಂಡಿದ್ದಾರೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆ ಶುರುವಾಗಿತ್ತು. ಇದೀಗ ಈ ಲುಕ್ 'ಟಾಕ್ಸಿಕ್' ಚಿತ್ರಕ್ಕಾಗಿ ಎಂಬುದು ಖಚಿತವಾಗಿದೆ. ಸೆಲೆಬ್ರಿಟಿ ಹೇರ್ ಸ್ಟೈಲೀಸ್ಟ್ ಅಲೆಕ್ಸ್ ವಿಜಯಕಾಂತ್ ಅವರು ರಾಕಿ ಬಾಯ್ ಲುಕ್ ಬಗ್ಗೆ ಪ್ರತಿಕ್ರಿಯಿಸಿ, ಯಶ್ ಅವರ ಹೊಸ ಲುಕ್ ಆನ್‌ಲೈನ್‌ನಲ್ಲಿ ವೈರಲ್ ಆಗಿದೆ. ಈ ಬಗ್ಗೆ ಫ್ಯಾನ್ ಚರ್ಚೆ ಮಾಡಿದರು. ಈ ಲುಕ್ 'ಟಾಕ್ಸಿಕ್' ಮಾಡಿರೋದು. ನಾನು ಕೂಡ ಕಥೆ ಕೇಳಿದಾಗ ಈ ಹೇರ್ ಸ್ಟೈಲ್ ಯಶ್ ಪಾತ್ರಕ್ಕೆ ಸೂಕ್ತವಾಗಿದೆ ಎಂದು ನನಗೆ ತಿಳಿದಿತ್ತು. ಯಶ್ ಪಾತ್ರಕ್ಕೆ ಸಂಪೂರ್ಣವಾಗಿ ಹೊಂದಿಕೊಳ್ಳುವ 'ಪಾಂಪಡೋರ್' ಶೈಲಿಯಲ್ಲಿ ಸ್ಟೈಲ್ ಮಾಡಿದ್ದೇವೆ ಎಂದಿದ್ದಾರೆ. ಯಶ್ ಹೇರ್ ಸ್ಟೈಲ್ ಯಾವುದು ಅಂದರೆ 'ಪಾಂಪಡೋರ್' ಎಂದು ಕರೆಯಲಾಗುತ್ತದೆ ಎಂದಿದ್ದಾರೆ. ಈ ಸಿನಿಮಾದಲ್ಲಿ ನಿರ್ವಹಿಸುತ್ತಿರುವ ಪಾತ್ರಕ್ಕೆ ಸಖತ್ ಟ್ವಿಸ್ಟ್ ಕೂಡ ಇದೆ ಎಂದು ಅಲೆಕ್ಸ್ ಮಾತನಾಡಿದ್ದಾರೆ.ಇನ್ನೂ ಯಶ್ ನಟನೆಯ 'ಟಾಕ್ಸಿಕ್' ಸಿನಿಮಾಗೆ ಮಲಯಾಳಂ ನಿರ್ದೇಶಕಿ ಗೀತು ಮೋಹನ್‌ದಾಸ್ ನಿರ್ದೇಶನ ಮಾಡುತ್ತಿದ್ದಾರೆ.

ಡ್ರಗ್ಸ್ ಮಾಫಿಯಾ ಕುರಿತು ಇರುವ ಚಿತ್ರ ಇದಾಗಿದ್ದು, 2025ರಲ್ಲಿ ಟಾಕ್ಸಿಕ್ ರಿಲೀಸ್ ಆಗಲಿದೆ. ಕೆಜಿಎಫ್, ಕೆಜಿಎಫ್ 2 ಸಿನಿಮಾದ ಸಕ್ಸಸ್ ನಂತರ 'ಟಾಕ್ಸಿಕ್' ಚಿತ್ರಕ್ಕಾಗಿ ಯಶ್ ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಯಶ್ ಲುಕ್ ಮತ್ತು ಪಾತ್ರದ ಬಗ್ಗೆ ಫ್ಯಾನ್ಸ್‌ಗೆ ಕುತೂಹಲವಿದೆ.



# ರಾಜಾ ರಾಣಿ ಶೋಗೆ ಬಂದ್ಮೇಲೆ ನನ್ನ ಅಸ್ತಿತ್ವ ಕಾಣಿಸುತ್ತಿದೆ

'ರಾಜಾ ರಾಣಿ' ತಂಡ ನನಗೆ ಬೆಂಬಲವಾಗಿ ನಿಂತಿದೆ. ನನ್ನ ಮಗಳ ಆರೈಕೆ ಮಾಡಲು ಆಗಾಗ ಬ್ರೇಕ್ ಕೊಡುತ್ತಾ ಇರುತ್ತಾರೆ. ನನ್ನ ಮಗುವನ್ನು ಬಿಟ್ಟು ಶೂಟಿಂಗ್ ಬರುತ್ತಿಲ್ಲ. ಬದಲಿಗೆ ಜೊತೆಗೆ ಕರೆದುಕೊಂಡು ಬಂದು ಮಗುವಿಗೆ ಬೇಕಾದ ವ್ಯವಸ್ಥೆ ಮಾಡಲಾಗಿದೆ ಎಂದು ಅದಿತಿ ತಿಳಿಸಿದ್ದಾರೆ.

ಅದಿತಿ ಪ್ರಭುದೇವ ಸ್ಯಾಂಡಲ್‌ವುಡ್ ನಟಿ ಅದಿತಿ ಪ್ರಭುದೇವ ಸದ್ಯ 'ರಾಜಾ ರಾಣಿ' ರಿಯಾಲಿಟಿ ಶೋನ ಜಡ್ಜ್ ಆಗಿ ಕಾಣಿಸಿಕೊಳ್ತಿದ್ದಾರೆ. ಇನ್ನೂ ಹಾಲು ಕುಡಿಯುವ ಮಗುವನ್ನು ಬಿಟ್ಟು ಶೋ ಬಂದಿದ್ದಾರೆ ಎಂದು ನೆಗೆಟಿವ್ ಕಾಮೆಂಟ್ ಮಾಡುವವರಿಗೆ ನಟಿ ತಕ್ಕ ಉತ್ತರಿಸಿದ್ದಾರೆ. ಸಾಕಷ್ಟು ಸಿನಿಮಾಗಳಲ್ಲಿ ನಾಯಕಿಯಾಗಿ ರಂಜಿಸಿದ್ದ ಅದಿತಿ ಈಗ ಕಿರುತೆರೆಯಲ್ಲಿ ಸೆಕೆಂಡ್ ಇನ್ನಿಂಗ್ಸ್ ಶುರು ಮಾಡಿದ್ದಾರೆ. ಇದರ ನಡುವೆ ಇನ್ಸ್ಟಾಗ್ರಾಂ ಲೈವ್‌ಗೆ ಬಂದು ಅಭಿಮಾನಿಗಳ ಜೊತೆ ನಟಿ ಮಾತನಾಡಿದ್ದಾರೆ. ಅವರ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ್ದಾರೆ. ನಿಮ್ಮ ಲೈಫ್ ಹೇಗೆ ನಡೆಯುತ್ತಿದೆ ಎಂದು ಅಭಿಮಾನಿಯೊಬ್ಬ ಕೇಳಲಾದ ಪ್ರಶ್ನೆಗೆ ಅದಿತಿ ಮಾತನಾಡಿದ್ದಾರೆ. ಇದು ತೀರಾ ವೈಯಕ್ತಿಕ ವಿಚಾರ ಆದರೂ ಹಂಚಿಕೊಳ್ಳಬೇಕು ಅನಿಸುತ್ತಿದೆ. 'ರಾಜಾ ರಾಣಿ' ತಂಡ ನನಗೆ ಬೆಂಬಲವಾಗಿ ನಿಂತಿದೆ. ನನ್ನ ಮಗಳ ಆರೈಕೆ ಮಾಡಲು ಆಗಾಗ ಬ್ರೇಕ್ ಕೊಡುತ್ತಾ ಇರುತ್ತಾರೆ. ನನ್ನ ಮಗುವನ್ನು ಬಿಟ್ಟು ಶೂಟಿಂಗ್ ಬರುತ್ತಿಲ್ಲ. ಬದಲಿಗೆ ಜೊತೆಗೆ ಕರೆದುಕೊಂಡು ಬಂದು ಮಗುವಿಗೆ ಬೇಕಾದ ವ್ಯವಸ್ಥೆ ಮಾಡಲಾಗಿದೆ ಎಂದು ಅದಿತಿ ತಿಳಿಸಿದ್ದಾರೆ. ನನಗೆ ಮಗು ಹುಟ್ಟುವುದಕ್ಕೂ ಮುಂಚೆ, ನಾನು ಮತ್ತು ನನ್ನ ಮನೆ ಕೆಲಸದ ಜೊತೆ ಬ್ಲಾಗ್ ಆಯಿತು ಅಂತ ಇರುತ್ತಿದ್ದೆ. ಅದು ಹತ್ತಿರತ್ತಿರ ಒಂದು ವರ್ಷ. ಆದರೆ ಈಗ ವಾರಕ್ಕೆ ಒಮ್ಮೆ ಆದರೂ ಜನರ ಜೊತೆಗೆ ಬೆರೆಯುತ್ತೇನೆ. ಇದರಿಂದ ವಿಭಿನ್ನ ವ್ಯಕ್ತಿತ್ವಗಳು ತಿಳಿಯುತ್ತದೆ. ನಾನು ಶೂಟಿಂಗ್ ಬಂದರು ನನ್ನ ಮಗಳು ನನ್ನ ಜೊತೆಗೆ ಇರುತ್ತಾಳೆ. ಆದರೆ ಜನರನ್ನ ನೋಡ್ತೀನಿ, ಮಾತಾಡ್ತೀನಿ. ರಾಜಾ ರಾಣಿ ಶೋಗೆ ಬಂದ್ಮೇಲೆ ನನ್ನ ಅಸ್ತಿತ್ವ ಕಾಣಿಸುತ್ತಾ ಇದೆ ಎಂದಿದ್ದಾರೆ.ಅಂದ ಹಾಗೆ, ಧೈರ್ಯಂ, ಸಿಂಗ, ತ್ರಿಬಲ್ ರೈಡಿಂಗ್, ರಂಗನಾಯಕಿ, ಬ್ರಹ್ಮಚಾರಿ, ಬಜಾರ್ ಸೇರಿದಂತೆ ಹಲವು ಸಿನಿಮಾಗಳಲ್ಲಿ ಅದಿತಿ ನಾಯಕಿಯಾಗಿ ನಟಿಸಿದ್ದಾರೆ.

# ಹೊಂಬಾಳೆ ಫಿಲ್ಮ್ಸ್ ನಿರ್ಮಾಣದ ಸಿನಿಮಾದಲ್ಲಿ ಹಿಂದಿ ಹೇರಿಕೆ ವಿವಾದ

'ಕೆಜಿಎಫ್ ಸರಣಿ, ಕಾಂತಾರ, ಸಲಾರ್ ಮುಂತಾದ ಚಿತ್ರಗಳನ್ನು ನಿರ್ಮಿಸಿ ದೇಶಾದ್ಯಂತ ಸಂಚಲನ ಸೃಷ್ಟಿಸಿದ ಕನ್ನಡದ ಹೊಂಬಾಳೆ ಫಿಲ್ಮ್ಸ್‌ನ ಮೊದಲ ತಮಿಳು ಸಿನಿಮಾ 'ರಘು ತಾತಾ'. ಇದುವರೆಗೂ ಕನ್ನಡ, ತೆಲುಗು ಮತ್ತು ಮಲಯಾಳಂ ಚಿತ್ರಗಳನ್ನು ನಿರ್ಮಿಸಿದ್ದ ಹೊಂಬಾಳೆ ಫಿಲ್ಮ್ಸ್‌ನ ಮೊದಲ ಈ ತಮಿಳು ಸಿನಿಮಾದಲ್ಲಿ ಬಹುಭಾಷಾ ನಟಿ, ಪ್ರತಿಭಾವಂತ ಕಲಾವಿದೆ ಕೀರ್ತಿ ಸುರೇಶ್ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಇತ್ತೀಚೆಗೆ ಈ ಕಾಮಿಡಿ ಚಿತ್ರದ ಆಡಿಯೋ ಲಾಂಚ್ ಕಾರ್ಯಕ್ರಮ ನೆರವೇರಿದೆ. ಎನ್‌ಸಿಸಿ ಕೆಡೆಟ್ ಆಗಿ ಚಿತ್ರದಲ್ಲಿ ಕೀರ್ತಿ ಸುರೇಶ್ ಕಾಣಿಸಿಕೊಂಡಿದ್ದಾರೆ. ಚಿತ್ರದ ಟೀಸರ್ ನೋಡಿದಾಗ ಹಿಂದಿ ಹೇರಿಕೆ ವಿರುದ್ಧ ನಾಯಕಿ ಹೋರಾಟ ಮಾಡುವುದನ್ನು ನೋಡಬಹುದು. ಆಗಸ್ಟ್‌ನಲ್ಲಿ ಪ್ರಥಮ ಪ್ರದರ್ಶನಗೊಳ್ಳಲಿದೆ. ಸಮಾರಂಭದಲ್ಲಿ ಮಾತನಾಡಿದ ಕೀರ್ತಿ, 'ರಘು ತಾತಾ' ಚಿತ್ರದಲ್ಲಿನಟಿ ಸುವ ಬಗ್ಗೆ ಮೊದಲು ಹಲವಾರು ಪ್ರಶ್ನೆಗಳು ಇತ್ತು.

ಹಿಂದಿ ಹೇರಿಕೆ ಅನ್ನೋದನ್ನು ಇಟ್ಟುಕೊಂಡು ಕಥೆಯನ್ನು ಕೊಂಡು ಹೋಗಿದ್ದಾರೆ. ಈ ಚಿತ್ರದಲ್ಲಿ ಯಾವುದೇ ವಿವಾದ, ರಾಜಕೀಯ ಅಂಶ ಇಲ್ಲ. ಫನ್ ಮಾತ್ರ ಇದೆ. ಇದೊಂದು ಕಾಮಿಡಿ ಎಂಟರ್‌ಟೈನರ್ ಸಿನಿಮಾ. ಟೀಸರ್‌ನಲ್ಲಿ ಹಿಂದಿ ಹೇರಿಕೆ ಬಗ್ಗೆ ನೋಡಿರಬಹುದು. ಮುಖ್ಯವಾಗಿ ಇದು ಹೇರಿಕೆಯ ಬಗ್ಗೆ ಇರುವ ಕಥೆ. ಹೆಣ್ಣುಮಕ್ಕಳ ಮೇಲಿನ ಹೇರಿಕೆಯ ಕುರಿತಾದ ಸಿನಿಮಾಎಂದರು.. 'ರಘು ತಾತಾ' ಚಿತ್ರದಲ್ಲಿ ಕೀರ್ತಿ ಸುರೇಶ್ ನಟಿಸಿದ್ದಾರೆ. ಜೊತೆಗೆ ಭಾಸ್ಕರ್, ದೇವದರ್ಶಿನಿ ಮತ್ತು ರವೀಂದ್ರ ವಿಜಯ್ ಪೋಷಕ ತಾರಾಗಣದಲ್ಲಿದ್ದಾರೆ. ಸೀನ್ ರೋಲ್ಡನ್ ಬರೆದಿರುವ ಈ ಚಿತ್ರವನ್ನು ಸುಮನ್ ಕುಮಾರ್ ನಿರ್ದೇಶಿಸಿದ್ದಾರೆ.



# ತರುಣ್, ಸೋನಲ್ ಮದುವೆ



ಚಂದನವನದಲ್ಲಿ ಮದುವೆ ಸಂಭ್ರಮ ಮನೆ ಮಾಡಿದೆ. ತರುಣ್ ಸುಧೀರ್ ಮತ್ತು ಸೋನಲ್ ಹಸೆಮಣೆ ಏರೋದಕ್ಕೆ ಸಜ್ಜಾಗಿದ್ದಾರೆ. ಕಲರ್‌ಫುಲ್ ಫೋಟೋಶೂಟ್ ಮೂಲಕ ಮದುವೆ ಡೇಟ್ ಅನೌನ್ಸ್ ಮಾಡಿದ ಬೆನ್ನಲ್ಲೇ ಈಗ ಆಮಂತ್ರಣ ಪತ್ರಿಕೆ ಕೂಡ ಸದ್ದು ಮಾಡುತ್ತಿದೆ. ತರುಣ್ ಮತ್ತು ಸೋನಲ್ ಮಂಥೆರೋ ಮದುವೆ ಕಾರ್ಡ್ ಆಕರ್ಷಕವಾಗಿದೆ. ಮದುವೆ ಪತ್ರಿಕೆ ಮೇಲೆ ಇಬ್ಬರ ರೊಮ್ಯಾಂಟಿಕ್ ಫೋಟೋ ಹಾಕಿಸಿದ್ದು, ಒಳಗೆ ಮದುವೆ ಮುಹೂರ್ತ ಸಮಾರಂಭ ಕುರಿತು ಬರೆಯಲಾಗಿದೆ. ತರುಣ್ ಸುಧೀರ್ ಮತ್ತು ಸೋನಲ್ ಜೋಡಿ ಇದೇ ಆಗಸ್ಟ್ 10, 11ರಂದು ದಾಂಪತ್ಯ ಜೀವನಕ್ಕೆ ಕಾಲಿಡಲು ಸಜ್ಜಾಗಿದ್ದಾರೆ. ಆಗಸ್ಟ್ 10ರಂದು ಸಂಜೆ 6:30 ನಂತರ ಆರತಕ್ಷತೆ ಕಾರ್ಯಕ್ರಮ, ಆ.11ರಂದು ಬೆಳಗ್ಗೆ 10:50 ರಿಂದ 11:35ರ ಶುಭ ಮುಹೂರ್ತದಲ್ಲಿ ಮದುವೆ ನಡೆಯಲಿದೆ. ಹಿಂದೂ ಸಂಪ್ರದಾಯದಂತೆ ಮದುವೆ ಜರುಗಲಿದೆ. ಈ ಎರಡು ದಿನದ ಸಮಾರಂಭವು ಬೆಂಗಳೂರಿನ ಮೈಸೂರು ರಸ್ತೆಯಲ್ಲಿರುವ ಆರ್.ವಿ ಕಾಲೇಜ್ ಬಳಿ ಇರುವ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ನಡೆಯಲಿದೆ. ಸದ್ಯ ಸ್ಯಾಂಡಲ್‌ವುಡ್ ನಟ, ನಟಿಯರಿಗೆ ಮದುವೆ ಕಾರ್ಡ್ ಕೊಡುವುದರಲ್ಲಿ ತರುಣ್ ಮತ್ತು ಸೋನಲ್ ಬ್ಯುಸಿಯಾಗಿದ್ದಾರೆ.



# ನಟನಾಗುವ ಮುಂಚೆ ಲಾರಿ ಕ್ಲೀನರ್

ಲಾರಿಯೊಂದರ ಮುಂದೆ ನಿಂತು ಟೀ ಕುಡಿಯುತ್ತಿರುವ ಚಿತ್ರವನ್ನು ನಟ ಹಂಚಿಕೊಂಡಿದ್ದಾರೆ. ದು, 'ಲಾರಿಯ ಹಿಂದೆ ನಿಲ್ಲುವುದರಿಂದ ಆರಂಭವಾಗಿ ಬೆಳ್ಳಿ ಪರದೆಯ ಮುಂದೆ ಬಂದಿರುವ ಈ ಪಯಣ ಅದ್ಭುತ, ಜೀವನ ಅಚ್ಚರಿಗಳ ಸರಮಾಲೆ' ಎಂದಿದ್ದಾರೆ ಶರಣ್. ಸ್ಯಾಂಡಲ್‌ವುಡ್‌ನಲ್ಲಿ ನಟ ಶರಣ್ ಅವರು ಮೊದಲಿಗೆ ಕಾಮಿಡಿ ಮೂಲಕ ಪ್ರೇಕ್ಷಕರನ್ನು ಸೆಳೆದವರು. ನಟನಾಗುವ ಮುಂಚೆ ಲಾರಿ ಕ್ಲೀನರ್ ಆಗಿದ್ದರು ಎಂದರೆ ನೀವು ನಂಬಲೇ ಬೇಕು. ಖ್ಯಾತ ನಟಿ ಶ್ರುತಿ ಅವರ ಸಹೋದರ ಶರಣ್ ಹಲವು ವರ್ಷಗಳಿಂದಲೂ ಚಿತ್ರರಂಗದಲ್ಲಿದ್ದಾರೆ. ಆರಂಭದ ಹಲವಾರು ಸಿನಿಮಾಗಳಲ್ಲಿ ಹಾಸ್ಯನಟರಾಗಿ ಮಿಂಚಿ ಬಳಿಕ ನಾಯಕ ನಟನಾಗಿ ಮಿಂಚಿದರು. ಶರಣ್ ಅವರು ಹಲವು ಕಷ್ಟಗಳನ್ನು ಜೀವನದಲ್ಲಿ ಕಂಡಿದ್ದಾರೆ. ಆ ಬಗ್ಗೆ ಅವರೇ ಸಣ್ಣ ಪೋಸ್ಟ್ ಒಂದನ್ನು ಫೇಸ್‌ಬುಕ್‌ನಲ್ಲಿ ಹಂಚಿಕೊಂಡಿದ್ದಾರೆ. ''ಚಿತ್ರರಂಗಕ್ಕೆ ಕಾಲಿಡುವ ಮುನ್ನ , ಕೆಲಸ ಹುಡುಕುತ್ತಿದ್ದ ಸಮಯ. , ಕೆಲ ಸಮಯ ಲಾರಿ ಕ್ಲೀನರ್ ಆಗಿ ಕೆಲ್ಸ ಮಾಡಿದ್ದುಂಟು. ಆಗ ಲಾರಿ ಕೊಳ್ಳುವ ಕನಸು ಕಂಡಿದ್ದೂ ಉಂಟು. ಆದರೇ ಲಾರಿಯಲ್ಲಿ ಶುರುವಾದ ನನ್ನ ಪಯಣ ಬೆಳ್ಳಿ ಪರದೆಯ ಮೇಲೆ ಬಂದು ನಿಂತಿರುವುದು ಕಂಡರೆ ಆ ಭಗವಂತನ ಲೀಲೆ'ಗೆ'ಎಂದು ಬರೆದುಕೊಂಡಿದ್ದಾರೆ. ಇನ್ನು ಶರಣ್ ಅವರು 'ಕರ್ಪೂರದ ಗೊಂಬೆ', 'ಪ್ರೇಮ ಪ್ರೇಮ ಪ್ರೇಮ' ಸಿನಿಮಾಗಳ ಮೂಲಕ ಶರಣ್ ನಟರಾಗಿ ಚಿತ್ರರಂಗಕ್ಕೆ ಎಂಟ್ರಿ ಕೊಟ್ಟರು.2012 ರಲ್ಲಿ ಬಿಡುಗಡೆ ಆದ 'ರ್‍ಯಾಂಬೊ' ಸಿನಿಮಾ ಮೂಲಕ ನಾಯಕ ನಟನಾಗಿ ಎಂಟ್ರಿ ಕೊಟ್ಟರು. ಜೈಲಲಿತ ಸಿನಿಮಾದಲ್ಲಿ ನಟ ಶರಣ್ ಮಹಿಳೆಯ ಗೆಟಪ್‌ನಲ್ಲಿ ಕಾಣಿಸಿಕೊಂಡಿದ್ದರು. ಮಲಯಾಳಂನ 'ಮಾಯಾ ಮೋಹಿನಿ' ಎಂಬ ಹಿಟ್ ಸಿನಿಮಾ ಸ್ಫೂರ್ತಿಯಿಂದ ಈ ಸಿನಿಮಾ ಮಾಡಲಾಗಿತ್ತು.

# ಐಪಿಎಲ್ ಕಂಬ್ಯಾಕ್‌ಗೆ ಯುವರಾಜ್ ಸಜ್ಜು



ಟೀಂ ಇಂಡಿಯಾಗೆ 2 ವಿಶ್ವಕಪ್ ಗೆಲ್ಲಿಸಿಕೊಡುವಲ್ಲಿ ಪ್ರಮುಖ ಪಾತ್ರವಹಿಸಿದ್ದ ಸಿಕ್ಸರ್ ಕಿಂಗ್ ಯುವರಾಜ್ ಸಿಂಗ್ ಇದೀಗ ಐಪಿಎಲ್‌ನಲ್ಲಿ ಕಮ್ ಬ್ಯಾಕ್ ಮಾಡಲು ಹೊರಟಿದ್ದಾರೆ. ಮಾಧ್ಯಮ ವರದಿಗಳ ಪ್ರಕಾರ, ಯುವರಾಜ್ ಸಿಂಗ್ ಗುಜರಾತ್ ಟೈಟಾನ್ಸ್ ತಂಡದ ಮುಖ್ಯ ಕೋಚ್ ಆಗಬಹುದು ಎಂಬ ಊಹಾಪೋಹಾಗಳು ಸೃಷ್ಟಿಯಾಗಿವೆ.

ವರದಿ ಪ್ರಕಾರ, ಗುಜರಾತ್ ಟೈಟಾನ್ಸ್ ತಂಡದ ಹಾಲಿ ಕೋಚ್ ಆಗಿರುವ ಆಶಿಶ್ ನೆಹ್ರಾ ಮತ್ತು ನಿರ್ದೇಶಕ ವಿಕ್ರಮ್ ಸೋಲಂಕಿ, 2025 ರ ಐಪಿಎಲ್‌ನ ಮೆಗಾ ಹರಾಜಿಗೂ ಮೊದಲು ತಂಡವನ್ನು ತೊರೆಯಬಹುದು ಎನ್ನಲಾಗಿದೆ. ಹೀಗಾಗಿ ತೆರವಾದ ಸ್ಥಾನ ತುಂಬಲು, ಗುಜರಾತ್ ಟೈಟಾನ್ಸ್ ಮ್ಯಾನೇಜ್ ಮೆಂಟ್ ಯುವರಾಜ್ ಸಿಂಗ್ ಅವರನ್ನು ಸಂಪರ್ಕಿಸಿದೆ ಎಂದು ಹೇಳಲಾಗುತ್ತಿದೆ.

ಪ್ರಸ್ತುತ, ಯುವರಾಜ್ ಸಿಂಗ್ ವಿಶ್ವದಾದ್ಯಂತ ನಿವೃತ್ತ ಆಟಗಾರರ ಲೀಗ್‌ಗಳಲ್ಲಿ ಭಾಗವಹಿಸುತ್ತಿದ್ದಾರೆ. ಆದರೆ ಈಗ ಅವರು ಕೋಚ್ ಪಾತ್ರದಲ್ಲಿ ಕಾಣಿಸಿಕೊಳ್ಳಬಹುದು ಎಂದು ಊಹಿಸಲಾಗಿದೆ. ಇದಕ್ಕೆ ಪೂರಕವಾಗಿ ಯುವರಾಜ್ ಸಿಂಗ್ ಕೂಡ ಐಪಿಎಲ್‌ನಲ್ಲಿ ಸುದೀರ್ಘ ಅನುಭವ ಹೊಂದಿದ್ದಾರೆ.

ಐಪಿಎಲ್‌ನಲ್ಲಿ 132 ಪಂದ್ಯಗಳನ್ನಾಡಿರುವ ಯುವರಾಜ್ 2750 ರನ್ ಗಳಿಸಿದ್ದಾರೆ. ಇದಲರಲ್ಲಿ 13 ಅರ್ಧಶತಕಗಳೂ ಸೇರಿವೆ.

# ಗಂಭೀರ್ ಮಾರ್ಗದರ್ಶನದಲ್ಲಿ ಟೀಮ್ ಇಂಡಿಯಾ ಅಭ್ಯಾಸ

## ಭಾರತ ಮತ್ತು ಶ್ರೀಲಂಕಾ ನಡುವಣ ಟಿ20 ಸರಣಿಯು ಜುಲೈ 27 ರಿಂದ ಶುರು

ನೂತನ ಕೋಚ್ ಗೌತಮ್ ಗಂಭೀರ್ ಅವರ ಉಸ್ತುವಾರಿಯಲ್ಲಿ ಭಾರತ ತಂಡ ಇಂದು(ಮಂಗಳವಾರ) ಅಭ್ಯಾಸ ನಡೆಸಿತು. ಭಾರತ ಮತ್ತು ಶ್ರೀಲಂಕಾ ನಡುವಣ ಟಿ20 ಸರಣಿಯು ಜುಲೈ 27 ರಿಂದ ಶುರುವಾಗಲಿದೆ. ಗಂಭೀರ್ ಅವರ ಕೋಚಿಂಗ್‌ನಲ್ಲಿ ಭಾರತ ತಂಡ ಆಡುವ ಮೊದಲ ಸರಣಿ ಇದಾಗಲಿದೆ. ಹೀಗಾಗಿ ನಿರೀಕ್ಷೆ ಹೆಚ್ಚಾಗಿಯೇ ಇದೆ. 2021ರ ಬಳಿಕ ಭಾರತ ಮೊದಲ ಬಾರಿಗೆ ಶ್ರೀಲಂಕಾದಲ್ಲಿ ದ್ವಿಪಕ್ಷೀಯ ಸರಣಿ ಆಡಲಿದೆ. ಉಭಯ ತಂಡಗಳು ಹೊಸ ಕೋಚ್ ಮಾರ್ಗದರ್ಶನದಲ್ಲಿ ಕಣಕ್ಕಿಳಿಯುತ್ತಿರುವುದು ವಿಶೇಷ. ಲಂಕಾ ತಂಡಕ್ಕೆ ಮಾಜಿ ಆಟಗಾರ ಸನತ್ ಜಯಸೂರ್ಯ ಮಾರ್ಗದರ್ಶನ ನೀಡಲಿದ್ದಾರೆ. ಮಂಗಳವಾರ ಭಾರತ ಟಿ20 ತಂಡದ ನೂತನ ನಾಯಕ ಸೂರ್ಯಕುಮಾರ್ ಯಾದವ್, ಮೊಹಮ್ಮದ್ ಸಿರಾಜ್, ರಿಷಭ್ ಪಂತ್, ರಿಂಕು ಸಿಂಗ್, ಶುಭಮನ್



ಗಿಲ್, ರವಿ ಬಿಷ್ಣೋಯಿ ಸೇರಿದಂತೆ ಎಲ್ಲಾ ಆಟಗಾರರು ಗಂಭೀರ್ ಮಾರ್ಗದರ್ಶನದಲ್ಲಿ ಮೊದಲು ಬ್ಯಾಟಿಂಗ್ ಅಭ್ಯಾಸ ನಡೆಸಿ ಬಳಿಕ ಫೀಲ್ಡಿಂಗ್, ಬೌಲಿಂಗ್ ಅಭ್ಯಾಸ ನಡೆಸಿದರು. ಭಾರತೀಯ ಆಟಗಾರರ ಅಭ್ಯಾಸ ನಡೆಸುತ್ತಿರುವ ವಿಡಿಯೊಗಳನ್ನು ಸೋನಿ ಸ್ಪೋರ್ಟ್ಸ್ ನೆಟ್ ವರ್ಕ್ ತನ್ನ ಅಧಿಕೃತ ಟ್ವಿಟರ್ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದೆ. ಲಂಕಾಗೆ ತೆರಳುವ ಮುನ್ನ ಗಂಭೀರ್ ಆಯ್ಕೆ ಸಮಿತಿ ಮುಖ್ಯಸ್ಥ ಅಜಿತ್ ಅಗರ್ಕರ್ ಜತೆ ಜಂಟಿ ಪತ್ರಿಕಾಗೋಷ್ಠಿ ನಡೆಸಿ, ಹಲವು ಪ್ರಶ್ನೆಗಳಿಗೆ ಉತ್ತರಿಸಿದ್ದರು. ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರು ರಾಷ್ಟ್ರೀಯ ತಂಡಕ್ಕಾಗಿ ಉತ್ತಮ ಕೆಲಸಗಳನ್ನು ಮಾಡುವುದನ್ನು ಮುಂದುವರಿಸಲು ಬೆಂಬಲಿಸಿದರು, ಇಬ್ಬರೂ ಮುಂದೆ ಏಕದಿನ ಮತ್ತು ಟೆಸ್ಟ್‌ಗಳಲ್ಲಿ ಪ್ರಮುಖ ಭಾಗವಾಗಲಿದ್ದಾರೆ ಎಂದು ಹೇಳಿದ್ದರು. ಇದೇ ವೇಳೆ ರೋಹಿತ್ ಮತ್ತು ಕೊಹ್ಲಿ ಚಾಂಪಿಯನ್ಸ್ ಟ್ರೋಫಿ ಮತ್ತು ಆಸ್ಟ್ರೇಲಿಯಾದಲ್ಲಿ ಟೆಸ್ಟ್ ಸರಣಿಗಾಗಿ ಆಡಲಿದ್ದು, 2025 ರ ಋತುವಿನ ನಂತರವೂ ಅವರು ಮುಂದುವರಿಯಲು ಬಾಗಿಲು ತೆರೆದೇ ಇದೆ ಎಂದು ಗಂಭೀರ್ ಹೇಳಿದ್ದರು. ಪ್ರವಾಸದ ಮೊದಲ 3 ಟಿ20 ಪಂದ್ಯಗಳು ಜುಲೈ 27, 28 ಮತ್ತು 30ರಂದು ಪಲ್ಲೆಕೆಲೆಯಲ್ಲಿ ನಡೆಯಲಿವೆ. ಮೊದಲು ಪ್ರಕಟಗೊಂಡಿದ್ದ ವೇಳಾಪಟ್ಟಿಯಲ್ಲಿ 26ರಿಂದ ಟಿ20 ಪಂದ್ಯ ಆರಂಭವಾಗಬೇಕಿತ್ತು. ಏಕದಿನ ಸರಣಿ ಕೂಡ ಒಂದು ದಿನ ತಡವಾಗಿ ಶುರುವಾಗಬೇಕಿತ್ತು. ಏಕದಿನ ಆಗಸ್ಟ್ 1ರದ ಬದಲಾಗಿ ಆಗಸ್ಟ್ 2ರಿಂದ ಆರಂಭಗೊಳ್ಳಲಿದೆ. ಉಳಿದ ಪಂದ್ಯಗಳ ದಿನಾಂಕ ಬದಲಾಗಲಿಲ್ಲ, ಈ ಹಿಂದಿನಂತೆ ಆಗಸ್ಟ್ 4 ಮತ್ತು 7ರಂದೇ ನಡೆಯಲಿದೆ.

**ಟಿ20 ತಂಡ:** ಸೂರ್ಯಕುಮಾರ್ ಯಾದವ್ (ನಾಯಕ), ಶುಭಮನ್ ಗಿಲ್ (ಉಪ ನಾಯಕ), ಯಶಸ್ವಿ ಜೈಸ್ವಾಲ್, ರಿಂಕು ಸಿಂಗ್, ರಿಯಾನ್ ಪರಾಗ್, ರಿಷಭ್ ಪಂತ್ (ವಿ.ಕೀ ), ಸಂಜು ಸ್ಯಾಮ್ಸನ್ (ವಿ.ಕೀ), ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್, ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯಿ , ಅರ್ಶದೀಪ್ ಸಿಂಗ್, ಖಲೀಲ್ ಅಹ್ಮದ್, ಮೊಹಮ್ಮದ್ ಸಿರಾಜ್.

# 12 ಬೌಂಡರಿ, 81 ರನ್; ಶಫಾಲಿ ಆಟಕ್ಕೆ ದಂಗಾದ ನೇಪಾಳ

ಶ್ರೀಲಂಕಾದ ರಂಗಿ ದಂಬುಲ್ಲಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಏಷ್ಯಾಕಪ್ 2024 ರ 10 ನೇ ಪಂದ್ಯದಲ್ಲಿ, ಹಾಲಿ ಚಾಂಪಿಯನ್ ಟೀಂ ಇಂಡಿಯಾ, ನೇಪಾಳ ವಿರುದ್ಧ ತನ್ನ ಕೊನೆಯ ಗುಂಪು ಹಂತದ ಪಂದ್ಯವನ್ನು ಆಡುತ್ತಿದೆ. ಈ ಪಂದ್ಯದಲ್ಲಿ ಭಾರತ ತಂಡದ ಯುವ ಆರಂಭಿಕ ಆಟಗಾರ್ತಿ ಶೆಫಾಲಿ ವರ್ಮಾ ಸಿಡಿಲಬ್ಬರದ ಬ್ಯಾಟಿಂಗ್ ಮಾಡಿದ್ದಾರೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ ಪರ ಆರಂಭಿಕ ಆಟಗಾರ್ತಿ ಶೆಫಾಲಿ ವರ್ಮಾ ಆರಂಭದಿಂದಲೂ ಸ್ಫೋಟಕ ಬ್ಯಾಟಿಂಗ್ ಮಾಡಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 48 ಎಸೆತಗಳನ್ನು ಎದುರಿಸಿದ ಶಫಾಲಿ 81 ರನ್‌ಗಳ ಇನಿಂಗ್ಸ್ ಆಡಿದರು. ಈ ವೇಳೆ ಅವರ ಬ್ಯಾಟ್‌ನಿಂದ 12 ಬೌಂಡರಿ ಹಾಗೂ 1 ಸಿಕ್ಸರ್‌ಗಳು ಸಿಡಿದವು.



ಇವರ ಜೊತೆಗೆ ಆರಂಭಿಕರಾಗಿ ಕಣಕ್ಕಿಳಿದಿದ್ದ ದಯಾಳನ್ ಹೇಮಲತಾ ಕೂಡ 42 ಎಸೆತಗಳಲ್ಲಿ 5 ಬೌಂಡರಿ ಹಾಗೂ 1 ಸಿಕ್ಸರ್ ಸಹಿತ 47 ರನ್ ಬಾರಿಸಿದರು. ಕೊನೆಯಲ್ಲಿ ಸ್ಫೋಟಕ ಬ್ಯಾಟಿಂಗ್ ಮಾಡಿದ ಜೆಮಿಮಾ 15 ಎಸೆತಗಳಲ್ಲಿ 5 ಬೌಂಡರಿ ಸಹಿತ ಅಜೇಯ 28 ರನ್ ಬಾರಿಸಿದರು.

# ಸಪ್ತಮಿ ಗೌಡ ಟೀಮ್‌ಗೆ ನಿರಾಸೆ: QPL ಕಿರೀಟ ಕೋಲಾರ ಕ್ವೀನ್ಸ್ ಮುಡಿಗೆ!




ಕೋಲಾರ ಕ್ವೀನ್ಸ್ ತಂಡದ ಆಟಗಾರ್ತಿ ಹೇಮಾ ಟೂರ್ನಿಯ ಶ್ರೇಷ್ಠ ಆಟಗಾರ್ತಿಯಾಗಿ ಹೊರಹೊಮ್ಮಿದರೆ, ಬೆಂಗಳೂರು ಕ್ವೀನ್ಸ್ ತಂಡ ರನ್ನರ್ ಅಪ್ ಸ್ಥಾನ ಪಡೆದುಕೊಂಡಿದೆ. ಬೆಳಗಾವಿ ಕ್ವೀನ್ಸ್‌ನ ಕವಿತಾ ಗೌಡ ಅತ್ಯುತ್ತಮ ಬ್ಯಾಟ್ಸ್‌ಮೆನ್ ಸ್ಥಾನ ಪಡೆದರೆ ಬೆಂಗಳೂರು ಕ್ವೀನ್ಸ್‌ನ ಅನುಪಮಾ ಗೌಡ ಅತ್ಯುತ್ತಮ ಬೌಲರ್ ಆಗಿ ಹೊರಹೊಮ್ಮಿದ್ದಾರೆ. ಕ್ರಿಯೇಟಿವ್ ಫ್ರೆಂಡ್ಸ್ ಸಂಸ್ಥೆ ಮೊದಲ ಬಾರಿಗೆ ಆಯೋಜಿಸಿದ್ದ ಕ್ವೀನ್ಸ್ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಗೆ ತೆರೆಬಿದ್ದಿದೆ. ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಎರಡು ದಿನಗಳ ಕಾಲ ಈ ಕ್ರಿಕೆಟ್ ಪಂದ್ಯಾವಳಿ ನಡೆಯಿತು. ಧನ್ಯರಾಮ ನಾಯಕತ್ವದ ಕೋಲಾರ ಕ್ವೀನ್ಸ್ ಟೀಮ್ ಕಿಕಐ ಕಪ್‌ನ್ನು ಮುಡಿಗೇರಿಸಿಕೊಂಡಿತು. 'ಕ್ವೀನ್ಸ್ ಪ್ರೀಮಿಯರ್ ಲೀಗ್' ನಲ್ಲಿ ಇಡೀ ತಂಡ ಕುಣಿದು ಕುಪ್ಪಳಿಸಿದೆ. ಕೋಲಾರ ತಂಡವು 5 ಓವರ್‌ಗಳಲ್ಲಿ ಒಂದು ವಿಕೆಟ್‌ಗೆ 88 ರನ್ ಗಳಿಸಿದರು. ಈ ಮೊತ್ತಕ್ಕೆ ಉತ್ತರವಾಗಿ ಬೆಂಗಳೂರು ತಂಡವು ಐದು ಓವರ್‌ಗಳಲ್ಲಿ ಮೂರು ವಿಕೆಟ್‌ಗಳಿಗೆ 53 ರನ್ ಗಳಿಸಿ ಹೋರಾಟವನ್ನು ಮುಗಿಸಿತು. ಕೋಲಾರ ಕ್ಲೀನ್ಸ್ ತಂಡವು ಆಕರ್ಷಕ ಟ್ರೋಫಿಯೊಂದಿಗೆ 6 ಲಕ್ಷ ಬಹುಮಾನವನ್ನು ತನ್ನದಾಗಿಸಿಕೊಂಡಿತು. ರನ್ನರ್ ಅಪ್ ಬೆಂಗಳೂರು ಕ್ಲೀನ್ಸ್ ತಂಡವು 3 ಲಕ್ಷ ಬಹುಮಾನ ಪಡೆಯಿತು. ಕೋಲಾರ ಕ್ವೀನ್ಸ್ ತಂಡದ ಆಟಗಾರ್ತಿ ಹೇಮಾ ಟೂರ್ನಿಯ ಶ್ರೇಷ್ಠ ಆಟಗಾರ್ತಿಯಾಗಿ ಹೊರಹೊಮ್ಮಿದರೆ, ಬೆಂಗಳೂರು ಕ್ವೀನ್ಸ್ ತಂಡ ರನ್ನರ್ ಅಪ್ ಸ್ಥಾನ ಪಡೆದುಕೊಂಡಿದೆ. ಬೆಳಗಾವಿ ಕ್ವೀನ್ಸ್‌ನ ಕವಿತಾ ಗೌಡ ಅತ್ಯುತ್ತಮ ಬ್ಯಾಟ್ಸ್‌ಮೆನ್ ಸ್ಥಾನ ಪಡೆದರೆ ಬೆಂಗಳೂರು ಕ್ವೀನ್ಸ್‌ನ ಅನುಪಮಾ ಗೌಡ ಅತ್ಯುತ್ತಮ ಬೌಲರ್ ಆಗಿ ಹೊರಹೊಮ್ಮಿದ್ದಾರೆ. ಸರಣಿ ಆಟಗಾರ ಪ್ರಶಸ್ತಿಯನ್ನು ಕೋಲಾರ ಟೀಂನ ಹೇಮಾ ತಿಮ್ಮಯ್ಯ ಪಡೆದುಕೊಂಡರೆ, ಗ್ರೀಷ್ಮಾ ಗೌಡ ಪಂದ್ಯದ ಅಂತಿಮ ಆಟಗಾರ ಪ್ರಶಸ್ತಿ ಪಡೆದುಕೊಂಡರು.



# ಆರ್‌ಸಿಬಿ ಅಲ್ಲ ರಾಹುಲ್ ದ್ರಾವಿಡ್ ಈ ತಂಡದ ಕೋಚ್

ಟೀಮ್ ಇಂಡಿಯಾದ ಮಾಜಿ ಕೋಚ್ ರಾಹುಲ್ ದ್ರಾವಿಡ್ ಐಪಿಎಲ್‌ಕೋಚಿಂಗ್ ನಡೆಸುವುದು ಬಹುತೇಕ ಖಚಿತ ಎಂದು ತಿಳಿದುಬಂದಿದೆ. ಈ ಹಿಂದೆ ಕೋಚಿಂಗ್ ನಡೆಸಿದ್ದ ರಾಜಸ್ಥಾನ್ ರಾಯಲ್ಸ್‌ತಂಡದ ಪರವೇ ಮತ್ತೆ ಕೋಚಿಂಗ್ ನಡೆಸಲಿದ್ದಾರೆ ಎಂದು ಫ್ರಾಂಚೈಸಿಯ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ.

ಟಿ20 ವಿಶ್ವಕಪ್ ಬಳಿಕ ದ್ರಾವಿಡ್ ಭಾರತ ತಂಡದ ಕೋಚಿಂಗ್ ಹುದ್ದೆಯಿಂದ ನಿವೃತ್ತಿ ಹೊಂದಿದ್ದರು. ಅದಾಗಲೇ ದ್ರಾವಿಡ್ ಐಪಿಎಲ್ ಕೋಚಿಂಗ್ ನಡೆಸುತ್ತಾರೆ ಎನ್ನಲಾಗಿತ್ತು. ಜತೆಗೆ ಕನ್ನಡಿಗರ ನೆಚ್ಚಿನ ತಂಡವಾದ ಆರ್‌ಸಿಬಿ ಪರ ಕೋಚಿಂಗ್ ಮಾಡಲಿದ್ದಾರೆ ಎಂದು ಸಾಮಾಜಿಕ ಜಾಲತಾಣದಲ್ಲಿ ಭಾರೀ ಚರ್ಚೆಯಾಗಿತ್ತು. ಇದೀಗ ದ್ರಾವಿಡ್ ಆರ್‌ಸಿಬಿ ಬದಲಾಗಿ ರಾಜಸ್ಥಾನ್ ಪರ ಕೋಚಿಂಗ್ ನಡೆಸುವುದು ಖಚಿತವಾಗಿದೆ ಎಂದು ತಿಳಿದುಬಂದಿದೆ. ಆದರೆ ಅಧಿಕೃತ ಮಾಹಿತಿ ಇದುವರೆಗೂ ಪ್ರಕಟಗೊಂಡಿಲ್ಲ. ರಾಜಸ್ಥಾನ್ ರಾಯಲ್ಸ್ ಪರ ನಾಯಕರಾಗಿ ದ್ರಾವಿಡ್ ಒಮ್ಮೆ ತಂಡವನ್ನು ಪ್ಲೇ ಆಫ್‌ಗೆ ಕೊಂಡೊಯ್ದಿದ್ದರು. ಚಾಂಪಿಯನ್ಸ್ ಲೀಗ್‌ನಲ್ಲಿ ತಂಡ ಫೈನಲ್‌ಗೇರಿತ್ತು. ರಾಜಸ್ಥಾನ್ ತಂಡದ ಪರ 40 ಪಂದ್ಯಗಳಲ್ಲಿ ನಾಯಕರಾಗಿದ್ದ ದ್ರಾವಿಡ್ 23 ಗೆಲುವು ಕಂಡಿದ್ದಾರೆ. ಎರಡು ಸೀಸನ್‌ಗಳಲ್ಲಿ ರಾಜಸ್ಥಾನ್ ತಂಡದ ಕೋಚ್ ಆಗಿಯೂ ಕರ್ತವ್ಯ ನಿರ್ವಹಿಸಿದ್ದರು. ಅಂಡರ್ 19 ತಂಡದ ಕೋಚ್ ಆದ ಕಾರಣ ಐಪಿಎಲ್ ಕೋಚಿಂಗ್‌ನಿಂದ ದೂರ ಉಳಿದಿದ್ದರು. ಇದಾದ ಬಳಿಕ ಟೀಮ್ ಇಂಡಿಯಾ ಕೋಚ್ ಆಗಿ ಕಾರ್ಯನಿರ್ವಹಿಸಿದ್ದರು. ಇದೀಗ ಎಲ್ಲಾ ಹುದ್ದೆಗಳಿಂದ ನಿವೃತ್ತಿ ಹೊಂದಿರುವ ಅವರು ಐಪಿಎಲ್ ಕೋಚಿಂಗ್ ಕಡೆ ಗಮನಹರಿಸಿದ್ದಾರೆ.

ಲಕ್ನೋ ತಂಡದ ಮಾಲಿಕ ಗೋಯೆಂಕಾ ತೋರಿದ್ದ ವರ್ತನೆನಿಂದ ಬೇಸರಗೊಂಡಿರು ರಾಹುಲ್ ಈ ಬಾರಿ ಲಕ್ನೋ ತೊರೆಯುವುದು ಖಚಿತವಾಗಿದೆ. ಮೂಲ್ಗಳ ಪ್ರಕಾರ ಅವರು ಆರ್‌ಸಿಬಿ ತಂಡ ಸೇರಲಿದ್ದಾರೆ ಎನ್ನಲಾಗಿದೆ. ಆರ್‌ಸಿಬಿ ಪರ ಆಡುವುದು ಕೂಡ ಅವರ ಬಯಕೆಯಾಗಿದೆ. ಇದೇ ವರ್ಷ ನಡೆದಿದ್ದ ಐಪಿಎಲ್ ವೇಳೆ ಆರ್.ಅಶ್ವಿನ್ ಜತೆಗಿನ ಕುಟ್ಟಿ ಸ್ಟೋರೀಸ್ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಕೆಎಲ್ ರಾಹುಲ್, 2013ರಲ್ಲಿ ವಿರಾಟ್ ಕೊಹ್ಲಿ ಅವರು ತನ್ನನ್ನು ಆರ್‌ಸಿಬಿ ತಂಡಕ್ಕೆ ಸೇರಿಸಿಕೊಂಡರು. ನಾನು ಬೆಂಗಳೂರು ತಂಡದಲ್ಲಿ ಆಡಲು ಇಷ್ಟಪಡುತ್ತೇನೆ. ನಾನು ಅಲ್ಲಿದಂದಲೇ ಈ ಪಯಣ ಆರಂಭಿಸಿದೆ. ಅಲ್ಲಿಯೇ ಇದನ್ನು ಅಂತ್ಯಗೊಳಿಸಲು ಬಯುಸುತ್ತೇನೆ. ಅದು ತನ್ನ ತಲೆಯಲ್ಲಿದೆ ಎಂದು ಹೇಳಿದ್ದರು. ರಾಹುಲ್ ಆರ್‌ಸಿಬಿ ಸೇರಲಿದ್ದಾರೆ ಎಂಬ ಸುದ್ದಿ ಕೇಳಿದ್ದೇ ತಡ ಕನ್ನಡಿಗರು ಮತ್ತು ಆರ್‌ಸಿಬಿ ಅಭಿಮಾನಿಗಳು ಆರ್‌ಸಿಬಿ ಜೆರ್ಸಿಯಲ್ಲಿ ರಾಹುಲ್ ಅವರ ಫೋಟೊ ಎಡಿಟ್ ಮಾಡಿ ತವರಿಗೆ ಸ್ವಾಗತ ಎನ್ನುವ ಪೋಸ್ಟರ್ ಶೇರ್ ಮಾಡಲಾರಂಭಿಸಿದ್ದಾರೆ. ಈ ಪೋಸ್ಟರ್‌ಗಳು ವೈರಲ್ ಆಗುತ್ತಿವೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966